ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 320, ಪುಟಗಳು: 8, ಮಂಗಳವಾರ, 27 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...




### ಸುಭಾಷಿತ

ಸತ್ಯಕ್ಕಾಗಿ ಏನನ್ನು ಬೇಕಾದರೂ ತ್ಯಾಗ ಮಾಡಬಹುದು. ಆದರೆ ಬೇರೆ ಯಾವುದೇ ಕಾರಣಕ್ಕೂ ಸತ್ಯವನ್ನು ತ್ಯಾಗ ಮಾಡಲಾಗದು.

। ಸ್ವಾಮಿ ವಿವೇಕಾನಂದ

### ಪಂಚಾಂಗ

(ಮಂಗಳವಾರ 27, ಆಗಸ್ಟ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಶ್ರಾವಣ ಮಾಸ,
- ಕೃಷ್ಣಪಕ್ಷ, ರೋಹಿಣಿ ನಕ್ಷತ್ರ,
- ಮಂಗಳವಾರ, ನವಮಿ ತಿಥಿ
- ರಾಹುಕಾಲ : 3:31 ರಿಂದ 5:04
- ಗುಳಿಕಕಾಲ : 12:25 ರಿಂದ 1:58
- ಯಮಗಂಡಕಾಲ : 9:19 ರಿಂದ 10:52

## ಸಂಕ್ಷಿಪ್ತ ಸುದ್ದಿ

### ಮದ್ಯ ಪ್ರಿಯರಿಗೆ ಗುಡ್ ನ್ಯೂಸ್: ಇಂದಿನಿಂದ ಮದ್ಯದ ದರ ಇಳಿಕೆ



**ಬೆಂಗಳೂರು:** ರಾಜ್ಯದ ಮದ್ಯಪ್ರಿಯರಿಗೆ ಗುಡ್ ಇದು ನ್ಯೂಸ್. ಇಂದಿನಿಂದ ಮದ್ಯ ದರ ಇಳಿಕೆಯಾಗಿದೆ. ಹೆಚ್ಚಿನ ಪ್ರಮಾಣದಲ್ಲಿ ಮಾರಾಟವಾಗುವ ಪ್ರೀಮಿಯಂ ಬ್ರ್ಯಾಂಡ್ ಗಳ ದರದಲ್ಲಿ ಸ್ವಲ್ಪಮಟ್ಟಿಗೆ ಇಳಿಕೆಯಾಗಿದೆ. ಭಾರತದಲ್ಲಿ ತಯಾರಿಸಿರುವ ಮದ್ಯದ ಅಬಕಾರಿ ಸುಂಕದ ಸ್ಲ್ಯಾಬ್‌ಗಳ ಸಂಖ್ಯೆಯನ್ನು ಇತರೆ ರಾಜ್ಯಗಳ ಮದ್ಯದ ದರಕ್ಕೆ ಅನುಗುಣವಾಗಿ ರಾಜ್ಯದಲ್ಲಿ ಮದ್ಯ ಮತ್ತು ಬಿಯರ್ ಬೆಲೆಗಳನ್ನು ಪರಿಷ್ಕರಿಸಲು ರಾಜ್ಯ ಸರ್ಕಾರ ಅಂತಿಮ ಅಧಿಸೂಚನೆ ಹೊರಡಿಸಿದೆ. ಪುಟ 2

### ಮಹಿಳೆ ಮೇಲೆ ಅತ್ಯಾಚಾರವೆಸಗಿ ಕೊಲೆ



**ಮಹಾರಾಷ್ಟ್ರ:** ಎಪತ್ತು ವರ್ಷದ ಮಹಿಳೆ ಮೇಲೆ ಅತ್ಯಾಚಾರವೆಸಗಿ, ಕೊಲೆ ಮಾಡಿ ಬಳಿಕ ವ್ಯಕ್ತಿಯೊಬ್ಬ ಶವದ ಜತೆ ಎರಡು ದಿನ ಕಳೆದಿರುವ ಘಟನೆ ಮಹಾರಾಷ್ಟ್ರದ ಲಾತೂರ್ ನಲ್ಲಿ ನಡೆದಿದೆ. ಬೆಳಗ್ಗೆ ಔಸಾ ತಹಸಿಲ್ ನ ಭೇಟಾದಲ್ಲಿರುವ 35ವರ್ಷದ ಮನ್ಸೂರ್ ಶೇಕ್ ಅವರ ಮನೆಯಿಂದ ದುರ್ವಾಸನೆ ಬರಲಾರಂಭಿಸಿದ್ದರಿಂದ ಅಕ್ಕಪಕ್ಕದ ಮನೆಯವರು ಪೊಲೀಸರಿಗೆ ಮಾಹಿತಿ ನೀಡಿದ್ದರು.

> » 2 ದಿನಗಳ ಕಾಲ ಶವದ ಜತೆ ಕಳೆದ ವ್ಯಕ್ತಿ

ತನಿಖೆಯಲ್ಲಿ ಮಹಿಳೆ ಮೇಲೆ ಅತ್ಯಾಚಾರವೆಸಗಿ ಕತ್ತು ಹಿಸುಕಿ ಕೊಲೆ ಮಾಡಲಾಗಿದೆ ಎಂದು ತಿಳಿದುಬಂದಿದೆ. ದೇಹವು ಕೊಳೆಯಲು ಪ್ರಾರಂಭಿಸಿದ್ದರಿಂದ ಎರಡು ದಿನಗಳ ಹಿಂದೆ ಆಕೆಯ ಮೇಲೆ ಅತ್ಯಾಚಾರವೆಸಗಿ ಕೊಲೆ ಮಾಡಲಾಗಿದೆ ಎನ್ನುವ ವಿಚಾರ ಬೆಳಕಿಗೆ ಬಂದಿದೆ. ಇಷ್ಟೆಲ್ಲಾ ಸಮಯದಲ್ಲಿ ಶೇಖ್ ಮೃತದೇಹದೊಂದಿಗೆ ಮನೆಯಲ್ಲಿಯೇ ಇದ್ದರು ಎಂದು ಅಧಿಕಾರಿ ತಿಳಿಸಿದ್ದಾರೆ. ಮಹಿಳೆಯು ಭೇಟಾದಿಂದ ಸುಮಾರು 10 ಕಿಲೋಮೀಟರ್ ದೂರದಲ್ಲಿರುವ ಬೋರ್ಗಾಂವ್ ನಿವಾಸಿಯಾಗಿದ್ದು,

## ಸುಡಾನ್‌ನಲ್ಲಿ ಭಾರೀ ಮಳೆಗೆ ಕೊಚ್ಚಿ ಹೋಯ್ತು ಅಣೆಕಟ್ಟು



**ಅರ್ಬತ್ (ಸುಡಾನ್):** ಯುದ್ಧ ಪೀಡಿತ ಸುಡಾನ್‌ನಲ್ಲಿ ಭಾರೀ ಮಳೆಯಿಂದಾಗಿ ಅಣೆಕಟ್ಟು ಒಡೆದು ಕನಿಷ್ಠ 60 ಜನರು ಸಾವನ್ನಪ್ಪಿದ್ದು, ಹಲವು ಮಂದಿ ನಾಪತ್ತೆಯಾಗಿದ್ದಾರೆ.

ಧಾರಾಕಾರ ಮಳೆಯಿಂದಾಗಿ ಕೆಂಪು ಸಮುದ್ರದ ಸಮೀಪದಲ್ಲಿದ್ದ ಅರ್ಬತ್ ಅಣೆಕಟ್ಟು ಕೊಚ್ಚಿಹೋಗಿದೆ. ನೀರು ಸುಮಾರು 20 ಹಳ್ಳಿಗಳಿಗೆ ನುಗ್ಗಿದ್ದು 50 ಸಾವಿರ ಮನೆಗಳು ಕೊಚ್ಚಿ ಹೋಗಿದೆ ಎಂದು ವರದಿಯಾಗಿದೆ.

ಅರ್ಬತ್ ಅಣೆಕಟ್ಟು 25 ಮಿಲಿಯನ್ ಕ್ಯೂಬಿಕ್ ಮೀಟರ್ ಸಾಮರ್ಥ್ಯವನ್ನು ಹೊಂದಿತ್ತು. ಕರಾವಳಿ ನಗರವಾದ ಪೋರ್ಟ್ ಸುಡಾನ್‌ನ ಕುಡಿಯುವ ನೀರಿನ ಮುಖ್ಯ ಮೂಲವಾಗಿತ್ತು. ಕೊಚ್ಚಿಕೊಂಡು ಹೋದ ಪ್ರದೇಶವನ್ನು ಗುರುತಿಸಲು ಸಾಧ್ಯವಾಗುತ್ತಿಲ್ಲ. ನೆರೆಗೆ ವಿದ್ಯುತ್ ಕಂಬ ಮತ್ತು ನೀರಿನ ಪೈಪ್ ಗಳು ನಾಶವಾಗಿವೆ. ಚಿನ್ನದ ಗಣಿಯಲ್ಲಿ ಕೆಲಸ ಮಾಡುತ್ತಿದ್ದ 150 ರಿಂದ 200 ಮಂದಿ ಕಾಣೆಯಾಗಿದ್ದಾರೆ.

ದುರಂತ ಸಂಭವಿಸುವ ಮೊದಲೇ ಅಣೆಕಟ್ಟು ಕಳಪೆ ಸ್ಥಿತಿಯಲ್ಲಿತ್ತು. ಅಣೆಕಟ್ಟುಗಳು, ರಸ್ತೆಗಳು ಮತ್ತು ಸೇತುವೆಗಳು ಸೇರಿದಂತೆ ಸುಡಾನ್‌ನಲ್ಲಿ ಮೂಲಸೌಕರ್ಯವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದೆ.

ಏಪ್ರಿಲ್ 2023 ರಿಂದ ಸೇನೆ ಮತ್ತು ಅರೆಸೇನಾ ಪಡೆಗಳ ನಡುವಣ ಸಂಘರ್ಷದಿಂದ ಸುಡಾನ್ ಈಗಾಗಲೇ ತತ್ತರಿಸಿ ಹೋಗಿದೆ. ಈಗ ಭಾರೀ ಮಳೆಯಿಂದಾಗಿ ಮತ್ತೊಂದು ಸಂಕಷ್ಟಕ್ಕೆ ಸಿಲುಕಿದೆ. ಈ ವರ್ಷ ದೇಶಾದ್ಯಂತ ಪ್ರವಾಹದಲ್ಲಿ 132 ಜನರು ಸಾವನ್ನಪ್ಪಿದ್ದಾರೆ, 118,000 ಜನರು ಸ್ಥಳಾಂತರಗೊಂಡಿದ್ದಾರೆ ಎಂದು ಸರ್ಕಾರ ಈ ಮೊದಲು ತಿಳಿಸಿತ್ತು.



# ದಾಳಿಗೂ ಮುನ್ನ ಪರಪ್ಪನ ಅಗ್ರಹಾರದ ಮುಂದೆ ಅರ್ಧಗಂಟೆ ಕಾಯ್ದಿದ್ದ ಸಿಸಿಬಿ ತನಿಖೆಗೆ ಆದೇಶ



**ಬೆಂಗಳೂರು:** ನಾಲ್ಕು ದಿನಗಳ ಹಿಂದೆ ಶನಿವಾರ (ಆ. 24) ರಂದು ಸಿಸಿಬಿ ಅಧಿಕಾರಿಗಳು ಬೆಂಗಳೂರು ಕೇಂದ್ರ ಕಾರಾಗೃಹದ ಮೇಲೆ ದಾಳಿ ಮಾಡಿದ್ದರು. ದಾಳಿ ವೇಳೆ ಏನು ಸಿಗದೆ ಖಾಲಿ ಕೈಯಲ್ಲಿ ಅಧಿಕಾರಿಗಳು ಬರಿಗೈಯಲ್ಲಿ ಮರಳಿದ್ದರು. ದಾಳಿ ಮಾಡಿದ ಮರು ದಿನವೇ (ಆ.25) ರಂದು ಕೊಲೆ ಆರೋಪಿ ದರ್ಶನ್ ಜೈಲಿನಲ್ಲಿ ಬಲಗೈಯಲ್ಲಿ ಚಹಾ ಮಗ್ ಮತ್ತು ಎಡಗೈನಲ್ಲಿ ಸಿಗರೇಟ್ ಹಿಡಿದಿರುವ ಫೋಟೋ ವೈರಲ್ ಆಗಿತ್ತು. ಈ ಫೋಟೋ ವೈರಲ್ ಬೆನ್ನಲ್ಲೇ ಸಿಸಿಬಿ ಅಧಿಕಾರಿಗಳ ದಾಳಿ ಮಾಹಿತಿ ಸೋರಿಕೆಯಾಗಿತ್ತಾ ಎಂಬ ಅನುಮಾನ ವ್ಯಕ್ತವಾಗಿದೆ. ಶನಿವಾರ ಸಿಸಿಬಿ ಅಧಿಕಾರಿಗಳು ಜೈಲಿನೊಳಗೆ ಪ್ರವೇಶಿಸುವ ಮುನ್ನ ಅರ್ಧಗಂಟೆ ಹೊರಗಡೆ ಕಾಯ್ದಿದ್ದರು ಎಂಬ ಮಾಹಿತಿ ಲಭ್ಯವಾಗಿದೆ.

ಸಿಸಿಬಿ ಅಧಿಕಾರಿಗಳು ದಾಳಿಗೆ ಬಂದಿದ್ದಾಗ ಜೈಲಧಿಕಾರಿಗಳು ಅರ್ಧ ಗಂಟೆ ಒಳಗೆ ಬಿಡಲಿಲ್ಲ. ಈ ವೇಳೆ ಸಿಸಿಬಿ ಅಧಿಕಾರಿಗಳು ಏಕೆ ಕಾಯಬೇಕು ಎಂದು ಜೈಲು ಸಿಬ್ಬಂದಿಗೆ ಪ್ರಶ್ನೆ ಮಾಡಿದ್ದಾರೆ. ಜೈಲು ಅಧೀಕ್ಷಕ ಬಂದಿಲ್ಲ, ಅವರಿಲ್ಲದೆ ಒಳಗೆ ಬಿಡಲ್ಲ ಎಂದು ಸಿಬ್ಬಂದಿ ಹೇಳಿದ್ದಾರೆ. ಹೀಗಾಗಿ, ಸಿಸಿಬಿ ಅಧಿಕಾರಿಗಳು ಸುಮಾರು ಅರ್ಧಗಂಟೆ ಜೈಲಿನ ಬಾಗಿಲಿನಲ್ಲೇ ಕಾಯ್ದಿದ್ದಾರೆ.

ಬ್ಯಾರಕ್‌ನಲ್ಲಿ ನಾಲ್ಕು ರಟ್ಟಿನ ಬಾಕ್ಸ್ ಗಳನ್ನು ಶಿಫ್ಟ್ ಮಾಡಿದ ಬಗ್ಗೆಯೂ ಜೈಲು ಸಿಬ್ಬಂದಿಯನ್ನು ಸಿಸಿಬಿ ಅಧಿಕಾರಿಗಳು ಪ್ರಶ್ನಿಸಿದ್ದಾರೆ. ಬಾಕ್ಸ್ ಗಳಲ್ಲಿ ಕಸ ಇತ್ತು ಜೈಲು ಸಿಬ್ಬಂದಿ ಹೇಳಿದ್ದಾರೆ. ಆದರೆ, ಜೈಲಿನ ಯಾವ ಬ್ಯಾರಕ್ ನಿಂದಲೂ ಕಸ ತೆಗೆದುಕೊಂಡು ಹೋಗಿಲ್ಲ, ಕೇವಲ ಬ್ಯಾರಕ್ ನಂಬರ್ 10 ರಿಂದ ಏಕೆ ಕಸ ತೆಗೆದುಕೊಂಡು ಹೋಗಿದ್ದೀರಿ ಎಂದು ಸಿಸಿಬಿ ಪೊಲೀಸರು ಪ್ರಶ್ನಿಸಿದ್ದಾರೆ. ಈ ಬಗ್ಗೆ ಸಿಸಿಬಿ ಅಧಿಕಾರಿಗಳು ಪ್ರಾಥಮಿಕ ವರದಿ ನೀಡಿದ್ದಾರೆ. ಜೈಲು ಅಧಿಕಾರಿಗಳ ಈ ನಡೆ ಹಲವು ಅನುಮಾನಗಳನ್ನು ಹುಟ್ಟು ಹಾಕಿದೆ.

ಪರಪ್ಪನ ಅಗ್ರಹಾರ ಜೈಲಿನ ಮೇಲೆ ಸಿಸಿಬಿ ಅಧಿಕಾರಿಗಳ ದಾಳಿಯ ಮಾಹಿತಿ ಸೋರಿಕೆಯಾಗಿದೆ ಎಂಬ ಅನುಮಾನ ವ್ಯಕ್ತವಾದ ಹಿನ್ನೆಲೆಯಲ್ಲಿ ಆಂತರಿಕ ತನಿಖೆ ನಡೆಸುವಂತೆ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಅವರು ಸೂಚನೆ ನೀಡಿದ್ದಾರೆ. ತನಿಖೆ ನಡೆಸಿ ವರದಿ ನೀಡಲು ಸಿಸಿಬಿ ಹೆಚ್ಚುವರಿ ಆಯುಕ್ತ ಡಾ.ಚಂದ್ರಗುಪ್ತಗೆ ಸೂಚಿಸಿದ್ದಾರೆ.

### ಜೈಲಿನಲ್ಲಿ ದರ್ಶನ್‌ಗೆ ರಾಜಾತಿಥ್ಯ

## ಪ್ರಕರಣದ ತನಿಖೆಗಾಗಿ 3 ವಿಶೇಷ ತಂಡ ರಚನೆ



**ಬೆಂಗಳೂರು:** ಕೊಲೆ ಆರೋಪದಲ್ಲಿ ಪರಪ್ಪನ ಅಗ್ರಹಾರದಲ್ಲಿರುವ ನಟ ದರ್ಶನ್‌ಗೆ ಚಹಾ ಮತ್ತು ಸಿಗರೇಟ್ ನೀಡಿರುವ ಫೋಟೋ ಬಹಿರಂಗಗೊಂಡಿದೆ. ಜೈಲಿನ ನಿಯಮಗಳನ್ನು ಉಲ್ಲಂಘಟನೆ ಮಾಡಿದ್ದಕ್ಕಾಗಿ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಮೂರು ಪ್ರಕರಣ ದಾಖಲಾಗಿದ್ದು, ಎರಡರಲ್ಲಿ ಎ1 ದರ್ಶನ್ ಆಗಿದ್ದಾರೆ. ಈ ಮೂರು ಪ್ರಕರಣದ ತನಿಖೆಗಾಗಿ ಆಗ್ನೇಯ ವಿಭಾಗ ಡಿಸಿಪಿ ಸಾರಾ ಫಾತೀಮಾ ಅವರು ಮೂರು ವಿಶೇಷ ತಂಡ ರಚನೆ ಮಾಡಿದ್ದಾರೆ.

**ಮೂರು ವಿಶೇಷ ತಂಡಗಳು:** ಬೇಗೂರು ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಕೃಷ್ಣಕುಮಾರ್ ಅವರಿಂದ ಮೊದಲನೇ ಪ್ರಕರಣದ ತನಿಖೆ ನಡೆಯುತ್ತದೆ. ಜೈಲಿನ ಲಾನ್ ನಲ್ಲಿ ಕುಳಿತು ಕಾಫಿ ಸಿಗರೇಟ್ ಸೇವನೆ, ರೌಡಿಶೀಟರ್ ಗಳ ಜೊತೆ ದರ್ಶನ್ ಬೇರೆತಿದ್ದು ಹೇಗೆ ಲಾನ್ ನಲ್ಲಿ ಎಲ್ಲರೂ ಒಟ್ಟಿಗೆ ಕೂರಲು ಚೇರ್ ವ್ಯವಸ್ಥೆ ಮಾಡಿದವರು ಯಾರು ಕಾಫಿ ಮಗ್ ಹೇಗೆ ಬಂತು ಹಾಗೂ ಜೈಲಿನಲ್ಲಿ ಸಿಗರೇಟ್, ಮದ್ಯ, ಮಾದಕವಸ್ತು ನಿಷೇಧವಿದ್ದರೂ, ಹೇಗೆ ಒಳಗೆ ಬಂತು ಅಂತ ತನಿಖೆ ನಡೆಸುತ್ತಾರೆ.

ಎರಡನೇ ಪ್ರಕರಣ: ಮೊಬೈಲ್ ಫೋನ್ ನಲ್ಲಿ ಫೋಟೋ ಹಾಗೂ ವಿಡಿಯೋ ಚಿತ್ರೀಕರಣದ ಬಗ್ಗೆ ಹುಳಿಮಾವು ಪೊಲೀಸ್ ಠಾಣೆ ಇನ್ಸ್ ಪೆಕ್ಟರ್ ಕುಮಾರಸ್ವಾಮಿ ತನಿಖೆ ನಡೆಸುತ್ತಾರೆ. ಪುಟ 2

### ರತ್ನಗಿರಿಯಲ್ಲಿ ನರ್ಸಿಂಗ್ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯ

## ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆ



**ಮಹಾರಾಷ್ಟ್ರ:** ನರ್ಸಿಂಗ್ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ್ಯವೆಸಗಿರುವ ಘಟನೆ ಮಹಾರಾಷ್ಟ್ರದ ರತ್ನಗಿರಿಯಲ್ಲಿ ನಡೆದಿದೆ. ವಿದ್ಯಾರ್ಥಿನಿ ಚಂಪಕ್ ಮೈದಾನದ ಬಳಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಆಕೆ ತೀವ್ರವಾಗಿ ಗಾಯಗೊಂಡಿದ್ದಳು. ಆಕೆಯನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ.

ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು, ಆಸ್ಪತ್ರೆಯಲ್ಲಿ ಕೆಲವು ದಿನಗಳ ಹಿಂದೆ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ನಡೆದ ಅತ್ಯಾಚಾರ, ಕೊಲೆ ಇಡೀ ದೇಶವನ್ನೇ ನಿದ್ದೆಗೆಡುವಂತೆ ಮಾಡಿದೆ., ಆಸ್ಪತ್ರೆಗಳಲ್ಲಿ ಮಹಿಳೆಯರಿಗೆ ಸುರಕ್ಷತೆ ಇಲ್ಲ ಎಂದು ಹೇಳಲಾಗುತ್ತಿದೆ. ದೇಶಾದ್ಯಂತ ಪ್ರತಿಭಟನೆ ನಡೆಯುತ್ತಿದೆ. ಈ ಹೊತ್ತಲ್ಲೇ ನರ್ಸಿಂಗ್ ವಿದ್ಯಾರ್ಥಿನಿ ಮೇಲೆ ನಡೆದ ದೌರ್ಜನ್ಯ ಆಕ್ರೋಶಕ್ಕೆ ಕಾರಣವಾಗಿದೆ.

ಆಸ್ಪತ್ರೆಯ ಮೂಲಗಳ ಪ್ರಕಾರ, ವಿದ್ಯಾರ್ಥಿನಿಗೆ ಅನೇಕ ಗಾಯಗಳಾಗಿದ್ದು, ಅತ್ಯಾಚಾರ ನಡೆದಿರಬಹುದು ಎನ್ನುವ ಶಂಕೆ ವ್ಯಕ್ತವಾಗಿದೆ. ಈ ಘಟನೆಯು ರತ್ನಗಿರಿಯ ನರ್ಸಿಂಗ್ ಸಮುದಾಯದಲ್ಲಿ ಆಕ್ರೋಶವನ್ನು ಹುಟ್ಟುಹಾಕಿದೆ. ಪುಟ 2

## 1 ವರ್ಷದಿಂದ ಸವಾಲಿನ ಮೇಲೆ ಸವಾಲು



**ಬೆಂಗಳೂರು:** ಜೈಲಿನಲ್ಲಿ ದರ್ಶನ್‌ಗೆ ರಾಜ ಮರ್ಯಾದೆ ನೀಡಿದ ಪ್ರಕರಣ ಬೆಳಕಿಗೆ ಬಂದ ನಂತರ ಗೃಹ ಸಚಿವ ಪರಮೇಶ್ವರ್ ಇಮೇಜ್ ಗೆ ಮತ್ತೆ ಧಕ್ಕೆಯಾಗಿದೆ. ಒಂದು ವರ್ಷದಿಂದ ಪರಮೇಶ್ವರ್‌ಗೆ ಸವಾಲಿನ ಮೇಲೆ ಸವಾಲು ಎದುರಾಗುತ್ತಿದೆ. ಬಯಸದೇ ಬಂದ ಖಾತೆಯಿಂದ ಸವಾಲು ಜೊತೆ ಮುಜುಗರವೇ ಹೆಚ್ಚಾಗುತ್ತಿದೆ. ಗೃಹ ಇಲಾಖೆಗೆ ಡ್ಯಾಮೇಜ್ ಆಗಿರುವ ಹಿನ್ನೆಲೆಯಲ್ಲಿ ಮುಜುಗರಕ್ಕೆ ಒಳಗಾಗಿರುವ ಗೃಹ ಸಚಿವ ಜಿ.ಪರಮೇಶ್ವರ್ ಸೋಮವಾರ ವಿಧಾನಸೌಧದಲ್ಲಿ ಮಾಧ್ಯಮಗಳ ಮೇಲೆಯೇ ಗರಂ ಆಗಿದ್ದರು. ಪುಟ 2

### ಚಿಕ್ಕಮಗಳೂರಿನಲ್ಲಿ ಟ್ರೆಕ್ಕಿಂಗ್ ನಕಲಿ ಟಿಕೆಟ್ ಮಾರಾಟ

## DRFO ಸಸ್ಪೆಂಡ್

**ಚಿಕ್ಕಮಗಳೂರು:** ಕಾಫಿನಾಡಿನಲ್ಲಿ ಟ್ರೆಕ್ಕಿಂಗ್ ನಕಲಿ ಟಿಕೆಟ್ ಮಾರಾಟ ಜಾಲ ಪತ್ತೆಯಾಗಿದೆ. ಚಾರಣಕ್ಕೆ ತೆರಳುವ ಪ್ರವಾಸಿಗರಿಗೆ ನಕಲಿ ಟಿಕೆಟ್ ಮಾರಾಟ ಮಾಡುತ್ತಿದ್ದ DRFOರನ್ನು ಸಸ್ಪೆಂಡ್ ಮಾಡಲಾಗಿದೆ. ನಕಲಿ ಟಿಕೆಟ್ ಸೃಷ್ಟಿಸಿ ಸಾವಿರಾರು ಪ್ರವಾಸಿಗರಿಗೆ ಮಾರಾಟ ಮಾಡಲಾಗುತ್ತಿತ್ತು. ಬಂಡಾಜೆ ಫಾಲ್ಸ್, ಬಲ್ಲಾಳರಾಯನ ದುರ್ಗ ಚಾರಣಕ್ಕೆ ಆನ್ ಲೈನ್ ಟಿಕೆಟ್ ನಕಲು ಮಾಡಿ ಪ್ರವಾಸಿಗರಿಗೆ ಮಾರಾಟ ಮಾಡುತ್ತಿದ್ದ ಹಿನ್ನೆಲೆ ಅರಣ್ಯ ಇಲಾಖೆಯ ಉಪ ವಲಯ ಅರಣ್ಯಾಧಿಕಾರಿ ಚಂದನ್ ಅವರನ್ನು ಸಸ್ಪೆಂಡ್ ಮಾಡಲಾಗಿದೆ.

ಚಂದನ್ ಅವರು ಈಗಾಗಲೇ ಸಾವಿರಾರು ಟ್ರೆಕ್ಕಿಂಗ್ ಟಿಕೆಟ್ ನಕಲು ಮಾಡಿ ಮಾರಾಟ ಮಾಡಿದ್ದಾರೆ ಎನ್ನಲಾಗುತ್ತಿದೆ. ಆನ್ ಲೈನ್ ನಲ್ಲಿ ಟಿಕೆಟ್ ಬುಕ್ ಮಾಡಿದವರಿಗೆ ಚಾರಣಕ್ಕೆ ಅವಕಾಶ ನೀಡದೆ, ತಾನು ನೀಡಿದ ನಕಲಿ ಟಿಕೆಟ್ ಪಡೆದ ಪ್ರವಾಸಿಗರಿಗೆ ಮಾತ್ರ ಚಾರಣಕ್ಕೆ ಅವಕಾಶ ನೀಡುತ್ತಿದ್ದರು ಎಂದು ತಿಳಿದು ಬಂದಿದೆ. ಪ್ರವಾಸೋದ್ಯಮ ಇಲಾಖೆ ಚಾರಣಕ್ಕೆ ಆನ್ಲೈನ್ ಟಿಕೆಟ್ ಬುಕಿಂಗ್ ಆರಂಭಿಸಿದೆ. ಆನ್ಲೈನ್ ಬುಕ್ಕಿಂಗ್ ಮಾಡಿಕೊಂಡು ಬಂದರೂ ಅವಕಾಶ ನೀಡುತ್ತಿಲ್ಲ ಎಂದು



DRFO ಚಂದನ್ ವಿರುದ್ಧ ಪ್ರವಾಸಿಗರು ನಿರಂತರ ದೂರು ನೀಡಿದ್ದು ವಿಡಿಯೋ ಸಮೇತ ದೂರು ನೀಡಿದ್ದರು.

ಕಳಸ ತಾಲೂಕಿನ ಅರಣ್ಯ ವ್ಯಾಪ್ತಿಯಲ್ಲಿರುವ ಬಂಡಾಜೆ, ಬಲ್ಲಾಳರಾಯನ ದುರ್ಗಕ್ಕೆ ಅವಕಾಶ ನೀಡುತ್ತಿಲ್ಲ ಎಂದು ಪ್ರವಾಸಿಗರು ತಮ್ಮ ಸಾಮಾಜಿಕ ಜಾಲತಾಣಗಳಲ್ಲಿ ಆಕ್ರೋಶ ಹೊರ ಹಾಕಿದ್ದರು. ಸದ್ಯ ಇದೀಗ ಮೂಡಿಗೆರೆ ತಾಲೂಕಿನ ಜಾವಳಿ ಅರಣ್ಯ ಇಲಾಖೆ ಶಾಖೆಯ DRFO ಆಗಿದ್ದ ಚಂದನ್ ಅವರನ್ನು ಅಮಾನತು ಮಾಡಿ ಪುಟ 2

### ಕೊಪ್ಪಳ ನವೋದಯ ವಿದ್ಯಾಲಯದಲ್ಲಿ ರ‍್ಯಾಗಿಂಗ್

## ಜೂನಿಯರ್ಸ್ ಮೇಲೆ ಹಲ್ಲೆ ಮಾಡಿದ ಸೀನಿಯರ್ಸ್

**ಕೊಪ್ಪಳ:** ರ‍್ಯಾಗಿಂಗ್ ಪಿಡುಗು ಮತ್ತೆ ತಲೆ ಎತ್ತಿದೆಯಾ ಎಂಬ ಅನಮಾನ ಕಾಡುತ್ತಿದೆ. ಇದಕ್ಕೆ ಇಂಬು ಕೊಡುವಂತೆ ಕೊಪ್ಪಳದ ನವೋದಯ ರೆಸಿಡೆನ್ಶಿಯಲ್ ಸ್ಕೂಲಿನಲ್ಲಿ ಇಂತಹ ಪೈಶಾಚಿಕ ಕೃತ್ಯವೊಂದು ನಡೆದಿದೆ. 80-90ರ ದಶಕದಲ್ಲಿ ಅಮಾನುಷವಾಗಿ ನಡೆಯುತ್ತಿದ್ದ ಈ ಕುಕೃತ್ಯಗಳು ಇತ್ತೀಚೆಗೆ ಕಡಿಮೆಯಾಗಿದ್ದವು. ಕಾನೂನುಕ್ರಮಗಳು ಬಿಗಿಗೊಂಡಿದ್ದವು. ಆದರೆ ಪ್ರತಿಷ್ಠಿತ ನವೋದಯ ಸ್ಕೂಲಿನಲ್ಲಿ ಸಾಮೂಹಿಕ ರ‍್ಯಾಗಿಂಗ್ ನಡೆದಿರುವುದು ಆತಂಕ ತಂದೊಡ್ಡಿದೆ.

ಜಿಲ್ಲೆಯ ಕುಕನೂರು ಪಟ್ಟಣದ ಬಳಿಯಿರುವ ಜವಾಹರ ನವೋದಯ ವಿದ್ಯಾಲಯದಲ್ಲಿ ರ ಯಾಗಿಂಗ್ ನಡೆದಿರುವ ಆರೋಪ ಕೇಳಿ ಬಂದಿದೆ. ಕಿರಿಯ ವಿದ್ಯಾರ್ಥಿಗಳ ಮೇಲೆ ಹಿರಿಯ ವಿದ್ಯಾರ್ಥಿಗಳು ಹಲ್ಲೆ ನಡೆಸಿದ್ದಾರೆ ಎನ್ನಲಾಗುತ್ತಿದೆ. PU ವಿದ್ಯಾರ್ಥಿಗಳು 60ಕ್ಕೂ ಅಧಿಕ ಹೈಸ್ಕೂಲ್ ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಕಟ್ಟಿಗೆ, ಬೆಲ್ಟ್ ನಿಂದ




ಹಲ್ಲೆ ನಡೆಸಿದ್ದು ಕೆಲವರಿಗೆ ಮರ್ಮಾಂಗಕ್ಕೆ ಒದ್ದು ವಿಕೃತಿ ಮರೆದಿದ್ದಾರೆ ಎನ್ನಲಾಗುತ್ತಿದೆ. ಸೀನಿಯರ್ ವಿದ್ಯಾರ್ಥಿಗಳ ವಿರುದ್ಧ ಕ್ರಮಕ್ಕೆ ಪೋಷಕರು ಆಗ್ರಹಿಸಿದ್ದಾರೆ.

**ವಿಚಾರ ತಿಳಿಸಿದರೆ ಸುಮ್ಮನೆ ಬಿಡಲ್ಲ ಎಂದು ಬೆದರಿಕೆ:** ಆಗಸ್ಟ್ 20 ರಂದು ಕ್ಷುಲ್ಲಕ ಕಾರಣಕ್ಕೆ ಜೂನಿಯರ್ ವಿದ್ಯಾರ್ಥಿಗಳನ್ನು ಕರೆಸಿಕೊಂಡು ಸೀನಿಯರ್ ವಿದ್ಯಾರ್ಥಿಗಳು ಹಲ್ಲೆ ನಡೆಸಿದ್ದಾರೆ. ಪುಟ 2

### ಡ್ರಗ್ಸ್ ನೀಡಿ ಅತ್ಯಾಚಾರ ಕೇಸ್‌ಗೆ ಟ್ವಿಸ್ಟ್, ಬಿಜೆಪಿ ಕಾರ್ಯಕರ್ತ

## ಅರೆಸ್ಟ್

**ಉಡುಪಿ:** ಉಡುಪಿ ಜಿಲ್ಲೆಯಲ್ಲಿ ಯುವತಿಗೆ ಡ್ರಗ್ಸ್ ನೀಡಿ ಅತ್ಯಾಚಾರ ಎಸಗಿದ್ದ ಕೇಸ್‌ಗೆ ಸಂಬಂಧಿಸಿ ಕಾರ್ಕಳ ಠಾಣೆ ಪೊಲೀಸರು ಮೂರನೇ ಆರೋಪಿಯನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿ ಅಭಯ್ ಬಿಜೆಪಿ ಕಾರ್ಯಕರ್ತ ಎನ್ನುವ ಮಾಹಿತಿ ಸಿಕ್ಕಿದ್ದು ಉಡುಪಿ ಅತ್ಯಾಚಾರ ಕೇಸನ್ನು ಲವ್ ಜಿಹಾದ್ ಎಂದು ಆರೋಪಿಸಿದ್ದ ಬಿಜೆಪಿ, ಹಿಂದೂ ಸಂಘಟನೆಗಳಿಗೆ ಅಭಯ್ ಬಂಧನ ಮುಖ ಭಂಗ ತಂದಿದೆ. ಅಲ್ಲದೆ ಅಭಯ್ ಅತ್ಯಾಚಾರಿ ಅಲ್ತಾಫ್‌ಗೆ ಡ್ರಗ್ಸ್ ತಂದು ಕೊಟ್ಟಿದ್ದ ಎಂದು ತಿಳಿದುಬಂದಿದೆ.



ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ಡ್ರಗ್ಸ್ ಬೆರೆಸಿದ ಮದ್ಯ ಕುಡಿಸಿ ಯುವತಿ ಮೇಲೆ ಅತ್ಯಾಚಾರ ಎಸಗಲಾಗಿದ್ದ ಪ್ರಕರಣ ಸಾಕಷ್ಟು ಸಂಚಲನ ಸೃಷ್ಟಿಸಿದೆ. ಇದೀಗ 3ನೇ ಆರೋಪಿ ಅಭಯ್ ನನ್ನು ಪೊಲೀಸರು ಬಂಧಿಸಿದ್ದು ಹೊಸ ಟ್ವಿಸ್ಟ್ ಸಿಕ್ಕಿದೆ.

## ದರ್ಶನ್‌ನನ್ನು ಬೇರೆ ಜೈಲಿಗೆ ಕಳಿಸಿ: ಸಿಎಂ ತಾಕೀತು



**ಬೆಂಗಳೂರು:** ಆರೋಪಿ ದರ್ಶನ್ ಮತ್ತು ಇತರರನ್ನು ಕೂಡಲೇ ಬೇರೆ ಬೇರೆ ಕಾರಾಗೃಹಗಳಿಗೆ ಸ್ಥಳಾಂತರ ಮಾಡುವಂತೆ ಸಿಎಂ ಸಿದ್ದರಾಮಯ್ಯ ತಾಕೀತು ಮಾಡಿದ್ದಾರೆ ಎಂದು ಸಿಎಂ ಮಾಧ್ಯಮ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್ ಮತ್ತಿತರರಿಗೆ ರಾಜಾತಿಥ್ಯ ಒದಗಿಸುತ್ತಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಸಿಎಂ, ತಪ್ಪಿತಸ್ತ ಅಧಿಕಾರಿಗಳನ್ನು ಕೂಡಲೇ ಅಮಾನತು ಮಾಡುವಂತೆ ಸೂಚಿಸಿದ್ದಾರೆ. ಕಾರಾಗೃಹಕ್ಕೆ ಭೇಟಿ ನೀಡಿ ಪ್ರಕರಣದ ಬಗ್ಗೆ ಸಂಪೂರ್ಣ ವರದಿ ನೀಡುವಂತೆ ಸಿಎಂ ಅವರು ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚನೆ ನೀಡಿದ್ದಾರೆ ಎಂದು ಸಿಎಂ ಕಚೇರಿ ಸ್ಪಷ್ಟಪಡಿಸಿದೆ.

## ಕೆಪಿಎಸ್‌ಸಿ ಪೂರ್ವಭಾವಿ ಪರೀಕ್ಷೆ ಮುಂದೂಡಿ: ಸರ್ಕಾರಕ್ಕೆ ನಿಖಿಲ್ ಕುಮಾರಸ್ವಾಮಿ ಆಗ್ರಹ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗ ಇದೇ ತಿಂಗಳು 27ರಂದು ನಡೆಸುತ್ತಿರುವ ಪರೀಕ್ಷೆಯನ್ನ ಮುಂದೂಡುವಂತೆ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.



ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಸ್ವಾರ್ಥಕ್ಕಾಗಿ ತಾರತುರಿಯಲ್ಲಿ ಕೆಎಎಸ್ ಪೂರ್ವಭಾವಿ ಪರೀಕ್ಷೆ ನಡೆಸುತ್ತಿದ್ದು, ಪರೀಕ್ಷೆ ಮುಂದೂಡುವಂತೆ ಆಗ್ರಹಿಸಿದ್ದಾರೆ.

ಈ ಪರೀಕ್ಷೆ ಹಲವಾರು ಅನುಮಾನಗಳಿಗೆ ಕಾರಣವಾಗಿದೆ. ಪರೀಕ್ಷೆ ಬರೆಯುವ ಪ್ರಾಮಾಣಿಕ ಅಭ್ಯರ್ಥಿಗಳಿಗೆ ತೊಂದರೆ ಕೊಡುವ ಹುನ್ನಾರ ಇದರಲ್ಲಿದೆ. ಪೂರ್ವಭಾವಿ ಪರೀಕ್ಷೆ ನಿಗದಿ ಮಾಡಿರುವುದು ಸರಿಯಷ್ಟೆ. ಕೆಲವರ ಸ್ವಾರ್ಥಕ್ಕಾಗಿ ತರಾತುರಿಯಲ್ಲಿ ಪರೀಕ್ಷೆ ನಡೆಸುತ್ತಿರುವ ಆರೋಪವಿದ್ದು, ಪರೀಕ್ಷೆ ಬರೆಯಲು ಅನೇಕ ದಿನಗಳಿಂದ ಪ್ರಾಮಾಣಿಕವಾಗಿ ತಯಾರಿ ನಡೆಸಿರುವ ಅಭ್ಯರ್ಥಿಗಳಿಗೆ, ಅದರಲ್ಲಿಯೂ ವಿಕಲಚೇತನ ಅಭ್ಯರ್ಥಿಗಳಿಗೆ ತೊಂದರೆ ಕೊಡುವ ಹುನ್ನಾರ ಇದರಲ್ಲಿದೆ ಎಂದು ಆರೋಪಿಸಿದ್ದಾರೆ. ರಜೆ ದಿನ ಹೊರತುಪಡಿಸಿ ಇತರೆ ದಿನಗಳಲ್ಲಿ ಪರೀಕ್ಷೆ ನಡೆಸಿದರೆ ಖಾಸಗಿ ಕಂಪನಿಗಳಲ್ಲಿ ಕೆಲಸ ಮಾಡುವ ಅಭ್ಯರ್ಥಿಗಳಿಗೂ ಸಮಸ್ಯೆ ಆಗುತ್ತದೆ. ಈ ಬಗ್ಗೆ ಅಭ್ಯರ್ಥಿಗಳು ಹಲವು ದಿನಗಳಿಂದ ಪರೀಕ್ಷೆ ಮುಂದೂಡುವಂತೆ ಮನವಿ ಮಾಡುತ್ತಿದ್ದರೂ ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಕೆಪಿಎಸ್‌ಸಿ ಪರೀಕ್ಷೆ ನಡೆಸಲೇಬೇಕು ಎಂದು ಪಟ್ಟು ಹಿಡಿದಿರುವುದು ಅನುಮಾನಕ್ಕೆ ಕಾರಣವಾಗಿದೆ. ರಾಜ್ಯ ಸರ್ಕಾರವು ಅವರ ಕಾಳಜಿಯನ್ನು ನಿರ್ಲಕ್ಷಿಸಿದೆ ಮತ್ತು ಅವರ ಪ್ರತಿಭಟನೆಯ ಹಕ್ಕನ್ನು ಹತ್ತಿಕ್ಕಲು ಹೊರಟಿರುವುದು ಅಕ್ಷಮ್ಯ ಎಂದು ಆಕ್ರೋಶ ಹೊರಹಾಕಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಕೂಡಲೇ ಕ್ರಮ ವಹಿಸಿ ಎಲ್ಲಾ ಅಭ್ಯರ್ಥಿಗಳಿಗೆ ಅನುಕೂಲವಾಗುವ ದಿನಾಂಕ ನಿಗದಿಪಡಿಸಿ ಪರೀಕ್ಷೆ ನಡೆಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಜೈಲಿನಲ್ಲಿ ಕೊಲೆ ಆರೋಪಿ ದರ್ಶನ್‌ಗೆ ರಾಜಾತಿಥ್ಯ ನೀಡಿದ ಪ್ರಕರಣದಲ್ಲಿ ಲೋಪ ಆಗಿರೋದು ಸತ್ಯ



**ಬೆಂಗಳೂರು:** ಜೈಲಿನಲ್ಲಿ ಕೊಲೆ ಆರೋಪಿ ದರ್ಶನ್‌ಗೆ ರಾಜಾತಿಥ್ಯ ನೀಡಿದ ಪ್ರಕರಣದಲ್ಲಿ ಲೋಪ ಆಗಿರೋದು ಸತ್ಯ. ಈ ಬಗ್ಗೆ ಹಿರಿಯ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಬೇಕು ಎಂದು ಸಚಿವ ರಾಮಲಿಂಗಾರೆಡ್ಡಿ ಗೃಹ ಸಚಿವರಿಗೆ ಆಗ್ರಹಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ನಾನು ಕೂಡ ಗೃಹ ಸಚಿವನಾಗಿ ಕೆಲಸ ಮಾಡಿದ್ದೇನೆ. ಅತ್ಯಂತ ಪ್ರಾಮಾಣಿಕ ಮತ್ತು ಸ್ಟ್ರಿಕ್ಟ್ ಆಫೀಸರ್‌ಗಳನ್ನು ಇಂಥ ಸ್ಥಳಕ್ಕೆ ಹಾಕಬೇಕು. ಆಗ ಮಾತ್ರ ಈ ರೀತಿ ಘಟನೆಗಳು ಆಗೋದಿಲ್ಲ. ಯಾರು ಸೌಲಭ್ಯಗಳನ್ನು ಕೊಟ್ಟಿದ್ದಾರೆ ಅಂಥ ಗೃಹ ಮಂತ್ರಿಗಳಿಗೆ ಗೊತ್ತಿದೆ. ಅವರು ಕ್ರಮ ತೆಗೆದುಕೊಳ್ಳುತ್ತಾರೆ. ಕೆಳಹಂತದ ಸಿಬ್ಬಂದಿಯನ್ನು ಅಮಾನತು ಮಾಡಿದರೆ ಪ್ರಯೋಜನ ಇಲ್ಲ. ಈ ಘಟನೆಯಲ್ಲಿ ಯಾವ ದೊಡ್ಡ ಅಧಿಕಾರಿ ಇದ್ರೂ, ಅವರ ಮೇಲೆ ಕ್ರಮ ತೆಗೆದುಕೊಳ್ಳಬೇಕು. ಆಗ ಮಾತ್ರ ಇಂತಹ ಘಟನೆ ಮುಂದೆ ಆಗಲ್ಲ ಎಂದರು.

ಡಿಜಿ ಅವರಿಗೆ ಈ ವಿಚಾರ ಎಲ್ಲ ಗೊತ್ತಿರುವುದಿಲ್ಲ. ಆದರೆ ಅವರು ಪರಿಶೀಲನೆ ಮಾಡುತ್ತಿರಬೇಕಿತ್ತು. ಜೈಲಿಗೆ ಭೇಟಿ ಕೊಡಬೇಕು. ಅಧಿಕಾರಿಗಳನ್ನು ಕರೆದು ವಾರ್ನ್ ಮಾಡಬೇಕಿತ್ತು. ನಮ್ಮ ಗೃಹ ಮಂತ್ರಿಗಳು ಅನುಭವಿಗಳಿದ್ದಾರೆ. ಈ ಘಟನೆ ಪುನರಾವರ್ತನೆ ಆಗದ ರೀತಿ ಕ್ರಮ ತೆಗೆದುಕೊಳ್ಳುತ್ತಾರೆ. ಇದು ರಾಜ್ಯ ಸರ್ಕಾರದ ಹೊಣೆಯಲ್ಲ. ಆದರೆ ಲೋಪ ಆಗಿರೋದು ನಿಜ. ಅಲ್ಲಿ ಫೋನ್ ಇಟ್ಟುಕೊಂಡಿರೋದು ಸತ್ಯ. ಲೋಪ ಅಂತೂ ಆಗಿದೆ ಎಂದು ತಿಳಿಸಿದರು. ಈ ಕೇಸ್‌ನಲ್ಲಿ ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂಬ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಎಲ್ಲೋ ಒಂದು ಕಡೆ ರೈಲ್ ಆಕ್ಸಿಡೆಂಟ್ ಆದಾಗ ರೈಲ್ವೆ ಸಚಿವರ ರಾಜೀನಾಮೆ ಕೇಳೋಕೆ ಆಗುತ್ತಾ? ಎಲ್ಲೋ ಜೈಲಲ್ಲಿ ಇಂತಹ ಘಟನೆಯಾದಾಗ ಗೃಹ ಮಂತ್ರಿ ರಾಜೀನಾಮೆ ಕೊಟ್ರೆ ದೇಶದಲ್ಲಿರುವ ಯಾವ ಸರ್ಕಾರ, ಯಾವ ಮಂತ್ರಿಗಳು ಕೂಡ ಕೆಲಸ ಮಾಡಲು ಸಾಧ್ಯವಿಲ್ಲ. ದರ್ಶನ್ ಪತ್ನಿ ಶಾಲೆಯ ಸೀಟ್ ವಿಚಾರಕ್ಕೆ ಡಿಸಿಎಂ ಭೇಟಿ ಮಾಡಿದ್ದು. ಸಾರ್ವಜನಿಕವಾಗಿ ಡಿಕೆಶಿ ಅವರು ಯಾವುದೇ ಹೇಳಿಕೆ ನೀಡಿಲ್ಲ. ಅವರ ಭೇಟಿ ಬಗ್ಗೆ ಡಿಸಿಎಂ ಸ್ಪಷ್ಟನೆ ಕೂಡ ಕೊಟ್ಟಿದ್ದಾರೆ ಎಂದರು.

ದರ್ಶನ್ ಅವರನ್ನು ಬೇರೆ ಜೈಲಿಗೆ ಶಿಫ್ಟ್ ಮಾಡುವ ವಿಚಾರದಲ್ಲಿ ನಮ್ಮ ಗೃಹ ಮಂತ್ರಿಗಳು ಅನುಭವಿಗಳಿದ್ದಾರೆ. ಈ ರೀತಿ ಮರುಕಳಿಸದಂತೆ ಮಾಡುತ್ತಾರೆ. ರಾಜಾತಿಥ್ಯ ನೀಡಲು ಸಚಿವರು ಒತ್ತಡ ಹಾಕಿದ್ದಾರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಯಾವ ಸಚಿವರು ಕೂಡ ಒತ್ತಡ ಹಾಕಿಲ್ಲ ಎಂದು ಹೇಳಿದರು.

# ಉಪ್ಪು ತಿಂದವರು ನೀರು ಕುಡಿಯಲೇಬೇಕು : ದರ್ಶನ್ ವಿಚಾರಕ್ಕೆ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯೆ



**ಬೆಂಗಳೂರು:** ಉಪ್ಪು ತಿಂದವರು ನೀರು ಕುಡಿಯಲೇಬೇಕು. ದರ್ಶನ್ ಕೇಸ್‌ನಲ್ಲಿ ಗೃಹ ಇಲಾಖೆ ಕ್ರಮ ತೆಗೆದುಕೊಳ್ಳುತ್ತದೆ ಕಾನೂನು ಎಲ್ಲರಿಗೂ ಒಂದೇ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿದ್ದಾರೆ.

ಜೈಲಿನಲ್ಲಿ ದರ್ಶನ್‌ಗೆ ರಾಜಾತಿಥ್ಯ ನೀಡಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ದರ್ಶನ್ ಪ್ರಕರಣದ ಬಗ್ಗೆ ನಾನು ಮಾಧ್ಯಮದಲ್ಲಿ ಅಷ್ಟೇ ನೋಡಿರೋದು. ಸೌಲಭ್ಯ ಕೊಡಬೇಕು ಎಂದು ಸರ್ಕಾರಕ್ಕೆ ಉದ್ದೇಶ ಇರಲ್ಲ. ಅವರವರೇ ಏನೇನೋ ಹೊಂದಾಣಿಕೆ ಮಾಡಿಕೊಂಡಿರುತ್ತಾರೆ. ಅಂತವರಿಂದ ಸರ್ಕಾರಕ್ಕೆ ಕೆಟ್ಟ ಹೆಸರು ಬರ್ತಿದೆ ಎಂದರು.

ಐಷಾರಾಮಿ ರಾಜಾತಿಥ್ಯ ಅನುಭವಿಸಿದವರು ಹಾಗೂ ನೀಡಿದವರು ತಕ್ಕ ಶಿಕ್ಷೆಗೆ ಗುರಿಯಾಗುತ್ತಾರೆ. ಕಾನೂನು ಎಲ್ಲರಿಗೂ ಒಂದೇ ಅದ್ದರಿಂದ ಚುರುಕಾಗಿ ತನಿಖೆ ನಡೆದಿದೆ. ಬಿಜೆಪಿ ಶಾಸಕರು ಯಾವ ಮಟ್ಟಕ್ಕೆ ಒತ್ತಡ ನೀಡಿದ್ರು ಎನ್ನುವ ಕುರಿತು ಎಲ್ಲರಿಗೂ ತಿಳಿದೇ ಇದೆ. ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದಿದ್ದಾರೆ.

ಯಾರಿಗೂ ಸೌಲಭ್ಯ ಕೊಡಬೇಕು ಅಂತ ರೂಲ್ಸ್ ಇಲ್ಲ. ಈ ವಿಚಾರ ಸರ್ಕಾರಕ್ಕೆ ಮುಜುಗರ ತರ್ತಿದೆ. ಸುಮ್ಮನೆ ಊಹಾಪೋಹ ಬೇಡ. ಪರಮೇಶ್ವರ್ ಅವರು ಇರಲಿ, ಯಾರೇ ಇರಲಿ ಸಂವಿಧಾನ ಉಲ್ಲಂಘನೆ ಮಾಡುವುದಿಲ್ಲ. ಇಷ್ಟು ಹಂತಕ್ಕೆ ಬಂದಿದೆ ಅಂದ್ರೆ ಸರ್ಕಾರ ಈ ಬಗ್ಗೆ ದೃಢ ನಿರ್ಧಾರ ಮಾಡುತ್ತದೆ. ಇದರ ಬಗ್ಗೆ ಇಂಟರನಲ್ ತನಿಖೆಗೆ ಆದೇಶ ಕೊಟ್ಟಿದೆ. ಯಾರೇ ಇದ್ದರೂ ಅವರ ಮೇಲೆ ಕ್ರಮ ತೆಗೆದುಕೊಳ್ಳಲಾಗುತ್ತದೆ ವಾರ್ನಿಂಗ್ ನೀಡಿದ್ದಾರೆ.

# ವೈಟ್ನರ್ ಹಿಂದಿರುವ ಅಕ್ಷರಗಳೇನು? ವೀಡಿಯೋ ಸಮೇತ ಸಾಕ್ಷಿ ನೀಡಿದ ಸಿದ್ದರಾಮಯ್ಯ




**ಬೆಂಗಳೂರು:** ಮುಡಾ ಅಕ್ರಮವಾಗಿ ಸ್ವಾದೀನಪಡಿಸಿಕೊಂಡ ನಮ್ಮ ಕುಟುಂಬದ ಜಮೀನಿಗೆ ಬದಲಿ ಭೂಮಿ ನೀಡುವಂತೆ ನನ್ನ ಪತ್ನಿ ಸಲ್ಲಿಸಿದ್ದ ಅರ್ಜಿಯಲ್ಲಿ ನಾಲ್ಕೈದು ಪದಗಳಿಗೆ ವೈಟ್ನರ್ ಹಚ್ಚಿದ್ದನ್ನೇ ಮಹಾನ್ ಅಪಾರಾಧವೆಂಬಂತೆ ಗಂಟಲು ಹರಿದುಕೊಂಡ ಬಿಜೆಪಿ ? ಜೆಡಿಎಸ್ ನಾಯಕರೇ, ವೈಟ್ನರ್ ಹಿಂದಿರುವ ಅಕ್ಷರಗಳೇನು ಎಂಬುದು ಈ ವೀಡಿಯೋದಲ್ಲಿ ಸ್ಪಷ್ಟವಾಗಿ ಕಾಣುತ್ತಿದೆ. ನಿಮ್ಮ ದ್ವೇಷದ ಕನ್ನಡಕ ಕಳಚಿಟ್ಟು ಸರಿಯಾಗಿ ಕಣ್ಣುಬಿಟ್ಟು ನೋಡಿ ಎಂದು ಸಿಎಂ ಸಿದ್ದರಾಮಯ್ಯ ಬಿಜೆಪಿ-ಜೆಡಿಎಸ್ ನಾಯಕರ ವಿರುದ್ಧ ಕಿಡಿ ಕಾರಿದ್ದಾರೆ. ಮುಡಾ ದಾಖಲಾತಿಯಲ್ಲಿ ವೈಟ್ನರ್ ಹಚ್ಚಿ ಅಕ್ರಮ ಮರೆ ಮಾಚಿದ್ದಾರೆ ಎಂಬ ಬಿಜೆಪಿ-ಜೆಡಿಎಸ್ ನಾಯಕರ (ಃಎಕ-ಎಆಖ ಐಜಚಜಿಜಡಿ) ಆರೋಪಗಳಿಗೆ ಸಿಎಂ ವೀಡಿಯೋ ಸಮೇತ ಸಾಕ್ಷಿ ನೀಡಿದ್ದಾರೆ. 33 ಸೆಕೆಂಡುಗಳ ವೀಡಿಯೋವನ್ನು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದು, ಇದಕ್ಕೆ ಸ್ಪಷ್ಟನೆಯನ್ನೂ ನೀಡಿದ್ದಾರೆ.

**ಸಿಎಂ ಎಕ್ಸ್ ಖಾತೆಯಲ್ಲಿ ಏನಿದೆ?:** ಮುಡಾ ಅಕ್ರಮವಾಗಿ ಸ್ವಾದೀನಪಡಿಸಿಕೊಂಡ ನಮ್ಮ ಕುಟುಂಬದ ಜಮೀನಿಗೆ ಬದಲಿ ಭೂಮಿ ನೀಡುವಂತೆ ನನ್ನ ಪತ್ನಿ ಸಲ್ಲಿಸಿದ್ದ ಅರ್ಜಿಯಲ್ಲಿ ನಾಲ್ಕೈದು ಪದಗಳಿಗೆ ವೈಟ್ನರ್ ಹೆಚ್ಚಿದ್ದನ್ನೇ ಮಹಾನ್ ಅಪಾರಾಧವೆಂಬಂತೆ ಗಂಟಲು ಹರಿದುಕೊಂಡ ಬಿಜೆಪಿ ಜೆಡಿಎಸ್ ನಾಯಕರೇ, ವೈಟ್ನರ್ ಹಿಂದಿರುವ ಅಕ್ಷರಗಳೇನು ಎಂಬುದು ಈ ವೀಡಿಯೋದಲ್ಲಿ ಸ್ಪಷ್ಟವಾಗಿ ಕಾಣುತ್ತಿದೆ. ನಿಮ್ಮ ದ್ವೇಷದ ಕನ್ನಡಕ ಕಳಚಿಟ್ಟು ಸರಿಯಾಗಿ ಕಣ್ಣುಬಿಟ್ಟು ನೋಡಿ.

ನನ್ನ ಪತ್ನಿ ಬದಲೀ ಭೂಮಿ ಕೇಳಿದ್ದು ತನ್ನದೇ ಜಮೀನನ್ನು ಮುಡಾ ವಶಕ್ಕೆ ಪಡೆದು ಅಭಿವೃದ್ಧಿಪಡಿಸಲಾದ ದೇವನೂರು 3ನೇ ಹಂತದ ಬಡಾವಣೆಯಲ್ಲಿ ಅಥವಾ ನಂತರ ಪ್ರಾಧಿಕಾರವು ಅಭಿವೃದ್ಧಿ ಪಡಿಸಿದ ಸಮಾನಾಂತರ ಬಡಾವಣೆಯಲ್ಲಿ. ಅಲ್ಲಿ ನಿವೇಶನಗಳು ಲಭ್ಯವಿರದ ಕಾರಣಕ್ಕೆ ''ದೇವನೂರು 3ನೇ ಹಂತದ ಬಡಾವಣೆಯಲ್ಲಿ ಅಥವಾ ನಂತರ'' ಎಂಬ ನಾಲ್ಕೈದು ಪದಗಳಿಗೆ ವೈಟ್ನರ್ ಹಾಕಿ, ಪ್ರಾಧಿಕಾರ ಅಭಿವೃದ್ಧಿ ಪಡಿಸಿದ ಸಮಾನಂತರ ಬಡಾವಣೆಯಲ್ಲಿ ನಿವೇಶನ ನೀಡಬೇಕೆಂಬ ಮನವಿ ಮಾಡಿದ್ದಾರೆ. ಇದರಲ್ಲಿ ಟಿಪ್ಪಣಿಯೂ ಇಲ್ಲ, ಆದೇಶವೂ ಇಲ್ಲ, ಅಪ್ಪಣೆಯೂ ಇಲ್ಲ. ತನಗೆ ಸೇರಿದ ಭೂಮಿಯಲ್ಲೇ ನಿವೇಶನ ಕೊಡಿ ಎಂಬ ಮನವಿ ಅಷ್ಟೆ ಇದೆ. ವೈಟ್ನರ್ ಹಚ್ಚಿ ಕಪ್ಪು ಚುಕ್ಕೆ ಅಳಿಸಿಕೊಳ್ಳಲು ಸಾಧ್ಯವಿಲ್ಲ, ಸಿಎಂ ಪತ್ನಿ ನಿವೇಶನ ಕೇಳಿದ್ದು ವಿಜಯನಗರದಲ್ಲಿ, ಮುಡಾ ವಿಚಾರ ಚರ್ಚೆಗೆ ಬಂದ ನಂತರ ಸಿದ್ದರಾಮಯ್ಯ ಅವರ ಪರವಾಗಿ ಯಾರೋ ಹೋಗಿ ವೈಟ್ನರ್ ಹಚ್ಚಿ ಬಂದಿದ್ದಾರೆಂದು ಬೊಬ್ಬೆ ಹಾಕುತ್ತಿದ್ದ ಸ್ವಯಂ ಘೋಷಿತ ಕಾನೂನು ಪಂಡಿತರು ಈಗೇನು ಹೇಳುತ್ತಾರೆ? ಆತುರದಲ್ಲಿ ಮೂಗು ಕತ್ತರಿಸಿಕೊಂಡು, ರಾತ್ರಿಯೆಲ್ಲ ಕನ್ನಡಿ ಮುಂದೆ ನಿಂತು ಕಣ್ಣೀರು ಹಾಕಿದ್ದರಂತೆ ಹಾಗಾಯಿತು ಕೆಲವು ಅತಿ ಬುದ್ದಿವಂತರ ಕತೆ. ಕಪೋಲ ಕಲ್ಪಿತ ಕಟ್ಟುಕತೆಗಳ ಮೂಲಕ ನನ್ನನ್ನು ಹಾಗೂ ನನ್ನ ಕುಟುಂಬವನ್ನು ವಿನಾಃಕಾರಣ ಅಪರಾಧಿಗಳಂತೆ ಬಿಂಬಿಸಿ ಬಾಯಿಗೆ ಬಂದಂತೆ ಮಾತನಾಡಿರುವ ಬಿಜೆಪಿ ? ಜೆಡಿಎಸ್ ಪಕ್ಷಗಳ ವಿವೇಕ ಶೂನ್ಯ ನಾಯಕರು ಇಂದು ಜನರೆದುರು ಬೆತ್ತಲಾಗಿದ್ದಾರೆ. ಸತ್ಯ ಹಾಗೆಯೇ, ಅರಿವಿಗೆ ಬರುವುದು ಸ್ವಲ್ಪ ತಡವಾಗಬಹುದು, ಆದರೆ ಅಂತಿಮ ಗೆಲುವು ಸತ್ಯದ್ದೇ ಆಗಿರುತ್ತದೆ ಅಂತ ಬರೆದುಕೊಂಡಿದ್ದಾರೆ.

# ಸಿದರಾಮಯ್ಯ ಕಂಡರೆ ಬಿಜೆಪಿಯವರಿಗೆ ಭಯ, ನಮ್ಮನ್ನು ಏನು ಮಾಡಲು ಸಾಧ್ಯವಿಲ್ಲ



**ಚಿಕ್ಕಬಳ್ಳಾಪುರ:** ಮುಡಾ ಹಗರಣದಲ್ಲಿ ಸಿದ್ದರಾಮಯ್ಯರನ್ನು ಬಿಜೆಪಿಗರು ಏನೂ ಮಾಡಲು ಸಾಧ್ಯವಿಲ್ಲ. ಆಪರೇಷನ್ ಕಮಲ ಮಾಡಲು ನಮ್ಮಲ್ಲಿ ಕೆ.ಸುಧಾಕರ್ ಥರ ಎಂಎಲ್‌ಎ ಇಲ್ಲ ಎಂದು ವಿರೋಧ ಪಕ್ಷದ ವಿರುದ್ಧ ಶಾಸಕ ಪ್ರದೀಪ್ ಈಶ್ವರ್ ಮಾತನಾಡಿದ್ದಾರೆ.

ಮುಡಾ ಹಗರಣದಲ್ಲಿ ಸಿಎಂ ಅವರನ್ನು ಬಿಜೆಪಿಯವರು ಏನೂ ಮಾಡೋಕೆ ಆಗಲ್ಲ. ಸಿದ್ದರಾಮಯ್ಯನವರೇ ನಮ್ಮ ಮುಖ್ಯಮಂತ್ರಿಗಳು ಎಂದು ಶಾಸಕ ಪ್ರದೀಪ್ ಈಶ್ವರ್ ಮಾತನಾಡಿದ್ದಾರೆ. ಸಿದ್ದರಾಮಯ್ಯ ಕಂಡರೆ ಬಿಜೆಪಿಯವರಿಗೆ ಭಯ. ಸಿದ್ದರಾಮಯ್ಯರನ್ನು ಸಹಿಸಿಕೊಳ್ಳುವ ಶಕ್ತಿ ಕುಮಾರಸ್ವಾಮಿ ಮತ್ತು ವಿಜಯೇಂದ್ರಗೆ ಇಲ್ಲ. ಸಿದ್ದರಾಮಯ್ಯರನ್ನು ಸಿಎಂ ಆಗಿ ನಾವು ಉಳಿಸಿಕೊಳ್ಳುತ್ತೇವೆ. ಸಿಎಂಗೆ ಬಿಜೆಪಿಯವರು ಏನೂ ಮಾಡಲು ಸಾಧ್ಯವಿಲ್ಲ ಎಂದಿದ್ದಾರೆ.

ಈ ವೇಳೆ, ಆಪರೇಷನ್ ಕಮಲದ ಮೂಲಕ ಸರ್ಕಾರ ಬೀಳಿಸಲು ಪ್ರಯತ್ನ ವಿಚಾರವಾಗಿ ಕೆಲ ಕಾಂಗ್ರೆಸ್ ಶಾಸಕರಿಗೆ 100 ಕೋಟಿ ಆಫರ್ ವಿಚಾರಕ್ಕೆ ಶಾಸಕ ಪ್ರದೀಪ್ ಈಶ್ವರ್ ಪ್ರತಿಕ್ರಿಯಿಸಿ, ಆಪರೇಷನ್ ಕಮಲ ಮಾಡಲು ನಮ್ಮ ಪಕ್ಷದಲ್ಲಿ ಕೆ.ಸುಧಾಕರ್ ಅಂತಹ ಎಂಎಲ್‌ಎ ಇಲ್ಲ. ಅದು ಹೇಗೆ ಅಪರೇಷನ್ ಕಮಲ ಮಾಡ್ತಾರೆ? ನಮ್ಮ ಶಾಸಕರು ಯಾರೂ ಅಂತವರಲ್ಲ. 135 ಜನ ಎಂಎಲ್‌ಎಗಳು ಇದ್ದೀವಿ, ಬಿಜೆಪಿಯವರಿಗೆ ನಮ್ಮನ್ನು ಖರೀದಿಸುವ ಶಕ್ತಿ ಇದ್ಯಾ ಎಂದು ಪ್ರಶ್ನೆ ಮಾಡಿದ್ದಾರೆ.

ವಿಜಯೇಂದ್ರ ಅವರು ಅವರ ಅಪ್ಪನ ಹೆಸರಲ್ಲಿ ರಾಜಕಾರಣಕ್ಕೆ ಬಂದಿದ್ದಾರೆ. ಕುಮಾರಸ್ವಾಮಿ ಅವರು ಪ್ರಧಾನಿ ಮಗ ಸಿಎಂ ಆಗೋದು ಗ್ರೇಟ್ ಅಲ್ಲ. ಕನಕಪುರದ ರೈತನ ಮಗ ಡಿಸಿಎಂ ಆಗೋದು ಗ್ರೇಟ್ ಎಂದು ಡಿ.ಕೆ ಶಿವಕುಮಾರ್ ಪರ ಬ್ಯಾಟಿಂಗ್ ಮಾಡಿದ್ದಾರೆ. ಕುಮಾರಸ್ವಾಮಿ ತಮ್ಮದೇ ಸಮುದಾಯದ ನಾಯಕನನ್ನು ಸಹಿಸುತ್ತಿಲ್ಲ. ಜೊತೆಗೆ ಸಿದ್ದರಾಮಯ್ಯ ಅವರ ಬೆಳವಣಿಗೆಯನ್ನು ಸಹಿಸುತ್ತಿಲ್ಲ. ಕೊನೆಗೆ ನಿಮ್ಮ ಬ್ರದರ್ ಅಣ್ಣನ ಮಕ್ಕಳನ್ನ ಬೆಳವಣಿಗೆಯನ್ನು ಕೂಡ ಸಹಿಸುತ್ತಿಲ್ಲ ಎಂದು ಪ್ರದೀಪ್ ಈಶ್ವರ್ ವಾಗ್ದಾಳಿ ನಡೆಸಿದ್ದಾರೆ.

## ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆ

ದಾಳಿಯಿಂದ ತೀವ್ರ ಕೋಪಗೊಂಡ ನರ್ಸ್‌ಗಳು ಮತ್ತು ಆಸ್ಪತ್ರೆ ಸಿಬ್ಬಂದಿ, ಅಪರಾಧಕ್ಕೆ ಕಾರಣರಾದವರಿಗೆ ಮರಣದಂಡನೆ ವಿಧಿಸಬೇಕೆಂದು ಒತ್ತಾಯಿಸಿ ಆಸ್ಪತ್ರೆಯ ಹೊರಗೆ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಗಳು ಉಲ್ಬಣಗೊಂಡಿದ್ದರಿಂದ ಆಸ್ಪತ್ರೆಯ ಸಿಬ್ಬಂದಿ ಇತರ ಬೆಂಬಲಿಗರೊಂದಿಗೆ ಬೀದಿಗಿಳಿದು ರತ್ನಗಿರಿಯ ಹಲವು ಭಾಗಗಳಲ್ಲಿ ಸಂಚಾರವನ್ನು ನಿರ್ಬಂಧಿಸಿದರು. ಪ್ರತಿಭಟನಾಕಾರರು ಬ್ಯಾನರ್‌ಗಳನ್ನು ಹಿಡಿದು ಘೋಷಣೆಗಳನ್ನು ಕೂಗಿ, ತಪ್ಪಿತಸ್ಥರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಈ ಪರಿಸ್ಥಿತಿಯು ನಗರದಲ್ಲಿ ಗಮನಾರ್ಹ ಅಸ್ತವ್ಯಸ್ತತೆಯನ್ನು ಸೃಷ್ಟಿಸಿದೆ, ಅಧಿಕಾರಿಗಳು ತನಿಖೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ಭರವಸೆ ನೀಡಿ, ಶಾಂತಿಯಿಂದ ವರ್ತಿಸುವಂತೆ ಮನವಿ ಮಾಡಿದರು.

### ಸವಾಲು

ದರ್ಶನ್ ವಿಐಪಿ ಪ್ರಕರಣದಲ್ಲಿ ಸೂಕ್ತ ಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಸೂಚನೆ ಕೊಟ್ಟಿರುವ ವಿಚಾರಕ್ಕೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಲು ಹಿಂದೇಟು ಹಾಕಿದ ಪರಮೇಶ್ವರ್ ಹಿಂಗೆಲ್ಲ ಬಂದ್ರೆ ನಾನು ಮಾತಾಡಲ್ಲ ಎಂದು ನೇರವಾಗಿಯೇ ಸಿಟ್ಟು ಹೊರ ಹಾಕಿದ್ದರು.

### 3 ವಿಶೇಷ ತಂಡ ರಚನೆ

ಫೋಟೋ ತೆಗೆದಿದ್ದು ಹಾಗೂ ವಿಡಿಯೋ ಕರೆ ಮಾಡಿದ್ದು ಯಾರು ಜೈಲಿನಲ್ಲಿ ಮೊಬೈಲ್ ಬಳಕೆ ನಿಷೇಧವಿದ್ದರೂ, ಆರೋಪಿಗಳ ಕೈಗೆ ಮೊಬೈಲ್ ಸಿಕ್ಕಿದ್ದು ಹೇಗೆ. ಒದಗಿಸಿದವರು ಯಾರು, ನೆಟ್ ಕನೆಕ್ಷನ್ ಹೇಗೆ ಬಂತು ಎಂಬೆಲ್ಲ ತನಿಖೆ ನಡಯುತ್ತದೆ. ಹೊರಗಡೆಯಿಂದ ಜೈಲಿನೊಳಗೆ ವಿಡಿಯೋ ಕರೆ ಮಾಡಿರುವ ಬಗ್ಗೆಯೂ ತನಿಖೆ ನಡೆಯಲಿದೆ.

ಜೈಲು ಅಧಿಕಾರಿಗಳ ಕರ್ತವ್ಯ ಲೋಪದ ವಿರುದ್ಧ ದಾಖಲಾಗಿರುವ ಮೂರನೇ ಪ್ರಕರಣವನ್ನು ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣೆಯ ಎಸಿಪಿ ಮಂಜುನಾಥ್ ನೇತೃತ್ವದ ತಂಡ ತನಿಖೆ ನಡೆಸುತ್ತದೆ.

ರೇಣುಕಾಸ್ವಾಮಿ ಮರ್ಡರ್ ಕೇಸ್ ನಲ್ಲಿ ಜೈಲು ಪಾಲಾದ ದರ್ಶನ್‌ಗೆ ಜಾಮೀನು ಕೊಡಿಸಲು ಅವರ ಕುಟುಂಬದವರು ಪ್ರಯತ್ನಿಸುತ್ತಿದ್ದಾರೆ. ಆದರೆ ಈಗ ಜೈಲಿನ ಒಳಗೆ ದರ್ಶನ್ ಅಕ್ರಮ ಎಸಗಿರುವುದು ಬೆಳಕಿಗೆ ಬಂದಿದೆ. ಮರ್ಡರ್ ಕೇಸ್ ಜೊತೆ ಹೊಸ ಹೊಸ ಕೇಸ್‌ಗಳು ದಾಖಲಾಗಿವೆ. ಈ ಹಿನ್ನೆಲೆಯಲ್ಲಿ ದರ್ಶನ್ ಗೆ ಜಾಮೀನು ಸಿಗುವುದು ಇನ್ನಷ್ಟು ಕಷ್ಟ ಆಗಲಿದೆ. ಕೊಲೆ ಕೇಸ್ ತನಿಖೆ ಹಂತದಲ್ಲಿ ದರ್ಶನ್ ಎ2 ಆಗಿದ್ದಾರೆ. ಆದರೆ ಚಾರ್ಜ್ ಶೀಟ್ ಸಲ್ಲಿಸುವಾಗ ಎ1 ಮಾಡುವ ಸಾಧ್ಯತೆ ಕೂಡ ದಟ್ಟವಾಗಿದೆ.

### ಸಸ್ಪೆಂಡ್

ಚಿಕ್ಕಮಗಳೂರು ಜಿಲ್ಲಾ CCF ಉಪೇಂದ್ರ ಪ್ರತಾಪ್ ಸಿಂಗ್ ಆದೇಶ ಹೊರಡಿಸಿದ್ದಾರೆ. ಜೊತೆಗೆ ನಕಲಿ ಟಿಕೆಟ್ ಜಾಲದ ಬಗ್ಗೆ ತನಿಖೆ ನಡೆಸಲು ಆದೇಶಿಸಿದ್ದಾರೆ.

**ಲೋಕಾಯುಕ್ತ ಬಲೆಗೆ:** ತುಮಕೂರು ಜಿಲ್ಲಾ ಪಂಚಾಯಿತಿ ಎಇಇ, ಇಬ್ಬರು ಎಇಗಳು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. 1.5 ಲಕ್ಷ ಲಂಚ ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳೂ ದಾಳಿ ಮಾಡಿದ್ದಾರೆ. ಇನ್ನು ಚಿಕ್ಕನಾಯಕನಹಳ್ಳಿ ಕಚೇರಿಯಲ್ಲಿ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗದ ಎಇಇ ಉಮಾಮಹೇಶ್, ಶಶಿಕುಮಾರ್ ಹಾಗೂ ಕಿರಣ್

ಮೊದಲನೇ ಪುಟದಿಂದ...

ಕುಮಾರ್ ಬಲೆಗೆ ಬಿದ್ದಿದ್ದಾರೆ. ಜಲಜೀವನ್ ಮಿಷನ್ ಕಾಮಗಾರಿ ಬಿಲ್ ಮಂಜೂರಾತಿಗಾಗಿ ಗುತ್ತಿಗೆದಾರ ಚಿಕ್ಕೇಗೌಡ ಅನ್ನೋರಿದಂದ 1.5 ಲಕ್ಷ ಲಂಚ ಸ್ವೀಕರಿಸುತ್ತಿದ್ರು. ಕಚೇರಿಯಲ್ಲಿ ಲಂಚ ಪಡೆವಾಗ ರೆಡ್ ಹ್ಯಾಂಡಾಗಿ ಸಿಕ್ಕಿಬಿದ್ದಿದ್ದಾರೆ. ಲೋಕಾಯುಕ್ತ ಡಿವೈಎಸ್‌ಪಿ ಉಮಾಶಂಕರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಗಿದೆ.

### ಸೀನಿಯರ್ಸ್

ಪಾಲಕರಿಗೆ, ಶಿಕ್ಷಕರಿಗೆ ಹೇಳಿದ್ರೆ ನಿಮ್ಮನ್ನು ಸುಮ್ಮನೆ ಬಿಡೋದಿಲ್ಲಾ ಅಂತ ಬೆದರಿಕೆ ಕೂಡ ಹಾಕಿದ್ದಾರೆ. ಹಲ್ಲೆಯಿಂದ ನೊಂದ ವಿದ್ಯಾರ್ಥಿಗಳು ಶಾಲಾ ಸಿಬ್ಬಂದಿಗೆ ಈ ವಿಚಾರ ಹೇಳಿದ್ರೂ ಯಾವುದೇ ಪ್ರಯೋಜನವಾಗಿಲ್ಲ. ಅಷ್ಟೇ ಅಲ್ಲ ಪ್ರಾಂಶುಪಾಲರ ಗಮನಕ್ಕೆ ತಂದರೂ ಯಾವುದೇ ಕ್ರಮಕೈಗೊಂಡಿಲ್ಲ.

ಪಿಯು ವಿದ್ಯಾರ್ಥಿಗಳ ಪುಂಡಾಟಕ್ಕೆ ಕಡಿವಾಣ ಹಾಕಿಲ್ಲ. ಹೀಗಾಗಿ ಪ್ರಾಂಶುಪಾಲರು, ಸಿಬ್ಬಂದಿಯನ್ನು ಬದಲಾಯಿಸುವಂತೆ ಹಾಗೂ ಹಲ್ಲೆ ನಡೆಸಿರುವ ವಿದ್ಯಾರ್ಥಿಗಳನ್ನು ಶಾಲೆಯಿಂದ ಹೊರಹಾಕುವಂತೆ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಲ್ಲದಿದ್ದರೆ ಶಾಲೆ ಮುಂದೆ ಧರಣಿ ನಡೆಸೋದಾಗಿ ಎಚ್ಚರಿಕೆ ನೀಡಿದ್ದಾರೆ. ಘಟನೆ ಬಗ್ಗೆ ಪೋಷಕರು ಸಂಸದ ರಾಜಶೇಖರ್ ಹಿಟ್ನಾಳ್‌ಗೆ ದೂರು ನೀಡಿದ್ದು ಇದೀಗ ಕೊಪ್ಪಳ ಜಿಲ್ಲಾಧಿಕಾರಿಗೆ ದೂರು ನೀಡಲು ಪೋಷಕರು ಮುಂದಾಗಿದ್ದಾರೆ.

**ನಡುರೋಡಲ್ಲೇ ಪುಂಡರ ಮಾರಾಮಾರಿ:** ಬೆಂಗಳೂರಿನ ಬಾಣಸವಾಡಿಯಲ್ಲಿ ಪುಡಿರೌಡಿಗಳು ಅಟ್ಟಹಾಸ ಮೆರೆದಿದ್ದಾರೆ. ನಡುರಸ್ತೆಯಲ್ಲಿ ಶೋಯಬ್ ಅನ್ನೋನ ಮೇಲೆ ಉಲ್ಟಾ ಲಾಂಗ್ ಬೀಸಿ ಹಲ್ಲೆ ನಡೆಸಲಾಗಿದೆ. ದಾವೂದ್ ಗೆ ಶೋಯಬ್ 1.7 ಲಕ್ಷ ರೂಪಾಯಿ ನೀಡದೆಯೆ ಸತಾಯಿಸುತ್ತಿದ್ನಂತೆ. ಪೀಡಿಸುತ್ತಿದ್ದ ದಾವೂದ್ ಮೇಲೆ ಲಾಂಗ್ ನಿಂದ ಅಟ್ಯಾಕ್ ಮಾಡಲು ಶೋಯಬ್ ಬಂದಿದ್ದ. ಈ ವೇಳೆ ಶೋಯಬ್ ನಿಂದ ಲಾಂಗ್ ಕಸಿದು ದಾವೂದ್ ಗ್ಯಾಂಗ್ ದಾಳಿ ಮಾಡಿದೆ. ಬಾಣಸವಾಡಿ ಪೊಲೀಸರು 6 ಜನರನ್ನ ವಶಕ್ಕೆ ಪಡೆದಿದ್ದಾರೆ.

### ಅರೆಸ್ಟ್

ಬಂಧಿತ ಆರೋಪಿ ಅಭಯ್ ಫೇಸ್ ಬುಕ್ ನಲ್ಲಿ ಒಐಂ ಸುನೀಲ್ ಕುಮಾರ್ ಫೋಟೋ ಹಾಕಿಕೊಂಡಿದ್ದಾನೆ. ಅಷ್ಟೇ ಅಲ್ಲದೆ ಬಿಜೆಪಿ, ಬಜರಂಗದಳದಲ್ಲಿ ಗುರುತಿಸಿಕೊಂಡಿದ್ದಾನೆ.

ಇತ್ತೀಚೆಗೆ ಈ ಪ್ರಕರಣಕ್ಕೆ ಬಿಜೆಪಿ, ಹಿಂದೂ ಸಂಘಟನೆಗಳು ಲವ್ ಜಿಹಾದ್ ಹಣೆಪಟ್ಟಿ ಕಟ್ಟಿದ್ದರು. ಆದರೆ ಇದೀಗ ತಮ್ಮದೇ ಕಾರ್ಯಕರ್ತ ಈ ಪ್ರಕರಣದಲ್ಲಿ ಭಾಗಿಯಾಗಿರೋದು ಮುಖಭಂಗವಾಗಿದೆ. ಆರೋಪಿ ಅಭಯ್, ಪ್ರಮುಖ ಆರೋಪಿ ಅಲ್ತಾಫ್ ಜೊತೆ ಆತ್ಮೀಯವಾಗಿದ್ದ. ಅತ್ಯಾಚಾರ ನಡೆದ ದಿನ ಅಲ್ತಾಫ್‌ಗೆ ಡ್ರಗ್ಸ್ ಒದಗಿಸಿದ್ದ. ಸದ್ಯ ಈಗ ಅಭಯ್ ಬಂಧನ ಸಾಮಾಜಿಕ ಜಾಲತಾಣದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ.

**ಡ್ರಗ್ಸ್ ವಿರೋಧಿ ಅಭಿಯಾನದಲ್ಲಿ ಇದ್ದವನೇ ಡ್ರಗ್ಸ್ ಪೂರೈಸಿದ್ದ:** ಇನ್ನು ಕಳೆದ ತಿಂಗಳು ಬಜರಂಗದಳ ಡ್ರಗ್ಸ್ ವಿರೋಧಿ ಅಭಿಯಾನ ನಡೆಸಿತ್ತು. ಈ ಡ್ರಗ್ಸ್ ವಿರೋಧಿ ಅಭಿಯಾನದಲ್ಲಿ ಅಭಯ್ ಕೂಡ ಭಾಗಿಯಾಗಿದ್ದ. ಡ್ರಗ್ಸ್ ಮಾರಾಟದ ವಿರುದ್ಧ ಸಿಡಿದೆದ್ದಿದ್ದ. ಕಾರ್ಕಳ ಆಥಿಖಕಗೆ ಮನವಿ ನೀಡುವ ಸಮಯದಲ್ಲಿಯೂ ಜೊತೆಗಿದ್ದ. ಜಾಲತಾಣದಲ್ಲಿ ಅಭಯ್ ಫೋಟೋ ವೈರಲ್ ಆಗುತ್ತಿದೆ. ಪ್ರಮುಖ ಆರೋಪಿ ಅಲ್ತಾಫ್ ಗೆ ಡ್ರಗ್ಸ್ ಪೂರೈಸಿದ್ದ ಅಭಯ್ ನನ್ನು ಕಾರ್ಕಳ ಠಾಣೆ ಪೊಲೀಸರು ಬಂಧಿಸಿದ್ದಾರೆ.

### ಇಳಿಕೆ

ಇದರಿಂದ ರಾಜ್ಯದಲ್ಲಿ ಮದ್ಯದ ದರದಲ್ಲಿ ಸ್ವಲ್ಪಮಟ್ಟಿನ ವ್ಯತ್ಯಾಸವಾಗಲಿದ್ದು, ಪರಿಷ್ಕೃತ ದರ ಇಂದಿನಿಂದಲೇ ಜಾರಿಯಾಗಲಿದೆ.

ಈಗಾಗಲೇ ಕರಡು ಅಧಿಸೂಚನೆ ಹೊರಡಿಸಿ ಒಂದೂವರೆ ತಿಂಗಳಾದರೂ ಅಂತಿಮಗೊಳಿಸದ ಕಾರಣ ಮಾರುಕಟ್ಟೆಯಲ್ಲಿ ಪ್ರೀಮಿಯಂ ಬ್ರಾಂಡ್‌ಗಳ ಮದ್ಯಕ್ಕೆ ಭಾರಿ ಕೊರತೆ ಉಂಟಾಗಿತ್ತು. ಇದೀಗ ಅಂತಿಮ ಅಧಿಸೂಚನೆಯಂತೆ ಸ್ಲ್ಯಾಬ್‌ಗಳ ಸಂಖ್ಯೆ 18 ರಿಂದ 16ಕ್ಕೆ ಇಳಿಸಲಾಗಿದೆ. ಆದರೆ ಮೊದಲ ಮೂರು ಸ್ಲ್ಯಾಬ್‌ಗಳಲ್ಲಿ ದರದ ವ್ಯತ್ಯಾಸ ಆಗುವುದಿಲ್ಲ. ನಾಲ್ಕನೇ ಸ್ಲ್ಯಾಬ್‌ನಲ್ಲಿ ಮದ್ಯದ ದರ ಸ್ವಲ್ಪ ಏರಿಕೆಯಾಗಲಿದೆ. ಉಳಿದಂತೆ ಐದನೇ ಸ್ಲಾಬ್ ಬಳಿಕ 16ನೇ ಸ್ಲ್ಯಾಬ್‌ವರೆಗೆ ದರ ಕಡಿಮೆಯಾಗಲಿದೆ. ಆ ಸ್ಲ್ಯಾಬ್ ಗಳಲ್ಲಿನ ವಿಸ್ಕಿ, ರಮ್, ಬ್ರಾಂಡಿಗಳ ಬೆಲೆ ಸಹಜವಾಗಿಯೇ ಕಡಿಮೆಯಾಗಲಿದೆ.

ರಾಜ್ಯದಲ್ಲಿ ಈವರೆಗೆ 18 ಸ್ಲ್ಯಾಬ್ ಗಳಲ್ಲಿ ಮದ್ಯದ ಮೇಲೆ ಅಬಕಾರಿ ತೆರಿಗೆ ವಿಧಿಸಲಾಗುತ್ತಿತ್ತು. ಈಗ ಸ್ಲ್ಯಾಬ್‌ಗಳ ಸಂಖ್ಯೆಯನ್ನು 16ಕ್ಕೆ ಇಳಿಕೆ ಮಾಡಲಾಗಿದೆ. ಪ್ರತಿ ಬಲ್ಕ್ ಲೀಟರ್ ಮದ್ಯದ ಘೋಷಿತ ಉತ್ಪಾದನಾ ದರ 449 ರೂ. ಮೊದಲ ಸ್ಲ್ಯಾಬ್‌ನಲ್ಲಿದ್ದರೆ 15 ಸಾವಿರ ರೂ.ನಿಂದ ಮೇಲಿನ ಘೋಷಿತ ದರದ ಎಲ್ಲ ಮದ್ಯಗಳನ್ನು 18ನೇ ಸ್ಲ್ಯಾಬ್‌ನಲ್ಲಿಡಲಾಗಿತ್ತು.

ಪರಿಷ್ಕೃತ ಪಟ್ಟಿಯ ಪ್ರಕಾರ, ಪ್ರತಿ ಬಲ್ಕ್ ಲೀಟರ್‌ನ ಘೋಷಿತ ಉತ್ಪಾದನಾ ದರ 450 ರೂ. ಹೊಂದಿರುವ ಮದ್ಯ ಮೊದಲ ಸ್ಲ್ಯಾಬ್‌ನಲ್ಲಿದ್ದರೆ 20 ಸಾವಿರ ರೂ. ಮತ್ತು ಅದಕ್ಕಿಂತ ಹೆಚ್ಚಿನ ಘೋಷಿತ ಉತ್ಪಾದನಾ ದರ ಹೊಂದಿರುವ ಮದ್ಯವನ್ನು 16ನೇ ಸ್ಲ್ಯಾಬ್‌ಗೆ ಸೇರಿಸಲಾಗಿದೆ.

### ಕೊಲೆ

ಕಳೆದ ಕೆಲವು ದಿನಗಳಿಂದ ಗ್ರಾಮದಲ್ಲಿ ನೆಲೆಸಿದ್ದರು. ಶೇಖ್ ಆಕೆಯನ್ನು ಮನೆಗೆ ಕರೆದೊಯ್ದು ಅತ್ಯಾಚಾರ ಮಾಡಿ ನಂತರ ಕೊಲೆ ಮಾಡಿದ್ದಾನೆ.

ಹೆಂಡತಿ, ತಾಯಿ ದೂರವಾಗಿದ್ದು ಆತ ಒಬ್ಬಂಟಿಯಾಗಿದ್ದ, ಆತ ಮಾನಸಿಕ ಅಸ್ವಸ್ಥನಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಶೇಖ್ ನನ್ನು ಪೊಲೀಸರು ಬಂಧಿಸಿದ್ದಾರೆ.

ದರೋಡೆಗೆಂದು ಬಂದಿದ್ದ ವ್ಯಕ್ತಿಯಿಂದ 70 ವರ್ಷದ ಮಹಿಳೆ ಮೇಲೆ ಅತ್ಯಾಚಾರ ದರೋಡೆಗೆಂದು ಮನೆಗೆ ನುಗ್ಗಿದ್ದ ವ್ಯಕ್ತಿ 70 ವರ್ಷದ ಮಹಿಳೆ ಮೇಲೆ ಅತ್ಯಾಚಾರವೆಸಗಿರುವ ಘಟನೆ ಕೇರಳದಲ್ಲಿ ನಡೆದಿದೆ. ಈ ಘಟನೆ ಅಲಪ್ಪುಳ ಜಿಲ್ಲೆಯಲ್ಲಿ ನಡೆದಿದೆ, ದರೋಡೆಗೆಂದು ಮನೆಗೆ ಬಂದಿದ್ದ ಧನೇಶ್ (29) ಎಂಬಾತ ಮಹಿಳೆ ಮೇಲೆ ಅತ್ಯಾಚಾರವೆಸಗಿದ್ದಾನೆ. ಆರೋಪಿ ಶನಿವಾರ ರಾತ್ರಿ ಮಹಿಳೆಯ ಮೇಲೆ ಮೆಣಸಿನ ಪುಡಿ ಎರಚಿದ ನಂತರ ಕಾಯಂಕುಲಂನಲ್ಲಿರುವ ಅವರ ನಿವಾಸದಲ್ಲಿ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಅವರು ಒಬ್ಬಂಟಿಯಾಗಿ ವಾಸಿಸುತ್ತಿದ್ದಾರೆ ಎಂಬುದನ್ನು ಅರಿತ ವ್ಯಕ್ತಿಯು ಆಕೆಯನ್ನು ಗುರಿಯಾಗಿಸಿಕೊಂಡಿದ್ದ. ದುಷ್ಕರ್ಮಿಯು ಮಹಿಳೆಯಿಂದ ಸುಮಾರು ಏಳು ಪವನ್ ಚಿನ್ನವನ್ನು ಕದ್ದಿದ್ದು, ಕದ್ದ ಆಭರಣಗಳನ್ನು ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದಾಗ ಸಿಕ್ಕಿಬಿದ್ದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಆತ ಹೊರಗಿನಿಂದ ಬಾಗಿಲನ್ನು ಲಾಕ್ ಮಾಡಿ ಹೊರಟುಹೋಗಿದ್ದ, ಆಕೆಯ ಮೊಬೈಲ್ ಫೋನ್ ಕೂಡ ಕದ್ದೊಯ್ದಿದ್ದ ಕಾರಣ ಅವರನ್ನು ಸಂಪರ್ಕಿಸಲು ಸಾಧ್ಯವಾಗಲಿಲ್ಲ. ಬೆಳಗ್ಗೆ ಅಕ್ಕಪಕ್ಕದ ಮನೆಯವರು ಅವರನ್ನು ಕಂಡು ಆಸ್ಪತ್ರೆಗೆ ಕರೆದೊಯ್ದಿದ್ದಾರೆ.

# 500 ಕೋಟಿ ಕೊಟ್ಟರೂ ನಮ್ಮ ಶಾಸಕರನ್ನು ಖರೀದಿಸಲು ಸಾಧ್ಯವಿಲ್ಲ



**ಬೆಂಗಳೂರು:** ಮುಡಾ ಕೇಸ್‌ನಲ್ಲಿ ಹೈಕಮಾಂಡ್ ಸಿದ್ದರಾಮಯ್ಯ ಪರ ಇದೆ. ಹೈಕೋರ್ಟ್‌ನಲ್ಲಿ ಸಿದ್ದರಾಮಯ್ಯ ಅವರಿಗೆ ನ್ಯಾಯ ಸಿಕ್ಕೇ ಸಿಗುತ್ತದೆ ಎಂದು ಸಚಿವ ಎಂ.ಬಿ ಪಾಟೀಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ನ್ಯಾಯಾಲಯದಲ್ಲಿ ಮುಡಾ ಕೇಸ್ ವಿಚಾರದಲ್ಲಿ ನಿಶ್ಚಿತವಾಗಿ ಗೆಲುವು ಸಿಗಲಿದೆ. ಮುಡಾ ಕೇಸ್ ನಲ್ಲಿ ಏನು ಇಲ್ಲ. ಇದರಲ್ಲಿ ತಪ್ಪು ಆಗಿರೋದು ಮುಡಾದಿಂದ. ಮುಡಾ ಜಮೀನು ಪಡೆದು ಸೈಟ್ ಮಾಡಿದೆ. ಇದೊಂದು ಫಾಲ್ಸ್ ಕೇಸ್, ಕೋರ್ಟ್‌ನಲ್ಲಿ ವಜಾ ಆಗುತ್ತದೆ. ಆದಾದ ಮೇಲೆ ಬಿಜೆಪಿ ಅವರಿಗೆ ಅಪಮಾನ ಆಗುತ್ತದೆ ಎಂದಿದ್ದಾರೆ.

ಈ ಕೇಸ್‌ನಲ್ಲಿ ಗೆದ್ದು ಸಿದ್ದರಾಮಯ್ಯ ಅವರು ಮತ್ತಷ್ಟು ಬಲಿಷ್ಟರಾಗುತ್ತಾರೆ. ಕುಮಾರಸ್ವಾಮಿ, ನಿರಾಣಿ, ಜೊಲ್ಲೆ, ಎಲ್ಲರಿಗೂ ಅನುಮತಿ ಕೇಳಿದ್ದಾರೆ. ಕುಮಾರಸ್ವಾಮಿ ಮೇಲೂ ರಾಜಕೀಯವಾಗಿ ನಾವು ಅಟ್ಯಾಕ್ ಮಾಡಬೇಕು. ಸ್ವಲ್ಪ ದಿನ ಕಾಯಿರಿ. ಕೊರೊನಾ, ಪಿಎಸ್‌ಐ ಕೇಸ್ ಎಲ್ಲಾ ಹಗರಣ ಹೊರಗೆ ಬರಲಿದೆ. ಕೋರ್ಟ್‌ನಲ್ಲಿ ಸಿದ್ದರಾಮಯ್ಯಗೆ ನ್ಯಾಯ ಸಿಕ್ಕೇ ಸಿಗುತ್ತದೆ. ಅದರಲ್ಲಿ ಅನುಮಾನ ಇಲ್ಲ. ಹೈಕಮಾಂಡ್, ನಮ್ಮ ಶಾಸಕರು, ಸಚಿವರು, ಪಕ್ಷದ ಕಾರ್ಯಕರ್ತರು, ಸಿದ್ದರಾಮಯ್ಯ ಪರ ಇದ್ದಾರೆ. ಇಡೀ ಕಾಂಗ್ರೆಸ್ ಸಿದ್ದರಾಮಯ್ಯ ಪರ ಇದೆ. ಯಾರು ಸಿಎಂ ಸ್ಥಾನಕ್ಕೆ ಟವಲ್ ಹಾಕಿಲ್ಲ. ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದಾರೆ. ಮುಂದೆಯೂ ಸಿಎಂ ಆಗಿ ಇರುತ್ತಾರೆ ಎಂದು ಖಡಕ್ ಆಗಿ ಉತ್ತರಿಸಿದ್ದಾರೆ.

ಬಳಿಕ ಬಿಜೆಪಿಯವರ ಆಪರೇಷನ್ ಕಮಲ ಪ್ರಯತ್ನ ಮಾಡ್ತಿರೋ ವಿಚಾರವಾಗಿ ಮಾತನಾಡಿದ ಅವರು 100 ಕೋಟಿ ರೂ. ಅಲ್ಲ 500 ಕೋಟಿ ರೂ. ಕೊಟ್ಟರೂ ನಮ್ಮ ಶಾಸಕರು ಮಾರಾಟ ಆಗೋದಿಲ್ಲ. ಆಪರೇಷನ್ ಕಮಲ ಸಾಧ್ಯವೇ ಇಲ್ಲ ಅಂತ ಬಿಜೆಪಿ ನಾಯಕರಿಗೆ ಸಚಿವ ಎಂಬಿ ಪಾಟೀಲ್ ಸವಾಲ್ ಹಾಕಿದ್ದಾರೆ.

ನಮ್ಮ ಯಾವ ಶಾಸಕರು ಆಮಿಷಕ್ಕೆ ಬಲಿಯಾಗಲ್ಲ. 136 ಸ್ಥಾನ ಪಡೆದು ಬಾರಿ ಬಹುಮತದಿಂದ ಸರ್ಕಾರ ಮಾಡಿದ್ದೇವೆ. ಸರ್ಕಾರ ಬೀಳಬೇಕಾದ್ರೆ, 2/3 ಶಾಸಕರನ್ನು ಕರೆದುಕೊಂಡು ಹೋಗಬೇಕು. ಅದು ಆಗದ ಮಾತು. ಬಿಜೆಪಿ-ಜೆಡಿಎಸ್‌ನಿಂದಲೂ 10-12 ಜನ ಕಾಂಗ್ರೆಸ್ ಜೊತೆ ಗುರುತಿಸಿಕೊಂಡಿದ್ದಾರೆ. ಈ ಸರ್ಕಾರ ಕೆಡವಲು ಆಗೋದಿಲ್ಲ, ಆಪರೇಷನ್ ಕಮಲ ವರ್ಕೌಟ್ ಆಗೊಲ್ಲ. 100 ಕೋಟಿ ರೂ. ಅಲ್ಲ. 500 ಕೋಟಿ ರೂ. ಕೊಟ್ಟರೂ ನಮ್ಮ ಶಾಸಕರನ್ನು ಕರೆದುಕೊಂಡು ಹೋಗಲು ಆಗೋದಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

### ಶವ ಸಾಗಿಸುತ್ತಿದ್ದ ಅಂಬುಲೆನ್ಸ್ ಲಾರಿಗೆ ಡಿಕ್ಕಿ

# ಮಹಿಳೆ ಸಾವು, ಇಬ್ಬರಿಗೆ ಗಾಯ




**ಚಿತ್ರದುರ್ಗ:** ಶವ ಸಾಗಿಸುತ್ತಿದ್ದ ಅಂಬುಲೆನ್ಸ್‌ವೊಂದು ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ ಮಹಿಳೆ ಸಾವನ್ನಪ್ಪಿದ್ದು, ಇಬ್ಬರು ಗಂಭೀರ ಗಾಯಗೊಂಡ ಘಟನೆ ಚಿತ್ರದುರ್ಗ ತಾಲೂಕಿನ ಬಳೆಕಟ್ಟೆ ಗ್ರಾಮದ ಬಳಿ ನಡೆದಿದೆ.

ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಘಟನೆ ಸಂಭವಿಸಿದೆ. ಬೆಂಗಳೂರಿನ ಜಯದೇವ ಆಸ್ಪತ್ರೆಯಲ್ಲಿ ಹಾವೇರಿಯ ಶಿವಬಸವ (50) ಹೃದಯಾಘಾತದಿಂದ ಮೃತಪಟ್ಟಿದ್ದರು. ಈ ಹಿನ್ನೆಲೆ ಖಾಸಗಿ ಅಂಬುಲೆನ್ಸ್‌ನಲ್ಲಿ ಶಿವಬಸವ ಅವರ ಮೃತದೇಹವನ್ನು ಹಾವೇರಿಗೆ ಸಾಗಿಸಲಾಗುತ್ತಿತ್ತು. ಈ ವೇಳೆ ಬಳೆಕಟ್ಟೆ ಬಳಿ ಅಪಘಾತ ಸಂಭವಿಸಿದೆ.

ಘಟನೆಯಲ್ಲಿ ಅಂಬುಲೆನ್ಸ್‌ನಲ್ಲಿದ್ದ ಶಿವಬಸವ ಸಂಬಂಧಿ ಸರೋಜಮ್ಮ (52) ಸಾವನ್ನಪ್ಪಿದ್ದಾರೆ. ಅಲ್ಲದೇ ಅಂಬುಲೆನ್ಸ್‌ನಲ್ಲಿದ್ದ ಇಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಭರಮಸಾಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

### ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಬಣ್ಣನೆ | ಮಡಿಕೇರಿಯ ಗಾಂಧಿ ಭವನದಲ್ಲಿ ಕೃಷ್ಣ ಜನ್ಮಾಷ್ಟಮಿ ಆಚರಣೆ

# ಮಾನವ ಕುಲದ ಮಾರ್ಗದರ್ಶಕ ಮಾಧವ

**ಮಡಿಕೇರಿ :** ಶ್ರೀ ಕೃಷ್ಣ ಭಗವದ್ಗೀತೆಯ ಮೂಲಕ ಜೀವನದ ಸಂದೇಶಗಳನ್ನು ಸಾರಿ ಮಾನವ ಕುಲಕ್ಕೆ ಮಾರ್ಗದರ್ಶನ ನೀಡಿದ್ದಾನೆ ಆ ಮಾರ್ಗದಲ್ಲಿ ನಡೆದರೆ ಪ್ರತಿಯೊಬ್ಬರ ನೆಮ್ಮದಿಯ ಜೀವನ ನಡೆಸಬಹುದು ಎಂದು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ವರ್ಣಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಗಾಂಧಿ ಭವನದಲ್ಲಿ ಸೋಮವಾರ ನಡೆದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಶ್ರೀಕೃಷ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ಶ್ರೀಕೃಷ್ಣನ ಬಗ್ಗೆ ಪ್ರತಿಯೊಬ್ಬರಲ್ಲಿಯೂ ಗೌರವ ಮತ್ತು ಭಕ್ತಿ ಇದೆ. ಶ್ರೀಕೃಷ್ಣನ ವೇಷದಲ್ಲಿ ಮಕ್ಕಳನ್ನು ಕಾಣುತ್ತೇವೆ. ಜೊತೆಗೆ ಶ್ರೀಕೃಷ್ಣನನ್ನು ಮಹಾಭಾರತದಲ್ಲಿ ಸಾರಥಿಯಾಗಿ ನೋಡುತ್ತೇವೆ ಯಾವುದೇ ಫಲಾಪೇಕ್ಷೆ ಇಲ್ಲದೆ ಕೆಲಸವನ್ನು ಶ್ರದ್ಧೆಯಿಂದ ನಿರ್ವಹಿಸಿ ಬದುಕನ್ನು ಉತ್ತಮ ಪಡಿಸಿಕೊಳ್ಳಬೇಕು ಎಂಬ ಸಂದೇಶವನ್ನು ಶ್ರೀಕೃಷ್ಣ ಸಾರಿದ್ದಾರೆ ಎಂದರು.

ಜೀವನದಲ್ಲಿ ನಿಂತ ನೀರಾಗದೆ ಹರಿವ ನೀರಿನಂತೆ ಬದುಕನ್ನು ಮುನ್ನಡೆಸಬೇಕು. ಉತ್ತಮ ಬದುಕು ರೂಪಿಸಿಕೊಳ್ಳಲು



ಮುಂದಾಗಬೇಕು. ಆ ನಿಟ್ಟಿನಲ್ಲಿ ಮಹಾಭಾರತದಲ್ಲಿ ಶ್ರೀಕೃಷ್ಣನ ಸಂದೇಶಗಳು ಧನಾತ್ಮಕ ಚಿಂತನೆಯನ್ನು ಒಳಗೊಂಡಿದೆ ಎಂದರು. ಶ್ರೀಕೃಷ್ಣ ಒಂದು ರೀತಿ ವಿಶಿಷ್ಟ ಚೇತನರಾಗಿದ್ದಾರೆ. ಅರಾಜಕತೆ, ಅಧರ್ಮ ವಿರುದ್ಧ ಸಮರ ಸಾರಿದ ಕೃಷ್ಣ ಧರ್ಮ ಸಂಸ್ಥಾಪನಾಚಾರ್ಯ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಹೇಳಿದರು. ಕವಿಗಳು, ಸಾಹಿತಿಗಳು ಶ್ರೀಕೃಷ್ಣನನ್ನು ವಿವಿಧ ರೀತಿಯಲ್ಲಿ ವರ್ಣಿಸಿದ್ದಾರೆ. ದಾಸ ಪರಂಪರೆ ಸೃಷ್ಟಿಯಾಗಿದ್ದೇ ಶ್ರೀಕೃಷ್ಣರಿಂದ ಎಂದರೆ ತಪ್ಪಾಗಲಾರದು ಎಂದರು. ಪ್ರತಿಯೊಬ್ಬರೂ ಭಗವದ್ಗೀತೆಯನ್ನು ಅಧ್ಯಯನ ಮಾಡಿದ್ದಲ್ಲಿ ಶ್ರೀಕೃಷ್ಣನ ಮಹತ್ವ ಬಗ್ಗೆ ಅರಿವಾಗುತ್ತದೆ. ಶ್ರೀಕೃಷ್ಣನ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು. ಪತ್ರಕರ್ತ ಚಿ.ನಾ. ಸೋಮೇಶ್ ಅವರು ಮಾತನಾಡಿ ಶ್ರೀಕೃಷ್ಣ ಜಾತ್ಯತೀತ, ಮೇರು ವ್ಯಕ್ತಿತ್ವ ಹೊಂದಿದ್ದರು. ಶ್ರೀಕೃಷ್ಣನ ಇತಿಹಾಸದ ಬಾಲ್ಯವನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳುವಂತಾಗಬೇಕು ಎಂದರು.

ದೇಶ ವಿದೇಶಗಳಲ್ಲಿ ಶ್ರೀಕೃಷ್ಣನ ಅಧ್ಯಯನ ಮಾಡಿದ್ದಾರೆ. ಶ್ರೀಕೃಷ್ಣ ಜಗತ್ಪ್ರಸಿದ್ಧ ಮೇರು ವ್ಯಕ್ತಿತ್ವವನ್ನು ಹೊಂದಿದ್ದಾರೆ. ಅಸೂಯೆ ನಾಶ ಆಗಬೇಕು ಎಂದು ಶ್ರೀಕೃಷ್ಣರು ಬದುಕಿನುದ್ದಕ್ಕೂ ಸಾರಿದ್ದಾರೆ. ಭಗವಾನ್ ಶ್ರೀಕೃಷ್ಣನನ್ನು ವ್ಯಕ್ತಿಯಾಗಿ ನೋಡಬೇಕಿದೆ. ಮಹಾಭಾರತದಲ್ಲಿ ಚತುರನಾಗಿ, ಮಹಾಜ್ಞಾನಿಯಾಗಿ ನೋಡುತ್ತೇವೆ ಎಂದರು. ಗೋಕುಲದಲ್ಲಿ ಆಟವಾಡಿಕೊಂಡು ಬೆಳೆದ ಶ್ರೀಕೃಷ್ಣ ಅವರ ಸಂದೇಶಗಳನ್ನು ತಿಳಿದುಕೊಳ್ಳಬೇಕು. ಶ್ರೀಕೃಷ್ಣನಿಂದ ತಾಳ್ಮೆ ಕಲಿಯುವಂತಾಗಬೇಕು ಎಂದರು.

ಇಸ್ಕಾನ್ ಸಂಸ್ಥೆಯ ಸುದೀರ್‌ಪ್ರಭು ಮಾತನಾಡಿ 525 ವರ್ಷಗಳ ಹಿಂದೆ ಜನ್ಮ ತಾಳಿದ ಶ್ರೀಕೃಷ್ಣನ ಆದರ್ಶ ಗುಣಗಳು ಸಾರ್ವಕಾಲೀಕವಾಗಿವೆ ಎಂದರು. ಕೃಷ್ಣನ ವ್ಯಕ್ತಿತ್ವದಲ್ಲಿ ಭಗವಾನ್ ಕೃಷ್ಣನನ್ನು ನೋಡಬಹುದಾಗಿದೆ. ಸದಾ ಬಡವರಿಗಾಗಿ ಚಿಂತನೆ ಮಾಡುತ್ತಿದ್ದ ಶ್ರೀಕೃಷ್ಣನ ಜೀವನ ಚರಿತ್ರೆ ತಿಳಿದುಕೊಳ್ಳುವಂತಾಗಬೇಕು ಎಂದರು.

ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಕೋರನ ಸರಸ್ವತಿ ಅವರು ಮಾತನಾಡಿ ಶ್ರೀಕೃಷ್ಣನ ವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿವೆ. ಶ್ರೀಕೃಷ್ಣರು ಭಕ್ತಿಯ ಶಕ್ತಿಯಾಗಿ ಬರುತ್ತಾರೆ ಎಂದು ತಿಳಿಸಿದರು.

ಕಂಚಿ ಕಾಮಾಕ್ಷಿ ದೇವಾಲಯದ ಗೌರವ ಅಧ್ಯಕ್ಷರು ಹಾಗೂ ಗೌಳಿ ಸಮುದಾಯ ಮುಖಂಡರಾದ ಜಿ.ವಿ.ರವಿಕುಮಾರ್ ಅವರು ಮಾತನಾಡಿ ಜೀವನದಲ್ಲಿ ಮಾನವೀಯ ಮೌಲ್ಯ ಮತ್ತು ಆಧ್ಯಾತ್ಮಿಕತೆಯನ್ನು ಅಳವಡಿಸಿಕೊಳ್ಳಬೇಕು. ಸಮಾಜದಲ್ಲಿ ದ್ವೇಷ, ಅಸೂಯೆ, ಅಸಹನೆ, ಅಸಹಿಷ್ಣುತೆ ಇರಬಾರದು. ಒಳ್ಳೆಯದನ್ನು ರೂಡಿಸಿಕೊಳ್ಳಬೇಕು ಎಂದರು.

ಇಸ್ಕಾನ್ ಸಂಸ್ಥೆಯ ಚೈತನ್ಯದಾಸ್ ಪ್ರಭು, ಬಸವರಾಜ ಪ್ರಭು, ಕಂಚಿ ಕಾಮಾಕ್ಷಮ್ಮ ದೇವಾಲಯ ಸಮಿತಿಯ ಅಧ್ಯಕ್ಷರಾದ ಪವನ್ ಜಿ.ಬಿ., ಗೌರವಾಧ್ಯಕ್ಷರಾದ ಜಿ.ಜಿ.ಬಾಲಕೃಷ್ಣ ಇತರರು ಇದ್ದರು.

# ಜಗತ್ತನ್ನು ನಿಯಂತ್ರಿಸುವ ಶ್ರೀಕೃಷ್ಣ

**ಮೈಸೂರು:** ಶತಮಾನಗಳ ಹಿಂದೆಯೇ ಕನಕದಾಸರು ಹೇಳಿರುವಂತೆ ತಂದೆ ತಾಯಿಯನ್ನು ಬಿಟ್ಟೇನು, ರಾಜ್ಯವನ್ನು ಬಿಟ್ಟೇನು ಏನನ್ನಾದರೂ ಬಿಟ್ಟೇನು ಆದರೆ ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ ಎಂದು ಶ್ರೀ ಕೃಷ್ಣನ ಕುರಿತ ಕನಕದಾಸರು ಹಾಡಿದ್ದ ಗೀತೆಯನ್ನು ಉಲ್ಲೇಖಿಸಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗೀಯ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ ಸ್ಮರಿಸಿದರು.

ಸೋಮವಾರ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಲಾ ಮಂದಿರದ ಕಿರು ರಂಗ ಮಂದಿರದಲ್ಲಿ ನಡೆದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶ್ರೀ ಕೃಷ್ಣ ಎಲ್ಲಾ ಬಗೆಯ ಗುಣಗಳನ್ನು, ಭಾಂದವ್ಯಗಳನ್ನು ಹೊಂದಿದ್ದ ಮಹಾನ್ ಮಹಿಮ. ಅಸಂಖ್ಯಾತ ಬಾಲ ಲೀಲೆಗಳ ಪ್ರತಿನಿಧಿ. ಅಮರ ಪ್ರೇಮದ ಸಂಕೇತವಾಗಿದ್ದರು. ಅಲ್ಲದೇ ಅಪ್ರತಿಮ ತಂತ್ರಜ್ಞಾನಿ, ಇಡೀ ಜಗತ್ತನ್ನು ತನ್ನ ಶಕ್ತಿ-ಯುಕ್ತಿಗಳಿಂದ ಇಟ್ಟುಕೊಳ್ಳುವಂತಹ ಮಹಾನ್ ವ್ಯಕ್ತಿ ಶ್ರೀಕೃಷ್ಣ ಎಂದರು.

ಕೃಷ್ಣ ಅಸಾಧ್ಯ ಬುದ್ಧಿವಂತ. ಜತೆಗೆ ತನ್ನ ಸ್ನೇಹಿತರಿಗೆ ಉತ್ತಮ ಗೆಳೆಯನಾಗಿದ್ದ. ಯುದ್ಧ ತಂತ್ರ ಕಲೆ, ಯುದ್ಧ ಮುನ್ನಡೆಸುವ ಕಲೆ, ಯುದ್ಧ ನಡೆಯದ ರೀತಿಯಲ್ಲಿ ತಡೆಯುವ ಬುದ್ಧಿಜೀವಿಯಾಗಿದ್ದ. ಇಡೀ ಲೋಕದ ಒಳಿತಿಗೆ ಪ್ರತಿಯೊಬ್ಬ ಮನುಷ್ಯನೂ ಹೇಗೆ ಇರಬೇಕೆಂಬ ವಿವೇಕವನ್ನು ತಿಳಿಸಿದ ದೈವ ವ್ಯಕ್ತಿತ್ವವೇ ಶ್ರೀ ಕೃಷ್ಣ ಎಂದರು.

ಹಿರಿಯ ಸಾಹಿತಿ ಡಾ.ಎನ್.ಕೆ.ರಾಮಶೇಷನ್ ಮಾತನಾಡಿ, ಭಗವಾನ್ ವಿಷ್ಣುವಿನ ಒಂಬತ್ತನೇ ಅವತಾರವಾದ ಭಗವಾನ್ ಕೃಷ್ಣನ ಜನ್ಮವನ್ನು ಈ ಜಯಂತಿ ಸೂಚಿಸುತ್ತದೆ. ಆವಣಿ ಅಥವಾ ಶ್ರಾವಣ ಮಾಸದಲ್ಲಿ ಕ್ಷೀಣಿಸುತ್ತಿರುವ ಚಂದ್ರನ ಅವಧಿಯ ಕೃಷ್ಣ ಪಕ್ಷದ 8ನೇ ದಿನದಂದು ದಿನದ ಆಳುವ ನಕ್ಷತ್ರ ರೋಹಿಣಿಯಾಗಿದ್ದಾಗ



ಭಗವಾನ್ ಕೃಷ್ಣ ಜನಿಸಿದ ಎಂದರು. ಸುಮಾರು 5000 ವರ್ಷಗಳ ಹಿಂದೆ ದ್ವಾಪರ ಯುಗದಲ್ಲಿ ಅಧರ್ಮ ನಾಶಪಡಿಸಲು ಮತ್ತು ಜಗತ್ತಿನಲ್ಲಿ ಸದಾಚಾರ ನೀಡಲು ಜನಿಸಿದಂತಹ ವ್ಯಕ್ತಿಯೇ ಶ್ರೀ ಕೃಷ್ಣ. ಅಲ್ಲಿಯವರೆಗೆ ನರಳುತ್ತಿದ್ದ ಮನುಕುಲಕ್ಕೆ ಶ್ರೀಕೃಷ್ಣನ ಜನನ ಆಶಾಕಿರಣ ಮೂಡಿಸಿತು ಎಂದು ತಿಳಿಸಿದರು.

ಶ್ರೀ ಕೃಷ್ಣ ಎಲ್ಲವನ್ನು ಬಲ್ಲವನು. 18 ಅಕ್ಷೋಹಿಣಿ ಸೈನ್ಯವನ್ನು ತಿಳಿದವನು. ಮಥುರಾ ಮತ್ತು ಗೋಕುಲದಲ್ಲಿ ಇದ್ದ ಕೃಷ್ಣ. ರಾಜ್ಯ ಆಳದೆಯಿದ್ದರೂ ರಾಜ್ಯವನ್ನು ಆಳಿಸಿ, ರಾಜ್ಯದ ರಾಜ್ಯಭಾರ ಮಾಡುತ್ತಿದ್ದನು. ಸಂಸ್ಕೃತವನ್ನು ಬಲ್ಲವನಾದ ಶ್ರೀ ಕೃಷ್ಣ ಸಂಸ್ಕೃತಿಯ ಒಡೆಯ, ನಾಯಕ, ರಕ್ಷಕ ಎಂದು ಹೇಳಬಹುದು ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಅಶೋಕ್ ಕುಮಾರ್.ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಕನ್ನಡಪರ ಹೋರಾಗಾರ ಮೂಗೂರು ನಂಜುಂಡಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ನಿವೃತ್ತರಿಗೆ ಅಭಿನಂದನೆ



**ಮೈಸೂರು:** ಸುತ್ತೂರು ಮಠದಲ್ಲಿ ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 109ನೇ ಜಯಂತಿ ಮಹೋತ್ಸವದ ಸಂದರ್ಭದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ವಿವಿಧ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿ 2023-24ನೇ ಸಾಲಿನಲ್ಲಿ ನಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅಭಿನಂದಿಸಿ ಆಶೀರ್ವದಿಸಿದರು.

ಸೇವೆಯ ದಿನಗಳ ಅನುಭವಗಳನ್ನು ಹಂಚಿಕೊಂಡ ಜೆಎಸ್‌ಎಸ್ ಕಾನೂನು ಕಾಲೇಜಿನ ಪ್ರಾಚಾರ್ಯರಾಗಿದ್ದ ಡಾ.ಎಸ್.ನಟರಾಜು ಮತ್ತು ಪಾಲಿಟೆಕ್ನಿಕ್‌ನಲ್ಲಿ ಉಪನ್ಯಾಸಕರಾಗಿದ್ದ ಕೆ.ಪಿ.ವಿಜಯಕುಮಾರ್, ಬಡತನದಲ್ಲಿ ಬೆಳೆದು ಬಂದ ನಮಗೆ ರಾಜೇಂದ್ರ ಶ್ರೀಗಳು ಅನ್ನ, ಆಶ್ರಯ, ಅರಿವು ನೀಡಿದರು. ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಾದ ನಮ್ಮಂಥವರಿಗೂ ನಮಗೆ ಇಂಜಿನಿಯರಿಂಗ್ ಶಿಕ್ಷಣಕ್ಕೆ ಅವಕಾಶ ನೀಡಿದರು. ದೇಶಿಕೇಂದ್ರ ಶ್ರೀಗಳು ಜೀವನ ಸಾಗಿಸಲು ಉದ್ಯೋಗ ನೀಡಿದರು. ಸೇವೆ ಸಲ್ಲಿಸಿ ನಿವೃತ್ತರಾದರವನ್ನು ಅಭಿನಂದಿಸುವುದು ಒಂದು ಮಾದರಿ ಕಾರ್ಯವಾಗಿದೆ. ಪೂಜ್ಯರ ಮಾತೃವಾತ್ಸಲ್ಯ ನಮಗೆಲ್ಲ ಭಾವತುಂಬಿ ಬರುವಂತೆ ಮಾಡಿದೆ. ಕೆಲಸ ಮಾಡಲು ಅತ್ಯುತ್ತಮ ಅವಕಾಶಗಳನ್ನು ಪೂಜ್ಯರು ನೀಡಿದರು. ಇದು ನಮಗೆ ಉತ್ತಮ ರೀತಿಯಲ್ಲಿ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಸಹಕಾರಿಯಾಯಿತು. ಜೆಎಸ್‌ಎಸ್ ಸಂಸ್ಥೆಯಲ್ಲಿ ಒಂದು ಕುಟುಂಬದ ಸದಸ್ಯರ ರೀತಿಯಲ್ಲಿ ಎಲ್ಲ ನೌಕರರನ್ನು ಪರಿಗಣಿಸಲಾಗುತ್ತದೆ. ಶ್ರೀಮಠದ ಋಣ ತೀರಿಸುವುದು ಅಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಪೀಠದ ಸಂಸ್ಥೆಗಳಲ್ಲಿ ಸೇವೆಸಲ್ಲಿಸಿ 2023 ಸೆಪ್ಟೆಂಬರ್‌ನಿಂದ 2024 ಆಗಸ್ಟ್ 25ರವರೆಗೆ ನಿವೃತ್ತರಾದವರು, ಹಾಗೂ ಸೇವೆಯಿಂದ ಬಿಡುಗಡೆಗೊಂಡವರಿಗೆ ಅಭಿನಂದನೆ ಮತ್ತು ಸೇವೆ ಸಲ್ಲಿಸುತ್ತಿರುವಾಗಲೇ ಅಗಲಿದವರ ಕುಟುಂಬದವರಿಗೆ ಸಾಂತ್ವನ ಹೇಳಲಾಯಿತು. ಒಟ್ಟು 177 ನೌಕರರು ಹಾಗೂ ಅವರ ಕುಟುಂಬವರ್ಗದವರನ್ನು ಆಶೀರ್ವದಿಸಿ ಅಭಿನಂದಿಸಿದರು. ನಿವೃತ್ತರ ಪರಿಚಯದ ತೇರನೆಳೆದವರು ಪುಸ್ತಕವನ್ನು ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ ಬಿಡುಗಡೆಗೊಳಿಸಿದರು. ಪ್ರೊ. ಆರ್.ಮೂಗೇಶಪ್ಪ ಸ್ವಾಗತಿಸಿದರು, ಡಾ.ಬಿ.ಪ್ರಭುಸ್ವಾಮಿ, ಡಾ.ಎಚ್.ಎಸ್.ಅಂಬಿಕಾ, ಆರ್.ಜೆ.ಪ್ರತಿಭಾ, ಡಾ.ಎನ್. ಮಹೇಶ್ವರಿ, ಆರ್.ಎಸ್.ಕುಮಾರ್, ಡಿ.ಎಸ್.ಅಂಬಿಕಾ, ಕೆ.ಜಿ.ವಿನುತಾ, ಡಾ.ಪ್ರಿಯದರ್ಶಿನಿ, ಹೆಚ್.ಎಸ್.ಮಾನಸ ನಿವೃತ್ತರುಗಳ ಪರಿಚಯ ನಡೆಸಿಕೊಟ್ಟರು. ಕಾನೂನು ಕಾಲೇಜು ವಿದ್ಯಾರ್ಥಿಗಳಾದ ತೇಜಸ್ ಹೆಚ್. ಬಡಾಲ ಮತ್ತು ಕೃತಿ ಕೈಲಾರ್ ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕ ಡಾ.ಪಿ.ಶಿವಾನಂದ ಭಾರತಿ ವಂದಿಸಿದರು. ಡಾ.ಎಸ್.ನಟರಾಜು ನಿರೂಪಿಸಿದರು.

# ಇಂದು ಹಲವೆಡೆ ವಿದ್ಯುತ್ ವ್ಯತ್ಯಯ

**ಮಂಡ್ಯ:** ವಿ.ಸಿ.ಫಾರಂ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಈ1 ಮಾಚಳ್ಳಿ ಓಎಜ ಫೀಡರ್‌ನಲ್ಲಿ ತುರ್ತು ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಆಗಸ್ಟ್ 27 ರಂದು ಹಮ್ಮಿಕೊಳ್ಳಲಾಗಿದ್ದು, ಸದರಿ ದಿನದಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿ.ಸಿ.ಫಾರಂ, ಮಾಚಗೌಡನಹಳ್ಳಿ, ಟಿ.ಮಲ್ಲಿಗೆರೆ, ಮಾಚಹಳ್ಳೀ, ಜಯಪುರ, ಹುಳ್ಳೇನಹಳ್ಳಿ, ಹಾಡ್ಯ, ಹುಲಿಕೆರೆ, ಹುಲಿಕೆರೆಕೊಪ್ಪಲು ಹಾಗೂ ಈ ಸುತ್ತ ಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀಕೃಷ್ಣ ಜನ್ಮಾಷ್ಟಮಿ

**ಕೋಲಾರ:** ಕೋಲಾರದ ಸಿ ಬೈರೇಗೌಡ ನಗರದಲ್ಲಿರುವ ಶ್ರೀ ರುಕ್ಮಿಣಿ ಸತ್ಯಭಾಮ ಸಮೇತ ಶ್ರೀ ಕೃಷ್ಣ ದೇವಸ್ಥಾನದ ಬಳಿ ಶ್ರೀ ಕೃಷ್ಣ ಭವನದ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಎಂ.ಎಲ್.ಸಿ ಇಂಚರ ಗೋವಿಂದರಾಜು ಮಾತನಾಡಿ, ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಯಾದವ ಸಮುದಾಯದವರು ಮಾತ್ರ ಆಚರಣೆಮಾಡುತ್ತಿದ್ದರು. ಆದರೆ ಇಂದು ಬೈರೇಗೌಡ ನಗರದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಇಷ್ಟೊಂದು ಅದ್ದೂರಿಯಾಗಿ ಶ್ರದ್ಧಾಭಕ್ತಿಗಳಿಂದ ಆಚರಿಸುತ್ತಿರುವುದು ಶ್ಲಾಘನೀಯ ಎಂದರು ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಮಾತನಾಡಿ, ಬಹುಪಯೋಗಿ ಕೃಷ್ಣಭವನವನ್ನು ನಿರ್ಮಾಣ ಮಾಡಿರುವುದು ಒಳ್ಳೆಯ ಬೆಳವಣಿಗೆ ಇಲ್ಲಿ ಪ್ರತಿಯೊಬ್ಬರು ದೇವರಧ್ಯಾನ, ಯೋಗ, ವ್ಯಾಯಾಮ ಮಾಡುವ ಮೂಲಕ ಮನಸ್ಸಿಗೆ ನೆಮ್ಮದಿಯನ್ನು ಪಡೆದು ಮುಕ್ತಿಯ ಕಡೆಗೆ ನಡೆಯಲಿ ಎಂದು ಆಶಿಸಿದರು. ಸಮಾಜ ಸೇವಕ ಸಿ.ಎಂ.ಆರ್.ಶ್ರೀನಾಥ್ ಮಾತನಾಡಿ, ಬೈರೇಗೌಡ ನಗರ ನಗರಕ್ಕೆ ಮಾದರಿಯಾಗಿದೆ. ಇದರ ಜೊತೆಗೆ ಬೈರೇಗೌಡ ಬಡಾವಣೆಯಲ್ಲಿ ಉದ್ಯಮಿಗಳೇ ಹೆಚ್ಚಾಗಿರುವ ಹಿನ್ನಲೆಯಲ್ಲಿ ಕೋಲಾರದ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಹೇಳಿದರು. ಬೈರೇಗೌಡ ನಗರದ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಕೆ.ಕೃಷ್ಣಾರೆಡ್ಡಿ, ಉಪಾಧ್ಯಕ್ಷ ದೇವರಾಜ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ವಿ.ಮುನಿರಾಜು, ಸಿಬಿ ಜಯರಾಮ್, ಮೂರಂಡಳ್ಳಿ ಪ್ರಕಾಶ್, ಸಿ.ಫ್.ಎಲ್ ಮಂಜುನಾಥ್, ಅಪ್ಪೋಜುಗೌಡ, ಶ್ರೀರಾಮಪ್ಪ, ಶ್ರೀನಿವಾಸ್ ಟಿ.ಎಂ.ಎಸ್, ಡ್ರಿಪ್ ದೇವರಾಜ್, ಡಾ.ಕೃಷಯ್ಯ ಶೆಟ್ಟಿ, ವೆಂಕಟೇಗೌಡ, ಉರಿಗಿಲಿ ರುದ್ರಸ್ವಾಮಿ ಸೇರಿದಂತೆ ಸಿ.ಬೈರೇಗೌಡನಗರದ ನಿವಾಸಿಗಳು ಇದ್ದರು.



## ಉತ್ತರಾದಿ ಮಠದಲ್ಲಿ ಸಪ್ತರಾತ್ರೋತ್ಸವ

**ಮೈಸೂರು:** ನಗರದ ಅಗ್ರಹಾರ (ಖಿಲ್ಲೆ ಮೊಹಲ್ಲಾ) ದಲ್ಲಿರುವ ಶ್ರೀ ಉತ್ತರಾದಿ ಮಠ ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನದಲ್ಲಿ ಶ್ರೀ ಧನ್ವಂತರಿ ಜಯಂತಿ ಪ್ರಯುಕ್ತ ಆ.30ರಿಂದ ಸೆ.5ರವರೆಗೆ 'ಸಪ್ತರಾತ್ರೋತ್ಸವ'ವನ್ನು ಆಯೋಜಿಸಲಾಗಿದೆ. ಪ್ರತಿದಿನ ಧನ್ವಂತರಿ ದೇವರಿಗೆ ಒಂದೊಂದು ಬಗೆಯ ವಿಶೇಷ ಅಲಂಕಾರ, ಪ್ರತಿದಿನ ಸಂಜೆ 6ರಿಂದ 7ರವರೆಗೆ ಪ್ರವಚನ, ನಂತರ ಸಂಜೆ 7ರಿಂದ ರಾಜಬೀದಿಯಲ್ಲಿ ವಾಹನೋತ್ಸವ, ಸ್ವಸ್ತಿವಾಚನ ಮಹಾಮಂಗಳಾರತಿ ಹಾಗೂ ಮುಂತಾದ ಕಾರ್ಯಕ್ರಮಗಳು ಜರುಗಲಿದೆ. ಭಗವದ್ಭಕ್ತರು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಠದ ಪ್ರಧಾನ ವ್ಯವಸ್ಥಾಪಕರಾದ ಪಂಡಿತ್ ಶ್ರೀ ಅನಿರುದ್ಧಾಚಾರ್ಯ ಪಾಂಡುರಂಗಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊಬೈಲ್ 9448147459 ಸಂಪರ್ಕಿಸಬಹುದು.

## ಕೆ.ಆರ್ ಪೇಟೆ ತಾಲೂಕು ಅಂಗನವಾಡಿ ಹುದ್ದೆಗಳಿಗೆ ಅರ್ಜಿ

**ಮಂಡ್ಯ:** ಕೆ.ಆರ್ ಪೇಟೆ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿಯಿರುವ 06 ಅಂಗನವಾಡಿ ಕಾರ್ಯಕರ್ತೆ, 3 ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು 43 ಅಂಗನವಾಡಿ ಸಹಾಯಕಿಯರ ಸೇವೆಯ ಹುದ್ದೆಗಳನ್ನು ಗೌರವಧನದ ಆಧಾರದ ಮೇಲೆ ಆಯ್ಕೆ ಮಾಡಲು ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸೆಪ್ಟೆಂಬರ್ 20 ರೊಳಗೆ https://Karnemakaone.kar.nic.in/abcd/ ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08230-262627 ಮತ್ತು ಕೆ.ಆರ್ ಪೇಟೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಕೆ.ಆರ್ ಪೇಟೆ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರದ ಸುತ್ತ ನಿಷೇಧ

**ಮಂಡ್ಯ:** ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ 2023-24 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್ ''ಎ'' ಮತ್ತು ''ಬಿ'' ವೃಂದದ ಹುದ್ದೆಗಳ ಪೂರ್ವಭಾವಿ ಪರೀಕ್ಷೆಯು ಆಗಸ್ಟ್ 27 ರಂದು ಮಂಗಳವಾರ ನಡೆಯಲಿದೆ. 2023-24 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್ ''ಎ'' ಮತ್ತು ''ಬಿ'' ವೃಂದದ ಹುದ್ದೆಗಳ ಪೂರ್ವಭಾವಿ ಪರೀಕ್ಷೆಯು ಸುಗಮವಾಗಿ ನಡೆಯಲು ಮಂಡ್ಯ ತಾಲ್ಲೂಕಿನ 12 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಕಂಪ್ಯೂಟರ್/ ಸೈಬರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ. ಪರೀಕ್ಷಾರ್ಥಿಗಳು ಮತ್ತು ಪರೀಕ್ಷಾ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿಗಳು/ಸಿಬ್ಬಂದಿಗಳು ಹೊರತುಪಡಿಸಿ ಇತರರು ಯಾರೂ ನಿಷೇಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಸಮಾಜ ಕಲ್ಯಾಣ ಇಲಾಖೆಯು 2023-24ನೇ ಶೈಕ್ಷಣಿಕ ಸಾಲಿನಲ್ಲಿ ಮೆಟ್ರಿಕ್ ನಂತರದ ದ್ವಿತೀಯ ಪಿ.ಯು.ಸಿ/ ಡಿಪ್ಲಮೊ/ ಪದವಿ/ ಸ್ನಾತಕೋತ್ತರ/ ಪದವಿ/ ಮೆಡಿಕಲ್/ ಇಂಜಿನಿಯರಿಂಗ್/ ಅಗ್ರಿಕಲ್ಚರ್ ಹಾಗೂ ಇತರೆ ಕೋರ್ಸ್‌ಗಳಲ್ಲಿ ಪ್ರಥಮ ಭಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪ.ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡುವ ಸಂಬಂಧ ನೂತನ ತಂತ್ರಾಂಶವನ್ನು ಇಲಾಖಾ ವೆಬ್ ತಾಣದಲ್ಲಿ ಪ್ರಕಟಿಸಲಾಗಿದ್ದು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಪ.ಜಾತಿ ವಿದ್ಯಾರ್ಥಿಗಳು ಅರ್ಜಿಯನ್ನು www.sw.kar.nic.in (SMIS) ವೆಬ್ ಸೈಟ್ ಮೂಲಕ ಸಲ್ಲಿಸತಕ್ಕದ್ದು ಎಂದು ಮಂಡ್ಯ ಜಿಲ್ಲೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀರಪ್ಪ ದೇವಾಲಯದಲ್ಲಿ ಪೂಜೆ

**ತಾಂಡವಪುರ:** ಮೂಡ ಹಗರಣದ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನ್ಯಾಯಾಲಯದ ಮೊರೆ ಹೋಗಿದ್ದು ನ್ಯಾಯಾಲಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ನ್ಯಾಯ ಸಿಕ್ಕಿ ಆರೋಪ ಮುಕ್ತವಾಗಿ ಹೊರಬರುವಂತಾಗಲಿ ಎಂದು ಅಹಲ್ಯ ಬೀರಪ್ಪ ದೇವಾಲಯದ ಟ್ರಸ್ಟಿನ ವತಿಯಿಂದ ವಿಶೇಷ ಪೂಜೆ ಸಲ್ಲಿಸಿ ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದರು ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಇತಿಹಾಸ ಪ್ರಸಿದ್ಧಿ ಉಳ್ಳ ಅಹಲ್ಯ ಗ್ರಾಮದ ಬೀರಪ್ಪ ಕಾಳಮ್ಮ ದೇವರಲ್ಲಿ ದೇವಾಲಯದ ಟ್ರಸ್ಟಿನ ಸದಸ್ಯರು ಹಾಗೂ ಕಾಂಗ್ರೆಸ್ ಮುಖಂಡರು ವಿಶೇಷ ಪೂಜೆ ಸಲ್ಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ವಿರೋಧ ಪಕ್ಷದವರು ಸುಳ್ಳು ಆರೋಪ ಮಾಡಿ ನ್ಯಾಯಾಲಯದ ಮೆಟ್ಟಿಲು ಏರುವಂತಾಗಿದ್ದು ನ್ಯಾಯಾಲಯದಲ್ಲಿ ನ್ಯಾಯ ಸಿಗುವಂತಾಗಲಿ ಅವರು ವಿರೋಧ ಪಕ್ಷದವರು ಮಾಡಿರುವ ಆರೋಪ ಸುಳ್ಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ತಪ್ಪು ಮಾಡಿಲ್ಲ ಅವರು ನ್ಯಾಯಾಲಯದಲ್ಲಿ ಆರೋಪ ಮುಕ್ತರಾಗಿ ಅವರಿಗೆ ಜಯ ಸಿಗುವಂತಾಗಲಿ ಎಂದು ದೇವರಲ್ಲಿ ವಿಶೇಷ ಪೂಜೆ ದೇವರಲ್ಲಿ ಮೊರೆ ಹೋಗಿದ್ದೇವೆ ಎಂದು ಕಾಂಗ್ರೆಸ್ ಮುಖಂಡರಾದ ಎಂ ದಕ್ಷಿಣ ಮೂರ್ತಿ ಮಹಾದೇವ ರವರು ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರಿಗೆ ತಿಳಿಸಿದರು.

ಇದೇ ವೇಳೆ ಬಿದರಗೋಡು ಗ್ರಾಮದ ಶ್ರೀ ಭಕ್ತ ಕನಕದಾಸ ಸಂಘದ ಅಧ್ಯಕ್ಷ ಮಹಾದೇವ ಮಾತನಾಡಿ ವಿರೋಧ ಪಕ್ಷದ ಬಿಜೆಪಿ ನಾಯಕರುಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೆಲ್ಲ ಮಳೆ ಬರುವುದಿಲ್ಲ ಬರಗಾಲದಲ್ಲಿ ಜನ ತತ್ತರಿಸಿ ಹೋಗಿದ್ದಾರೆ ಎಂದು ಬಾಯಿಗೆ ಬಂದಂತೆ ಮಾತನಾಡುತ್ತಿದ್ದರು ಆದರೆ ಈಗ ರಾಜ್ಯದ ಎಲ್ಲಾ ಕಡೆಯಲ್ಲೂ ಉತ್ತಮವಾಗಿ ಮಳೆಯಾಗಿ ಎಲ್ಲ ಜಲಾಶಯಗಳು ಭರ್ತಿಯಾಗಿವೆ ಕೆರೆಕಟ್ಟೆಗಳು ತುಂಬಿವೆ ಇದರಿಂದ ರಾಜ್ಯದ ರೈತರು ಬಹಳ ಸಂತೋಷದಿಂದ ಬೇಸಾಯ ಮಾಡುತ್ತಿದ್ದಾರೆ ಎಂದು ವಿರೋಧ ಪಕ್ಷದವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು ಈ ಸಂದರ್ಭದಲ್ಲಿ ಶ್ರೀ ಬೀರೇಶ್ವರ ಸ್ವಾಮಿಯ ದೇವಾಲಯದ ಟ್ರಸ್ಟಿನ ಅಧ್ಯಕ್ಷರಾದ ಶಿವಪ್ಪ ಮಾಜಿ ಗ್ರಾಮ ಪಂಚಾಯತಿ ಸದಸ್ಯ ಕಾಂಗ್ರೆಸ್ ಮುಖಂಡ ಎಂ ದಕ್ಷಿಣ ಮೂರ್ತಿ ಟ್ರಸ್ಟಿನ ಕಾರ್ಯದರ್ಶಿ ಅಂದಾನಿ ಗೌಡ ಖಜಾಂಚಿ ಅರುಣ್ ಸದಸ್ಯರಾದ ಗುರು ಮಹಾದೇವ ಮಲ್ಲೇಗೌಡ ಶಿವಕುಮಾರ್ ರಾಕೇಶ್ ಬಿದರಗೋಡು ಉಮೇಶ್ ಸಿದ್ದಪ್ಪ ಚಿಕ್ಕಣ್ಣ ಚಂದ್ರುಮಹಾದೇವ ಅಹಲ್ಯ ಪ್ರಭು ಅರುಣ್ ಕುಮಾರ್ ಪುರುಷೋತ್ತಮ್ ನಿಂಗಣ್ಣ ಶಿವನಂಜೇಗೌಡ ಮಹಾದೇವೇಗೌಡ ಮಂಜು ಸಂಪತ್ ಸೇರಿದಂತೆ ಟ್ರಸ್ಟಿನ ಎಲ್ಲಾ ಸದಸ್ಯರು ಕಾಂಗ್ರೆಸ್ ಮುಖಂಡರು ಸೇರಿದಂತೆ ಗ್ರಾಮಸ್ಥರು ದೇವರಿಗೆ ಸಿದ್ದರಾಮಯ್ಯನ ಹೆಸರಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2023-24 ನೇ ಸಾಲಿನಲ್ಲಿ ಎಸ್‌ಎಸ್‌ಎಲ್ಸಿ ಪರೀಕ್ಷೆ (ರಾಜ್ಯ ಪಠ್ಯಕ್ರಮ./ಸಿ.ಬಿ.ಎಸ್.ಇ/ಐ.ಸಿ.ಎಸ್.ಇ) ಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಶೇ.60 ರಿಂದ ಶೇ.74.99 ಅಂಕ ಪಡೆದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ರೂ.7000 ಮತ್ತು ಶೇ.75 ಕ್ಕಿಂತ ಹೆಚ್ಚು ಅಂಕ ಪಡೆದವರಿಗೆ ರೂ.15,000 ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದ್ದು, ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಯಾವುದೇ ಆದಾಯದ ಮಿತಿ ಇರುವುದಿಲ್ಲ, ಅರ್ಹ ವಿದ್ಯಾರ್ಥಿಗಳು www.swdservices.karnataka.gov.in ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸುವ ಮುನ್ನ ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಖಾತೆಗೆ ಆಧಾರ್ ಸೀಡಿಂಗ್ ಆಗಿರುವ ಬಗ್ಗೆ ಖಚಿತ ಪಡಿಸಿಕೊಳ್ಳತಕ್ಕದ್ದು. ಅರ್ಜಿ ಸಲ್ಲಿಸಿದ ನಂತರ ಆನ್ಲೈನ್ ಸ್ವೀಕೃತಿಯೊಂದಿಗೆ ಎಸ್‌ಎಸ್‌ಎಲ್ಸಿ ಅಂಕಪಟ್ಟಿ, ಆಧಾರ್ ಪ್ರತಿ, ಜಾತಿ ಪ್ರಮಾಣ ಪತ್ರ, ಪಾಸ್ಬುಕ್ ನಕಲು ಪ್ರತಿಗಳನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರಿಂದ ದೃಢೀಕರಿಸಿ ಪಡುವಾರಹಳ್ಳಿಯಲ್ಲಿರುವ ಆದಿ ಪಂಪ ರಸ್ತೆಯ ಬಾಬು ಜಗಜೀವನ್ ರಾಂ ಕಟ್ಟಡದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ಅವರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:0821-2520910 ಹಾಗೂ ಇಮೇಲ್ tswomys@gmail.com ನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ಬಾಕಿ ಬಿಲ್ ಪಾವತಿಸಲು ಸೂಚನೆ

**ರಾಮನಗರ:** ಚನ್ನಪಟ್ಟಣ ನಗರಕ್ಕೆ ಟಿ.ಕೆ. ಹಳ್ಳಿಯ ಶಿಂಷಾ ನದಿಯಿಂದ ಮತ್ತು ಬೋರ್-ವೆಲ್ ಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ. ಕೆಲವು ಸಾರ್ವಜನಿಕರು ನೀರಿನ ಬಿಲ್ಲನ್ನು ಪಾವತಿಸದೇ ಬಾಕಿ ಉಳಿಸಿಕೊಂಡಿರುತ್ತಾರೆ ಮತ್ತು ನಳ ಸಂಪರ್ಕಕ್ಕೆ ನಲ್ಲಿಯನ್ನು ಅಳವಡಿಸದೇ ನೀರನ್ನು ಪೋಲು ಮಾಡುತ್ತಿರುತ್ತಾರೆ. ಮಾಸಿಕವಾಗಿ ಪಾವತಿಸುವ ನೀರಿನ ಬಿಲ್ಲಿನಲ್ಲೇ ನೀರು ಸರಬರಾಜು ನಿರ್ವಹಣೆ, ಸಿಬ್ಬಂದಿಗಳ ವೇತನ ಪೈಪ್‌ಲೈನ್ ಸೋರಿಕೆ ದುರಸ್ತಿ, ಬೋರ್‌ವೆಲ್ ದುರಸ್ತಿ ಹಾಗೂ ಮತ್ತಿತರೆ ಸಂಬಂಧಿಸಿದ ಕಾಮಗಾರಿಗಳನ್ನು ಕೈಗೊಳ್ಳಬೇಕಿರುತ್ತದೆ. ನೀರಿನ ಬಿಲ್ಲನ್ನು ಪಾವತಿಮಾಡದಿದ್ದಲ್ಲಿ ಈ ಕಾಮಗಾರಿಗಳನ್ನು ಸಕಾಲದಲ್ಲಿ ಕೈಗೊಳ್ಳಲು ಸಾಧ್ಯವಿರುವುದಿಲ್ಲ ಹಾಗೂ ಸಮರ್ಪಕವಾಗಿ ನೀರು ಸರಬರಾಜು ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ ಸಾರ್ವಜನಿಕರು ಕಡ್ಡಾಯವಾಗಿ ಬಾಕಿ ಉಳಿಸಿಕೊಂಡಿರುವ ನೀರಿನ ಕಂದಾಯವನ್ನು ಕೂಡಲೇ ಪಾವತಿಸಲು ಹಾಗೂ ನಳ ಸಂಪರ್ಕಕ್ಕೆ ನಲ್ಲಿಯನ್ನು ಅಳವಡಿಸಲು ಸೂಚಿಸಿದೆ. ತಪ್ಪಿದ್ದಲ್ಲಿ ನಳಸಂಪರ್ಕವನ್ನು ಕಡಿತಗೊಳಿಸಲಾವುದು ಎಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಬಾಲಕೃಷ್ಣನ ವೇಷದಲ್ಲಿ ಇಶಾನ್ವಿ

**ಶ್ರೀ ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಕೃಷ್ಣನ ವೇಷದಲ್ಲಿ ಮೂರು ವರ್ಷದ ಪುಟಾಣಿಇಶಾನ್ವಿ ಬಾಲಕೃಷ್ಣನ ವೇಷ ಧರಿಸಿ ಎಲ್ಲರ ಗಮನವನ್ನು ಸೆಳೆದು ಆಕರ್ಷಣೆಯಾಗಿ ರುವ ಚಿತ್ರವಾಗಿದೆ.**

## ಕರ್ನಾಟಕ ಸಂಭ್ರಮ 50: ಜ್ಯೋತಿ ರಥ ಯಾತ್ರೆ

**ಮೈಸೂರು:** ಕರ್ನಾಟಕ ಸಂಭ್ರಮ 50ರ ಅಂಗವಾಗಿ ಜ್ಯೋತಿ ರಥ ಯಾತ್ರೆಯು ರಾಜ್ಯದಾದ್ಯಂತ ಸಂಚರಿಸಲಿದ್ದು ಚಾಮರಾಜನಗರ ಜಿಲ್ಲೆಯಿಂದ ಗುಂಡ್ಲುಪೇಟೆ ಮಾರ್ಗವಾಗಿ ಆಗಸ್ಟ್ 30 ರಂದು ಬೆಳಿಗ್ಗೆ 9 ಗಂಟೆಗೆ ಮೈಸೂರು ಜಿಲ್ಲೆಗೆ ಪ್ರವೇಶಿಸಲಿದೆ. ಆಗಸ್ಟ್ 31 ರಂದು ಹೆಚ್ .ಡಿ ಕೋಟೆಯಿಂದ ಸರಗೂರಿಗೆ, ಸೆಪ್ಟೆಂಬರ್ 1 ರಂದು ಸರಗೂರಿನಿಂದ ನಂಜನಗೂಡಿಗೆ, ಸೆಪ್ಟೆಂಬರ್ 2 ರಂದು ನಂಜನಗೂಡಿನಿಂದ ಟಿ. ನರಸೀಪುರಕ್ಕೆ, ಸೆಪ್ಟೆಂಬರ್ 3 ರಂದು ಟಿ.ನರಸೀಪುರದಿಂದ ಮೈಸೂರಿಗೆ, ಸೆಪ್ಟೆಂಬರ್ 4 ರಂದು ಮೈಸೂರಿನಿಂದ ಕೆ.ಆರ್ ನಗರಕ್ಕೆ, ಸೆಪ್ಟೆಂಬರ್ 5 ರಂದು ಕೆ.ಆರ್ ನಗರದಿಂದ ಸಾಲಿಗ್ರಾಮಕ್ಕೆ, ಸೆಪ್ಟೆಂಬರ್ 6 ರಂದು ಸಾಲಿಗ್ರಾಮದಿಂದ ಹುಣಸೂರಿಗೆ ಹಾಗೂ ಸೆಪ್ಟೆಂಬರ್ 7 ರಂದು ಹುಣಸೂರಿನಿಂದ ಪಿರಿಯಾಪಟ್ಟಣಕ್ಕೆ ತೆರಳಿ ನಂತರ ಕೊಡಗು ಜಿಲ್ಲೆಯನ್ನು ಪ್ರವೇಶಿಸಲಿದೆ ಎಂದು ಮೈಸೂರು ಜಿಲ್ಲಾಧಿಕಾರಿಗಳಾದ ಜಿ.ಲಕ್ಷ್ಮೀಕಾಂತರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಶಾಲೆ ಮಕ್ಕಳಿಂದ ಆಕಾಶ ವೀಕ್ಷಣೆ

**ಮೈಸೂರು:** ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವ ನಿಟ್ಟಿನಲ್ಲಿ ಹಾಗೂ ಚಂದ್ರಯಾನ-3 ಯಶಸ್ವಿ ಒಂದು ವರ್ಷ ತುಂಬಿದ ಹಿನ್ನೆಲೆಯಲ್ಲಿ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನ ಮೊಬೈಲ್ ಇನ್ನೋವೇಶನ್ ಲ್ಯಾಬ್ ವತಿಯಿಂದ ಹಿಟ್ಟವಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ರಾಷ್ಟ್ರೀಯ ಬಾಹ್ಯಾಕಾಶ ದಿನ ಆಚರಿಸಲಾಯಿತು.

ವಿದ್ಯಾರ್ಥಿಗಳಿಗೆ ರಾಕೆಟ್, ವಿಕ್ರಾಂತ್ ಲ್ಯಾಂಡರ್, ಪ್ರಜ್ಞಾನ್ ರೋವರ್, ಗಗನಯಾನಿಗಳ ವಸ್ತ್ರ ವಿನ್ಯಾಸ ಒಳಗೊಂಡ ಮಾದರಿ ಸೇರಿದಂತೆ ಈ ಮೂರು ವರ್ಕಿಂಗ್ ಪ್ರೋಟೋ ಟೈಪ್ ಮಾದರಿಗಳ ಸಮೇತವಾಗಿ ಅವುಗಳ ಕಾರ್ಯನಿರ್ವಹಣೆ ಮತ್ತು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ವಿಜ್ಞಾನಿಗಳ ಪರಿಶ್ರಮ ಮತ್ತು ಕಾರ್ಯ ಸಾಧನೆಯನ್ನು ಸವಿವರವಾಗಿ ವಿದ್ಯಾರ್ಥಿಗಳಿಗೆ ತಿಳಿಸಿಕೊಡಲಾಯಿತು.

ಮುಖ್ಯ ಶಿಕ್ಷಕ ಪುಟ್ಟಸ್ವಾಮಿ ವಿಕ್ರಾಂತ್ ಲ್ಯಾಂಡರ್ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವಲ್ಲಿ ಇಂತಹ ಕಾರ್ಯಕ್ರಮಗಳು ಹೆಚ್ಚಿನ



ಪ್ರಾಮುಖ್ಯತೆಯನ್ನು ವಹಿಸುತ್ತವೆ ಎಂದರು.

ಎಲ್ಲ ವಿದ್ಯಾರ್ಥಿಗಳು ಮೂಲ ಮಾದರಿಗಳ ಕಾರ್ಯಕ್ಷಮತೆಯನ್ನು ವೀಕ್ಷಿಸಿ ಕುತೂಹಲದಿಂದ ಸಂತಸ ವ್ಯಕ್ತಪಡಿಸಿದರು. ಸಹ ಶಿಕ್ಷಕರಾದ ಪವಿತ್ರ ಟಿ.ಎಸ್., ಉಮಾ ಟಿ.ಎಸ್, ಜಯಪ್ರಕಾಶ್, ಹಂಸವೇಣಿ, ಸುಮಾ ಉಪಸ್ಥಿತರಿದ್ದರು.

ಬನ್ನೂರಿನ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯದ ವಿದ್ಯಾರ್ಥಿಗಳಿಗೆ ಆಕಾಶ ವೀಕ್ಷಣೆ ಮಾಡಿದರು. ಎಲ್ಲ ವಿದ್ಯಾರ್ಥಿಗಳು ಬಹಳ ಕುತೂಹಲದಿಂದ ಆಕಾಶ ವೀಕ್ಷಿಸಿದರು. ಸರಸ್ವತಿ, ವಾರ್ಡನ್ ಅಕ್ಷತ, ಅಗಸ್ತ್ಯ ಫೌಂಡೇಷನ್ ಸಿಬ್ಬಂದಿ ಪ್ರದೀಪ್, ಕುಸುಮಾ, ಸುನಿಲ್ ಉಪಸ್ಥಿತರಿದ್ದರು.

**ಆನೇಕಲ್ ಯೋಜನಾ ಪ್ರಾಧಿಕಾರ**
"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯ ರಸ್ತೆ, ಬೆಂಗಳೂರು-560 099.
ಫೋನ್: 080-27835122, ಫ್ಯಾಕ್ಸ್: 080-27836569, www.anekal.tpa.gov.in, www.e-vinyasa.kar.nic.in

ಸಂ:ಆಯೋಪ್ರಾ/ಭೂ.ಬ/112/2022-23 ದಿನಾಂಕ: 23.08.2024

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 14(ಎ) ಪ್ರಕಾರ ಅರ್ಜಿದಾರರು ವಸತಿ ಉದ್ದೇಶಕ್ಕೆ ಭೂ ಉಪಯೋಗ ಬದಲಾವಣೆಗೆ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿಯನ್ನು ಪರಿಶೀಲಿಸಲಾಗಿ, ಅಡಕದಲ್ಲಿನ ಮಾಹಿತಿಯನ್ನು ಆಧರಿಸಿ ಕೆಳಕಂಡಂತೆ ವಿವರಗಳನ್ನು ಕೋಷ್ಟಕದಲ್ಲಿ ಅಳವಡಿಸಿದೆ. ಕಾಯ್ದೆಯಲ್ಲಿನ ಅಂಶಗಳನ್ವಯ ಪ್ರಸ್ತುತ ಪ್ರಕರಣಕ್ಕೆ ಸಂಬಂಧಿಸಿದಂತೆ, ಭೂ ಉಪಯೋಗ ಬದಲಾವಣೆಗೆ ಯಾರಿಂದಲಾದರು ಆಕ್ಷೇಪಣೆಗಳಿದ್ದರೆ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ-ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್ ಕಛೇರಿಗೆ ಸಲ್ಲಿಸಲು ಕೋರಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮ | ಸರ್ವೆ ನಂ. | ವಿಸ್ತೀರ್ಣ ಎ-ಗು | ಅನುಮೋದಿತ ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1 | ಶ್ರೀ ಅಪ್ಪಣ್ಣ ಹೆಚ್ ಬಿನ್ ಹುಚ್ಚಪ್ಪ | ಆನೇಕಲ್ | ಜಿಗಣಿ | ಬಂಡೇನಲ್ಲಸಂದ್ರ | 55 | 0-13.08 | ಕೈಗಾರಿಕಾ | ವಸತಿ |

ಪ್ರಸ್ತಾವನೆಯಲ್ಲಿನ ಪ್ರಶ್ನಿತ ಜಮೀನನ್ನು ವಸತಿ ಉದ್ದೇಶಕ್ಕೆ ಅಭಿವೃದ್ಧಿಪಡಿಸುವುದರಿಂದ ಸ್ಥಳೀಯ ನಿರುದ್ಯೋಗಿಗಳಿಗೆ ಉದ್ಯೋಗವಕಾಶ ಸೃಷ್ಟಿಯಾಗುತ್ತದೆ. ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಿದಂತಾಗುತ್ತದೆ ಎಂಬ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ, ಸದರಿ ಪ್ರದೇಶವನ್ನು **ಕೈಗಾರಿಕಾ ವಲಯದಿಂದ ವಸತಿ ವಲಯಕ್ಕೆ** ಭೂ ಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛೆಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/- ಸದಸ್ಯ ಕಾರ್ಯದರ್ಶಿ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್.

ವಾಸಾಸಂಇ/ವಾಪ್ರ/ಜಿಎ/1663/2024-25

## ಕೃಷ್ಣನ ಆದರ್ಶ ಗುಣಗಳನ್ನು ಇಂದಿನ ಪೀಳಿಗೆಯ ಮಕ್ಕಳು ಪಾಲಿಸಬೇಕು: ಬಾಬು

ರಾಮನಗರ, ಭಗವಾನ್ ಶ್ರೀ ಕೃಷ್ಣನ ಆದರ್ಶ ಗುಣಗಳನ್ನು ಇಂದಿನ ಮಕ್ಕಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮಕ್ಕಳಲ್ಲಿ ಒಳ್ಳೆಯ ನೈತಿಕತೆ ಹಾಗೂ ಮೂಢನಂಬಿಕೆ ರಹಿತ ಧಾರ್ಮಿಕ ಮನೋಭಾವವನ್ನು ಬೆಳೆಸುವುದು ಇಂದಿನ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಬೇಕು ಎಂದು ಡಯಟ್‌ನ ಹಿರಿಯ ಉಪನ್ಯಾಸಕರಾದ ಬಾಬು ತಿಳಿಸಿದರು.

ಅವರು ಆ. 26ರ ಸೋಮವಾರ ನಗರದ ಕಂದಾಯ ಭವನದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹಿಂದೂ ಧರ್ಮದವರಿಗೆ ಪವಿತ್ರ ಗ್ರಂಥವಾದ ಭಗವದ್ಗೀತೆಯು ಶ್ರೀ ಕೃಷ್ಣನಿಂದ ಬೋಧಿಸಲ್ಪಟ್ಟಿದ್ದು, ಇದರಲ್ಲಿರುವ ಮಾನವೀಯ ಮೌಲ್ಯಗಳನ್ನು ಕೇವಲ ಹಿಂದೂ ಧರ್ಮಕ್ಕೆ ಸೀಮಿತಗೊಳಿಸದೆ ಎಲ್ಲಾ ಜನಾಂಗದವರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಇಂದಿನ ಯುವ ಪೀಳಿಗೆ ಮತ್ತು ಮಕ್ಕಳಲ್ಲಿ ನೈತಿಕ ಶಿಕ್ಷಣ ಕೊರತೆಯು ಎದ್ದು ಕಾಣುತ್ತಿದೆ. ಅದನ್ನು ಪೋಷಕರು ಮನೆಗಳಿಂದಲೇ ಮಕ್ಕಳಿಗೆ ಶ್ರೀ ಕೃಷ್ಣರಂತಹ ಆದರ್ಶ ಪುರುಷರ ಉದಾಹರಣೆಯೊಂದಿಗೆ ಕಲಿಸಬೇಕು. ಕೃಷ್ಣನು ಎಂದೆಂದಿಗೂ ಧರ್ಮದ ಪರ ನಿಂತಿದ್ದನು ಹಿಂದೂ ಸಮಾಜಕ್ಕೆ ಒಂದು ಧಾರ್ಮಿಕ ಚೌಕಟ್ಟನ್ನು ರೂಪಿಸುವಲ್ಲಿ ಕೃಷ್ಣನ ಪಾತ್ರವೂ ಮಹತ್ವವಾಗಿದೆ.

ಪುರಾಣಗಳ ಪ್ರಕಾರ ಶ್ರೀ ಕೃಷ್ಣನ ವಿಷ್ಣುವಿನ 8ನೇ ಅವತಾರವಾಗಿದ್ದು, ಭೂಮಿಯ ಮೇಲೆ ಧರ್ಮವನ್ನು ಸ್ಥಾಪಿಸಲು ಅವತರಿಸಿದನೆಂದು ಹಿಂದೂ ಪುರಾಣಗಳು ತಿಳಿಸುತ್ತವೆ ಎಂದರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸತೀಶ್ ಮಾತನಾಡಿ, ಇಂದಿನ ಮಕ್ಕಳು ಅತಿ ಹೆಚ್ಚು ಶಿಕ್ಷಣಕ್ಕೆ ಪ್ರಾಮುಖ್ಯತೆಯನ್ನು ಕೊಡಬೇಕು ಎಂದರು. ಶಿಕ್ಷಣದಿಂದಲೇ ತಮ್ಮ ಅಭಿವೃದ್ಧಿ ಮತ್ತು ಬೆಳವಣಿಗೆ ಸಾಧ್ಯ ಆದ್ದರಿಂದ ಸಮುದಾಯದ ಮಕ್ಕಳಿಗೆ ಶಿಕ್ಷಣ ಕೊಡಿಸುವುದು ಮೊದಲ ಆದ್ಯತೆಯಾಗಬೇಕು ಮತ್ತು ಸರ್ಕಾರದಿಂದ ಬರುವ ಅನೇಕ ಸೌಲಭ್ಯಗಳನ್ನು ಪಡೆದುಕೊಂಡು ಸಮಾಜದಲ್ಲಿ ಘನತೆಯಿಂದ ಜೀವನ ನಡೆಸಬೇಕು ಎಂದು ತಿಳಿಸಿದರು. ನಾವು ಈ ಧಾರ್ಮಿಕ ಆಚರಣೆಗಳ ಮುಖಾಂತರ ಮಕ್ಕಳಲ್ಲಿ ಸಂಸ್ಕಾರವನ್ನು ಒಂದು ಪೀಳಿಗೆಯಿಂದ ಕಲಿಸಲು ಪ್ರಯತ್ನಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಕುಮಾರ್, ಜಿಲ್ಲಾಧಿಕಾರಿಗಳ ಕಚೇರಿಯ ಕಚೇರಿ ಸಹಾಯಕ ಜಯಂತ್, ಸಹಾಯಕ ಅಭಿಯಂತರರಾದ ವಿಶ್ವನಾಥ್, ಸಮುದಾಯದ ಮುಖಂಡರುಗಳಾದ ಪಿ.ಸಿ. ನಾಗಪ್ಪ, ಟಿ. ಕೃಷ್ಣ ಯಾದವ್, ರಾಜು ಎಂ.ಎನ್.ಆರ್, ಮಾದಯ್ಯ, ವೆಂಕಟರಮಣ, ನರಸಿಂಹಯ್ಯ, ನರಸಿಂಹಮೂರ್ತಿ ಹಾಗೂ ಇತರರು ಉಪಸ್ಥಿತರಿದ್ದರು.

## ವಿವಿಧ ಕೋರ್ಸ್‌ಗಳಿಗೆ ಅರ್ಜಿ

**ಮೈಸೂರು:** 2024-25ನೇ ಸಾಲಿನ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೋಮೊ ಪ್ರವೇಶಕ್ಕಾಗಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭ ಮಾಡಲಾಗಿದ್ದು, ಎಸ್‌ಎಸ್‌ಎಲ್‌ಸಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪಾಸಾದ ಅಭ್ಯರ್ಥಿಗಳಿಗೆ ಡಿಪ್ಲೋಮೊ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮೊ ಇನ್ ಪ್ರಿಶಿಷನ್ ಮ್ಯಾನುಫ್ಯಾಕ್ಚರಿಂಗ್ ಹಾಗೂ ಡಿಪ್ಲೋಮೊ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಕೋರ್ಸ್‌ಗಳು ಲಭ್ಯವಿದ್ದು, 3 ವರ್ಷ ಕೋರ್ಸ್ ಹಾಗೂ ಕಡ್ಡಾಯ ಒಂದು ವರ್ಷದ ಇಂಟರ್ನ್‌ಶಿಪ್ ತರಬೇತಿಯನ್ನು ನೀಡಲಾಗುವುದು. ಅರ್ಜಿ ಸಲ್ಲಿಸಲು ಆ.31 ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಬೆಳಗೊಳ ಕೈಗಾರಿಕಾ ಪ್ರದೇಶದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ದೂ.ಸಂ:821-2582750 ಹಾಗೂ ಸಹಾಯವಾಣಿ:155267, ಮೊ.ನಂ:9980557205, 8660139259, 9141630315, 9880068986 ಅಥವಾ ವೆಬ್‌ಸೈಟ್‌ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ತಿಳಿಸಿದ್ದಾರೆ.

## ಕರ್ನಾಟಕ ಸಂಭ್ರಮ 50: ರಥಯಾತ್ರೆ

**ಮೈಸೂರು:** ಕರ್ನಾಟಕ ಸಂಭ್ರಮ 50ರ ಅಂಗವಾಗಿ ಜ್ಯೋತಿ ರಥ ಯಾತ್ರೆ ರಾಜ್ಯದಾದ್ಯಂತ ಸಂಚರಿಸಲಿದ್ದು ಚಾಮರಾಜನಗರ ಜಿಲ್ಲೆಯಿಂದ ಗುಂಡ್ಲುಪೇಟೆ ಮಾರ್ಗವಾಗಿ ಆ.30ರಂದು ಬೆಳಗ್ಗೆ 9 ಗಂಟೆಗೆ ಮೈಸೂರು ಜಿಲ್ಲೆಗೆ ಪ್ರವೇಶಿಸಲಿದೆ. ಆ.31ರಂದು ಹೆಚ್.ಡಿ ಕೋಟೆಯಿಂದ ಸರಗೂರಿಗೆ, ಸೆ.1ರಂದು ಸರಗೂರಿನಿಂದ ನಂಜನಗೂಡಿಗೆ, ಸೆ.2ರಂದು ನಂಜನಗೂಡಿನಿಂದ ಟಿ.ನರಸೀಪುರಕ್ಕೆ, ಸೆ.3ರಂದು ಟಿ.ನರಸೀಪುರದಿಂದ ಮೈಸೂರಿಗೆ, ಸೆ.4ರಂದು ಮೈಸೂರಿನಿಂದ ಕೆ.ಆರ್ ನಗರಕ್ಕೆ, ಸೆ.5ರಂದು ಕೆ.ಆರ್ ನಗರದಿಂದ ಸಾಲಿಗ್ರಾಮಕ್ಕೆ, ಸೆ.6ರಂದು ಸಾಲಿಗ್ರಾಮದಿಂದ ಹುಣಸೂರಿಗೆ ಹಾಗೂ ಸೆ.7ರಂದು ಹುಣಸೂರಿನಿಂದ ಪಿರಿಯಾಪಟ್ಟಣಕ್ಕೆ ತೆರಳಿ ನಂತರ ಕೊಡಗು ಜಿಲ್ಲೆ ಪ್ರವೇಶಿಸಲಿದೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ತಿಳಿಸಿದ್ದಾರೆ.

## ದರಪಟ್ಟಿ ಆಹ್ವಾನ

**ಮೈಸೂರು:** ಸಾರ್ವಜನಿಕ ನೊಂದಾಯಿತ ವರ್ತಕರು ಹಾಗೂ ನೊಂದಾಯಿತ ಸಂಸ್ಥೆಗಳು ಸಂಸ್ಥೆಯ ಬಂದಿನಿವಾಸಿಗಳ ಆರೋಗ್ಯದ ಹಿತದೃಷ್ಟಿಯಿಂದ ಕಾರಾಗೃಹದಲ್ಲಿ ದಾಖಲಿರುವ ಬಂದಿಗಳಿಗೆ ಪ್ರತಿದಿನ ಹಾಟ್ ಬಾಕ್ಸ್‌ನಲ್ಲಿ ಆಹಾರ ವಿತರಿಸಲು ಕ್ರಮ ವಹಿಸಲಾಗುತ್ತಿದೆ. ಕಾರಾಗೃಹದ ಕೊಠಡಿಗಳಲ್ಲಿ ದಾಖಲಿರುವ ಬಂದಿಗಳ ಸಾಮರ್ಥ್ಯಕ್ಕನುಸಾರ 10ಲೀ, 20ಲೀ, 30ಲೀ ಸಾಮರ್ಥ್ಯದ ತಲಾ 24 ಹಾಟ್‌ಬಾಕ್ಸ್‌ಗಳನ್ನು ಖರೀದಿಸಲು ಸ್ಥಳೀಯ ವರ್ತಕರಿಂದ ಜಿಎಸ್‌ಟಿ ಸಹಿತ ದರಪಟ್ಟಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಸಂಸ್ಥೆ ಹಾಗೂ ವರ್ತಕರು ಜಿಎಸ್‌ಟಿ ಸಹಿತ ದರಪಟ್ಟಿಯನ್ನು ಸೆ.5ರಂದು ಸಂಜೆ 4 ಗಂಟೆಯೊಳಗೆ ಮೈಸೂರಿನ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರ ಕಚೇರಿಗೆ ಸಲ್ಲಿಸಬೇಕು ಎಂದು ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರು ತಿಳಿಸಿದ್ದಾರೆ.

# ಮೂಗೂರು ಗ್ರಾಪಂ ಅಧ್ಯಕ್ಷರಾಗಿ ಲೋಕೇಶ್

**ತಿ. ನರಸೀಪುರ:** ಮೂಗೂರು ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಬಿಜೆಪಿ ಹಾಗೂ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಎಂ.ಡಿ. ಲೋಕೇಶ್ ಅವಿರೋಧ ಆಯ್ಕೆಯಾದರು.




ಮೂಗೂರು ಗ್ರಾ.ಪಂ ಅಧ್ಯಕ್ಷರಾಗಿದ್ದ ಶಿವಣ್ಣ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಹಿನ್ನೆಲೆಯಲ್ಲಿ ತೆರವಾಗಿದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ಗ್ರಾ.ಪಂ. ಸಭಾಂಗಣದಲ್ಲಿ ನೆಡದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನ ಬಯಸಿ ಎಂ.ಡಿ.ಲೋಕೇಶ್ ವರೆತು ಪಡಿಸಿ ಮತ್ಯಾರು ಉಮೇದುವಾರಿಕೆ ಸಲ್ಲಿಸದ ಕಾರಣ ಎಂ.ಡಿ.ಲೋಕೇಶ್ ರವರನ್ನು ಅಧ್ಯಕ್ಷರಾಗಿ ಆಯ್ಕೆಯನ್ನು ಚುನಾವಣೆ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಕಾವೇರಿ ನೀರಾವರಿ ನಿಗಮ ಬನ್ನೂರು ಶಾಖೆಯ ಎಇಇ ರತೀಶ. ಎಚ್.ಸಿ ಘೋಷಿಸಿದರು.

ನೂತನ ಅಧ್ಯಕ್ಷ ಎಂ.ಡಿ ಲೋಕೇಶ್ ಮಾತನಾಡಿ, ಗ್ರಾ.ಪಂ.ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೂ ಕುಡಿಯುವ ನೀರು, ಬೀದಿ ದೀಪ, ಚರಂಡಿ, ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಹಾಗೆ ಜನ ಸಾಮಾನ್ಯರು ತಮ್ಮ ಕೆಲಸ ನಿಮಿತ್ತ ಕಛೇರಿಗೆ ಪದೆ ಪದೇ ಅಲೆಯುವುದನ್ನು ತಪ್ಪಿಸಿ ಜರೂರಾಗಿ ಅವರ ಕೆಲಸಗಳನ್ನು ಮಾಡಿಸಲು ಶ್ರಮಿಸುತ್ತೇನೆ. ಗ್ರಾ.ಪಂ.ಸುಮಾರು 25ಸದಸ್ಯರುಗಳ ಸಂಖ್ಯಾ ಬಲ ಹೊಂದಿದ್ದು ಈ ಪೈಕಿ ಚುನಾವಣೆ ಪ್ರಕ್ರಿಯೆಯಲ್ಲಿ

ಉಪಾಧ್ಯಕ್ಷೆ ಎಂ.ಶಾಂತಿ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಶಿವಣ್ಣ, ಚಂದ್ರಮ್ಮ, ಮಹಾದೇವಮ್ಮ, ಎಂ. ಪುಟ್ಟ ಮಾದಯ್ಯ, ಭಾಗ್ಯ, ಎಂ. ಎಸ್. ಗೌರೀಶ್(ಮನು), ರತ್ನಮ್ಮ, ಎಂ. ಬಿ. ಮಹೇಶ್, ಟಿ. ಎಂ ಚೇತನ್, ಆಶಾ, ಲಕ್ಷ್ಮಿ, ರೋಜಾ,ಶಿವಣ್ಣ, ನಾಗಮ್ಮ, ಸವಿತ, ತಂಗಮ್ಮ. ಬಿ. ಎಸ್, ಸೇರಿದಂತೆ 18 ಜನ ಸದಸ್ಯರು ಹಾಜರಿದ್ದರು.

ಉಳಿದ 7 ಮಂದಿ ಸದಸ್ಯರಾದ ಜಿ. ಎಸ್. ಮೋಹನಕುಮಾರ್(ಶಿವು ), ರಾಜಮ್ಮ, ಲಿಂಗರಾಜು, ಮಹಾದೇವನಾಯಕ, ಎಂ. ಪಿ. ಮಹದೇವಸ್ವಾಮಿ(ಮಹೇಶ್ ), ರತ್ನಮ್ಮ, ಬಸವರಾಜು ರವರು ಗೈರಾಗಿದ್ದರು.

ಚುನಾವಣೆ ಸಂದರ್ಭದಲ್ಲಿ ಪಿಡಿಒ ಪ್ರಕಾಶ್, ಕಾರ್ಯದರ್ಶಿ ದೀಪಾ. ಹೆಚ್. ಡಿ, ಎಸ್ ಡಿಎ ಜವರೇಗೌಡ, ಕಂಪ್ಯೂಟರ್ ಆಪರೇಟರ್ ಚೇತನ್, ಬಿಲ್ ಕಲೆಕ್ಟರ್ ಶಶಿಕುಮಾರ್, ಪುಟ್ಟಮಾದಯ್ಯ, ವಾಟರ್ ಮ್ಯಾನ್ ಗುರುಸ್ವಾಮಿ, ಶ್ರೀನಿವಾಸ್ ,ಸಿದ್ದರಾಜು, ಅರುಣಮ್ಮ ಹಾಜರಿದ್ದರು

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷ ಜೆಡಿಎಸ್ ಮುಂಖಡ ಎಂ. ಜಗದೀಶ್ ಮೂರ್ತಿ,ಪಿಎಸಿ ಬ್ಯಾಂಕ್ ಅಧ್ಯಕ್ಷ ಮಹೇಂದ್ರಕುಮಾರ್ (ಬಾನು ) ಮಾಜಿ ತಾಪಂ ಸದಸ್ಯ ಎಂ ಚಂದ್ರಶೇಖರ,ಎಂ. ಪಿ. ಮರಿಸ್ವಾಮಿ, ಮಹದೇವ ಸ್ವಾಮಿ (ಅರವಿಂದ) ಎಂ. ಕೆ. ಸಿದ್ದರಾಜು, ನಾಗೇಂದ್ರ(ಪಂಟಿ ), ಎಂ. ಸಿದ್ದರಾಜು, ಎಂ. ಆರ್. ಸುಂದರ, ರಾಜುಜೋಶಿ, ಶಿವಶಂಕರಪ್ಪ, ರಮೇಶನಾಯಕ, ಕುರುಬರ ಬೀದಿ ಹರೀಶ್, ಮಹದೇವ ಸ್ವಾಮಿ, ಪೈಲ್ವಾನ್ ಸುಂದ್ರ, ಮಹಾದೇವನಾಯಕ(ಪೆಟ್ರೋಲ್ ) ಮಹೇಶ್ (ಕಾಳು )ಶಿವಕುಮಾರ್. ಡಿ. ಕೆ, ರಾಜು ಎಂ. ಎನ್. ಶಾಂತ ನಾಗರಾಜು,ಹೊಸಹಳ್ಳಿ ಚಿನ್ನಸ್ವಾಮಿ, ಮಂಟಯ್ಯ, ಚೆಲುವರಾಜು, ಮಹೇಶ್, ಮಧು, ನಿಂಗಣ್ಣ, ಮೋಹನ, ಸುನೀಲ್, ರಾಘು,ಮಹೇಶ್(ಬಾಣಪ್ಪ ), ಸಿದ್ದರಾಜು(ಸಿದ್ದ )ಮಾಧು, ಮುಂತಾದವರು ಹಾಜರಿದ್ದರು.

## ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ಮೈಸೂರು:** 2024-25ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ ಹಾಗೂ ಅಗ್ರಿಕಲ್ಚರ್ ಇಂಜಿನಿಯರಿಂಗ್ ಕೋಸ್ ನ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಮಾಜ ಕಲ್ಯಾಣ ಇಲಾಖಾ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಿ, ಅರ್ಜಿ ಸಲ್ಲಿಸಿದ 4 ದಿನಗಳೊಳಗೆ ಡೌನ್‌ಲೋಡ್ ಮಾಡಿದ ಅರ್ಜಿಯೊಂದಿಗೆ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್, ಮೂಲ ಅಂಕಪಟ್ಟಿಗಳ ದೃಢೀಕೃತ ಜೆರಾಕ್ಸ್ ಪ್ರತಿ (ಎಲ್ಲಾ ಸೆಮಿಸ್ಟರ್‌ಗಳ ಅಂಕಪಟ್ಟಿ), ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಹಾಗೂ ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯನ್ನು ಡೌನ್‌ಲೋಡ್ ಮಾಡಿ ಕಾಲೇಜು ಪ್ರಾಂಶುಪಾಲರ ಸಹಿ ಹಾಗೂ ಮೊಹರಿನೊಂದಿಗೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಅಥವಾ ಜಿಲ್ಲೆಯ ಆಯಾ ತಾಲೂಕು ಸಹಾಯಕ ನಿರ್ದೇಶಕರುಗಳ ಕಚೇರಿಗೆ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ಸಿಎಂ ಸಿದ್ದರಾಮಯ್ಯ ತೇಜೋವಧೆಗೆ ಖಂಡನೆ

# ಇಂದು ರಾಜಭವನ ಚಲೋ

**ಮಂಡ್ಯ:** ಮುಖ್ಯಮಂತ್ರಿ ಸಿದ್ದರಾಮಯ್ಯ ತೇಜೋವಧೆ ಖಂಡಿಸಿ, ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಹುನ್ನಾರ ನಡೆಸುತ್ತಿರುವ ಬಿಜೆಪಿ-ಜೆಡಿಎಸ್ ಕುತಂತ್ರಗಳನ್ನು ವಿರೋಧಿಸಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ವತಿಯಿಂದ ಮಂಗಳವಾರ (ಆ.27ರಂದು) ಬೆಂಗಳೂರಿನ ಫ್ರೀಡಂ ಪಾರ್ಕ್ ನಿಂದ ರಾಜಭವನ ಚಲೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.



ಈ ಕಾರ್ಯಕ್ರಮಕ್ಕೆ ಶೋಷಿತ ಸಮುದಾಯ, ಅಹಿಂದ ಮುಖಂಡರು ಮತ್ತು ಸಿದ್ದರಾಮಯ್ಯನವರ ಅಭಿಮಾನಿಗಳು ಮಂಡ್ಯ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂ ಪ್ರೇರಿತರಾಗಿ ಭಾಗವಹಿಸಿ ರಾಜಭವನ ಚಲೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಮಂಡ್ಯ ಜಿಲ್ಲಾಧ್ಯಕ್ಷ ಕೆ.ಹೆಚ್. ನಾಗರಾಜು ಮನವಿ ಮಾಡಿದ್ದಾರೆ.

ಮಂಡ್ಯ ನಗರದ ಕುರುಬರ ಸಂಘದ ಕಚೇರಿಯಲ್ಲಿ ರಾಜಭವನ ಚಲೋ ಬಗ್ಗೆ ಕರೆದಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ರಾಜಭವನವನ್ನು ದುರ್ಬಳಕೆ ಮಾಡಿ ರಾಜ್ಯ ಸರ್ಕಾರವನ್ನು ಅಸ್ಥಿರ ಗೊಳಿಸುವ ಕೆಲಸವನ್ನು ಈ ತಕ್ಷಣವೇ ನಿಲ್ಲಿಸಬೇಕು. ಸಂವಿಧಾನ ಮತ್ತು ಒಕ್ಕೂಟ ತತ್ವದ ವಿರೋಧಿಯಾದ ರಾಜ್ಯಪಾಲರನ್ನು ಮೋದಿ ಸರ್ಕಾರ ಕೂಡಲೆ ವಾಪಸ್ಸು ಕರೆಸಿಕೊಳ್ಳಬೇಕು. ಸಿದ್ದರಾಮಯ್ಯರವರ ಪ್ರಾಸಿಕ್ಯೂಷನ್ ಅನುಮತಿ ಹಿಂಪಡೆ ಯಬೇಕು, ಪ್ರಜಾಪ್ರಭುತ್ವ ಒಕ್ಕೂಟದ ವ್ಯವಸ್ಥೆ ಮತ್ತು ರಾಜ್ಯ ಸರ್ಕಾರದ ಸಾರ್ವಭೌಮತೆಯನ್ನು ಸಂರಕ್ಷಿಸಬೇಕು. ಕನ್ನಡ ನಾಡಿನ ಘನತೆಯನ್ನು ಕಾಪಾಡಬೇಕೆಂದು ಆಗ್ರಹಿಸಿದರು.

ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುವಾಗ ಸಂವಿಧಾನದ ಮೂಲ ತತ್ವಗಳನ್ನು ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿದ್ದಾರೆ. ರಾಜಭವನವನ್ನು ಕೋಮುವಾದಿ ರಾಜಕಾರಣಕ್ಕೆ ಬಳಸಿಕೊಳ್ಳುತ್ತಿರುವ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಕಛೇರಿಯನ್ನಾಗಿ ಪರಿವರ್ತಿಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ರಾಜ್ಯಪಾಲರು ಬಿಜೆಪಿ-ಜೆಡಿಎಸ್ ಪಕ್ಷಗಳ ತಾಳಕ್ಕೆ ಕುಣಿಯುತ್ತಿರುವುದಷ್ಟೆ ಅಲ್ಲ ತೀವ್ರ ಪಕ್ಷಪಾತಧೋರಣೆಯನ್ನು ತಾಳಿದ್ದಾರೆ. ಜನರಿಂದ ಆಯ್ಕೆಯಾದ ಸರ್ಕಾರದ ಮುಖ್ಯಸ್ಥರಾಗಿರುವ ಮುಖ್ಯಮಂತ್ರಿಗಳ ವಿರುದ್ಧ ನಡೆಯುತ್ತಿರುವ ಪಿತೂರಿ- ಷಡ್ಯಂತ್ರಗಳ ಭಾಗವಾಗಿದ್ದಾರೆ. ಆ ಮೂಲಕ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನವನ್ನು ದುಷ್ಟರು, ಭ್ರಷ್ಟರೂ ಆದ ಬಿಜೆಪಿ-ಜೆಡಿಎಸ್ ಪಕ್ಷಗಳ ಹಿತಾಸಕ್ತಿಗೆ ಅಡವಿಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮುಡಾ ವಿಚಾರದಲ್ಲಿ ಒಂದು ಸೂಜಿ ಮೊನೆಯಷ್ಟೂ ತಪ್ಪು ಮಾಡಿಲ್ಲವೆಂದು ಇಡೀ ರಾಜ್ಯದ ಜನ ಹೇಳುತ್ತಿದ್ದಾರೆ ಹಾಗು ಸರ್ಕಾರಿ ದಾಖಲೆಗಳೂ ಹೇಳುತ್ತಿವೆ. ಆದರೆ ರಾಜಕೀಯ ದುರುದ್ದೇಶದಿಂದ ಬಿಜೆಪಿ-ಜೆಡಿಎಸ್‌ಗಳು ಸಿದ್ದರಾಮಯ್ಯನವರ ತೇಜೋವಧೆ ಮಾಡುತ್ತಲೇ ಹೊರಟಿದ್ದಾರೆ ಎಂದು ಹೇಳಿದರು.

ಮಂಡ್ಯ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಎಂ.ಎಲ್.ಸುರೇಶ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಅಭಿಯೋಜನೆಗೆ ಅನುಮತಿ ನೀಡಿರುವುದನ್ನು ವಿರೋಧಿಸಿ ಆ.27ರಂದು ರಾಜಭವನ ಚಲೋ ಹಮ್ಮಿಕೊಳ್ಳ ಲಾಗಿದೆ. ಈ ಕಾರ್ಯಕ್ರಮಕ್ಕೆ ಮಂಡ್ಯ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸಬೇಕೆಂದು ಮನವಿ ಮಾಡಿದರು.

ಕೇಂದ್ರ ಸರ್ಕಾರ ರಾಜಭವನವನ್ನು ದುರ್ಬಳಕೆ ಮಾಡಿ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಕೆಲಸವನ್ನು ಈ ತಕ್ಷಣವೇ ನಿಲ್ಲಿಸಬೇಕು. ಸಂವಿಧಾನ ಮತ್ತು ಒಕ್ಕೂಟ ತತ್ವದ ವಿರೋಧಿಯಾದ ರಾಜ್ಯಪಾಲರನ್ನು ಪ್ರಧಾನಿ ಮೋದಿ ಸರ್ಕಾರ ಕೂಡಲೆ ವಾಪಸ್ಸು ಕರೆಸಿಕೊಳ್ಳಬೇಕು,ಮುಖ್ಯಮಂತ್ರಿ ಸಿದ್ದರಾಮಯ್ಯರವರ ಅಭಿಯೋಜನೆಗೆ ಅನುಮತಿ ಹಿಂಪಡೆಯಬೇಕು ಎಂದು ಆಗ್ರಹಿಸಿದರು. ಶೋಷಿತ ಸಮುದಾಯಗಳ ಮುಖಂಡರಾದ ವಿಜಯಲಕ್ಷ್ಮಿ ರಘುನಂದನ್, ಅಮ್ಜದ್ ಪಾಷ, ಎಲ್.ಸಂದೇಶ್, ಸಾತನೂರು ಕೃಷ್ಣ, ರಾಜು, ರಮೇಶ್, ರಾಜಣ್ಣ, ಮರಿಹೆಗ್ಗಡೆ, ಎನ್. ದೊಡ್ಡಯ್ಯ,ಚಂದಗಾಲು ವಿಜಯಕುಮಾರ್,ಸುಂಡಹಳ್ಳಿ ಮಂಜುನಾಥ್, ಮಹೇಶ್,ಸುಮನ್,ನಾಗರತ್ನ ಮತ್ತಿತರರು ಭಾಗವಹಿಸಿದ್ದರು.

# ರಸ್ತೆ ದುರಸ್ತಿಗೆ ಆಗ್ರಹ

**ಬೇಲೂರು:** ಪ್ರತಿನಿತ್ಯ ಜನರು ಸಂಚರಿಸುವ ದಾರಿ ಕೆಸರುಮಯವಾಗಿದ್ದು, ಸಂಬಂಧ ಪಟ್ಟವರು ರಸ್ತೆಗೆ ಕಾಯಕಲ್ಪ ನೀಡಲು ಮೀನಾ-ಮೇಷ ಎಣಿಸುತ್ತಿದ್ದಾರೆ. ಶೀಘ್ರವೇ ರಸ್ತೆ ದುರಸ್ತಿಗೆ ಮುಂದಾಗಬೇಕು ಎಂದು ಗ್ರಾಮಸ್ಥರು ಪ್ರತಿಭಟನೆ ನಡೆಸಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ ಘಟನೆ ನಡೆದಿದೆ.

ತಾಲೂಕಿನ ಹೆಬ್ಬಾಳು ಗ್ರಾಮದಲ್ಲಿ ಹೀರೆಕೆರೆ ಸಮೀಪದಲ್ಲಿ ಸುಮಾರು ಹತ್ತಕ್ಕೂ ಹೆಚ್ಚಿನ ಮನೆಗಳು ನಿರ್ಮಾಣವಾಗಿದೆ. ವಿಶೇಷವಾಗಿ ಮಳೆಗಾಲದ ಸಂದರ್ಭದಲ್ಲಿ ಸಂಚರಿಸಲು ಸಾಧ್ಯವಾಗುತ್ತಿಲ್ಲ ಈ ಬಗ್ಗೆ ಸಂಬಂಧ ಪಟ್ಟವರು ಗಮನ ನೀಡಬೇಕು ಎಂದು ಕೆಸರಿನ ರಸ್ತೆಗಿಳಿದು ಪ್ರತಿಭಟನೆ ನಡೆಸಿದ ಅವರು ಗ್ರಾಮ ಪಂಚಾಯಿತಿ ಸೇರಿದಂತೆ ಎಲ್ಲಾ ಇಲಾಖೆಗಳ ವಿರುದ್ದ ಕಿಡಿಕಾರಿದರು. ಈ ಸಂದರ್ಭದಲ್ಲಿ ಮಾತನಾಡಿದ ಹೆಬ್ಬಾಳು ಗ್ರಾಮದ ಮುಖಂಡ ವೇದಮೂರ್ತಿ, ಕಳೆದ ಹತ್ತಾರು ವರ್ಷದಿಂದ ಹೀರೆಕೆರೆ ದಂಡೆಯಲ್ಲಿ ಬದಿಯಲ್ಲಿ ಸುಮಾರು 10 ಕ್ಕೂ ಹೆಚ್ಚಿನ ಮನೆಗಳನ್ನು ನಿರ್ಮಾಣ ಮಾಡಿಕೊಂಡು ಜೀವನ ನಡೆಸುತ್ತಿದ್ದಾರೆ. ಇಲ್ಲಿನ ಪ್ರಮುಖ ಉದ್ಯೋಗ ಹೈನುಗಾರಿಕೆಯಾಗಿದೆ. ಬೆಳಿಗ್ಗೆ ಮತ್ತು ಸಂಜೆ ಇಲ್ಲಿಂದ ಹಾಲು ತೆಗೆದುಕೊಂಡು ಡೈರಿಗೆ ಹಾಲು ಹಾಕುವುದು ನಿಜಕ್ಕೂ ಕಷ್ಟವಾಗಿದೆ. ಅಲ್ಲದೆ ವಿದ್ಯಾರ್ಥಿಗಳು ಸಮವಸ್ತ್ರವನ್ನು ಹಾಕಿಕೊಂಡು ಇಲ್ಲಿ ತಿರುಗಾಡುವಂತಿಲ್ಲ, ಮಕ್ಕಳು ಗೋಳು ದೇವರಿಗೆ ಪ್ರೀತಿಯಾಗಿದೆ. ವಿಶೇಷವಾಗಿ ವಯೋವೃದ್ಧರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗುವುದು ಹರಸಾಹಸವಾಗಿದೆ. ಕಳೆದ ಹತ್ತು ವರ್ಷದಿಂದ ನಮಗೆ ದಾರಿ ಬೇಕು ಎಂದು ಎಷ್ಟೋ ಭಾರಿ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಮತ್ತು ಶಾಸಕರು ಸೇರಿದಂತೆ ಲೋಕಸಭಾ ಸದಸ್ಯರಿಗೆ ದೂರು ನೀಡಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ, ನಿತ್ಯ ನರಕಯಾತನೆಯಾಗಿರುವ ಈ ರಸ್ತೆಯನ್ನು ದುರಸ್ತಿ ಮಾಡುವ ಮೂಲಕ ಕಾಯಕಲ್ಪ ನೀಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ತಾಲ್ಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಹುಲ್ಲೇನಹಳ್ಳಿ ಬಸವರಾಜ್ ಮಾತನಾಡಿ, ಗ್ರಾಮ ಪಂಚಾಯಿತಿಗಳು ಜನರಿಗೆ ಕನಿಷ್ಠ ಮೂಲಭೂತ ಸೌಲಭ್ಯವನ್ನು ನೀಡದೆ ಧೋರಣೆ ಅನುಸರಣೆ ಮಾಡುತ್ತಿದ್ದಾರೆ. ಇನ್ನು ಜನಪ್ರತಿನಿಧಿಗಳು ಭರವಸೆಗಳ ಮೇಲೆ ಭರವಸೆಗಳನ್ನು ನೀಡುತ್ತಾ ಓಟು ಪಡೆದು ಅಧಿಕಾರಕ್ಕೆ ಅಂಟಿಕೊಂಡಿದ್ದಾರೆ, ಜನಸಾಮಾನ್ಯರ ಕಷ್ಟಗಳ ಬಗ್ಗೆ ಅವರು ಖುದ್ದು ಭೇಟಿ ನೀಡಿದರೆ ಮಾತ್ರ ಅವರಿಗೆ ತಿಳಿಯುತ್ತದೆ. ಕನಿಷ್ಠ ರಸ್ತೆಗೆ ಕಾಯಕಲ್ಪ ನೀಡಿದ ಇಲಾಖೆಗಳ ಸೋಗಲಾಡಿತನಕ್ಕೆ ಇಂದು ಧಿಕ್ಕಾರ ಹಾಕಿದೆ. ಶೀಘ್ರವೇ ರಸ್ತೆಗೆ ದುರಸ್ತಿ ಮಾಡಬೇಕು ಇಲ್ಲವಾದರೆ ಮುಂದಿನ ದಿನದಲ್ಲಿ ಹೋರಾಟ ಉಗ್ರವಾಗಿ ನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ದೊಡ್ಡಬ್ಯಾಡಿಗೆರೆ ಗ್ರಾಮದ ಮುಖಂಡ ಉಮೇಶ್, ಎಪಿಎಂಸಿ ಮಾಜಿ ಸದಸ್ಯ ಆನಂದಕುಮಾರ್,ಶಿವಕುಮಾರ್, ಕುಮಾರ್, ಮೋಹನ್‌ಕುಮಾರ್, ಶಂಕರೇಗೌಡ ಇನ್ನು ಮುಂತಾದವರು ಭಾಗವಹಿಸಿದ್ದರು.



# ಭೂ ವರಾಹ ದರ್ಶನ ಪಡೆದ ವಿಜಯಶಂಕರ್

**ಕೆ.ಆರ್.ಪೇಟೆ:** ತಾಲೂಕಿನ ಪುರಾಣ ಪ್ರಸಿದ್ಧ ಪುಣ್ಯ ಕ್ಷೇತ್ರ ಕಲ್ಲಹಳ್ಳಿ ಭೂವರಹನಾಥ ಶ್ರೀ ಕ್ಷೇತ್ರಕ್ಕೆ ಮೇಘಾಲಯ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಅವರು ಭೇಟಿ ನೀಡಿ ದೇವರ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು.

ಈ ವೇಳೆ ದೇವಾಲಯದ ಮ್ಯಾನೇಜಿಂಗ್ ಟ್ರಸ್ಟಿ ಶ್ರೀನಿವಾಸ ರಾಘವನ್ ನೀಡಿದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಮೇಘಾಲಯ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಅವರು ಭೂ ವರಹನಾಥ ಕ್ಷೇತ್ರವು ರಾಜ್ಯದ ಪ್ರಮುಖ ತೀರ್ಥ ಕ್ಷೇತ್ರವಾಗಿ ಅಭಿವೃದ್ಧಿ ಹೊಂದುತ್ತಿದೆ. 2ನೇ ಭೂವೈಕುಂಠ ವೆಂದೇ ಪ್ರಖ್ಯಾತಿ ಗಳಿಸಿರುವ ಕ್ಷೇತ್ರದ ಮಣ್ಣಿಗೆ ವಿಶೇಷ ಶಕ್ತಿಯಿದೆ. ಕಳೆದ ಆರು ತಿಂಗಳ ಹಿಂದೆ ಒಬ್ಬ ಸಾಮಾನ್ಯ ವ್ಯಕ್ತಿಯಾಗಿ ಕ್ಷೇತ್ರಕ್ಕೆ ಬಂದು ಸ್ವಾಮಿಯ ಶಿಲಾ ಮೂರ್ತಿಗೆ ಪೂಜೆ ಸಲ್ಲಿಸಿ ಹೋಗಿದ್ದೆ. ಭೂ ವರಹನಾಥ ಸ್ವಾಮಿಯ ಕೃಪೆ ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮು ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಆಶೀರ್ವಾದದ ಬಲದಿಂದ ಇಂದು ರಾಜ್ಯಪಾಲ ಹುದ್ದೆಗೇರಿದ್ದೇನೆ. ಪುಣ್ಯ ಕ್ಷೇತ್ರಕ್ಕೆ ಭೇಟಿ ನೀಡಿದ್ದು ಸಂತೋಷ ತಂದಿದೆ ಹಾಗೂ ಸಂತೃಪಿಯ ಮನೋಭಾವನೆ ಮೂಡಿದೆ ಎಂದು ಸಿ.ಹೆಚ್. ವಿಜಯಶಂಕರ್ ಹೇಳಿದರು.



ಮೇಘಾಲಯ ರಾಜ್ಯವು ಪ್ರವಾಸಿ ತಾಣವಾಗಿದ್ದು, ಪ್ರಧಾನಿ ಮೋದಿಜಿ ಅವರ ಸೂಚನೆಯಂತೆ ಬುಡಕಟ್ಟು ಜನರ ಬಳಿಗೆ ಹೋಗಿ ಸಮಸ್ಯೆ ಆಲಿಸಿ, ರಾಜ ಭವನವನ್ನು ಶ್ರೀ ಸಾಮಾನ್ಯರ ಪ್ರವೇಶಕ್ಕೆ ಮುಕ್ತಗೊಳಿಸಿ ಸಂವಿಧಾನದ ಅಡಿಯಲ್ಲಿ ಬದ್ಧತೆಯಿಂದ ಕೆಲಸ ಮಾಡಿ ಮೈಸೂರಿನ ಕೀರ್ತಿಯನ್ನು ರಾಷ್ಟ್ರದ್ಯಂತ ಬೆಳಗಲು ಸಂಕಲ್ಪ ಮಾಡಿದ್ದೇನೆ ಎಂದು ವಿಜಯಶಂಕರ್ ಹೇಳಿದರು.

ಶ್ರೀ ಕ್ಷೇತ್ರಕ್ಕೆ ಆಗಮಿಸಿದ ರಾಜ್ಯಪಾಲ ವಿಜಯಶಂಕರ್ ಅವರನ್ನು ಮಾಜಿ ಸಚಿವ ಡಾ. ಕೆ.ಸಿ.ನಾರಾಯಣಗೌಡ, ದೇವಾಲಯ ವ್ಯವಸ್ಥಾಪನ ಸಮಿತಿಯ ಮ್ಯಾನೇಜಿಂಗ್ ಟ್ರಸ್ಟಿ ಶ್ರೀನಿವಾಸ ರಾಘವನ್, ತಹಸೀಲ್ದಾರ್ ಆದರ್ಶ ಹೃದಯಸ್ಪರ್ಶಿಯಾಗಿ ಸ್ವಾಗತಿಸಿ ಬರಮಾಡಿಕೊಂಡರು. ಪೂರ್ಣಕುಂಭ ಸ್ವಾಗತದೊಂದಿಗೆ ವೇದಮಂತ್ರಗಳನ್ನು ಪಠಿಸಿ ಶ್ರೀ ಕ್ಷೇತ್ರಕ್ಕೆ ಆಗಮಿಸಿದ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಅವರನ್ನು ಬರಮಾಡಿಕೊಳ್ಳ ಲಾಯಿತು. ಈ ಸಂದರ್ಭದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಕೆ.ಶ್ರೀನಿವಾಸ್, ತಾಲ್ಲೂಕು ಬಿಜೆಪಿ ಅಧ್ಯಕ್ಷ ಸಾರಂಗಿ ನಾಗಣ್ಣ, ಕಾರ್ಯದರ್ಶಿ ಚೋಕನಹಳ್ಳಿ ಪ್ರಕಾಶ್, ಉಪಾಧ್ಯಕ್ಷ ಭಾರತೀಪುರ ಭಾರತೀಪುರ ಪುಟ್ಟಣ್ಣ, ಜಿಲ್ಲಾ ಬಿಜೆಪಿ ನೇಕಾರ ಮೋರ್ಚಾ ಅಧ್ಯಕ್ಷ ಬಿಗ್‌ಬಾಸ್ ಮೋಹನ್, ಜಿಲ್ಲಾ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಶೀಳನೆರೆ ಭರತ್, ತಾಲ್ಲೂಕು ಬಿಜೆಪಿ ಮಾಜಿ ಅಧ್ಯಕ್ಷ ಬಿ.ವರದರಾಜೇಗೌಡ, ರಾಜ್ಯ ಬಿಜೆಪಿ ಮಾಜಿ ಉಪಾಧ್ಯಕ್ಷೆ ಪ್ರಮೀಳಾವರದರಾಜೇಗೌಡ, ಪುರಸಭೆ ಸದಸ್ಯ ಕೆ.ಎಸ್.ಸಂತೋಷ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ನೂರಾರು ಅಭಿಮಾನಿಗಳು ಭಾಗವಹಿಸಿದ್ದರು.

## ತೆಳ್ಳನೂರಿನಲ್ಲಿ ಶನೇಶ್ವರ ಉತ್ಸವ

**ಸಂತೇಮರಹಳ್ಳಿ :** ತೆಳ್ಳನೂರು ಗ್ರಾಮದಲ್ಲಿ ಶ್ರೀ ಶನೇಶ್ವರ ಉತ್ಸವ ಬಹಳ ವಿಜೃಂಭಣೆಯಿಂದ ನೆರವೇರಿತು. ಶ್ರೀ ಶನೇಶ್ವರ ಫೋಟೋವನ್ನು ಹೂವಿನ ಅಲಂಕಾರದಿಂದ ಶೃಂಗಾರ ಮಾಡಿ ಶ್ರೀ ಶಂಭುಲಿಂಗೇಶ್ವರ ದೇವಾಲಯದಿಂದ ಹೊರಟು ಗ್ರಾಮದ ಪ್ರಮುಖ



ಬೀದಿಗಳಲ್ಲಿ ಮೆರವಣಿಗೆ ಮುಖಾಂತರ ಹೊರಟು ಗ್ರಾಮದ ಬೀದಿಗಳಲ್ಲಿ ರಂಗೋಲಿ, ತಳಿರು ತೋರಣಗಳಿಂದ ಶೃಂಗಾರ ಮಾಡಿ ತಮಟೆ, ಡೋಲು ವಾದ್ಯಗಳ ಸಮೇತ ಊರಿನ ಪ್ರಮುಖ ರಸ್ತೆಗಳಲ್ಲಿ ಸಾಗುತ್ತಾ ಭಕ್ತರು ದೇವರ ದರ್ಶನ ಪಡೆದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು ಮಾತನಾಡಿ ಇದೇ ರೀತಿ ಪ್ರತಿ ವರ್ಷ ಗ್ರಾಮದಲ್ಲಿ ಆಚರಣೆ ಮಾಡುವ ನಿರೀಕ್ಷೆ ಇದ್ದು ಈ ಒಂದು ಉತ್ಸವಕ್ಕೆ ಗ್ರಾಮದಲ್ಲಿ ಜಾತಿ ಬೇಧ ಮರೆತು ಒಗ್ಗಟ್ಟಿನಿಂದ ಉತ್ಸವ ಆಚರಿಸಲಾಯಿತು. ಈ ವೇಳೆಯಲ್ಲಿ ದೇವರ ದರ್ಶನ ಪಡೆದ ಸಾವಿರಾರು ಭಕ್ತರಿಗೆ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಯಿತು ಎಂದು ತಿಳಿಸಿದರು.

# ಹೊಸೂರಿನಲ್ಲಿ ಕೃಷ್ಣ ಜಯಂತಿ



**ಹೊಸೂರು :** ಶ್ರೀ ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಸಾಲಿಗ್ರಾಮ ತಾಲೂಕಿನ ಹೊಸೂರು ಗ್ರಾಮದ ಶ್ರೀ ಕೊಳಲು ವೇಣುಗೋಪಾಲ ಸ್ವಾಮಿ ದೇವಾಲಯದಲ್ಲಿ ಎಂದು ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಬ್ರಾಹ್ಮೀ ಮುಹೂರ್ತದಲ್ಲಿ ವೇಣುಗೋಪಾಲಸ್ವಾಮಿಗೆ ವಿಶೇಷ ಅಭಿಷೇಕ ಮತ್ತು ಹೂವಿನ ಅಲಂಕಾರಗಳ ಮೂಲಕ ವಿವಿಧ ಪೂಜೆಗಳನ್ನು ನೆರವೇರಿಸಲಾಯಿತು. ಜನ್ಮಾಷ್ಟಮಿಯ ಅಂಗವಾಗಿ ದೇವಾಲಯದಲ್ಲಿ ಪ್ರಸಾದ ವಿನಿಯೋಗ ಮಾಡಲಾಯಿತು. ಗ್ರಾಮದ ಹಿಪ್ಪೋ ಕ್ಯಾಂಪಸ್ ಶಾಲೆಯ ಪುಟಾಣಿ ಮಕ್ಕಳು ರಾಧಾಕೃಷ್ಣ ವೇಷಭೂಷಣಗಳನ್ನು ಧರಿಸಿ ದೇವಾಲಯದಲ್ಲಿ ಓಡಾಡುತ್ತಿದ್ದದ್ದು ನಿಜ ದೈವವನ್ನು ಜ್ಞಾಪಿಸುವಂತಿತ್ತು.

## ಬಸ್‌ಗಳಲ್ಲಿ ಆನ್‌ಲೈನ್ ಪೇಮೆಂಟ್‌ಗೆ ಆಗ್ರಹ

**ಹುಣಸೂರು:** ಸರ್ಕಾರಿ ಬಸ್‌ಗಳಲ್ಲಿ ಆನ್ಲೈನ್ ಮೂಲಕ ಹಣ ಸಂದಾಯ ಮೂಡುವ ವ್ಯವಸ್ಥೆ ಜಾರಿಮಾಡುವ ಮೂಲಕ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕೆಂದು ಜನಧ್ವನಿ ಫೌಂಡೇಶನ್ ಅಧ್ಯಕ್ಷ, ವಕೀಲ ಆಯರಹಳ್ಳಿ ಪ್ರವೀಣ್ ಆಗ್ರಹಿಸಿದ್ದಾರೆ. ಈ ಹಿಂದೆಯೂ ಕೂಡ ಸಾರಿಗೆ ಸಚಿವರನ್ನು ಭೇಟಿ ಮಾಡಿ ಬಸ್‌ಗಳಲ್ಲಿ ಆನ್ಲೈನ್ ಮೂಲಕ ಹಣ ಸಂದಾಯ ಮಾಡುವಂತೆ ಆದೇಶ ಹೊರಡಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿ ಈ ರೀತಿಯ ವ್ಯವಸ್ಥೆ ಜಾರಿಗೆ ಬಂದರೆ ನಿರ್ವಾಹಕರಿಗೆ ಹಾಗೂ ಪ್ರಯಾಣಿಕರಿಗೆ ಇಬ್ಬರಿಗೂ ಅನುಕೂಲವಾಗಲಿದೆ ಎಂದರು.

# ಆಲಂಬಾಡಿಕಾವಲು ಡೇರಿಗೆ ನಿರ್ದೇಶಕರ ಆಯ್ಕೆ

**ಕೆ.ಆರ್.ಪೇಟೆ:** ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಆಲಂಬಾಡಿಕಾವಲು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ 2024-2029ನೇ ಸಾಲಿನ ಆಡಳಿತ ಮಂಡಳಿಯ ಸ್ಥಾನಗಳಿಗೆ 13ಮಂದಿ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ಸಾಮಾನ್ಯ ಕ್ಷೇತ್ರದಿಂದ ನಿರ್ದೇಶಕರಾಗಿ ದಿವಾಕರ್.ಕೆ.ಮಾಸ್ತಿಗೌಡ, ಅಬ್ದುಲ್ ಫಜುಲು, ಮಂಜುನಾಥ್.ಎ.ಎಂ, ಮಹಬೂಬ್ ಖಾನ್(ಪಠಾಣ್‌ಬಾಬು), ಎನ್.ಕೃಷ್ಣೇಗೌಡ, ಚನ್ನಕೃಷ್ಣ, ಎಸ್ .ಪ್ರಭಾಕರ್ ಆಯ್ಕೆಯಾದರು. ಮಹಿಳಾ ಮೀಸಲು ಕ್ಷೇತ್ರದಿಂದ ಯಶೋಧಮ್ಮಶಿವಣ್ಣೇಗೌಡ, ಭಾನಮತಿಜಯರಾಮೇಗೌಡ, ಬಿಸಿಎಂ.ಎ ಮೀಸಲು ಕ್ಷೇತ್ರದಿಂದ ಎಂ.ಮೋಹನ್, ಕೆ.ಕೃಷ್ಣೇಗೌಡ, ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಎ.ಎಸ್.ಸಂತೋಷ್‌ಕುಮಾರ್, ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಜಗದೀಶ್ ಅವರು ಅವಿರೋಧವಾಗಿ ಆಯ್ಕೆಗೊಂಡಿರುತ್ತಾರೆ ಎಂದು ಚುನಾವಣಾಧಿಕಾರಿ ಭರತ್‌ಕುಮಾರ್ ತಿಳಿಸಿದ್ದಾರೆ.

ನೂತನ ಎಲ್ಲಾ 13ಮಂದಿ ನಿರ್ದೇಶಕರನ್ನು ಸನ್ಮಾನಿಸಿ ಗೌರವಿಸಿ ಮಾತನಾಡಿದ ಸಮಾಜ ಸೇವಕರು ಹಾಗೂ ಆರ್.ಟಿ.ಓ ಅಧಿಕಾರಿಗಳಾದ ಮಲ್ಲಿಕಾರ್ಜುನ್ ಅವರು ನಮ್ಮ ಆಲಂಬಾಡಿಕಾವಲು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘವು ನೂತನವಾಗಿ ಅಸ್ತಿತ್ವಕ್ಕೆ ಬಂದಿದ್ದು, ಸಂಘದ ಆಡಳಿತ ಮಂಡಳಿಯ ಎಲ್ಲಾ 13ಸ್ಥಾನಗಳಿಗೆ ಗ್ರಾಮದ ಎಲ್ಲಾ ಸಮುದಾಯದ ವರ್ಗದ ಜನರಿಂದ ಕೂಡಿದ ನಿರ್ದೇಶಕ ಮಂಡಳಿಯನ್ನು ಎಲ್ಲಾ ಜನಾಂಗದ ಯಜಮಾನರುಗಳನ್ನು ಹಾಗೂ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವಿರೋಧವಾಗಿ ಆಯ್ಕೆ ಮಾಡಿರುವುದು ಶ್ಲಾಘನೀಯ ವಿಚಾರವಾಗಿದೆ. ಇದೇ ರೀತಿ ಅಧ್ಯಕ್ಷರು-ಉಪಾಧ್ಯಕ್ಷರು ಹಾಗೂ ಸಂಘದ ನೌಕರರನ್ನು ಆಯ್ಕೆ ಮಾಡಿಕೊಂಡು ಸಂಘದ ಅಭಿವೃದ್ಧಿಗೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಸಂಘದಲ್ಲಿ ರಾಜಕೀಯ ಬೆರೆಸದೇ ಎಲ್ಲರೂ ಪರಸ್ಪರ ಸಹಕಾರ ಹಾಗೂ ಸೇವಾ ಭಾವನೆಯಿಂದ ಸಂಘದ ಏಳಿಗೆಗೆ ಕೈಜೋಡಿಸಬೇಕು ಎಂದು ಆರ್.ಟಿ.ಓ ಮಲ್ಲಿಕಾರ್ಜುನ್ ಸಲಹೆ ನೀಡಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎ.ಎಂ.ಸಂಜೀವಪ್ಪ ಮಾತನಾಡಿ ಗ್ರಾಮದವರೇ ಆದ ಆರ್.ಟಿ.ಓ ಮಲ್ಲಿಕಾರ್ಜುನ್ ಅವರು ಪ್ರಾಮಾಣಿಕ ಪ್ರಯತ್ನ ಮಾಡಿ, ಎಲ್ಲಾ ಎಲ್ಲಾ ಸಮುದಾಯದ ಬಂಧುಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಚರ್ಚೆ ನಡೆಸಿ, ಎಲ್ಲರಿಗೂ ಸಾಮಾಜಿಕ ನ್ಯಾಯದ ಅಡಿಯಲ್ಲಿ ನಿರ್ದೇಶಕರ ಸ್ಥಾನಗಳನ್ನು ಯಾವುದೇ ಲೋಪವಿಲ್ಲದೇ ಹಂಚಿಕೆ ಮಾಡಿದ ಪರಿಣಾಮ ಯಾವುದೇ ಚುನಾವಣೆ ಇಲ್ಲದೇ ಸಂಘಕ್ಕೆ 13ಮಂದಿ ನಿರ್ದೇಶಕರು ಇಂದು ನಿಗಧಿಯಾಗಿದ್ದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಮುಂದೆ ಅಧ್ಯಕ್ಷರು-ಉಪಾಧ್ಯಕ್ಷರು ಹಾಗೂ ನೌಕರರ ಆಯ್ಕೆಗೂ ಮಲ್ಲಿಕಾರ್ಜುನ್ ಅವರಿಗೇ ಸಂಪೂರ್ಣ ಅಧಿಕಾರ ನೀಡಿದ್ದೇವೆ ಅವರು ಯಾರನ್ನು ಆಯ್ಕೆ ಮಾಡುತ್ತಾರೋ ಅವರು ಅಧಿಕಾರ ವಹಿಸಿಕೊಂಡು ಸಂಘದ ಅಭಿವೃದ್ಧಿಗೆ ಒಳ್ಳೆಯ ಕೆಲಸ ಮಾಡಬೇಕು ಎಂದು ಸಂಜೀವಪ್ಪ ಸಲಹೆ ನೀಡಿದರು.

ಆಲಂಬಾಡಿಕಾವಲು ವಿ.ಎಸ್.ಎಸ್.ಎನ್ ಬ್ಯಾಂಕ್ ಮಾಜಿ ಅಧ್ಯಕ್ಷ ಸಿದ್ದಿಕ್ ಅಹಮದ್ ಮಾತನಾಡಿದರು.

ಈ ಸಂದರ್ಭದಲ್ಲಿ ತಾ.ಪಂ.ಮಾಜಿ ಸದಸ್ಯ ಎ.ಎಂ.ಸಂಜೀವಪ್ಪ, ವಿ.ಎಸ್.ಎಸ್.ಎನ್.ಬ್ಯಾಂಕ್ ಮಾಜಿ ಅಧ್ಯಕ್ಷ ಸಿದ್ದಿಕ್ ಅಹಮದ್, ಗ್ರಾಮ ಪಂಚಾಯಿತಿ ಸದಸ್ಯ ಎ.ರಾಜು, ರವಿ, ಡಿ.ಮಹಾದೇವ್, ಪ್ರಮೋದ್‌ಕುಮಾರ್, ತಾ.ಪಂ.ಮಾಜಿ ಸದಸ್ಯ ಮುತ್ತಮ್ಮ ನಾಗರಾಜು, ಮೂರ್ತಿ, ಎಸ್.ರವಿ, ಮತ್ತಿತರರು ಉಪಸ್ಥಿತರಿದ್ದರು.

ಚುನಾವಣಾಧಿಕಾರಿಯಾಗಿ ತಾಲ್ಲೂಕು ಸಹಕಾರ ಅಭಿವೃದ್ಧಿ ಅಧಿಕಾರಿ ಭರತ್‌ಕುಮಾರ್ ಕಾರ್ಯನಿರ್ವಹಿಸಿದರು.

# ಸಮಾಜಮುಖಿ ಕಾರ್ಯಗಳಿಗೆ ಆದ್ಯತೆ: ನಂದೀಶ್



**ಯಳಂದೂರು:** ಜಿಲ್ಲೆಯಲ್ಲಿ ಸಮಾಜಮುಖಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಿ ಸಾಮಾನ್ಯರಿಗೂ ಎಲ್ಲಾ ಸವಲತ್ತುಗಳನ್ನು ಕಲ್ಪಿಸಿಕೊಡಲು ಆದ್ಯತೆ ನೀಡಲಾಗುವುದು ಎಂದು ವೀರಶೈವ ಲಿಂಗಾಯಿತ ಮಹಾಸಭಾದ ನೂತನ ಜಿಲ್ಲಾಧ್ಯಕ್ಷ ಮುಡ್ಡುಪುರ ನಂದೀಶ್ ತಿಳಿಸಿದರು.

ಅವರು ಈಚೆಗೆ ಪಟ್ಟಣದ ಕಾರಾಪುರ ವಿರಕ್ತಮಠದಲ್ಲಿ ತಾಲೂಕು ವೀರಶೈವ ಮಹಾಸಭಾದ ವತಿಯಿಂದ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ನಮ್ಮ ಸಮಾಜದಲ್ಲಿ ಅನೇಕರಿಗೆ ಇನ್ನೂ ಮೂಲ ಸೌಲಭ್ಯಗಳು ಮರೀಚಿಕೆಯಾಗಿದೆ. ಇದನ್ನು ಕಲ್ಪಿಸಿಕೊಡಲು ಆದ್ಯತೆ ನೀಡಲಾಗುವುದು. ಇದರೊಂದಿಗೆ ಸಮಾಜಕ್ಕೆ ರಾಜಕೀಯವಾಗಿ ಇನ್ನಷ್ಟು ಬಲ ತುಂಬುವ ಕೆಲಸವನ್ನು ಮಾಡಲಾಗುವುದು. ಯುವಕರನ್ನು ಸಂಘಟಿಸಿ ಸಮಾಜಮುಖಿ ಕಾರ್ಯದಲ್ಲಿ ತೊಡಗಿಕೊಳ್ಳುವಂತೆ ಪ್ರೇರೇಪಣೆ ನೀಡಲಾಗುವುದು. ಬಸವಣ್ಣನವರು ಹಾಕಿಕೊಟ್ಟಿರುವ ಕಾಯಕ ತತ್ವದಡಿಯಲ್ಲಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಉತ್ಸುಕನಾಗಿದ್ದೇನೆ. ಎಲ್ಲಾ ಧಾರ್ಮಿಕ ಮುಖಂಡರ ಮಾರ್ಗದರ್ಶನವನ್ನು ಪಡೆದುಕೊಂಡು ಶೈಕ್ಷಣಿಕ, ಧಾರ್ಮಿಕ, ಆರ್ಥಿಕವಾಗಿ ಸಬಲಗೊಳಿಸುವ ಕೆಲಸವನ್ನು ಮಾಡಲಾಗುವುದು. ನಾನು 2 ನೇ ಬಾರಿಗೆ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷನಾಗಿ ಆಯ್ಕೆಯಾಗಿದ್ದು ಇದಕ್ಕೆ ಕಾರಣಕರ್ತರಾದ ನಮ್ಮ ಜಿಲ್ಲೆಯ ಎಲ್ಲಾ ಮತದಾರರಿಗೂ ಕೃತಜ್ಞತೆ ಸಲ್ಲಿಸುತ್ತೇನೆ. ಇವರು ನನ್ನಲ್ಲಿಟ್ಟಿರುವ ನಂಬಿಕೆಯನ್ನು ಹುಸಿಗೊಳಿಸದೆ ಅವರ ಕಷ್ಟಗಳಿಗೆ ಸದಾ ಕಾಲ ಸ್ಪಂದಿಸುತ್ತೇನೆ ಎಂದು ಭರವಸೆ ನೀಡಿದರು.

ಕಾರಾಪುರ ವಿರಕ್ತಮಠದ ನಿರಂಜನ ಬಸವರಾಜಸ್ವಾಮಿ ಒಡೆಯರ್ ಮಾತನಾಡಿ, ವೀರಶೈವ ಮಹಾಸಭಾಕ್ಕೆ ತನ್ನದೇ ಇತಿಹಾಸವಿದೆ. ಬಸವಣ್ಣನವರ ಕಾಯಕ ತತ್ವದಡಿಯಲ್ಲಿ ಈ ಸಂಘಟನೆ ವಿಶ್ವದಾದ್ಯಂತ ಕರ್ತವ್ಯ ನಿರ್ವಹಿಸುತ್ತಿದೆ. ರಾಷ್ಟ್ರ, ರಾಜ್ಯ, ಜಿಲ್ಲೆ, ತಾಲೂಕು ಹಾಗೂ ಗ್ರಾಮ ಮಟ್ಟದಲ್ಲೂ ಪದಾಧಿಕಾರಿಗಳನ್ನು ಹೊಂದಿರುವ ಈ ಸಂಘಟನೆಯ ನೂತನ ಅಧ್ಯಕ್ಷ ಮುಡ್ಡುಪುರ ನಂದೀಶ್ ಉತ್ತಮವಾಗಿ ಕರ್ತವ್ಯ ನಿರ್ವಹಿಸಬಲ್ಲ ಸಾಮರ್ಥ್ಯವನ್ನು ಹೊಂದಿರುವ ವ್ಯಕ್ತಿಯಾಗಿದ್ದು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸಮಾಜಮುಖಿ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಕೇಂದ್ರ ಸಮಿತಿ ನಿರ್ದೇಶಕ ಎನ್‌ರಿಚ್ ಮಹದೇವಸ್ವಾಮಿ ಮಾತನಾಡಿ, ವೀರಶೈವ ಲಿಂಗಾಯಿತರನ್ನು ಒಬಿಸಿ ಪಟ್ಟಿಗೆ ಸೇರಿಸಬೇಕು. ಈ ಬಗ್ಗೆ ಈಗಾಗಲೇ ಅನೇಕರು ಪ್ರಯತ್ನ ನಡೆಸುತ್ತಿದ್ದು ಇದಕ್ಕೆ ರಾಜಕೀಯವಾಗಿ ಹೆಚ್ಚು ಒತ್ತಡ ಹೇರುವ ಕೆಲಸವನ್ನು ಮಾಡಬೇಕು ಎಲ್ಲರ ವಿಶ್ವಾಸವನ್ನು ಪಡೆದುಕೊಂಡು ಕರ್ತವ್ಯ ನಿರ್ವಹಿಸಬೇಕು ಎಂದರು.

ಗೌಡಹಳ್ಳಿ ಮಠದ ಮರಿತೋಂಟದಾರ್ಯಸ್ವಾಮಿಜಿ, ಅಗರ ಕಲ್ಲುಮಠದ ಸಿದ್ದಮಲ್ಲಸ್ವಾಮಿ, ಕೆಸ್ತೂರು ಪಟ್ಟದ ಮಠದ ತೋಂಟದಾರ್ಯಸ್ವಾಮಜಿ ಚಾಮುಲ್ ಅಧ್ಯಕ್ಷ ನಾಗೇಂದ್ರ, ದುಗ್ಗಹಟ್ಟಿ ಪಿ. ವೀರಭದ್ರಪ್ಪ, ಕೇಂದ್ರ ಸಮಿತಿ ನಿರ್ದೇಶಕರಾದ ಎನ್‌ರಿಚ್ ಮಹದೇವಸ್ವಾಮಿ, ರೂಪಾ, ಮರಹಳ್ಳಿ ಮಾದಪ್ಪ ತಾಲೂಕು ವೀರಶೈವ ಮಹಾಸಭಾದ ಅಧ್ಯಕ್ಷ ಪುಟ್ಟಸುಬ್ಬಪ್ಪ, ಕೊತಸೋಗೆ ವಿ.ಎಂ. ಮಹದೇವಪ್ಪ, ಪುಟ್ಟಬಸಪ್ಪ, ವೀರಭದ್ರಸ್ವಾಮಿ, ಪ್ರಧಾನ ಕಾರ್ಯದರ್ಶಿ ಗೌಡಹಳ್ಳಿ ರವಿ, ಪ್ರಕಾಶ್, ಮಂಜು, ಅಗರ ಸುಬ್ಬಣ್ಣ ಮಹದೇವಸ್ವಾಮಿ ಸೇರಿದಂತೆ ಇತರರು ಇದ್ದರು.

## ನಾಡಿಗೆ ಸಮರ್ಪಿಸಿಕೊಂಡವರು ರಾಜೇಂದ್ರ ಶ್ರೀ

**ಮೈಸೂರು:** ರಾಜೇಂದ್ರ ಶ್ರೀಗಳು ನಾಡಿನ ಹಿತಕ್ಕಾಗಿ ಅವರ ಸಂಪೂರ್ಣ ಜೀವನವನ್ನು ಸಮರ್ಪಿಸಿಕೊಂಡವರು ಎಂದು ನಿವೃತ್ತ ಪ್ರಾಧ್ಯಾಪಕ ಡಾ.ಕೆ.ಅನಂತರಾಮು ತಿಳಿಸಿದರು. ಸುತ್ತೂರು ಮಠದಲ್ಲಿ ಶ್ರಾವಣ ಮಾಸದ 21ನೇ ದಿನ ಪ್ರವಚನ ನೀಡುತ್ತಾ ಮಾತನಾಡಿದ ಅವರು, ರಾಜೇಂದ್ರ ಶ್ರೀಗಳು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲ ನಡೆಯಬೇಕು. ಬದುಕಿಗೆ ಜಯ ತಂದುಕೊಡುವುದೇ ಜಯಂತಿ. ಪೂಜ್ಯರ ಆಶೀರ್ವಾದದಿಂದ ನಮ್ಮ ಬದುಕೂ ಜಯವಾಗಬೇಕು. ಇಹ-ಪರ, ಲೌಕಿಕ-ಪಾರಲೌಕಿಕ ಮತ್ತು ವ್ಯಾವಹಾರಿಕ-ಪಾರಮಾರ್ಥಿಕ ಬದುಕಿನ ಎಲ್ಲ ಮುಖಗಳಿಗೂ ಅವರ ಕೃಪೆಯಿರಬೇಕು. ಪೂಜ್ಯರಂತಹವರ ಪುಣ್ಯ ಪ್ರಭಾವದಿಂದ ಬದುಕು ಹಸನಾಗುತ್ತದೆ. ನಾಡಿನ ತುಂಬೆಲ್ಲ ಅವರ ಸೇವೆಯ ಹೆಜ್ಜೆಗುರುತುಗಳನ್ನು ಮೂಡಿಸಿದ್ದಾರೆ. ಪೂಜ್ಯರು ದೂರದರ್ಶಿಗಳು ಮತ್ತು ರಾಷ್ಟ್ರಮಾನ್ಯರಾಗಿದ್ದರು ಎಂದರು. ಅಧ್ಯಾತ್ಮಲೋಕದ ವ್ಯವಹಾರಿಗಳು ಹಾಗೂ ಯುಗಪುರುಷರು. ರಾಜೇಂದ್ರ ಶ್ರೀಗಳದು ಧರ್ಮ, ಜ್ಞಾನ, ಅನ್ನ, ವಿದ್ಯೆ, ಆರೋಗ್ಯ, ದಾಸೋಹಗಳ ಪಂಚಮುಖಿ ಸೇವೆ. ಪರೋಪಕಾರ ಇದಂ ಶರೀರಂ ಎಂಬಂತೆ ಬದುಕಿದವರು. ತ್ಯಾಗ, ಕರುಣೆ ಮತ್ತು ದಯೆಯಂತಹ ದೊಡ್ಡ ಗುಣಗಳನ್ನು ಹೊಂದಿದ್ದರು. ಅವರ ಆಶ್ರಯದಲ್ಲಿ ಲಕ್ಷಾಂತರ ವಿದ್ಯಾರ್ಥಿಗಳು ಶಿಕ್ಷಣ ಪಡೆದುಕೊಂಡು ಅವರವರ ಗುರಿಗಳನ್ನು ಸಾಧಿಸಿ, ಬದುಕು ಕಟ್ಟಿಕೊಂಡರು ಎಂದು ಹೇಳಿದರು.

ವಿದುಷಿ ವಸಂತ ವೆಂಕಟೇಶ್ ವಾಚನ ಮಾಡಿದರು. ಎಸ್. ಬಸವಲಿಂಗಸ್ವಾಮಿ ಮತ್ತು ಕುಟುಂಬವರ್ಗದವರು ಸೇವಾರ್ಥ ನೆರವೇರಿಸಿದರು. ಸಾಮೂಹಿಕ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಭಕ್ತಾದಿಗಳು ಹಾಗೂ ಆಧ್ಯಾತ್ಮಿಕ ಜಿಜ್ಞಾಸುಗಳು ಪಾಲ್ಗೊಂಡಿದ್ದರು.

# ಬಿಳಿಗಿರಿರಂಗನಬೆಟ್ಟದಲ್ಲಿ ಕಾನು ಲೋಕಾರ್ಪಣೆ

**ಚಾಮರಾಜನಗರ:** ಆದಿವಾಸಿಗಳ ಸಂಸ್ಕೃತಿ, ಚರಿತ್ರೆಯನ್ನು ಒಂದೇ ವೇದಿಕೆಯಲ್ಲಿ ಅಧ್ಯಾಯನ ಮಾಡುವ ಕಾನು ಬಿಳಿಗಿರಿರಂಗನಾಥ ಬೆಟ್ಟದಲ್ಲಿ ಲೋಕಾರ್ಪಣೆಗೊಂಡಿತು.

ಯಳಂದೂರು ತಾಲ್ಲೂಕಿನ ಬಿಳಿಗಿರಿರಂಗನಬೆಟ್ಟದ ಆದಿವಾಸಿ ಆರೋಗ್ಯ ಸಂಪನ್ಮೂಲ ಕೇಂದ್ರದಲ್ಲಿ ಜಿಲ್ಲಾ ಬುಟಕಟ್ಟು ಸಂಘ ಹಾಗೂ ಸರ್ಕಾರೇತರ ಸಂಸ್ಥೆಗಳ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಕಾನು ಕಾರ್ಯಕ್ರಮವನ್ನು ಐಪಿಎಚ್ ಫೌಂಡೇಶನ್ ನಿರ್ದೇಶಕ ಡಾ.ಪ್ರಶಾಂತ್ ಉದ್ಘಾಟಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಡಾ. ಪ್ರಶಾಂತ್, ದಕ್ಷಿಣ ಭಾರತದ ಬುಡಕಟ್ಟು ಜನರ ಚರಿತ್ರೆ ಮತ್ತು ಸಾಂಸ್ಕೃತಿಕ ಇತಿಹಾಸವನ್ನು ವಿಶ್ವಕ್ಕೆ ತಿಳಿಸುವ ನಿಟ್ಟಿನಲ್ಲಿ ಅದನ್ನು ದಾಖಲಿಸುವ ಕೆಲಸ ನಿರಂತರವಾಗಿ ಆಗಬೇಕು ಎಂದು ಹೇಳಿದರು.

ದಕ್ಷಿಣ ಭಾತರದ ಆದಿವಾಸಿ ಸಮೂಹ ತಮ್ಮದೇ ಆದ ನುಡಿ ಪರಂಪರೆ ಹೊಂದಿದೆ. ಕಾಡು ಕೇಂದ್ರಿತ ನೃತ್ಯ, ಹಾಡು-ಹಸೆ, ಓಲಗ, ಕಗ್ಗವನ್ನು ಕಾಡು ಜನರು ಉಳಿಸಿದ್ದಾರೆ. ನಿಸರ್ಗ ಸಂರಕ್ಷಣೆ ಮತ್ತುಧಾರ್ಮಿಕ ಆಚರಣೆಗಳನ್ನು ನಡೆಸಿಕೊಂಡು ಬಂದಿದ್ದಾರೆ. ಅಪಾರ ಗಿಡಮೂಲಿಕೆಗಳ ಜ್ಞಾನಭಂಡಾರವನ್ನು ಕಾಪಿಟ್ಟಿದ್ದಾರೆ. ಇಂತಹ ನೆಲ ಮೂಲ ಸಾಂಸ್ಕೃತಿಕ ಕಥನಗಳನ್ನು ಸೋಲಿಗಸಮುದಾಯ ದಾಖಲಿಸುವ ಮೂಲಕ, ಮುಂದಿನ ಪೀಳಿಗೆಗೂ ಉಳಿಸಬೇಕಿದೆ ಎಂದರು.

ಮಾಜಿ ಜಿಲ್ಲಾ ಪಂಚಾಯ್ತಿ ಉಪಾಧ್ಯಕ್ಷೆ ಕೇತಮ್ಮ ಮಾತನಾಡಿ ಭಾರತದಲ್ಲಿ ನೂರಾರು ಬುಡಕಟ್ಟುಗಳು ಇವೆ. ಆದರೆ. ಸೋಲಿಗರ ಜ್ಞಾನ ವೈಶಾಲ್ಯ ಹೆಚ್ಚಿನದು. ಇವರ ಪರಿಸರ ಪ್ರೀತಿ ದೊಡ್ಡದು. ಪ್ರಾಣಿ ಮತ್ತು ಸಸ್ಯವೈವಿಧ್ಯತೆಯ ಅನುಬಂಧದ ಸಹಚರ್ಯೆ ಜೊತೆಜೊತೆಯಾಗಿ ಸಾಗಿದೆ. ಕಾನು ಪರಿಕಲ್ಪನೆಯಲ್ಲಿಹಾಡಿ ಮಂದಿಯ ಕೌಶಲ, ಕೌಟುಂಬಿಕ ವ್ಯವಸ್ಥೆ, ಸಮೂಹ ಜೀವನದ ಬಗ್ಗೆ ಆಧುನಿಕ ತಂತ್ರಜ್ಞಾನಬಳಸಿಕೊಂಡು ರಕ್ಷಿಸಬೇಕು ಎಂದರು.

ಬುಡಕಟ್ಟು ಸಂಘದ ಜಿಲ್ಲಾ ಕಾರ್ಯದರ್ಶಿ ಡಾ. ಸಿ.ಮಾದೇಗೌಡ ಮಾತನಾಡಿ, ಒಂದೇ ವೇದಿಕೆಯಲ್ಲಿ ಕಾನು ಇಡಿ ಬುಡಕಟ್ಟು ಸಮಾಜದ ಕಥೆ ಹೇಳಲಿದೆ. 1200ಕ್ಕೂ ಹೆಚ್ಚು ಪುಸ್ತಕ, ಬ್ಲಾಗ್, ಪತ್ರಿಕೆ ಮತ್ತುಟಿಜಿಟಲ್ ಮೂಲಕ ಆದಿವಾಸಿಗಳ ಬದುಕು ಬವಣೆ ಬಿತ್ತರವಾಗಲಿದೆ. ಇದಕ್ಕೆ ಆದಿವಾಸಿ ಜ್ಞಾನಕೇಂದ್ರ ನೆರವಾಗಲಿದೆ. ಕಲಿತ ಕಾನನದ ಮಕ್ಕಳು ಈ ಪರಿಕಲ್ಪನೆಗೆ ಮತ್ತಷ್ಟು ಮೆರಗು ನೀಡಬೇಕುಎಂದು ಹೇಳಿದರು.

ತಮಿಳುನಾಡಿನ ಕೀ ಸ್ಟೋನ್ ಸಂಸ್ಥೆಯ ಸದಸ್ಯರು, ಗಿರಿಜನ ಸಂಶೋಧನ ಸಂಸ್ಥೆಯ ಲೇಖಕ ಕೃಷ್ಣಮೂರ್ತಿ, ಕೇರಳ ಸಂಶೋಧಿಕಿ ಆಶಾ, ಜಡೇಸ್ವಾಮಿ ಮುತ್ತಯ್ಯ ಕೊನೆರೇಗೌಡ, ಕೇತಮ್ಮ,ರಾಜಪ್ಪ, ದಾಸೇಗೌಡ ಇದ್ದರು.



## ನಗರಸಭೆ ಪೌರಾಯುಕ್ತ ಎಸ್.ವಿ. ರಾಮದಾಸ್ ಸಲಹೆ

# ಪೌರಕಾರ್ಮಿಕರು ಆರೋಗ್ಯ ಕಾಳಜಿ ವಹಿಸಿ



**ಚಾಮರಾಜನಗರ:** ನಗರ ಸ್ವಚ್ಚತಾ ಕಾರ್ಯದಲ್ಲಿ ದಿನಪೂರ್ತಿ ತೊಡಗಿಸಿಕೊಳ್ಳುವ ಪೌರಕಾರ್ಮಿಕರು ಶ್ರಮಜೀವಿಗಳಾಗಿದ್ದಾರೆ. ನಗರದ ಸ್ವಚ್ಚತೆಗಾಗಿ ಪೌರಕಾರ್ಮಿಕರಿಗೆ ಸಾರ್ವಜನಿಕರ ಸಹಕಾರವು ಅಗತ್ಯವಾಗಿದೆ. ಪೌರಕಾರ್ಮಿಕರು ದಿನನಿತ್ಯದ ಕಾಯಕದ ಜೊತೆಗೆ ತಮ್ಮ ವೈಯಕ್ತಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ನಗರಭಿವೃದ್ಧಿ ಕೋಶ ಹಾಗೂ ನಗರಸಭೆ ಸಹಯೋಗದಲ್ಲಿ ನಗರದ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿಂದು ಆಯೋಜಿಸಲಾಗಿದ್ದ ಪೌರಕಾರ್ಮಿಕರ ಕುಂದುಕೊರತೆ, ಸಂವಾದ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರ ಸಮಸ್ಯೆ, ಅಹವಾಲುಗಳನ್ನು ಆಲಿಸಿದರು.

ಆರಂಭದಲ್ಲಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ನಗರಸಭೆ ಆಯುಕ್ತರಾದ ಎಸ್.ವಿ. ರಾಮದಾಸ್ ಅವರು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರ ನಿರ್ದೇಶನದ ಮೇರೆಗೆ ನಗರಸಭೆ ವ್ಯಾಪ್ತಿಯ ಪೌರಕಾರ್ಮಿಕರ ಸಮಸ್ಯೆಗಳನ್ನು ಪರಿಹರಿಸಿ ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ ಕುಂದುಕೊರತೆ ಹಾಗೂ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪೌರಕಾರ್ಮಿಕರು ತಮ್ಮ ಕುಂದುಕೊರತೆ ಪರಿಹರಿಸಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ ಎಂದರು.

ಸಂವಾದ ಕಾರ್ಯಕ್ರಮದ ಭಾಗವಾಗಿ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಪೌರಕಾರ್ಮಿಕರು ಶಿಬಿರದ ಸದುಪಯೋಗ ಪಡೆಯಬೇಕು ಎಂದು ರಾಮದಾಸ್ ತಿಳಿಸಿದರು.

ಪೌರಕಾರ್ಮಿಕ ನಾಗರಾಜು ಮಾತನಾಡಿ ನಗರಸಭೆ ವತಿಯಿಂದ ಖಾಯಂ, ನೇರವೇತನ, ಗುತ್ತಿಗೆ ಪೌರಕಾರ್ಮಿಕರಿಗೆ ಪ್ರತಿ ತಿಂಗಳು 5ನೇ ತಾರೀಖಿನೊಳಗೆ ವೇತನ ನೀಡಬೇಕು. ಸಂಕ?ಟ ಭತ್ಯೆಯನ್ನು ವೇತನದ ಜೊತೆಗೆ ಪ್ರತಿ ತಿಂಗಳು ಪಾವತಿಸಬೇಕು. ನಗರಸಭೆಯಲ್ಲಿ 120 ಪೌರಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದು, ಸಮಾನ ಕೆಲಸಕ್ಕೆ ಸಮಾನ ವೇತನದಡಿ ಪೌರಕಾರ್ಮಿಕರನ್ನು ಖಾಯಂ ಸಕ್ರಮಗೊಳಿಸಲು ಕ್ರಮ ವಹಿಸಬೇಕು. 29ನೇ ವಾರ್ಡ್ ಪೌರಕಾರ್ಮಿಕರ ಕಾಲೋನಿಗೆ ರಸ್ತೆ, ಕುಡಿಯುವ ನೀರು, ಒಳಚರಂಡಿ ಸೌಲಭ್ಯವನ್ನು ಒದಗಿಸಬೇಕು. ಗೃಹಭಾಗ್ಯ ಯೋಜನೆಯಡಿ 24 ಖಾಯಂ ಪೌರಕಾರ್ಮಿಕರಿಗೆ ಮನೆ ನಿರ್ಮಿಸಿಕೊಡಬೇಕು ಎಂದು ಮನವಿ ಮಾಡಿದರು.

ಗುತ್ತಿಗೆ ಕಾರ್ಮಿಕರ ಕೆಲಸನಿರ್ವಹಿಸುತ್ತಿರುವ ಜೆ.ಸಿ.ಬಿ ವಾಹನ ಚಾಲಕ, ಕ್ಲೀನರ್‌ಗಳನ್ನು ಖಾಯಂಗೊಳಿಸಬೇಕು. ಹೊಸದಾಗಿ ನೇಮಕವಾಗಿರುವ 24 ಜನ ಖಾಯಂ ಪೌರಕಾರ್ಮಿಕರಿಗೆ ಎನ್.ಪಿ.ಎಸ್ ಪ್ರಾನ್ ಸಂಖ್ಯೆ ನೀಡಬೇಕು. ನಗರದ ಹೊರವಲಯದಲ್ಲಿರುವ ಆರ್‌ಟಿಒ ಕಚೇರಿ ಬಳಿ ಸರ್ವೆ ನಂ. 65ರಲ್ಲಿ ಪೌರಕಾರ್ಮಿಕರ ಬಡಾವಣೆ ನಿರ್ಮಾಣಕ್ಕಾಗಿ 2 ಎಕರೆ ಭೂಮಿ ಮಂಜೂರಾಗಿದ್ದು, ಅಲ್ಲಿಯೇ ಬಡಾವಣೆ ನಿರ್ಮಿಸಬೇಕು. ಖಾಯಂ ಮತ್ತು ನೇರ ಪಾವತಿ ಪೌರಕಾರ್ಮಿಕರಿಗೆ ತುರ್ತು ಸಂದರ್ಭದಲ್ಲಿ ಆರೋಗ್ಯದ ಸಮಸ್ಯೆ ಮತ್ತು ಅನಾಹುತಗಳು ಸಂಭವಿಸಿದಲ್ಲಿ ತಕ್ಷಣವೇ ಬಿಲ್ಲುಗಳನ್ನು ಪಾವತಿಸಬೇಕು. ಸಫಾಯಿ ಕರ್ಮಚಾರಿ ಜಾಗೃತಿ ಸಮಿತಿಗೆ ಪಟ್ಟಣ ಸದಸ್ಯರನ್ನಾಗಿ ಸ್ಥಳೀಯ ಪೌರಕಾರ್ಮಿಕರನ್ನು ನೇಮಿಸಬೇಕು. ಎಂದು ನಗರಸಭೆ ಆಯುಕ್ತರಿಗೆ ನಾಗರಾಜು ಅವರು ಅಹವಾಲು ಸಲ್ಲಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜು, ಹಿರಿಯ ವೈದ್ಯಾಧಿಕಾರಿ ಡಾ. ಮಹದೇವ್, ಆರೋಗ್ಯ ಇಲಾಖೆಯ ವೈದ್ಯರಾದ ಡಾ. ರಂಜಿತಾ, ನಗರ ಆರೋಗ್ಯ ಕೇಂದ್ರದ ವೈದ್ಯೆ ಡಾ. ರಿಯಾ ದಿಶಾನಿ ರೇ, ಶೇಖರ್, ನಗರಸಭೆ ಲೆಕ್ಕ ಅಧೀಕ್ಷಕ ರುದ್ರಮುನಿಸ್ವಾಮಿ, ಯೋಜನಾಧಿಕಾರಿ ವೆಂಕಟನಾಯಕ್ ಕಾರ್ಯಕ್ರಮದಲ್ಲಿ ಹಾಜರಿದ್ದರು.

### ಬೇಡಿಕೆ ಈಡೇರಿಕೆಗೆ ಯತ್ನ

**ಪೌರಕಾರ್ಮಿಕರ ಕುಂದು ಕೊರತೆ ಆಲಿಸಿ ಮಾತನಾಡಿದ ನಗರಸಭೆ ಪೌರಾಯುಕ್ತ ಎಸ್.ವಿ. ರಾಮದಾಸ್ ತಾಂತ್ರಿಕ ಕಾರಣಗಳನ್ನು ಸರಿಪಡಿಸಿ ಸಕಾಲದಲ್ಲಿ ವೇತನ ಪಾವತಿಸಲಾಗುವುದು. ಮುಂದಿನ ದಿನಗಳಲ್ಲಿ ಇದು ಮರುಕಳಿಸದಂತೆ ನೋಡಿಕೊಳ್ಳಲಾಗುವುದು. ಸಮಾನ ಕೆಲಸಕ್ಕೆ ಸಮಾನ ವೇತನ ಬೇಡಿಕೆ ಸರ್ಕಾರದ ಬಳಿಯಿದೆ. 2024ರ ಮೇ ಮಾಹೆವರೆಗೆ ಸಂಕ?ಟ ಭತ್ಯೆಯನ್ನು ನೀಡಲಾಗಿದ್ದು, ಸರ್ಕಾರದಿಂದ ಹಣ ಬಿಡುಗಡೆ ಆಗಬೇಕು. ಎಸ್‌ಎಫ್‌ಸಿ ಅನುದಾನ ಬಿಡುಗಡೆ ಬಳಿಕ ವೇತನದ ಜೊತೆಯೇ ನೀಡಲಾಗುವುದು. 35 ಪೌರಕಾರ್ಮಿಕರಿಗೆ ಮನೆ ನಿರ್ಮಿಸಲಾಗಿದೆ. ಇನ್ನು 24 ಮಂದಿಗೆ ಮನೆ ನಿರ್ಮಾಣಕ್ಕೆ 24 ಗುಂಟೆ ಭೂಮಿ ಮಂಜೂರಾಗಿದೆ. ನಗರಸಭಾ ವ್ಯಾಪ್ತಿಯ 9ನೇ ವಾರ್ಡ್‌ನಲ್ಲಿರುವ ಮನೆಗಳನ್ನು ಖುದ್ದಾಗಿ ಪರಿಶೀಲಿಸಿ ದುರಸ್ತಿಗೆ ಕ್ರಮ ವಹಿಸಲಾಗುವುದು. ಅಲ್ಲದೆ ಪೌರಕಾರ್ಮಿಕರ ಇತರೆ ಬೇಡಿಕೆಗಳನ್ನು ಪ್ರಾಮಾಣಿಕವಾಗಿ ಪರಿಹರಿಸಲು ಪ್ರಯತ್ನಿಸಲಾಗುವುದು ಎಂದು ರಾಮದಾಸ್ ತಿಳಿಸಿದರು.**

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2023-24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ (ರಾಜ್ಯ ಪಠ್ಯಕ್ರಮ./ಸಿ.ಬಿ.ಎಸ್.ಇ/ಐ.ಸಿ.ಎಸ್.ಇ) ಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಶೇ.60 ರಿಂದ ಶೇ.74.99 ಅಂಕ ಪಡೆದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ 7000 ರೂ. ಮತ್ತು ಶೇ.75ಕ್ಕಿಂತ ಹೆಚ್ಚು ಅಂಕ ಪಡೆದವರಿಗೆ 15,000 ರೂ. ಪ್ರೋತ್ಸಾಹ ಧನ ನೀಡಲಾಗುತ್ತಿದ್ದು, ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಯಾವುದೇ ಆದಾಯದ ಮಿತಿ ಇರುವುದಿಲ್ಲ. ಅರ್ಹ ವಿದ್ಯಾರ್ಥಿಗಳು ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸುವ ಮುನ್ನ ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಖಾತೆಗೆ ಆಧಾರ್ ಸೀಡಿಂಗ್ ಆಗಿರುವ ಬಗ್ಗೆ ಖಚಿತ ಪಡಿಸಿಕೊಳ್ಳತಕ್ಕದ್ದು. ಅರ್ಜಿ ಸಲ್ಲಿಸಿದ ನಂತರ ಆನ್ ಲೈನ್ ಸ್ವೀಕೃತಿಯೊಂದಿಗೆ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಆಧಾರ್ ಪ್ರತಿ, ಜಾತಿ ಪ್ರಮಾಣ ಪತ್ರ, ಪಾಸ್‌ಬುಕ್ ನಕಲು ಪ್ರತಿಗಳನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರಿಂದ ದೃಢೀಕರಿಸಿ ಪಡುವಾರಹಳ್ಳಿಯಲ್ಲಿರುವ ಆದಿ ಪಂಪ ರಸ್ತೆಯ ಬಾಬು ಜಗಜೀವನ್ ರಾಂ ಕಟ್ಟಡದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ಅವರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:0821-2520910ನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ತಿಳಿಸಿದ್ದಾರೆ.

## ಶ್ರೀ ಕೃಷ್ಣೋತ್ಸವ ಕಾರ್ಯಕ್ರಮ

**ಮೈಸೂರು:** ಕರ್ನಾಟಕ ಸರ್ಕಾರ ಹಾಗೂ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ ಆ.28ರಿಂದ ಸೆ.5ರವರೆಗೆ ಅರಮನೆ ಕೋಟೆ ಆವರಣದ ಶ್ರೀ ಪ್ರಸನ್ನ ಕೃಷ್ಣಸ್ವಾಮಿ ದೇವಸ್ಥಾನದಲ್ಲಿ ಪ್ರತಿದಿನ ಸಂಜೆ 6 ಗಂಟೆಗೆ ವೈಭವ ಶ್ರೀ ಕೃಷ್ಣೋತ್ಸವವನ್ನು ಆಯೋಜಿಸಲಾಗಿದೆ. 28 ರಂದು ಶಿಕ್ಯೋತ್ಸವ, 29ರಂದು ಪೂತನಿ ಸಂಹಾರ, 30ರಂದು ಶಕಟಾಸುರ ಸಂಹಾರ, 31ರಂದು ಬಕಾಸುರ ವಧೆ, ಸೆ. 1 ರಂದು ಯಮಳಾರ್ಜುನ ಮೋಕ್ಷ, 2ರಂದು ಮೋಹಿನಿ ಅಲಂಕಾರ, 3ರಂದು ಮಲ್ಲಯುದ್ಧ, 4ರಂದು ರಾಸಕ್ರೀಡೆ (ಗೋವಿಗೆ ಕಾಮಧೇನು ಅಲಂಕಾರ) ರಾಸ ಕ್ರೀಡೆಯಾದ ನಂತರ ರಾತ್ರಿ 8ಕ್ಕೆ ದೇವಸ್ಥಾನದಲ್ಲಿ ಕಂಸವಧೆ ನಡೆಯುತ್ತದೆ. ಸೆ.5ರಂದು ರುಕ್ಮಿಣಿ ಕಲ್ಯಾಣೋತ್ಸವ ನಡೆಯಲಿದೆ ಎಂದು ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ತಿಳಿಸಿದ್ದಾರೆ.

## ಅಪರಿಚಿತ ಶವ ಪತ್ತೆ

**ಕೆ.ಆರ್.ನಗರ:** ತಾಲೂಕಿನ ಅರಕೆರೆ ಗ್ರಾಮದ ಬಳಿ ಚಾಮರಾಜ ಬಲದಂಡೆ ನಾಲೆಯಲ್ಲಿ ಸುಮಾರು 40 ವರ್ಷ ವಯಸ್ಸಿನ ಅಪರಿಚಿತ ಪುರುಷನ ಶವ ದೊರೆತಿದೆ. ಇವರ ಬಲಗೈಯಲ್ಲಿ ಸಿ.ಬಿ.ಚಂದ್ರಿಕಾ ಎಂದು ಎಡಗೈನಲ್ಲಿ ಪದ್ಮ ವೈಜೆಎಂ ಎಂದು ಹಚ್ಚೆ ಗುರುತು ಇರುತ್ತದೆ. 5.8 ಅಡಿ ಎತ್ತರ, ನೇರಳೆ ಬಣ್ಣ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದಾರೆ. ಈತನ ಸಂಬಂಧಿಕರು ಅಥವಾ ಇವರ ಬಗ್ಗೆ ತಿಳಿದವರು ಕೆ.ಆರ್.ನಗರ ಪೊಲೀಸ್ ಠಾಣೆ ಮಾಹಿತಿ ನೀಡುವಂತೆ ಕೋರಲಾಗಿದೆ.

## ಗಣೇಶ ಮೂರ್ತಿ ಪ್ರತಿಷಾಪನೆಗೆ ಅನುಮತಿ ಕಡ್ಡಾಯ

**ಗುಂಡ್ಲುಪೇಟೆ:** ಗೌರಿ ಗಣೇಶೋತ್ಸವ ಆಚರಣೆಗಾಗಿ ಗಣೇಶ



ಮೂರ್ತಿಗಳನ್ನು ಪ್ರತಿಷ್ಠಾಪಿಸಲು ಅನುಮತಿ ಕಡ್ಡಾಯವಾಗಿದೆ ಎಂದು ತಹಶೀಲ್ದಾರ್ ರಮೇಶ್ ಬಾಬು ತಿಳಿಸಿದ್ದಾರೆ. ಗಣೇಶ ಮೂರ್ತಿ ಪ್ರತಿಷ್ಠಾಪಿಸಲು ಏಕಗವಾಕ್ಷಿ ಕೇಂದ್ರವನ್ನು ತಾಲ್ಲೂಕು ಕಛೇರಿಯಲ್ಲಿ ತೆರೆಯಲಾಗಿದ್ದು, ಮಂಗಳವಾರದಿಂದ ಸೆಪ್ಟೆಂಬರ್ 4 ರ ವರೆಗೆ ಬೆಳಿಗ್ಗೆ 10-30 ರಿಂದ ಸಂಜೆ 5-30 ರವರೆಗೆ ಅರ್ಜಿಯನ್ನು ಸಲ್ಲಿಸಲು, ಅನುಮತಿ ಪತ್ರವನ್ನು ಪಡೆದುಕೊಳ್ಳಲು ಸಮಿತಿ/ಮಂಡಳಿಯವರಿಗೆ ಹಾಗೂ ಸಾರ್ವಜನಿಕರಲ್ಲಿ ಕೋರಿದೆ ಎಂದು ತಿಳಿಸಿದ್ದಾರೆ.

# ಚೆಯುವಕರು ಮಾದಕ ವಸ್ತುಗಳ ದಾಸರಾಗದಿರಿ



**ಮೈಸೂರು:** ಕಿಶೋರಾವಸ್ಥೆಯಲ್ಲಿ ಮಾದಕ ವಸ್ತುಗಳ ಸೇವನೆಗೆ ಮುಂದಾಗುವವರು, ಜೀವನಪೂರ್ತಿ ಅದಕ್ಕೆ ದಾಸರಾಗುವ ಸಾಧ್ಯತೆ ಹೆಚ್ಚು ಎಂದು ಕರ್ನಾಟಕ ಅಡೋಲ್ಸೆಂಟ್ ಹೆಲ್ತ್ ಅಕಾಡೆಮಿ ಅಧ್ಯಕ್ಷ ಡಾ.ಕಿಶೋರ್ ಬೈಂದೂರ್ ಹೇಳಿದರು.

ಮೈಸೂರು ಅಡೋಲ್ಸೆಂಟ್ ಹೆಲ್ತ್ ಅಕಾಡೆಮಿಯು ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಆಯೋಜಿಸಿದ್ದ ಹದಿಹರೆಯದವರ ಆರೋಗ್ಯ ಸಮ್ಮೇಳನದಲ್ಲಿ ಮಾದಕ ವಸ್ತುಗಳ ಸೇವನೆಯಿಂದ ಹದಿಹರೆಯದವರಲ್ಲಿ ಉಂಟಾಗುತ್ತಿರುವ ದುಷ್ಪರಿಣಾಮ ಮತ್ತು ಪರಿಹಾರ ಕುರಿತು ಮಾತನಾಡಿದರು. ಮದ್ಯಪಾನ, ತಂಬಾಕು, ಗಾಂಜಾ ಮೊದಲಾದ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿದೆ. ಅದರಲ್ಲೂ 16 ವರ್ಷದೊಳಗಿನವರೇ ವ್ಯಸನಕ್ಕೆ ಹೆಚ್ಚು ತುತ್ತಾಗುತ್ತಿದ್ದಾರೆ. ಅಂಥ ಮಕ್ಕಳ ವರ್ತನೆಯನ್ನು ಅರ್ಥೈಸಿಕೊಂಡು ಉಪಚರಿಸಬೇಕಾದ ಜವಾಬ್ದಾರಿ ಪೋಷಕರು ಮತ್ತು ವೈದ್ಯರ ಮೇಲಿದೆ ಎಂದರು. ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸಬೇಕು. 20 ವರ್ಷದವರೆಗೆ ನಮ್ಮ ಮಿದುಳು ಪರಿಪೂರ್ಣ ಬೆಳವಣಿಗೆ ಹೊಂದಿರುವುದಿಲ್ಲ. ಈ ಹಂತದಲ್ಲಿ ವ್ಯಸನದಿಂದ ದೂರ ಇರಿಸುವುದೇ ಸವಾಲು ಎಂದರು. ಕೇಂದ್ರೀಯ ಅಡೋಲ್ಸೆಂಟ್ ಹೆಲ್ತ್ ಅಕಾಡೆಮಿ ಅಧ್ಯಕ್ಷೆ ಡಾ.ಗೀತಾ ಪಾಟೀಲ್ ಮಾತನಾಡಿ, ಮಕ್ಕಳು ಹಾಗೂ ಯುವಜನರು ಪೌಷ್ಟಿಕಾಂಶಯುಕ್ತ ಆಹಾರದ ಆಯ್ಕೆ, ಸೇವನೆಯಲ್ಲೂ ಸಮಸ್ಯೆ ಎದುರಿಸುತ್ತಿದ್ದಾರೆ. ಪೋಷಕರು ಹಾಗೂ ವೈದ್ಯರು ಈ ಬಗ್ಗೆಯೂ ಗಮನಹರಿಸಬೇಕು ಎಂದು ಸಲಹೆ ನೀಡಿದರು. ಹದಿಹರೆಯದ ಸಮಸ್ಯೆಗಳ ಕುರಿತು ತಜ್ಞ ವೈದ್ಯರು ವಿಷಯ ಮಂಡಿಸಿದರು. 50 ಮಕ್ಕಳ ವೈದ್ಯರು ಪಾಲ್ಗೊಂಡಿದ್ದರು. ಅಕಾಡೆಮಿ ಕಾರ್ಯದರ್ಶಿ ಡಾ.ಆರ್.ಪ್ರೇಮ, ಮೈಸೂರು ಘಟಕದ ಅಧ್ಯಕ್ಷ ಡಾ.ಯು.ಜಿ. ಶೆಣೈ, ಐ.ಎ.ಪಿ. ಅಧ್ಯಕ್ಷ ಡಾ.ಎಂ.ಆರ್.ಪ್ರಶಾಂತ್, ಡಾ.ರೂಪಾ ಇದ್ದರು.

# ಭಗವದ್ಗೀತೆಯ ಸಾರವನ್ನು ಅಳವಡಿಸಿಕೊಳ್ಳಿ: ಡಿಸಿ




**ಮಂಡ್ಯ:** ನೈತಿಕವಾಗಿ ಯಾವ ರೀತಿ ಬದುಕು ರೂಪಿಸಿಕೊಳ್ಳಬೇಕು ಮತ್ತು ತಪ್ಪುಗಳನ್ನು ತಿದ್ದಿಕೊಳ್ಳಲು ಪ್ರತಿಯೊಬ್ಬರೂ ತಮ್ಮ ಬದುಕಿನ ಜೀವಿತಾವಧಿಯಲ್ಲಿ ಒಮ್ಮೆಯಾದರೂ ಭಗವದ್ಗೀತೆಯನ್ನು ಓದಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಸಲಹೆ ನೀಡಿದರು.

ಅವರು ಇಂದು ಮಂಡ್ಯ ವಿದ್ಯಾನಗರದ ವಿ.ವಿ. ರಸ್ತೆಯ ಶ್ರೀ ಶಾರದ ಚಂದ್ರಮೌಳೇಶ್ವರ ಪ್ರಾರ್ಥನಾ ಮಂದಿರದಲ್ಲಿ ನಡೆದ ಶ್ರೀ ಕೃಷ್ಣ ಜನ್ಮಾಷ್ಟಮಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಭಗವದ್ಗೀತೆಯನ್ನು ಒಂದೇ ದಿನ ಪೂರ್ಣವಾಗಿ ಓದಲು ಸಾಧ್ಯವಿಲ್ಲ. ಹೀಗಾಗಿ, ಪ್ರತಿನಿತ್ಯ ಒಂದು ಪುಟ ಭಗವದ್ಗೀತೆಯನ್ನು ಓದುವ ಅಭ್ಯಾಸ ಮಾಡಿಕೊಂಡರೆ ಉತ್ತಮ. ಇದರಿಂದ ಪ್ರತಿದಿನ ನಮ್ಮ ಮುಂದೆ ಇರುವ ಸವಾಲುಗಳನ್ನು ಪರಿಹರಿಸಿಕೊಳ್ಳಬಹುದು ಹಾಗೂ ಮನಸ್ಸು ಕೂಡ ಹಗುರವಾಗುತ್ತದೆ ಎಂದು ಹೇಳಿದರು. ಮಕ್ಕಳಿಗೆ ಭಗವದ್ಗೀತೆ ಓದುವ ಅಭ್ಯಾಸ ಮಾಡಿ, ಭಗವದ್ಗೀತೆಯಲ್ಲಿರುವ ಒಳಿತನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಬಿ.ವಿ ನಂದೀಶ್ ಉಪಸ್ಥಿತರಿದ್ದರು.

# ಸ್ಥಳೀಯ ಸಮಸ್ಯೆಗಳನ್ನು ಅಧಿಕಾರಿಗಳು ಬಗೆಹರಿಸಿ



**ಮೈಸೂರು:** ವಿಜಯನಗರ 4ನೇ ಹಂತದಲ್ಲಿ ಕಳೆದ ನಾಲ್ಕು ತಿಂಗಳುಗಳಿಂದ ಸರಿಯದ ರೀತಿಯಲ್ಲಿ ಕಸವಿಲೇವಾರಿಯಾಗುತ್ತಿಲ್ಲ. ಸ್ಥಳೀಯ ಮೂಲ ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಶಾಸಕ ಜಿ.ಟಿ.ದೇವೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಲದರ್ಶಿನಿ ಅತಿಥಿಗೃಹದಲ್ಲಿರುವ ಶಾಸಕರ ಕಚೇರಿಯಲ್ಲಿ ಸೋಮವಾರ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಕಸವಿಲೇವಾರಿ ಮತ್ತು ಒಳಚರಂಡಿ ದುರಸ್ತಿ ಕೈಗೊಳ್ಳುತ್ತಿಲ್ಲ ಎಂದು ಅಲ್ಲಿನ ನಿವಾಸಿಗಳು ದೂರುತ್ತಿದ್ದಾರೆ. ಕೂಡಲೇ ಸಮಸ್ಯೆಗಳ ಪಟ್ಟಿ ಮಾಡಿಕೊಂಡು ಬಗೆಹರಿಸುವಂತೆ ಮುಡಾ ಆಯುಕ್ತರಿಗೆ ತಿಳಿಸಿದರು.

ವಿಜಯನಗರ 4ನೇ ಹಂತದ ನಿರ್ವಹಣೆಗೆ ಅಗತ್ಯ ಇರುವ ಅನುದಾನ ಬಿಡುಗಡೆ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ಮುಡಾ ಆಯುಕ್ತ ರಘುನಂದನ್ ತಿಳಿಸಿದರು. ಹೂಟಗಳ್ಳಿ ನಗರಸಭೆಯ ಪೌರಾಯುಕ್ತರು, ಮುಡಾ ಆಯುಕ್ತರು ಜಂಟಿಯಾಗಿ ಸಭೆ ನಡೆಸಿ ಕಸ ವಿಲೇವಾರಿಗೆ ಕ್ರಮ ಕೈಗೊಳ್ಳಲು ಸೂಚಿಸಿದರು.

ವಿಜುಂನಗರ 4ನೇ ಹಂತ ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಿಸಿದಂತೆ ಹೆಚ್ಚುವರಿಯಾಗಿ ನೀರು ನೀಡುವಂತೆ ಪಾಲಿಕೆ ಆಯುಕ್ತರಿಗೆ ಸಲಹೆ ನೀಡಿದರಲ್ಲದೆ, ವಿಜಯನಗರ 4ನೇ ಹಂತಕ್ಕೆ ಅಧಿಕಾರಿಗಳೊಡನೆ ಭೇಟಿ ನೀಡಿ ಪರಿಶೀಲಿಸುವಂತೆ ಆಯುಕ್ತರಿಗೆ ತಿಳಿಸಿದರು. ದಾಸನಕೊಪ್ಪಲು, ರೂಪನಗರ, ಮರಟಿಕ್ಯಾತನಹಳ್ಳಿ ಒಳಚರಂಡಿ ಸಮಸ್ಯೆ ಬಗೆಹರಿಸಲು ಈಗಾಗಲೇ 25 ಕೋಟಿ ಕ್ರಿಯಾ ಯೋಜನೆ ತಯಾರಾಗಿದ್ದು ಅನುಮೋದನೆ ಹಂತದಲ್ಲಿರುವುದಾಗಿ ಶಾಸಕರು ತಿಳಿಸಿದರು.

ತಾತ್ಕಾಲಿಕವಾಗಿ ಈ ಗ್ರಾಮಗಳ ಒಳಚರಂಡಿ ಸಮಸ್ಯೆ ಬಗೆಹರಿಸಲು ಬೋಗಾದಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಅಭಿಯಂತರ ಆಶೀಪ್ ಅವರಿಗೆ ಸ್ಥಳಕ್ಕೆ ಭೇಟಿ ನೀಡಿ ತಾತ್ಕಾಲಿಕ ಪರಿಹಾರ ಮಾಡಲು ಸೂಚಿಸಿದರು. ರಾಜಾಜಿನಗರ ಆಶ್ರಯ ಬಡಾವಣೆ ರಸ್ತೆ ಮತ್ತು ಒಳಚರಂಡಿಗೆ ಸಂಬಂಧಿಸಿದಂತೆ ಸರ್ವೆ ಮಾಡಿಸಬೇಕು. ಆಶ್ರಯ ಬಡಾವಣೆಗಳನ್ನು ಪಾಲಿಕೆ ವತಿಯಿಂದ ನಿರ್ಮಾಣ ಮಾಡಿದ್ದು ಪಾಲಿಕೆ ವತಿಯಿಂದ ಅಭಿವೃದ್ಧಿ ಪಡಿಸಿ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ ಮಾಡುವಂತೆ ತಿಳಿಸಿದರು.

ಖಾಸಗಿ ಬಡಾವಣೆಗಳಿಗೆ ಕುಡಿಯುವ ನೀರು: ಪ್ರಾಧಿಕಾರದಿಂದ ಅನುಮೋದನೆಗೊಂಡು ನಿರ್ಮಾಣಗೊಂಡಿರುವ ಕೆ.ಬಿ.ಎಲ್ ಬಡಾವಣೆ, ಆಲನಹಳ್ಳಿ, ದಟ್ಟಗಳ್ಳಿಯ ಕಾರ್ತಿಕ ಬಡಾವಣೆ, ಆರ್.ಟಿ.ನಗರದ ನಿವಾಸಿಗಳು ಕುಡಿಯುವ ನೀರನ್ನು ಒದಗಿಸಲು ಮನವಿ ಸಲ್ಲಿಸಿದ್ದು ಈ ಬಡಾವಣೆಗಳಿಗೆ ಪ್ರೋರೇಟಾ ಪಾವತಿಸಿಕೊಂಡು ಮೀಟರ್ ಅಳವಡಿಸಿ ಕುಡಿಯುವ ನೀರನ್ನು ಒದಗಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಸಭೆಯಲ್ಲಿ ಮುಡಾ ಆಯುಕ್ತ ರಘುನಂದನ್, ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್, ಅಧೀಕ್ಷಕ ಅಬಿಯಂತರರಾದ ಸಿಂಧು, ಮುರುಳಿಧರ್, ಬೋಗಾದಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಬಸವರಾಜು, ರಮ್ಮನಹಳ್ಳಿ ಮುಖ್ಯಾಧಿಕಾರಿ ರವಿಕೀರ್ತಿ ಸೇರಿದಂತೆ ಅಧಿಕಾರಿಗಳು ಹಾಜರಿದ್ದರು.

# ಶ್ರೀಕೃಷ್ಣನ ಮಾನವಪ್ರೇಮ ಸಂದೇಶ ಪ್ರಸ್ತುತವಾಗಿವೆ



**ಚಾಮರಾಜನಗರ:** ಮನುಷ್ಯರಲ್ಲಿರುವ ಅಹಂ, ಕ್ರೂರತ್ವ ತೊಡೆದುಹಾಕುವಲ್ಲಿ ಶ್ರೀಕೃಷ್ಣನ ಮಾನವಪ್ರೇಮ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿಂದು ಆಯೋಜಿಸಲಾಗಿದ್ದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಶ್ರೀಕೃಷ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ಜಗತ್ತಿನ ಕ್ರೂರತ್ವವನ್ನು ಹೋಗಲಾಡಿಸಲು ಶ್ರೀಕೃಷ್ಣನು ನೀಡಿದ ಮಾನವ ಪ್ರೇಮ ಸಂದೇಶಗಳ ಕೊಡುಗೆ ಅಪಾರವಾಗಿದೆ. ಶ್ರೀಕೃಷ್ಣನ ಬಾಲಲೀಲೆಗಳು ಇಂದಿಗೂ ಜನಜನಿತವಾಗಿವೆ. ಮಹಾಭಾರತದ ಮೂಲಕ ಶ್ರೇಷ್ಠ ಪಾತ್ರಗಳನ್ನು ಪರಿಚಯಿಸಿದ ಶ್ರೀಕೃಷ್ಣನ ಮಾನವ ಕಲ್ಯಾಣದ ಸಂದೇಶಗಳನ್ನು ನಾವೆಲ್ಲರು ಪಾಲಿಸಬೇಕು ಎಂದು ಶಾಸಕರಾದ ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಶ್ರೀಕೃಷ್ಣ ಪ್ರತಿಷ್ಠಾನ ಅಧ್ಯಕ್ಷರಾದ ಸುರೇಶ್ ಋಗ್ವೇದಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಶ್ರೀಕೃಷ್ಣ ಎಂದರೆ ಪ್ರೇಮ, ಆನಂದ, ಅಕರ್ಷಣೆ ಎಂಬುದಾಗಿದೆ. ಇಡೀ ವಿಶ್ವಕ್ಕೆ ಪುಣ್ಯಭೂಮಿ, ಕರ್ಮಭೂಮಿಯಾಗಿರುವ ಭಾರತದಲ್ಲಿ ಅನೇಕ ಮಹಾನ್ ಪುರು?ರು, ಋಷಿಗಳು, ಸಾಧುಸಂತರು, ದಾರ್ಶನಿಕರು, ತತ್ವಜ್ಞಾನಿಗಳು, ಆಚಾರ್ಯರು, ಚಿಂತಕರು ಕಾಲಕಾಲಕ್ಕೆ ತಮ್ಮದೇ ಆದ ಮೌಲ್ಯಯುತ ಸಂದೇಶಗಳನ್ನು ನೀಡಿ ಮಾನವಕುಲದ ಕಲ್ಯಾಣಕ್ಕೆ ತಮ್ಮದೇ ಆದ ಪ್ರಭಾವ ಬೀರಿದ್ದಾರೆ. ಈ ಪೈಕಿ ಶ್ರೀಕೃಷ್ಣನ ಅವತಾರವು ಒಂದಾಗಿದೆ ಎಂದರು.

ಮಹಾಭಾರತದ ಕೇಂದ್ರಬಿಂದು ಶ್ರೀಕೃ?ನ ರಾಜತಾಂತ್ರಿಕ ನೀತಿ ಚಿಂತನೆಯೇ ವಿಶೇ?, ವಿಶಿಷ್ಟ ಹಾಗೂ ವಿಭಿನ್ನವಾಗಿದೆ. ಮನು?ೄ ದಾರಿ ತಪ್ಪಿದಾಗ, ಸಮುದಾಯದಲ್ಲಿ ಅಶಾಂತಿ ಉಂಟಾದ ಕಾಲಘಟ್ಟದಲ್ಲಿ ಸಮಾಜ ಪರಿವರ್ತಕರಾಗಿ ಬಂದವರು ಶ್ರೀಕೃ? ಜಗತ್ತಿನ ಶ್ರೇ? ಮನಶಾಸ್ತ್ರಜ್ಞ ಎಂದರೆ ತಪ್ಪಾಗಲಾರದು ಎಂದು ಋಗ್ವೇದಿ ಅವರು ತಿಳಿಸಿದರು. ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಹಾಗೂ ನಗರಸಭೆ ಸದಸ್ಯರಾದ ಮಮತ ಅವರು ಮಾತನಾಡಿ ಶ್ರೀಕೃಷ್ಣ ಪ್ರೀತಿ-ಪ್ರೇಮದ ಸಂಕೇತ. ಶ್ರೀಕೃಷ್ಣ ಮಾನವ ಸ್ವರೂಪಿಯಾಗಿ ನಮ್ಮೆಲ್ಲರೂ ಮಾದರಿಯಾಗಿದ್ದಾರೆ. ಆದರ್ಶ ಸಮಾಜದ ಪ್ರೇರಕಶಕ್ತಿಯಾಗಿರುವ ಶ್ರೀಕೃಷ್ಣನ ಚಿಂತನೆಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದರು. ಗಾಯಕರಾದ ಜೆ.ಬಿ. ಮಹೇಶ್ ಶ್ರೀಕೃಷ್ಣನ ಕುರಿತ ಗೀತೆಯನ್ನು ಕಾರ್ಯಕ್ರಮದಲ್ಲಿ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಎನ್. ಉದಯ್‌ಕುಮಾರ್, ಸಮಾಜದ ಮುಖಂಡರಾದ ಬಾಲಸುಬ್ರಮಣ್ಯಂ, ಇತರರು ಕಾರ್ಯಕ್ರಮದಲ್ಲಿ ಇದ್ದರು.



## ಮೊಟೊರೊಲಾದ ಈ ಫೋನಿನ ಡಿಸ್ಕೌಂಟ್ ಬೆಲೆಗೆ ನೀವು ಫಿದಾ

ಲೀಡಿಂಗ್ ಇ ಕಾಮರ್ಸ್ ತಾಣ ಫ್ಲಿಪ್ಕಾರ್ಟ್ ಮುಖ್ಯವಾಗಿ ಮೊಬೈಲ್ಗಳಿಗೂ ಒಂದಿಲ್ಲೊಂದು ರಿಯಾಯಿತಿ ಘೋಷಿಸುತ್ತದೆ. ಅದೇ ರೀತಿ ಯಾವುದಾದರೂ ವಿಶೇಷ ಮಾರಾಟಗಳಲ್ಲಿ ಹೆಚ್ಚಿನ ರಿಯಾಯಿತಿ ಖಚಿತವಾಗಿರುತ್ತದೆ. ಸದ್ಯ ಮೊಟೊರೊಲಾ ಸಂಸ್ಥೆಯ ಮೊಟೊರೊಲಾ G04s (Motorola g04s) ಮೊಬೈಲ್ ಗಮನಾರ್ಹ ದರ ಇಳಿಕೆ ಪಡೆದುಕೊಂಡಿದೆ. ಇನ್ನು ಈ ಮೊಬೈಲ್ ಆಕ್ಟಾ ಕೋರ್ Unisoc T606 ಚಿಪ್ಸೆಟ್ ಪ್ರೊಸೆಸರ್ ಬಲದಲ್ಲಿ ಕೆಲಸ ಮಾಡುತ್ತದೆ. ಹೌದು, ದೈತ್ಯ ಫ್ಲಿಪ್ಕಾರ್ಟ್ ಇ ಕಾಮರ್ಸ್ ತನ್ನ ವೆಬ್ಸೈಟ್ನಲ್ಲಿ ಮೊಟೊರೊಲಾ ಸಂಸ್ಥೆಯ ಮೊಟೊರೊಲಾ G04s (Motorola g04s) ಮೊಬೈಲ್ ಶೇ. 30% ರಷ್ಟು ನೇರ ಡಿಸ್ಕೌಂಟ್ ದರದಲ್ಲಿ ಪಡೆದುಕೊಂಡಿದೆ. ಈ ಮೊಬೈಲ್ನ 4 GB RAM + 64 GB ವೇರಿಯಂಟ್ ಆಫರ್ನಲ್ಲಿ 6,999ರೂ. ಗಳ ಬೆಲೆಯಲ್ಲಿ ಖರೀದಿಗೆ ಲಭ್ಯ ಇದೆ. ಇನ್ನು ಲಭ್ಯ ಇರುವ ಎಲ್ಲ ಕೊಡುಗೆ ಪಡೆದುಕೊಂಡರೇ, ಇದನ್ನು ಇನ್ನಷ್ಟು ಡಿಸ್ಕೌಂಟ್ಗೆ ದೊರೆಯುತ್ತದೆ. ಇನ್ನು ಮೊಟೊ G04s ಫೋನ್ ಕಾನ್ಕಾರ್ಡ್ ಬ್ಲಾಕ್, ಸೀ ಗ್ರೀನ್, ಸ್ಯಾಟಿನ್ ಬ್ಲೂ ಮತ್ತು ಸನ್ರೈಸ್ ಆರೆಂಜ್ ಕಲರ್ ಆಯ್ಕೆಗಳಲ್ಲಿ ಖರೀದಿಗೆ ಲಭ್ಯ ಇದೆ. ಆಸಕ್ತ ಖರೀದಿದಾರರು ಫ್ಲಿಪ್ಕಾರ್ಟ್ ತಾಣದಲ್ಲಿ, ಮೊಟೊರೊಲಾ ವೆಬ್ಸೈಟ್ ಹಾಗೂ ಪ್ರಮುಖ ರೀಟೇಲ್ ಸ್ಟೋರ್ಗಳಲ್ಲಿ ಖರೀದಿಸಬಹುದು.

ಮೊಟೊರೊಲಾ G04s ಫೋನ್ 6.56 ಇಂಚಿನ ಹೆಚ್ಡಿ + ಡಿಸ್ಪ್ಲೇ ಅನ್ನು ಹೊಂದಿದ್ದು, ಈ ಮೊಬೈಲ್ ಡಿಸ್ಪ್ಲೇ 1,612 x 720 ಪಿಕ್ಸಲ್ ರೆಸಲ್ಯೂಶನ್ ಸೌಲಭ್ಯ ಪಡೆದಿದೆ. 90Hz ರಿಫ್ರೆಶ್ ರೇಟ್ ಆಯ್ಕೆಯೊಂದಿಗೆ, ಗೊರಿಲ್ಲಾ ಗ್ಲಾಸ್ 3 ರಕ್ಷಣೆ ಸಹ ಪಡೆದುಕೊಂಡಿದೆ.

# ಅವಲಕ್ಕಿ ಕೇಸರಿ ಬಾತ್

ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅವಲಕ್ಕಿ-1/2 ಕಪ್, ಸಕ್ಕರೆ-1/2 ಕಪ್, ತುಪ್ಪ-1/4 ಕಪ್, ಕೇಸರಿ ಬಣ್ಣದ ಫುಡ್ ಕಲರ್-ಚಿಟಿಕೆ, ಏಲಕ್ಕಿ ಪುಡಿ-ಚಿಟಿಕೆ, ನೀರು-1 ಕಪ್, ಗೋಡಂಬಿ-6

### ಮಾಡುವ ವಿಧಾನ

ಮೊದಲಿಗೆ ಒಂದು ಪ್ಯಾನ್ ಗೆ ತುಪ್ಪ ಹಾಕಿ ಬಿಸಿ ಮಾಡಿಕೊಳ್ಳಿ. ಅದು ಬಿಸಿಯಾಗುತ್ತಿದ್ದಂತೆ ಗೋಡಂಬಿ ಹಾಕಿ ಕೆಂಪಾಗುವವರೆಗೆ ಹುರಿದುಕೊಂಡು ಒಂದು ತಟ್ಟೆಗೆ ತೆಗೆದಿಟ್ಟುಕೊಳ್ಳಿ. ನಂತರ ಅವಲಕ್ಕಿಯನ್ನು ಹಾಕಿ ಹುರಿಯಿರಿ. ಇದು ತುಸು ಬಣ್ಣ ಬದಲಾಗುತ್ತಿದ್ದಂತೆ ಗ್ಯಾಸ್ ಆಫ್ ಮಾಡಿ. ತಣ್ಣಗಾದ ಮೇಲೆ ಮಿಕ್ಸಿ ಜಾರಿಗೆ ಹಾಕಿ ತರಿ ತರಿಯಾಗಿ ರುಬ್ಬಿಕೊಳ್ಳಿ. ಪ್ಯಾನ್ ನಲ್ಲಿ ಒಂದು ಕಪ್ ನೀರು ಹಾಕಿ ಬಿಸಿ ಮಾಡಿಕೊಳ್ಳಿ. ಅದು ಕುದಿ ಬರುತ್ತಿದ್ದಂತೆ ಅದಕ್ಕೆ ಪುಡಿ ಮಾಡಿಕೊಂಡ ಅವಲಕ್ಕಿಯನ್ನು ಸೇರಿಸಿ ಗಂಟಾಗದಂತೆ ಕದಡುತ್ತಾ ಇರಿ. ಇದಕ್ಕೆ ಚಿಟಿಕೆ ಫುಡ್ ಕಲರ್ ಸೇರಿಸಿ ಮಿಕ್ಸ್ ಮಾಡಿ. ಈ ಮಿಶ್ರಣ ದಪ್ಪಗಾಗುತ್ತಿದ್ದಂತೆ, ಸಕ್ಕರೆ, ತುಪ್ಪ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಹದ ಉರಿಯಲ್ಲಿ ಬೇಯಿಸಿ. ಇದು ತಳ ಬಿಡುತ್ತಿದ್ದಂತೆ ಗ್ಯಾಸ್ ಆಫ್ ಮಾಡಿ ಏಲಕ್ಕಿ ಪುಡಿ, ಗೋಡಂಬಿ ಹಾಕಿದರೆ ರುಚಿಕರವಾದ ಅವಲಕ್ಕಿ ಕೇಸರಿಬಾತ್ ರೆಡಿ.

# ಖಡಕ್ ಪಾತ್ರದಲ್ಲಿ ದೇವರಕೊಂಡ



ಲೈಗರ್ ಫಲಿತಾಂಶದಲ್ಲಿ ವಿಜಯ್ ದೇವರಕೊಂಡ ಎಂದಿನಂತೆ ಹಿಟ್ ಆಗಲಿಲ್ಲ. ಪ್ಯಾನ್ ಇಂಡಿಯಾ ಶ್ರೇಣಿಯಲ್ಲಿ ಹೊಡೆಯುವ ಕನಸು ಕನಸಾಗಿಯೇ ಉಳಿಯಿತು. ಈ ಸಿನಿಮಾ ಫ್ಲಾಪ್ ಆಗಿ ಎಲ್ಲರಿಗೂ ನಷ್ಟ ಆಯಿತು. ಇದಕ್ಕೆ ವಿಜಯ್ ದೇವರಕೊಂಡ ಕೂಡಾ ಸಂಭಾವನೆ ಸ್ವಲ್ಪ ವಾಪಸ್ ಮಾಡಿದ್ದರು.

ಅದಾದ ನಂತರ ತೆರೆಕಂಡ ಖುಷಿ ಆವರೇಜ್ ಹಿಟ್ ಆಗಿತ್ತು. ಫ್ಯಾಮಿಲಿ ಸ್ಟಾರ್ ಆಗಿ ಡಿಸಾಸ್ಟರ್ ಆಯಿತು. ಅದರೊಂದಿಗೆ ಸ್ವಲ್ಪ ಗ್ಯಾಪ್ ತೆಗೆದುಕೊಂಡು ಎಲ್ಲಿ ಬಿದ್ದವೋ ಅಲ್ಲಿ ಮೇಲೆದ್ದು ಬರುತ್ತೇನೆಂದು ಗೌತಮ್ ತಿನ್ನನೂರಿ ಜೊತೆ ದೊಡ್ಡ ಸಿನಿಮಾ ಮಾಡಿದ್ದಾರೆ. ಈ ಬಾರಿ ಹೇಗಾದರೂ ಮಾಡಿ ಪ್ಯಾನ್ ಇಂಡಿಯಾ ರೇಂಜ್ ಹೊಡೆಯಲೇಬೇಕೆಂಬ ಹಠಕ್ಕೆ ಬಿದ್ದಿದ್ದಾರೆ.

ಗ್ಯಾಂಗ್ಸ್ಟರ್ ಬ್ಯಾಕ್ ಡ್ರಾಪ್ನಲ್ಲಿ ಈ ಚಿತ್ರದ ಕಥೆ ತೆರೆದುಕೊಳ್ಳುತ್ತದೆ. ಈಗಾಗಲೇ ರಿಲೀಸ್ ಆಗಿರುವ ಪೋಸ್ಟರ್ ಗಳು ಜನಮನ ಸೆಳೆದಿವೆ. ಜರ್ಸಿ ನಂತರ ಗೌತಮ್ ಅವರ ಮುಂದಿನ ಚಿತ್ರ ಇದಾಗಿರುವುದರಿಂದ ಪ್ರೇಕ್ಷಕರಲ್ಲಿ ಉತ್ತಮ ನಿರೀಕ್ಷೆಗಳಿವೆ. ಗ್ಯಾಂಗ್ಸ್ಟರ್ ಹಿನ್ನಲೆಯಲ್ಲಿ ಈ ಸಿನಿಮಾದ ಕಥೆ ಸಾಗುತ್ತಿದೆ.

ಇತ್ತೀಚೆಗಷ್ಟೇ ಬಿಡುಗಡೆಯಾಗಿರುವ ಪೋಸ್ಟರ್ಗಳು ಜನಮನದಲ್ಲಿ ಒಳ್ಳೆಯ ಗಮನ ಸೆಳೆದಿವೆ. ಜರ್ಸಿ ನಂತರ ಗೌತಮ್ ಅವರ ಮುಂದಿನ ಚಿತ್ರ ಇದಾಗಿರುವುದರಿಂದ ಪ್ರೇಕ್ಷಕರಲ್ಲಿ ಉತ್ತಮ ನಿರೀಕ್ಷೆಗಳಿವೆ. ಇದೇ ವೇಳೆ ವಿಜಯ್ ಈ ಸಿನಿಮಾದಲ್ಲಿ ಪೊಲೀಸ್ ಪೇದೆಯಾಗಿ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ.

ಈ ಸಿನಿಮಾದಲ್ಲೂ ಮಧ್ಯಮ ವರ್ಗದ ಎಮೋಷನ್ ಹೈಲೈಟ್ ಆಗಲಿದೆಯಂತೆ. ಇತ್ತೀಚೆಗೆ ಬಿಡುಗಡೆಯಾದ ಈ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದೆ. ಒರಿಜಿನಲ್ ವಿಜಯ್ ದೇವರಕೊಂಡ ಅವರನ್ನು ಅವರ ಅಭಿಮಾನಿಗಳು ಹೀಗೆ ಇಷ್ಟಪಡುತ್ತಾರಾ ಎಂದು ಕಾದು ನೋಡಬೇಕಾಗಿದೆ.

# ಖಾಲಿ ಹೊಟ್ಟೆಯಲ್ಲಿ ಕುಡಿಯಿರಿ ಈ ಕಷಾಯ



ಹೆಲ್ತ್ ಟಿಪ್ಸ್

ತುಳಸಿ ಗಿಡಕ್ಕೆ ಪೂಜೆ-ಪುನಸ್ಕಾರಗಳಲ್ಲಿ ಬಹಳ ಮಹತ್ವವಿದೆ. ತುಳಸಿಯನ್ನು ವಿಷ್ಣುಪ್ರಿಯ ಎಂದೂ ಕರೆಯುತ್ತಾರೆ. ಶತಮಾನಗಳಿಂದಲೂ ತುಳಸಿ ತನ್ನ ಔಷಧೀಯ ಗುಣಗಳಿಗೆ ಹೆಸರುವಾಸಿಯಾಗಿದೆ. ತುಳಸಿ ಆಯುರ್ವೇದ ಔಷಧಿಗಳ ತಯಾರಿಕೆಯಲ್ಲಿ ಬಳಸಲಾಗುವ ಲ್ಯಾಮಿಯೇಸಿ ಕುಟುಂಬಕ್ಕೆ ಸೇರಿದೆ.

ಉಸಿರಾಟದ ತೊಂದರೆಗಳಿಂದ ಹಿಡಿದು ಸೋಂಕು ನಿವಾರಣೆಯವರೆಗೆ ಅನೇಕ ಅಸ್ವಸ್ಥತೆಗಳನ್ನು ತುಳಸಿ ನಿವಾರಿಸಬಲ್ಲದು. ತುಳಸಿಯ ಎಲೆಗಳು ಮಾತ್ರವಲ್ಲ, ಈ ಸಸ್ಯದ ಪ್ರತಿಯೊಂದು ಭಾಗ ಅಂದರೆ ಕಾಂಡ, ಬೀಜಗಳು, ಬೇರು, ಹೂವು ಎಲ್ಲವೂ ಔಷಧೀಯ ಗುಣಗಳಿಂದ ತುಂಬಿವೆ.

ಕೆಮ್ಮು, ಗಂಟಲು ನೋವಿಗೆ ತುಳಸಿ ಕಷಾಯ ರಾಮಬಾಣವಿದ್ದಂತೆ. ಕೆಮ್ಮು ಇದ್ದರೆ ನಾಲ್ಕಾರು ತುಳಸಿ ಎಲೆಗಳನ್ನು ಜಗಿದು ತಿನ್ನಬೇಕು, ಅಥವಾ ಇದನ್ನು ನೀರಿನಲ್ಲಿ ಕುದಿಸಿ ಕಷಾಯ ಮಾಡಿಕೊಂಡು ಕುಡಿಯಬಹುದು. ಗಂಟಲು ನೋವಿದ್ದರೆ ತುಳಸಿ ಬೀಜಗಳನ್ನು ನೀರಿನಲ್ಲಿ ಕುದಿಸಿ ಕುಡಿಯುವುದರಿಂದ ಪರಿಹಾರ ಸಿಗುತ್ತದೆ. ತುಳಸಿ ಬೀಜಗಳನ್ನು ಸಲಾಡ್, ಪಾಸ್ತಾಗಳಲ್ಲಿ ಕೂಡ ಬಳಸಬಹುದು.

ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ತುಳಸಿ ಬೆರೆಸಿದ ನೀರು ಕುಡಿಯುವುದರಿಂದ ಅನೇಕ ಪ್ರಯೋಜನಗಳಿವೆ. ರಾತ್ರಿ ಬಿಸಿಬಿಸಿ ನೀರಿಗೆ ನಾಲ್ಕಾರು ತುಳಸಿ ಎಲೆಗಳನ್ನು ಹಾಕಿಡಿ, ಬೆಳಗ್ಗೆ ಆ ನೀರನ್ನು ಖಾಲಿ ಹೊಟ್ಟೆಯಲ್ಲಿ ಕುಡಿಯಿರಿ.

**ಮಳೆಗಾಲದಲ್ಲಿ ಕಾಡುವ ರೋಗಗಳಿಂದ ಪರಿಹಾರ:** ಮಳೆಗಾಲದಲ್ಲಿ ಡೆಂಗ್ಯೂ, ಮಲೇರಿಯಾ ಮತ್ತು ಜ್ವರದಂತಹ ರೋಗಗಳ ಅಪಾಯ ಹೆಚ್ಚು. ತುಳಸಿ ಎಲೆಗಳ ಕಷಾಯ ಕುಡಿದರೆ ಈ ಸಮಸ್ಯೆಗಳು ನಿವಾರಣೆಯಾಗುತ್ತವೆ. ತುಳಸಿ ಎಲೆಗಳನ್ನು ಜಜ್ಜಿ ಜೇನುತುಪ್ಪದೊಂದಿಗೆ ಬೆರೆಸಿ ತಿನ್ನುವುದರಿಂದ ಉಸಿರಾಟದ ಸಮಸ್ಯೆ ಆಗುವುದಿಲ್ಲ. ಗಂಟಲು ನೋವಿದ್ದರೆ ತುಳಸಿ ಕಷಾಯದಲ್ಲಿ ಗಾರ್ಗ್ಲಿಂಗ್ ಕೂಡ ಮಾಡಬಹುದು.

**ಮೂತ್ರಪಿಂಡದ ಆರೋಗ್ಯ ಸುಧಾರಣೆ:** ತುಳಸಿ ಮೂತ್ರಪಿಂಡದ ಕಲ್ಲುಗಳನ್ನು ಗುಣಪಡಿಸಬಲ್ಲದು. ತುಳಸಿ ಎಲೆಗಳ ರಸವನ್ನು ಜೇನುತುಪ್ಪದೊಂದಿಗೆ ಸೇವಿಸಿದರೆ ಕಿಡ್ನಿ ಕಲ್ಲು ನಿವಾರಣೆಯಾಗುತ್ತದೆ. ಆದರೆ ವೈದ್ಯರ ಸಲಹೆ ಪಡೆದೇ ಇದನ್ನು ಸೇವಿಸಿ.

**ರಕ್ತದಲ್ಲಿನ ಸಕ್ಕರೆ ನಿಯಂತ್ರಣ:** ಖಾಲಿ ಹೊಟ್ಟೆಯಲ್ಲಿ ತುಳಸಿ ರಸ ಅಥವಾ ಕಷಾಯ ಕುಡಿಯುವುದರಿಂದ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಕಡಿಮೆ ಮಾಡಬಹುದು. ಉಪವಾಸದ ಸಮಯದಲ್ಲಿ ತುಳಸಿ ಸೇವನೆಯು ರಕ್ತದಲ್ಲಿನ ಸಕ್ಕರೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ.

# ಬಾಲಿವುಡ್‌ಗೆ ಕಮ್‌ಬ್ಯಾಕ್ ಆಗ್ತಾರಾ ಪ್ರಿಯಾಂಕಾ ಚೋಪ್ರಾ?



'ಸಿಟಾಡೆಲ್' ಬೆಡಗಿ ಪ್ರಿಯಾಂಕಾ ಚೋಪ್ರಾ ಮತ್ತೆ ಬಾಲಿವುಡ್‌ಗೆ ಕಮ್‌ಬ್ಯಾಕ್ ಮಾಡಲಿದ್ದಾರೆ. ಇದಕ್ಕಾಗಿ ಹುಟ್ಟೂರಿಗೆ ನಟಿ ಎಂಟ್ರಿ ಕೊಟ್ಟಿದ್ದು, ಬಾಲಿವುಡ್‌ಗೆ ಮರಳುವ ಬಗ್ಗೆ ನಟಿ ಸುಳಿವು ಕೊಟ್ಟಿದ್ದಾರೆ.

'ಪಾನಿ' ಎಂಬ ಸಿನಿಮಾ ಮೂಲಕ ಪ್ರಿಯಾಂಕಾ ಚೋಪ್ರಾ, ನಿರ್ಮಾಪಕಿಯಾಗಿ ಬಾಲಿವುಡ್‌ಗೆ ಮರಳುತ್ತಿದ್ದಾರೆ. ಈ ಚಿತ್ರವು ಅಕ್ಟೋಬರ್‌ನಲ್ಲಿ ರಿಲೀಸ್ ಆಗಲಿದೆ. ಇನ್ನೂ 'ಪಾನಿ' ಸಿನಿಮಾ ತಂಡವನ್ನು ಸದ್ಯದಲ್ಲೇ ನಟಿ ಭೇಟಿಯಾಗಲಿದ್ದಾರೆ.

ಇನ್ನೂ ಸಹೋದರ ಸಿದ್ಧಾರ್ಥ್ ಚೋಪ್ರಾ ನಿಶ್ಚಿತಾರ್ಥದ ಕಾರ್ಯಕ್ರಮದಲ್ಲಿ ಭಾಗಿಯಾದ ಬಳಿಕ ಮುಂಬೈ ಸಿಟಿಯ ಫೋಟೋವನ್ನು ಪ್ರಿಯಾಂಕಾ ಹಂಚಿಕೊಂಡಿದ್ದಾರೆ. ಈ ಬೆನ್ನಲ್ಲೇ ನಟಿ ಮತ್ತೆ ನಟನೆಗೂ ಕಮ್‌ಬ್ಯಾಕ್ ಮಾಡಲಿದ್ದಾರೆ. ಅದಕ್ಕಾಗಿಯೇ ಮುಂಬೈನಲ್ಲಿ ಬೀಡು ಬಿಟ್ಟಿದ್ದಾರೆ ಎನ್ನಲಾಗ್ತಿದೆ. ಹೊಸ ಸಿನಿಮಾದ ಕಥೆ ಕೂಡ ನಟಿ ಒಪ್ಪಿಕೊಂಡಿದ್ದಾರೆ ಎಂಬುದು ಇನ್‌ಸೈಡ್ ನ್ಯೂಸ್. ನಿಜನಾ ಎಂಬುದನ್ನು ಮುಂದಿನ ದಿನಗಳಲ್ಲಿ ಉತ್ತರ ಸಿಗಲಿದೆ.ಪ್ರಿಯಾಂಕಾರ ಕಮ್‌ಬ್ಯಾಕ್ ಸುದ್ದಿಗೆ ಮತ್ತಷ್ಟು ಪುಷ್ಟಿ ಸಿಕ್ಕಿರೋದು ಇತ್ತೀಚೆಗೆ ಅಮೆರಿಕದ ನಟಿಯ ಮನೆಗೆ ಫ್ಯಾಷನ್ ಸಿನಿಮಾ ನಿರ್ದೇಶಕ ಮಧುರ್ ಭೇಟಿ ನೀಡಿದ್ದರು. ಈ ಹಿನ್ನೆಲೆಯಲ್ಲಿ ಇದರ ಸೀಕ್ವೆಲ್ ಬಗ್ಗೆ ಭಾರೀ ಚರ್ಚೆ ಶುರುವಾಗಿತ್ತು. ಹಾಗಾಗಿ ನಟಿಯ ಮುಂಬರುವ ಸಿನಿಮಾ ಬಗ್ಗೆ ಅಭಿಮಾನಿಗಳು ಕ್ಯೂರಿಯಸ್ ಆಗಿದ್ದಾರೆ.

# ಮಾರಾಟ ಶುಲ್ಕ ಕಡಿತಗೊಳಿಸುತ್ತಿರುವುದಾಗಿ ಘೋಷಿಸಿದ ಅಮೆಜಾನ್ ಇಂಡಿಯಾ




ಅಮೆಜಾನ್ ತನ್ನ ಮಾರ್ಕೆಟ್ ಪ್ಲೇಸ್ ನಲ್ಲಿ ವಿವಿಧ ವರ್ಗದ ಉತ್ಪನ್ನಗಳನ್ನು ಮಾರಾಟ ಮಾಡುವ ಮಾರಾಟಗಾರರಿಗೆ ಮಾರಾಟ ಶುಲ್ಕವನ್ನು ಕಡಿಮೆ ಮಾಡುತ್ತಿರುವಾಗಿ ಘೋಷಿಸಿದೆ. ಹಬ್ಬದ ಸೀಸನ್ ಸಮೀಪಿಸುತ್ತಿರುವುದರಿಂದ ಮತ್ತು ಹಬ್ಬದ ಮಾರಾಟಕ್ಕೆ ಮಾರಾಟಗಾರರು ಸಿದ್ಧವಾಗುತ್ತಿರುವುದರಿಂದ ಅವರಿಗೆ ಪ್ರೋತ್ಸಾಹ ನೀಡುವ ಸಲುವಾಗಿ ಸೆಪ್ಟೆಂಬರ್ 9, 2024ರಿಂದ ಮಾರಾಟ ಶುಲ್ಕವನ್ನು ಕಡಿಮೆ ಮಾಡಲಾಗುತ್ತಿದೆ. ಶುಲ್ಕವನ್ನು ಕಡಿಮೆ ಮಾಡುವ ಮೂಲಕ ಅಮೆಜಾನ್ ಇಂಡಿಯಾ ಸಂಸ್ಥೆಯು ಎಲ್ಲಾ ವರ್ಗದ ಮಾರಾಟಗಾರರ ಜೊತೆಗಿನ ಬಂಧವನ್ನು ಗಟ್ಟಿಸುವ ಗುರಿಯನ್ನು ಇಟ್ಟುಕೊಂಡಿದೆ. ಈ ಯೋಜನೆಯು ಮಾರಾಟಗಾರರು ಅಮೆಜಾನ್.ಇನ್ ನಲ್ಲಿ ತಮ್ಮ ಉತ್ಪನ್ನ ಪೋರ್ಟ್ ಫೋಲಿಯೋವನ್ನು ವಿಸ್ತರಿಸಲು ಮತ್ತು ಅವರ ಬಿಸಿನೆಸ್ ಅನ್ನು ಬೆಳೆಸಲು ಅನುವು ಮಾಡಿ ಕೊಡುತ್ತದೆ.

ಈ ಯೋಜನೆಯ ಮೂಲಕ ಅಮೆಜಾನ್ ಇಂಡಿಯಾ ಸಂಸ್ಥೆಯು ಮಾರಾಟಗಾರರಿಗೆ ವಿವಿಧ ಉತ್ಪನ್ನ ವಿಭಾಗಗಳಲ್ಲಿ ಶೇ.3 ರಿಂದ ಶೇ.12ರವರೆಗಿನ ಮಾರಾಟ ಶುಲ್ಕ ಕಡಿಮೆಗೊಳಿಸುವ ಪ್ರಯೋಜನ ಒದಗಿಸುತ್ತಿದೆ. ಈ ಹೊಸ ದರ ಕಾರ್ಡ್ ವಿಶೇಷವಾಗಿ ರೂ.500 ಕ್ಕಿಂತ ಕಡಿಮೆ ಬೆಲೆಯ ಕೈಗೆಟುಕುವ ದರದ ಉತ್ಪನ್ನಗಳನ್ನು ಒದಗಿಸುವ ಮಾರಾಟಗಾರರಿಗೆ ಹೆಚ್ಚಿನ ಲಾಭ ನೀಡುತ್ತದೆ. ಉದಾಹರಣೆಗೆ ರೂ. 299ರ ಬೆಲೆಯಲ್ಲಿ ಮುದ್ರಿತ ಟೀ ಶರ್ಟ್ಗಳನ್ನು ಮಾರಾಟ ಮಾಡುತ್ತಿರುವ ಮಾರಾಟಗಾರರು ಈಗ ಕೇವಲ 2% ರಷ್ಟು ಕಡಿಮೆ ರೆಫರಲ್ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ಹಿಂದೆ ಅವರು 13.5%ನಷ್ಟು ಶುಲ್ಕವನ್ನು ಪಾವತಿಸಬೇಕಿತ್ತು. ಇದರಿಂದಾಗಿ ಮಾರಾಟಗಾರರಿಗೆ ಪ್ರತೀ ಉತ್ಪನ್ನದಲ್ಲಿ ರೂ.34ರಷ್ಟು ಉಳಿತಾಯ ಆಗುತ್ತದೆ. ಶುಲ್ಕ ಕಡಿತ ಆಫರ್ ವ್ಯಾಪಕ ಶ್ರೇಣಿಯ ಉತ್ಪನ್ನ ವಿಭಾಗಗಳ ಮೇಲೆ ಅನ್ವಯಿಸುತ್ತವೆ. ಹೋಮ್ ಫರ್ನಿಶಿಂಗ್ ಅಂದ್ರೆ, ಗೃಹಾಲಂಕಾರ ಉತ್ಪನ್ನಗಳ ಮೇಲೆ 9% ಕಡಿತ, ಒಳಾಂಗಣ ಲೈಟಿಂಗ್ ಉತ್ಪನ್ನಗಳ ಮೇಲೆ 8% ಕಡಿತ, ಗೃಹೋತ್ಪನ್ನಗಳ ಮೇಲೆ 8% ಕಡಿತ ಘೋಷಿಸಲಾಗಿದ್ದು, ಹೀಗೆ ಬೇರೆ ಬೇರೆ ವಿಭಾಗಕ್ಕೆ ಭಿನ್ನ ರೀತಿಯ ಶುಲ್ಕ ಕಡಿತ ಅನ್ವಯವಾಗುತ್ತದೆ.

ಈ ಕುರಿತು ಮಾತನಾಡುವ ಅಮೆಜಾನ್ ಇಂಡಿಯಾದ ಸೆಲ್ಲಿಂಗ್ ಪಾರ್ಟ್ನರ್ ಸರ್ವೀಸಸ್ ವಿಭಾಗದ ನಿರ್ದೇಶಕ ಅಮಿತ್ ನಂದಾ ಅವರು, ಅಮೆಜಾನ್ನಲ್ಲಿ ನಾವು ಸಣ್ಣ ಮತ್ತು ಮಧ್ಯಮ ಉದ್ದಿಮೆಗಳಿಂದ ಹಿಡಿದು ಹೊಸ ಉದ್ಯಮ ಸ್ಥಾಪಿಸಲು ಬಯಸುವ ಹೊಸ ಉದ್ಯಮಿಗಳವರೆಗೆ ಎಲ್ಲಾ ವರ್ಗದ, ಎಲ್ಲಾ ಗಾತ್ರದ ಉದ್ದಿಮೆಗಳಿಗೆ ಪ್ರೋತ್ಸಾಹ ನೀಡಲು ಆಶಿಸುತ್ತೇವೆ. ಈಗ ಪರಿಚಯಿಸುತ್ತಿರುವ ಶುಲ್ಕ ಕಡಿತ ಆಫರ್ ಅನ್ನು ನಮ್ಮ ಮಾರಾಟಗಾರರಿಂದ ಅದರಲ್ಲೂ ವಿಶೇಷವಾಗಿ ಸಣ್ಣ ವ್ಯಾಪಾರಿಗಳಿಂದ ದೊರೆತ ಪ್ರತಿಕ್ರಿಯೆಯನ್ನು ಆಧರಿಸಿಕೊಂಡು ಜಾರಿಗೊಳಿಸಲಾಗುತ್ತಿದೆ. ಈ ಮೂಲಕ ನಾವು ಉನ್ನತ ಮಟ್ಟದ ಮಾರಾಟಗಾರ-ಸ್ನೇಹಿ ವ್ಯವಸ್ಥೆಯನ್ನು ರಚಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನು ಇಡುತ್ತಿದ್ದೇವೆ ಎಂದು ಹೇಳಿದರು.

ಹಬ್ಬದ ಸೀಸನ್ ಸಮೀಪಿಸುತ್ತಿರುವಂತೆ ಆ ಆಫರ್ ಅನ್ನು ನಾವು ಜಾರಿಗೊಳಿಸುತ್ತಿದ್ದೇವೆ. ಹಾಗಂತ ಈ ಬದಲಾವಣೆ ಕೇವಲ ಹಬ್ಬಕ್ಕೆ ಮಾತ್ರವೇ ಪರಿಚಯಿಸಿರುವ ತಾತ್ಕಾಲಿಕ ಕ್ರಮ ಅಲ್ಲ ಎಂಬು ಅಮೆಜಾನ್ ಸ್ಪಷ್ಟವಾಗಿ ತಿಳಿಸಿದೆ. ಶುಲ್ಕ ಇಳಿಕೆಯ ಆಫರ್ ಮಾರಾಟಗಾರರು ದೀಪಾವಳಿ ಹಬ್ಬದ ಶಾಪಿಂಗ್ ಸಂದರ್ಭದಲ್ಲಿ ಉತ್ತಮ ಮಾರಾಟ ಕೈಗೊಳ್ಳಲು ನೆರವಾಗಲಿದೆ ಮತ್ತು ಹಬ್ಬಗಳಿಗೆ ಹೊರತಾಗಿಯೂ ಯಶಸ್ಸು ಸಾಧಿಸಲು ಸಹಾಯ ಮಾಡುತ್ತದೆ.

ಈ ಕುರಿತು ಮಾತು ಮಾತು ಮುಂದುವರಿಸಿದ ಅಮಿತ್ ನಂದಾ ಅವರು, ಮಾರಾಟಗಾರರು ವಿಶೇಷವಾಗಿ ಕೈಗೆಟುಕುವ ದರದ ಉತ್ಪನ್ನಗಳನ್ನು ಮಾರಾಟಮಾಡುವವರು ಅತಿ ಹೆಚ್ಚು ಶುಲ್ಕ ಕಡಿತದ ಲಾಭ ಪಡೆಯುತ್ತಾರೆ. ಇದರಿಂದ ಅವರು ಬಿಸಿನೆಸ್ ನಲ್ಲಿ ಹೆಚ್ಚು ಅಭಿವೃದ್ಧಿ ಹೊಂದಲು ಮತ್ತೆ ಹೂಡಿಕೆ ಮಾಡುವ ಅವಕಾಶ ದೊರೆಯುತ್ತದೆ. ಮುಂದಿನ ಹಬ್ಬದ ಸೀಸನ್ ನಲ್ಲಿ ಮತ್ತು ಅದರಾಚೆಯೂ ನಮ್ಮ ಮಾರಾಟಗಾರರು ಅದ್ಭುತವಾಗಿ ಅಭಿವೃದ್ಧಿ ಹೊಂದುವುದಕ್ಕೆ ಈ ಆಫರ್ ಕಾರಣವಾಗುತ್ತದೆ ಎಂಬ ಕುರಿತು ನಮಗೆ ವಿಶ್ವಾಸ ಇದೆ'' ಎಂದು ಹೇಳಿದರು.

ವಿವಿಧ ದರ ಪಟ್ಟಿಗಳಾದ್ಯಂತ 59 ಉಪ-ವರ್ಗಗಳಲ್ಲಿ ಮಾರಾಟಗಾರರ ಶುಲ್ಕದಲ್ಲಿ ಕಡಿತ ಮಾಡಲಾಗುತ್ತಿದೆ.

ಗೃಹೋತ್ಪನ್ನ, ಉಡುಪು, ಅಡುಗೆ ಮನೆ ಉತ್ಪನ್ನ, ಗೃಹಾಲಂಕಾರ ಉತ್ಪನ್ನ, ವೈರ್ ಲೆಸ್ ಪರಿಕರಗಳು, ಕಚೇರಿ ಉತ್ಪನ್ನಗಳು, ಕ್ರೀಡಾ ಉತ್ಪನ್ನಗಳು, ಶೂಗಳು, ಲಗೇಜ್ ಉತ್ಪನ್ನಗಳು, ಸಾಕುಪ್ರಾಣಿಗಳ ಉತ್ಪನ್ನಗಳು, ಆಭರಣಗಳು, ಸೌಂದರ್ಯ ವರ್ಧಕ ಉತ್ಪನ್ನಗಳು, ವಾಚ್ ಗಳು ಮತ್ತು ಇತ್ಯಾದಿ ವಿಭಾಗಗಳಲ್ಲಿ ಕಡಿಮೆ ಬೆಲೆಯ ಉತ್ಪನ್ನಗಳ ಮೇಲೆ ಮಾರಾಟಗಾರರಿಗೆ ರೆಫರಲ್ ಶುಲ್ಕವನ್ನು ಕಡಿಮೆಗೊಳಿಸಲಾಗುತ್ತದೆ. ಅದರಲ್ಲೂ ಗೃಹೋತ್ಪನ್ನ, ಉಡುಪು ಮತ್ತು ಅಡುಗೆ ಮನೆ ಉತ್ಪನ್ನಗಳ ವಿಭಾಗಗಳಲ್ಲಿ ಹೆಚ್ಚಿನ ಶುಲ್ಕ ಕಡಿತ ಒದಗಿಸಲಾಗುತ್ತದೆ.

ಪೂರೈಕೆ ಕೇಂದ್ರಗಳು, ಸೆಲ್ಲರ್ ಫ್ಲೆಕ್ಸ್ ಮತ್ತು ಸುಲಭ ಸಾಗಣೆಗಾಗಿ ತೂಕ ನಿರ್ವಹಣಾ ಶುಲ್ಕವನ್ನು ಮಾರಾಟಗಾರರಿಗೆ ಅನ್ವಯಿಸುವ ಸ್ಟೆಪ್ ಹಂತಗಳ ಆಧಾರದ ಮೇಲೆ ಪರಿಷ್ಕರಿಸಲಾಗಿದೆ.

# ಹುಬ್ಬು ಹೆಚ್ಚಿಸುತ್ತೆ ಹೆಣ್ಣಿನ ಸೌಂದರ್ಯ

ಬ್ಯೂಟಿ ಟಿಪ್ಸ್



ಕಣ್ಣು, ಮುಖ ಸುಂದರವಾಗಿ ಕಾಣಬೇಕೆಂದ್ರೆ, ಕಣ್ಣಿನ ಹುಬ್ಬು ಕೂಡ ಮಹತ್ವದ ಪಾತ್ರವಹಿಸುತ್ತದೆ. ಹುಬ್ಬು ಸುಂದರವಾಗಿದ್ದರೆ ಮಹಿಳೆ ಎಲ್ಲರನ್ನು ಆಕರ್ಷಿಸಬಲ್ಲಳು. ಐಬ್ರೋ ಮಾಡಿದ ನಂತ್ರ ಹುಬ್ಬು ದಟ್ಟವಾಗಿ, ಕಪ್ಪಾಗಿ ಕಾಣಬೇಕೆಂದು ಕೆಲವರು ಇನ್ನಿಲ್ಲದ ಪ್ರಯತ್ನ ನಡೆಸುತ್ತಾರೆ.ಕಾಡಿಗೆ ಹಚ್ಚಿಕೊಳ್ಳುತ್ತಾರೆ. ಮಾರುಕಟ್ಟೆಯಲ್ಲಿ ಸಿಗುವ ಸೌಂದರ್ಯ ವರ್ದಕಗಳನ್ನು ಬಳಸ್ತಾರೆ. ಆದ್ರೆ ಮನೆಯಲ್ಲಿಯೇ ಹುಬ್ಬಿನ ಸೌಂದರ್ಯ ಹೆಚ್ಚಿಸಿಕೊಳ್ಳಬಹುದು. ಕ್ಯಾಸ್ಟರ್ ಆಯಿಲ್ ಬಳಸುವ ಮೂಲಕ ಹುಬ್ಬಿನ ಸೌಂದರ್ಯ ಹೆಚ್ಚಿಸಿಕೊಳ್ಳಬಹುದು.ಮೊದಲು ಹುಬ್ಬನ್ನು ಶುದ್ಧವಾದ ನೀರಿನಲ್ಲಿ ಸ್ವಚ್ಛಗೊಳಿಸಿ. ನಂತ್ರ ಕೈಗೆ ಕ್ಯಾಸ್ಟರ್ ಆಯಿಲ್ ನ ಕೆಲ ಹನಿಗಳನ್ನು ತೆಗೆದುಕೊಳ್ಳಿ. ಅದನ್ನು ಐಬ್ರೋಗೆ ಹಚ್ಚಿಕೊಳ್ಳಿ. ನಂತ್ರ ನಿಧಾನವಾಗಿ ಇದನ್ನು ಮಸಾಜ್ ಮಾಡಿ. ನಂತ್ರ 30 ನಿಮಿಷ ಹಾಗೆ ಬಿಡಿ. ಸತತ 10 ದಿನಗಳ ಕಾಲ ಇದನ್ನು ಹಚ್ಚಿದ್ರೆ, ಐಬ್ರೋ ದಟ್ಟವಾಗಿ, ಕಪ್ಪಾಗಿ ಬರುತ್ತದೆ.ಇದು ಹುಬ್ಬುಗಳ ಬೆಳವಣಿಗೆಯನ್ನು ಹೆಚ್ಚಿಸುತ್ತದೆ. ಕೂದಲು ದಟ್ಟವಾಗಿ ಬೆಳೆಯಲು ಅನುಕೂಲ ಮಾಡಿಕೊಡುತ್ತದೆ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಸಾಧಾರಣ ಲಾಭ, ವಿರೋಧಿಗಳಿಂದ ತೊಂದರೆ, ಆರೋಗ್ಯದಲ್ಲಿ ಚೇತರಿಕೆ, ಪುಣ್ಯಕ್ಷೇತ್ರ ದರ್ಶನ.

**ವೃಷಭ:** ಪ್ರೀತಿ ಸಮಾಗಮ, ಆಕಸ್ಮಿಕ ಧನ ಆಗಮನ, ಟ್ರಾವೆಲ್ಸ್‌ನವರಿಗೆ ಅಧಿಕ ಲಾಭ, ನೆಮ್ಮದಿ.

**ಮಿಥುನ:** ವಾಹನ ಖರೀದಿ, ಭೋಗ ವಸ್ತುಗಳು ಪ್ರಾಪ್ತಿ, ಸ್ತ್ರೀಯರಿಗೆ ಶುಭ, ಸಾಲ ಮಾಡುವ ಪರಿಸ್ಥಿತಿ.

**ಕಟಕ:** ಆತ್ಮೀಯರಲ್ಲಿ ಕಲಹ, ರಾಜ ಭಯ, ಮಾತಿನ ಚಕಮಕಿ, ಶರೀರದಲ್ಲಿ ಆಯಾಸ, ಉದರಭಾದೆ, ಮಾತಿನ ಮೇಲೆ ಹಿಡಿತವಿರಲಿ.

**ಸಿಂಹ:** ದೃಷ್ಟಿ ದೋಷದಿಂದ ತೊಂದರೆ, ಸರ್ಪ ಭಯ, ದೂರ ಪ್ರಯಾಣ ಸಾಧ್ಯತೆ, ಬಾಕಿ ವಸೂಲಿ, ಕೀಲು ನೋವು.

**ಕನ್ಯಾ:** ಮನಸ್ಸಿನಲ್ಲಿ ಗೊಂದಲ, ದಂಡ ಕಟ್ಟುವ ಸಾಧ್ಯತೆ, ಸರ್ಕಾರಿ ಅಧಿಕಾರಿಗಳಿಂದ ತೊಂದರೆ, ಅತಿಯಾದ ನಷ್ಟ, ವಿಪರೀತ ದುಶ್ಚಟ .

**ತುಲಾ:** ಇಷ್ಟ ವಸ್ತುಗಳ ಖರೀದಿ, ಭೂ ಲಾಭ, ವಿದ್ಯೆಯಲ್ಲಿ ಅಭಿವೃದ್ಧಿ, ವಿದೇಶ ಪ್ರಯಾಣ, ತಾಳ್ಮೆ ಅತ್ಯಗತ್ಯ, ಮಹಿಳೆಯರಿಗೆ ಅನುಕೂಲಕರ ದಿನ.

**ವೃಶ್ಚಿಕ:** ಉದ್ಯೋಗದಲ್ಲಿ ಹೆಚ್ಚಿನ ಜವಾಬ್ದಾರಿ, ಸಾಮಾನ್ಯ ಸೌಖ್ಯಕ್ಕೆ ಧಕ್ಕೆ, ಕುಲದೇವರ ದರ್ಶನದಿಂದ ಅನುಕೂಲಕರ.

**ಧನಸ್ಸು:** ಮಿತ್ರರ ಭೇಟಿ, ತೀರ್ಥಕ್ಷೇತ್ರಗಳ ದರ್ಶನ, ಪ್ರಭಾವಿ ವ್ಯಕ್ತಿಗಳ ಭೇಟಿ, ಕೆಲಸದಲ್ಲಿ ಜಯ, ದುಷ್ಟರಿಂದ ತೊಂದರೆ ಸಾಧ್ಯತೆ.

**ಮಕರ:** ಶುಭ ಸುದ್ದಿ ಕೇಳುವಿರಿ, ಮಾನಸಿಕ ನೆಮ್ಮದಿ, ಸಕಾಲದಲ್ಲಿ ಕೆಲಸ ಆಗುವುದಿಲ್ಲ, ಕೃಷಿಯಲ್ಲಿ ಲಾಭ, ಕೋಪ ಜಾಸ್ತಿ.

**ಕುಂಭ:** ಮಹಿಳೆಯರಿಗೆ ವಿಶೇಷ ಲಾಭ,ಮಾತಿನಲ್ಲಿ ಹಿಡಿತವಿರಲಿ, ಅಪರಿಚಿತದಿಂದ ತೊಂದರೆ, ಉದ್ಯೋಗದಲ್ಲಿ ಪ್ರಗತಿ.

**ಮೀನ:** ಸಂಕಷ್ಟಗಳು ಹೆಚ್ಚುವುದು, ತಾಳ್ಮೆ ಕಳೆದುಕೊಳ್ಳಬೇಡಿ, ಸ್ತ್ರೀಯರಿಗೆ ನೆಮ್ಮದಿ, ರೋಗಭಾದೆ, ಅನ್ಯರಲ್ಲಿ ಮನಸ್ತಾಪ

# ಅಂತರಾಷ್ಟ್ರೀಯ ಲಾಟರಿ ದಿನ




ಅಂತರರಾಷ್ಟ್ರೀಯ ಲಾಟರಿ ದಿನವು ಯುನೈಟೆಡ್ ಕಿಂಗ್ಡಮ್ (ಯುಕೆ) ನಲ್ಲಿ ಆಗಸ್ಟ್ 27 ರಂದು ಆಚರಿಸಲಾಗುವ ವಾರ್ಷಿಕ ಆಚರಣೆಯಾಗಿದೆ. ಪ್ರಾಚೀನ ಕಾಲದಿಂದಲೂ ಅಸ್ತಿತ್ವದಲ್ಲಿದ್ದ ಲಾಟರಿಗಳ ಪ್ರಾಚೀನ ಇತಿಹಾಸವನ್ನು ಆಚರಿಸಲು ದಿನವು ಗುರಿಯನ್ನು ಹೊಂದಿದೆ. ಲಾಟರಿಗಳು ಪ್ರಪಂಚದಾದ್ಯಂತ ಜನಪ್ರಿಯವಾಗಿವೆ. ಹಿಂದೆ, ಲಾಟರಿ ಶ್ರೀಮಂತರಲ್ಲಿ ಜನಪ್ರಿಯ ಮನರಂಜನೆಯ ರೂಪವಾಗಿತ್ತು. ಲಾಟರಿಗಳು ಅದೃಷ್ಟದ ಆಟಗಳಾಗಿವೆ, ಅಲ್ಲಿ ಭಾಗವಹಿಸುವವರು ಬಹುಮಾನಗಳನ್ನು ಗೆಲ್ಲುವ ಅವಕಾಶಕ್ಕಾಗಿ ಟಿಕೆಟ್ಗಳನ್ನು ಖರೀದಿಸುತ್ತಾರೆ, ಮುಖ್ಯ ಬಹುಮಾನವೆಂದರೆ ಹಣದ ಜಾಕ್ಪಾಟ್ಗಳು. ದಿನವು ಲಾಟರಿಗಳು ಒದಗಿಸುವ ಮನರಂಜನೆ ಮತ್ತು ಉತ್ಸಾಹದ ಆಚರಣೆಯಾಗಿದೆ. ನಾವು ಅಂತರರಾಷ್ಟ್ರೀಯ ಲಾಟರಿ ದಿನ 2023 ಅನ್ನು ಆಚರಿಸುತ್ತಿರುವಾಗ, ಅಂತರಾಷ್ಟ್ರೀಯ ಲಾಟರಿ ದಿನದ ಇತಿಹಾಸ ಮತ್ತು ಮಹತ್ವದ ಬಗ್ಗೆ ನೀವು ತಿಳಿದುಕೊಳ್ಳಬೇಕಾದದ್ದು ಇಲ್ಲಿದೆ. ಮೆಗಾ ಮಿಲಿಯನ್ ಲಾಟರಿ: ಗಖಆ 1.05 ಬಿಲಿಯನ್ ಜಾಕ್ಪಾಟ್ ಡ್ರಾಯಿಂಗ್ ಆಫರ್ಗಳನ್ನು 7ನೇ ಅತಿ ದೊಡ್ಡ ಬಹುಮಾನವಾಗಿ ಚಿತ್ರೀಕರಿಸಲಾಗಿದೆ.

ಪುರಾವೆಗಳು ಲಾಟರಿಗಳು ಪ್ರಾಚೀನ ಬೇರುಗಳನ್ನು ಹೊಂದಿವೆ ಮತ್ತು ಪ್ರಾಚೀನ ಚೀನಾ, ಈಜಿಪ್ಟ್ ಮತ್ತು ರೋಮ್ನಂತಹ ಆರಂಭಿಕ ನಾಗರಿಕತೆಗಳಲ್ಲಿ ಬಳಸಲಾಗುತ್ತಿತ್ತು ಎಂದು ಸೂಚಿಸುತ್ತದೆ. ನವೋದಯದ ಸಮಯದಲ್ಲಿ, ಲಾಟರಿಗಳು ಯುರೋಪ್ನಲ್ಲಿ ಪ್ರಾಮುಖ್ಯತೆಯನ್ನು ಗಳಿಸಿದವು, ಅಲ್ಲಿ ಸರ್ಕಾರಗಳು ಸೇತುವೆಗಳು, ರಸ್ತೆಗಳು ಮತ್ತು ಕೋಟೆಗಳಂತಹ ಸಾರ್ವಜನಿಕ ಯೋಜನೆಗಳಿಗೆ ಹಣವನ್ನು ಸಂಗ್ರಹಿಸಲು ಅವುಗಳನ್ನು ಸಂಘಟಿಸಿದವು. ಐತಿಹಾಸಿಕ ದಾಖಲೆಗಳ ಪ್ರಕಾರ, 17 ನೇ ಮತ್ತು 18 ನೇ ಶತಮಾನಗಳ ವೇಳೆಗೆ ವ್ಯಾಪಕವಾದ ಯೋಜನೆಗಳಿಗೆ ಆದಾಯವನ್ನು ಗಳಿಸಲು ವಿವಿಧ ಯುರೋಪಿಯನ್ ಸರ್ಕಾರಗಳು ಲಾಟರಿಗಳನ್ನು ಬಳಸುತ್ತಿದ್ದವು.

ಅಂತರರಾಷ್ಟ್ರೀಯ ಲಾಟರಿ ದಿನವು ಲಾಟರಿ ಚಟುವಟಿಕೆಗಳಲ್ಲಿ ಜನರ ಜವಾಬ್ದಾರಿಯುತ ಭಾಗವಹಿಸುವಿಕೆಯನ್ನು ಪ್ರೋತ್ಸಾಹಿಸುತ್ತದೆ. ಲಾಟರಿಗಳನ್ನು ಒಳಗೊಂಡಂತೆ ಜೂಜಾಟವು ನಕಾರಾತ್ಮಕ ಪರಿಣಾಮಗಳನ್ನು ಬೀರಬಹುದು ಎಂದು ವ್ಯಕ್ತಿಗಳು ಗಮನಿಸಬೇಕು, ಆದ್ದರಿಂದ ಅದರ ಸಂಭಾವ್ಯ ಅಪಾಯಗಳ ಬಗ್ಗೆ ಒಬ್ಬರು ತಿಳಿದಿರಬೇಕು. ಇಂದು ಅನೇಕ ಲಾಟರಿಗಳು ತಮ್ಮ ಆದಾಯದ ಒಂದು ಭಾಗವನ್ನು ದತ್ತಿ ಉದ್ದೇಶಗಳು, ಶಿಕ್ಷಣ, ಆರೋಗ್ಯ ಮತ್ತು ಇತರ ಸಾರ್ವಜನಿಕ ಉಪಕ್ರಮಗಳಿಗೆ ಕೊಡುಗೆ ನೀಡುತ್ತವೆ.

ಸಂಜೆ ಮುಗಿಲು
ಮಂಗಳವಾರ
27.8.2024



# ತಾಯ್ನಾಡಿಗೆ ಮರಳಿದ ಭಾರತದ ಪ್ರಪ್ರಥಮ ನಾಗರಿಕ ಗಗನಯಾನಿ ಗೋಪಿಚಂದ್



**ಹೊಸದಿಲ್ಲಿ:** ಭಾರತದ ಪ್ರಪ್ರಥಮ ನಾಗರಿಕ ಬಾಹ್ಯಾಕಾಶ ಪ್ರಯಾಣಿಕ ಗೋಪಿಚಂದ್ ಥೋಟಕೂರ ಸೋಮವಾರ ಹೊಸದಿಲ್ಲಿಗೆ ಆಗಮಿಸಿದ್ದು, ಅವರಿಗೆ ಭವ್ಯ ಸ್ವಾಗತವನ್ನು ನೀಡಲಾಯಿತು.

ಅಮೆಝೂನ್ ಸಂಸ್ಥೆಯ ಸಂಸ್ಥಾಪಕ ಜೆಫ್ ಬೆರೋಸ್ ಅವರ ಬಾಹ್ಯಾಕಾಶ ಕಂಪೆನಿ 'ಬ್ಲೂ ಓರಿಜಿನ್' ಉಡಾವಣೆಗೊಳಿಸಿದ್ದ ನ್ಯೂ ಶೆಫರ್ಡ್-25 (ಎನ್ ಎಸ್-25) ನೌಕೆಯ ಗಗನಯಾನಿ ಸಿಬ್ಬಂದಿಗಳಲ್ಲೊಬ್ಬರಾಗಿ ಅವರು ಅಂತರಿಕ್ಷಕ್ಕೆ ಮೇ 19ರಂದು ಪ್ರಯಾಣಿಸಿದ್ದರು.

''ತಾಯ್ನಾಡಿಗೆ ಮರಳಿರುವುದು ನನಗೆ ಸಂತಸ ತಂದಿದೆ. ಭಾರತದ ಪಾಲಿಗೂ ಇದೊಂದು ಹೆಮ್ಮೆಯ ಕ್ಷಣವಾಗಿದೆ. ದೇಶವನ್ನು ಪ್ರತಿನಿಧಿಸಿರುವುದು ನನಗೆ ಸಂದ ಗೌರವವಾಗಿದೆ ''ಎಂದು ಹೇಳಿದರು. ಆನಂತರ ಅವರು ಆಂಧ್ರಪ್ರದೇಶದ ವಿಜಯವಾಡದಲ್ಲಿರುವ ತನ್ನ ಹೆತ್ತವರನ್ನು ಭೇಟಿಯಾಗಲು ತೆರಳಿದರು.

ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಎರಡನೇ ಭಾರತೀಯರೆಂಬ ಹೆಗ್ಗಳಿಕೆಗೆ ಗೋಪಿಚಂದ್ ಥೋಟಕರ ಪಾತ್ರರಾಗಿದ್ದಾರೆ. ಭಾರತೀಯ ವಾಯುಪಡೆಯ ಮಾಜಿ ಪೈಲಟ್, ವಿಂಗ್ ಕಮಾಂಡರ್ ರಾಕೇಶ್ ಶರ್ಮಾ ಅವರು 1984ರಲ್ಲಿ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಪ್ರಪ್ರಥಮ ಭಾರತೀಯ ಪ್ರಜೆಯಾಗಿದ್ದಾರೆ.

# ಗಾಝಾದ ಮೇಲೆ ಇಸ್ರೇಲ್ ವಾಯುದಾಳಿ

**ಗಾಝಾ:** ಗಾಝಾ ನಗರದ ಮೇಲೆ ಸೋಮವಾರ ಬೆಳಿಗ್ಗೆ ಇಸ್ರೇಲ್ ನಡೆಸಿದ ಎರಡು ಪ್ರತ್ಯೇಕ ವೈಮಾನಿಕ ದಾಳಿಯಲ್ಲಿ ಕನಿಷ್ಠ 11 ಮಂದಿ ಫೆಲಸ್ತೀನೀಯರು ಮೃತಪಟ್ಟಿದ್ದು ಹಲವರು ಗಾಯಗೊಂಡಿರುವುದಾಗಿ ಫೆಲೆಸ್ತೀನ್ನಲ ವಫಾ ಸುದ್ದಿಸಂಸ್ಥೆ ವರದಿ ಮಾಡಿದೆ.

ಗಾಝಾ ನಗರದ ಪಶ್ಚಿಮ ಭಾಗದಲ್ಲಿರುವ ಆಸ್ಪತ್ರೆಯ ಬಳಿಯ ಮನೆಯೊಂದನ್ನು ಗುರಿಯಾಗಿಸಿ ನಡೆಸಿದ ದಾಳಿಯಲ್ಲಿ 5 ಫೆಲೆಸ್ತೀನೀಯರು ಮೃತಪಟ್ಟಿದ್ದಾರೆ.

ಮತ್ತೊಂದು ಘಟನೆಯಲ್ಲಿ, ಗಾಝಾ ನಗರದ ಬೀಚ್ ಬಳಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ 6 ಫೆಲೆಸ್ತೀನೀಯರು ಸಾವನ್ನಪ್ಪಿದ್ದಾರೆ ಎಂದು ವೈದ್ಯಕೀಯ ಅಧಿಕಾರಿಗಳನ್ನು ಉಲ್ಲೇಖಿಸಿ ವಫಾ ವರದಿ ಮಾಡಿದೆ.



# ಇಡೀ ಊರನ್ನೇ ತನ್ನದೆಂದು ಘೋಷಿಸಿದ ವಕ್ಫ್ ಬೋರ್ಡ್!

**ಬಿಹಾರ:** ಬಿಹಾರದ ವಕ್ಫ್ ಬೋರ್ಡ್ 95% ಹಿಂದೂ ಜನಸಂಖ್ಯೆಯನ್ನು ಹೊಂದಿರುವ ಸಂಪೂರ್ಣ ಗ್ರಾಮವನ್ನು ತನ್ನ ಆಸ್ತಿ ಎಂದು ಘೋಷಣೆ ಮಾಡಿದೆ.ಅಷ್ಟೇ ಅಲ್ಲದೆ ವಕ್ಫ್ ಬೋರ್ಡ್, ಈ ಗೋಬಿಂದಪುರ ಗ್ರಾಮಸ್ಥರು ತಮ್ಮ ಭೂಮಿ ಮತ್ತು ಮನೆಗಳನ್ನು 30 ದಿನಗಳೊಳಗೆ ಖಾಲಿ ಮಾಡುವಂತೆ ಆದೇಶಿಸಿದೆ. ಈ ಗ್ರಾಮದಲ್ಲಿ ಜನರು ತಾವುಕ್ ನಿರ್ಮಿಸಿದ ಮನೆಗಳಲ್ಲಿ ಹಲವಾರು ವರ್ಷಗಳಿಂದ ವಾಸಿಸುತ್ತಿದ್ದಾರೆ. ಜಮೀನುಗಳನ್ನು ಹೊಂದಿದ್ದಾರೆ. ಆದ್ರೆ ಇದೀಗ ಈ ವಕ್ಫ್ ಬೋರ್ಡ್ ಕಿತಾಪತಿಯಿಂದ ಜನ ಕಂಗಾಲಾಗಿದ್ದಾರೆ. ಹೀಗಾಗಿ ಇದನ್ನ ಪ್ರತಿರೋಧಿಸಿದ ಜನ ವಕ್ಫ್ ನ ಈ ಆದೇಶವನ್ನ ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿರುವ ಎ ಗ್ರಾಮದ ಜನ, ನಾವು ವಕ್ಫ್ ನ ಈ ಆದೇಶದ ಬಗ್ಗೆ ಪಾಟ್ನಾ ಹೈಕೋರ್ಟ್ನ ಬಾಗಿಲು ತಟ್ಟಿದಾಗ, ವಕ್ಫ್ ಮಂಡಳಿಯು ನ್ಯಾಯಾಲಯದಲ್ಲಿ ಈ ಜಾಗ ಅವರದ್ದು ಎಂದು ಸಾಭೀತುಪಡಿಸಲು ಒಂದೇ ಒಂದು ಪುರಾವೆಯನ್ನು ಪ್ರಸ್ತುತಪಡಿಸಲು ಸಾಧ್ಯವಾಗಲಿಲ್ಲ ಎಂದು ಜನರು ಹೇಳಿದ್ದಾರೆ.




# ಕೇರಳದ ತ್ರಿಶ್ಯೂರ್ ಪೂರಂ ಉತ್ಸವದಲ್ಲಿ ರೊಚ್ಚಿಗೆದ್ದ ಆನೆ

**ತ್ರಿಶ್ಯೂರ್:** ಕೇರಳದ ಸಾಂಸ್ಕೃತಿಕ ರಾಜಧಾನಿ ತ್ರಿಶ್ಯೂರ್ನಲ್ಲಿಆಯೋಜನೆಗೊಳ್ಳು ಪೂರಂ ಹಬ್ಬದ ಪ್ರಮುಖ ಆಕರ್ಷಣೆ ಆನೆಗಳು. ಪ್ರತಿ ವರ್ಷ ಮೂರ್ನಾಲ್ಕು ತಿಂಗಳ ಕಾಲ ನಡೆಯುವ ಈ ಹಬ್ಬದ ವಿಶೇಷ ಆಕರ್ಷಣೆಯೇ ಕೊನೆಯ ಭಾಗವಾದ ಆನೆಗಳ ಚಮತ್ಕಾರ. ಈ ಬಾರಿ ಆನೆಗಳು ತಮ್ಮ ಚಾಕಚಕ್ಯತೆಯನ್ನು ಸಹಸ್ರಾರು ಮಂದಿಯ ನಡುವೆ ಪ್ರದರ್ಶನ ಮಾಡುತ್ತಿದ್ದವು. ಈ ವೇಳೆ ಆನೆಯೊಂದು ನಿಯಂತ್ರಣ ಕಳೆದುಕೊಂಡು ಜನರ ಕಡೆಗೆ ನುಗ್ಗಿದ್ದೂ ಅಲ್ಲದೇ ಇನ್ನೊಂದು ಆನೆ ಮೇಲೆ ದಾಳಿ ಮಾಡಿರುವ ಘಟನೆ ಐದು ತಿಂಗಳ ಹಿಂದೆ ಅಂದರೆ ಮಾರ್ಚ್ನಲ್ಲಿ ನಡೆದಿತ್ತು. ಇದರಿಂದ ಇಡೀ ಉತ್ಸವ ಅಸ್ತವ್ಯಸ್ತಗೊಂಡು ಕೇರಳದ ನಾನಾ ಭಾಗಳಿಂದ ಆಗಮಿಸಿದ್ದ ಸಹಸ್ರಾರು ಮಂದಿ ದಿಕ್ಕಾಪಾಲಾಗಿ ಓಡಿ ಹೋಗುವ ಸನ್ನಿವೇಶ ಎದುರಾಗಿತ್ತು. ಆ ಕ್ಷಣದ ವಿಡಿಯೋ ಈಗ ವೈರಲ್ ಆಗಿದೆ.

ಪೂರಂ ಉತ್ಸವ ತ್ರಿಶ್ಯೂರ್ ಭಾಗದಲ್ಲಿ ನಡೆದುಕೊಂಡು ಬಂದರೂ ಸತತ ಒಂದೂವರೆ ದಿನಗಳ ಕಾಲ ನಡೆಯುವ ಪ್ರಮುಖ ಉತ್ಸವ ಕಳೆದ ಮಾರ್ಚ್ನಲ್ಲಿ ನಡೆದಿತ್ತು. ಸಾಲಂಕೃತ ಆನೆಗಳ ವೈಭವ, ಮೆರವಣಿಗೆ, ಅಲ್ಲಿನ ಸಾಂಸ್ಕೃತಿಕ ಚಟುವಟಿಕೆಗಳನ್ನು ಕಣ್ತುಂಬಿಕೊಳ್ಳಲು ನಾನಾ ಭಾಗಗಳಿಂದ ಜನ ಆಗಮಿಸಿದ್ದರು. ತ್ರಿಶ್ಯೂರ್ನ ಪ್ರಮುಖ ರಸ್ತೆಗಳು ತುಂಬಿ ಹೋಗಿದ್ದವು. ಸುಮಾರು ಒಂದು ನೂರು ಆನೆಗಳನ್ನು ಅಲಂಕರಿಸಿ ಮೆರವಣಿಗೆ ಮೂಲಕ ನಾನಾ ಭಾಗಗಳಿಂದ ಕರೆ ತರಲಾಗುತ್ತಿತ್ತು. ಆನೆಗಳ ಗಾಂಭೀರ್ಯದೊಂದಿಗೆ ಹೆಜ್ಜೆ ಹಾಕುವುದು, ಅದಕ್ಕೆ ಹಿನ್ನೆಲೆಯ ವಾದ್ಯ ಸಂಗೀತ ಎಂತವರನ್ನು ಆಕರ್ಷಿಸುತ್ತದೆ. ಇಂತಹ ಸನ್ನಿವೇಶದಲ್ಲಿ ಆನೆಯೊಂದು ಮಾವುತನ ನಿಯಂತ್ರಣ ಕಳೆದುಕೊಂಡು ಓಡ ತೊಡಗಿತು. ಈ ವೇಳೆ ಎದುರಿಗೆ ನಿಂತಿದ್ದ ಇನ್ನೊಂದು ಆನೆಯ ಮೇಲೆ ದಾಳಿ ಮಾಡಿಯೋ ಬಿಟ್ಟಿತು. ಜನ ದಿಕ್ಕಾಪಾಲಾಗಿ ಓಡಿದ್ದು ಆಗಿನ ವಿಡಿಯೋ ಈಗ ಭಾರೀ ವೈರಲ್ ಆಗಿದೆ.





# ಇಂಡೋನೇಷ್ಯಾದಲ್ಲಿ ಭೀಕರ ಪ್ರವಾಹ

**ಜಕಾರ್ತ:** ಇಂಡೋನೇಷ್ಯಾದ ಉತ್ತರ ಮಾಲುಕು ಪ್ರದೇಶದಲ್ಲಿ ಭಾನುವಾರ ಸಂಭವಿಸಿದ ಪ್ರವಾಹ ಮತ್ತು ಭೂಕುಸಿತದಲ್ಲಿ ಮನೆಗಳು ಮತ್ತು ಮೂಲಸೌಕರ್ಯಗಳಿಗೆ ಹಾನಿಯಾಗಿದ್ದು, 19 ಜನರು ಸಾವನ್ನಪ್ಪಿದ್ದಾರೆ ಮತ್ತು ಏಳು ಮಂದಿ ಗಾಯಗೊಂಡಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ಸೋಮವಾರ ತಿಳಿಸಿದ್ದಾರೆ.

ಹತ್ತೊಂಬತ್ತು ಬಲಿಪಶುಗಳ ಎಲ್ಲಾ ಶವಗಳನ್ನು ಪತ್ತೆಹಚ್ಚಲಾಗಿದೆ ಮತ್ತು ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ವೇಗಗೊಳಿಸಲು ಭಾರಿ ಯಂತ್ರೋಪಕರಣಗಳನ್ನು ನಿಯೋಜಿಸಲಾಗಿದೆ ಎಂದು ಪ್ರಾಂತ್ಯದ ವಿಪತ್ತು ನಿರ್ವಹಣೆ ಮತ್ತು ತಗ್ಗಿಸುವ ಕಚೇರಿಯ ಮುಖ್ಯಸ್ಥ ಫೆಹ್ಬಿ ಆಲ್ಟಿಂಗ್ ಹೇಳಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಪರಿಹಾರ ಪ್ರಯತ್ನಗಳಿಗೆ ಅನುಕೂಲವಾಗುವಂತೆ, ಸ್ಥಳೀಯ ಆಡಳಿತವು ವಿಪತ್ತು ಪೀಡಿತ ಪ್ರದೇಶಗಳಲ್ಲಿ 14 ದಿನಗಳ ತುರ್ತು ಪರಿಸ್ಥಿತಿಯನ್ನು ಘೋಷಿಸಿದೆ ಎಂದು ಆಲ್ಟಿಂಗ್ ಹೇಳಿದರು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆಯ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಸುಹರ್ಯಂಟೊ ಅವರು ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ವಿಪತ್ತು ಪ್ರತಿಕ್ರಿಯೆ ಪ್ರಯತ್ನಗಳು ಪರಿಣಾಮಕಾರಿಯಾಗಿ ನಡೆಯುತ್ತಿವೆ ಎಂದು ಖಚಿತಪಡಿಸಿಕೊಂಡಿದ್ದಾರೆ ಎಂದು ಏಜೆನ್ಸಿಯ ವಕ್ತಾರ ಅಬ್ದುಲ್ ಮುಹರಿ ತಿಳಿಸಿದ್ದಾರೆ.

# ರಷ್ಯಾದ ಬಹುಮಹಡಿ ಕಟ್ಟಡಕ್ಕೆ ಡಿಕ್ಕಿ ಹೊಡೆದ ಉಕ್ರೇನ್ ಡ್ರೋನ್!

**ಟೋಕಿಯೋ:** ರಷ್ಯಾದ ಸರಟೋವ್‌ನಲ್ಲಿರುವ 38 ಅಂತಸ್ತಿನ ವೋಲ್ಗಾ ಸ್ಕೈ ವಸತಿ ಸಂಕೀರ್ಣಕ್ಕೆ ಉಕ್ರೇನಿಯನ್ ಡ್ರೋನ್ ಅಪ್ಪಳಿಸಿತು, ಇದು ನಗರದ ಅತ್ಯಂತ ಎತ್ತರದ ಕಟ್ಟಡವಾಗಿದೆ. ಇದು ಸಂಚಲನ ಮೂಡಿಸಿದೆ. ಇದಲ್ಲದೆ, ಈ ವಿಷಯದ ಬಗ್ಗೆ ತಿಳಿದಿರುವ ಉಕ್ರೇನಿಯನ್ ಅಧಿಕಾರಿಯ ಪ್ರಕಾರ, ಶುಕ್ರವಾರ ಬೆಳಿಗ್ಗೆ ಸುಮಾರು 350 ಕಿಲೋಮೀಟರ್ ದೂರದಲ್ಲಿರುವ ಮೊರೊವ್ಸ್ಕ್ ಏರ್ ಬೇಸ್ ಮೇಲೆ ದಾಳಿ ಮಾಡುವ ಮೂಲಕ ಆರು ರಷ್ಯಾದ ಯುದ್ಧ-ಬಾಂಬರ್ಗಳನ್ನು ನಾಶಪಡಿಸಿದೆ ಎಂದು ಉಕ್ರೇನ್ ಹೇಳಿಕೊಂಡಿದೆ. ರಷ್ಯಾದ ರೊಸ್ಟೊವ್, ಸರಟೋವ್, ಕುರ್ಸ್ಕ್ ಮತ್ತು ಬೆಲ್ಗೊರೊಡ್ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಉಕ್ರೇನ್ ಪ್ರಮುಖ ದಾಳಿ ನಡೆಸಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ಟೆಲಿಗ್ರಾಮ್ನಲ್ಲಿ ತಿಳಿಸಿದೆ. ರಷ್ಯಾದ ರಕ್ಷಣಾ ಪಡೆಗಳು ರೋಸ್ಟೊವ್ ಪ್ರದೇಶದಲ್ಲಿ ಕನಿಷ್ಠ 44 ಡ್ರೋನ್‌ಗಳನ್ನು ಹೊಡೆದುರುಳಿಸಿದೆ ಎಂದು ಹೇಳಿಕೊಂಡಿದೆ.



# ಪಾಕಿಸ್ತಾನದ ಬಲೂಚಿಸ್ತಾನದಲ್ಲಿ 'ಉಗ್ರರ ಅಟ್ಟಹಾಸ'

**ಕ್ವೆಟ್ಟಾ:** ಪಾಕಿಸ್ತಾನದ ಪ್ರಕ್ಷುಬ್ಧ ಪ್ರಾಂತ್ಯದ ಬಲೂಚಿಸ್ತಾನ್ನಲ್ಲಿ ಸೋಮವಾರ ಉಗ್ರರು ಹೆದ್ದಾರಿಗಳು, ರೈಲ್ವೆ ಸೇತುವೆಗಳು ಮತ್ತು ಪೊಲೀಸ್ ಠಾಣೆಗಳ ಮೇಲೆ ನಡೆಸಿದ ದಾಳಿಯಲ್ಲಿ ಕನಿಷ್ಠ 73 ಜನರು ಸಾವನ್ನಪ್ಪಿದ್ದಾರೆ. ಅದೇ ಸಮಯದಲ್ಲಿ, ಭದ್ರತಾ ಪಡೆಗಳು 21 ದಾಳಿಕೋರರನ್ನು ಕೊಂದಿರುವುದಾಗಿ ಹೇಳಿಕೊಂಡಿವೆ.

ಸಂಪನ್ಮೂಲ-ಸಮೃದ್ಧ ಪ್ರಾಂತ್ಯದ ನಿಯಂತ್ರಣಕ್ಕಾಗಿ ದಶಕಗಳ ಕಾಲ ನಡೆದ ದಂಗೆಯ ಭಾಗವಾಗಿ ಈ ದಾಳಿಯು ವರ್ಷಗಳಲ್ಲಿ ದೊಡ್ಡದಾಗಿದೆ. ಬುಗ್ತಿ ಬುಡಕಟ್ಟಿನ ಗೌರವಾನ್ವಿತ ನಾಯಕ ನವಾಬ್ ಅಕ್ಬರ್ ಬುಗ್ತಿ ಅವರ 18 ನೇ ಪುಣ್ಯತಿಥಿಯಂದು ಬಲೂಚ್ ಬಂಡುಕೋರರು ಈ ದಾಳಿ ನಡೆಸಿದ್ದಾರೆ. ಈತನನ್ನು 2006ರಲ್ಲಿ ಪಾಕಿಸ್ತಾನಿ ಭದ್ರತಾ ಪಡೆ ಹತ್ಯೆ ಮಾಡಿತ್ತು. ಈ ಕಾರ್ಯಾಚರಣೆಯನ್ನು ಪಾಕಿಸ್ತಾನದ ಅಂದಿನ ಅಧ್ಯಕ್ಷ ಜನರಲ್ ಪರ್ವೇಜ್ ಮುಷರಫ್ ಆದೇಶಿಸಿದರು.



ಘರ್ಷಣೆಯಲ್ಲಿ 14 ಸೈನಿಕರು ಮತ್ತು ಪೊಲೀಸರು ಮತ್ತು 21 ದಾಳಿಕೋರರು ಸಾವನ್ನಪ್ಪಿದ್ದಾರೆ ಎಂದು ಪಾಕಿಸ್ತಾನದ ಮಿಲಿಟರಿ ತಿಳಿಸಿದೆ. ಬಲೂಚಿಸ್ತಾನದ ಮುಖ್ಯಮಂತ್ರಿ ಸರ್ಫರಾಜ್ ಬುಗ್ತಿ ಅವರು ಬಂಡುಕೋರರ ದಾಳಿಯಲ್ಲಿ 38 ನಾಗರಿಕರು ಸಹ ಸಾವನ್ನಪ್ಪಿದ್ದಾರೆ ಎಂದು ಹೇಳಿದರು. ಈ ಪೈಕಿ ಹೆದ್ದಾರಿಯಲ್ಲಿ ನಡೆದ ದಾಳಿಯಲ್ಲಿ 23 ಮಂದಿ ಸಾವನ್ನಪ್ಪಿದ್ದರು. ಮುಸಾಖೆಲ್ ಜಿಲ್ಲೆಯಲ್ಲಿ ನಡೆದ ಅತಿದೊಡ್ಡ ದಾಳಿಯಲ್ಲಿ, ಬಂಡುಕೋರರು ಬಸ್ಸಿನಿಂದ ಇಳಿದು 23 ಜನರನ್ನು ಅವರ ಗುರುತಿನ ಚೀಟಿಗಳನ್ನು ಪರಿಶೀಲಿಸಿದ ನಂತರ ಗುಂಡಿಕ್ಕಿ ಕೊಂದರು. ಅವರಲ್ಲಿ ಹೆಚ್ಚಿನವರು ಪಂಜಾಬಿ ಆಗಿದ್ದರು. ಅದೇ ಸಮಯದಲ್ಲಿ, ರಾಜಧಾನಿ ಕ್ವೆಟ್ಟಾವನ್ನು ಪ್ರಾಂತ್ಯದ ಇತರ ಭಾಗಗಳಿಗೆ ಸಂಪರ್ಕಿಸುವ ರೈಲ್ವೆ ಸೇತುವೆಯ ಮೇಲಿನ ದಾಳಿಯಲ್ಲಿ ಆರು ಜನರು ಸಾವನ್ನಪ್ಪಿದರು.

# ಭಾರತದಲ್ಲಿರುವ ಬಾಂಗ್ಲಾದೇಶದ ಇಬ್ಬರು ರಾಜತಾಂತ್ರಿಕರು ಕೆಲಸದಿಂದ ವಜಾ

**ಬಾಂಗ್ಲಾದೇಶ:** ಭಾರತದಲ್ಲಿ ಕರ್ತವ್ಯ ನಿರತರಾಗಿದ್ದ ಬಾಂಗ್ಲಾದೇಶದ ಇಬ್ಬರು ರಾಜತಾಂತ್ರಿಕರನ್ನು ಕರ್ತವ್ಯದಿಂದ ವಜಾಗೊಳಿಸಿ ಬಾಂಗ್ಲಾದೇಶದ ಮಧ್ಯಾಂತರ ಸರ್ಕಾರ ಆದೇಶ ಹೊರಡಿಸಿದೆ. ನವದೆಹಲಿಯಲ್ಲಿರುವ ಬಾಂಗ್ಲಾದೇಶ ಹೈ ಕಮಿಷನ್ ನಲ್ಲಿ ಮಾಧ್ಯಮ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಷಾಬಾನ್ ಮಹ್ಮದ್ ಹಾಗೂ ಕೋಲ್ಕತಾದಲ್ಲಿರುವ ಬಾಂಗ್ಲಾದೇಶ ಕಾನ್ಸುಲೇಟ್ ನಲ್ಲಿ ಮಾಧ್ಯಮ ಕಾರ್ಯದರ್ಶಿಯಾಗಿದ್ದ ರಂಜನ್ ಸೇನ್ ಅವರನ್ನು ಕರ್ತವ್ಯದಿಂದ ವಜಾಗೊಳಿಸಿರುವುದಾಗಿ ಬಾಂಗ್ಲಾದೇಶ ಮಧ್ಯಾಂತರ ಸರ್ಕಾರ ಆದೇಶ ಹೊರಡಿಸಿದೆ. ದೇಶದಲ್ಲಿ ನಡೆದ ಭಾರೀ ಪ್ರತಿಭಟನೆ ನಂತರ ಪ್ರಧಾನಮಂತ್ರಿ ಶೇಕ್ ಹಸೀನಾ ಪದಚ್ಯುತಗೊಂಡ ಬಳಿಕ ಹಿಂಸಾಚಾರ ನಡೆದಿತ್ತು. ರಾಜಕೀಯದ ಬೆಳವಣಿಗೆಯಲ್ಲಿ ನೋಬೆಲ್ ಪ್ರಶಸ್ತಿ ಪುರಸ್ಕೃತ ಮುಹಮ್ಮದ್ ಯೂನೂಸ್ ನೇತೃತ್ವದಲ್ಲಿ ಮಧ್ಯಾಂತರ ಸರ್ಕಾರ ರಚನೆಯಾಗಿದೆ. ರಾಜಧಾನಿ ಢಾಕಾದಲ್ಲಿ ಲಕ್ಷಾಂತರ ಜನರು ಬೀದಿಗಿಳಿದು ಹಿಂಸಾಚಾರದಲ್ಲಿ ತೊಡಗಿದ ಪರಿಣಾಮ ಆಗಸ್ಟ್ 5ರಂದು ಶೇಖ್ ಹಸೀನಾ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿ, ಹೆಲಿಕಾಪ್ಟರ್ ಮೂಲಕ ಭಾರತಕ್ಕೆ ಪರಾರಿಯಾಗಿದ್ದರು. ಮಾನವ ಹಕ್ಕು ಉಲ್ಲಂಘನೆಯ ಆರೋಪ ಎದುರಿಸುತ್ತಿರುವ ಶೇಖ್ ಹಸೀನಾ ಅವರ 15 ವರ್ಷದ ಆಡಳಿತ ಕೊನೆಗೊಂಡಂತಾಗಿದೆ. ಬಾಂಗ್ಲಾದೇಶದಲ್ಲಿ ನಡೆದ ಹಿಂಸಾಚಾರದಲ್ಲಿ 450ಕ್ಕೂ ಅಧಿಕ ಮಂದಿ ಸಾವಿಗೀಡಾಗಿದ್ದು, ಸಾವಿರಾರು ಜನರು ಗಾಯಗೊಂಡಿದ್ದರು. ನಾವು ಎಲ್ಲಾ ನೆರೆಯ ದೇಶಗಳೊಂದಿಗೆ ಸೌಹಾರ್ದ ಸಂಬಂಧ ಮುಂದುವರಿಸುವುದಾಗಿ ಯೂನುಸ್ ಹೇಳಿದ್ದಾರೆ.



# ಪಾಕ್ ಜೊತೆಗೆ ಮೈತ್ರಿ, ಆರ್ಟಿಕಲ್ 370 ಮರುಸ್ಥಾಪನೆ - ಮೆಹಬೂಬಾ ಮಫ್ತಿ ಪ್ರಣಾಳಿಕೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ವಿಧಾನಸಭೆ ಚುನಾವಣೆಗೆ ಪಿಡಿಪಿ ಪಕ್ಷ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಭಾನುವಾರ ಪಕ್ಷದ ಅಧ್ಯಕ್ಷೆ ಮೆಹಬೂಬಾ ಮುಫ್ತಿ ಅವರು ಪಕ್ಷದ ಹಿರಿಯ ನಾಯಕರೊಂದಿಗೆ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ 370 ರ ಮರುಸ್ಥಾಪನೆ, ಗಡಿಯಾಚೆಗಿನ ವ್ಯಾಪಾರದ ಮರುಸ್ಥಾಪನೆಗಾಗಿ ಪಾಕಿಸ್ತಾನದೊಂದಿಗೆ ಮಾತುಕತೆ, ವ್ಯಾಪಾರ ಮತ್ತು ಸಾಮಾಜಿಕ ವಿನಿಮಯಕ್ಕಾಗಿ ಗಡಿ ನಿಯಂತ್ರಣ ರೇಖೆಯ (ಐಠಅ) ಉದ್ದಕ್ಕೂ ಸಂಪೂರ್ಣ ಸಂಪರ್ಕವನ್ನು ಸ್ಥಾಪಿಸುವುದು, ಖೈದಿಗಳಿಗೆ ಉಚಿತ ಕಾನೂನು ನೆರವು ನೀಡುವುದು, ಹಳೆಯ ಪಿಂಚಣಿ ಯೋಜನೆ, ಉಚಿತ 200 ಯೂನಿಟ್ ವಿದ್ಯುತ್ ಸೇರಿದಂತೆ ಪ್ರಣಾಳಿಕೆಯಲ್ಲಿ ಹಲವು ಘೋಷಣೆಗಳನ್ನು ಮಾಡಿದ್ದಾರೆ.



ಈ ಬಗ್ಗೆ ಇನ್ನಷ್ಟು ತಿಳಿಸಿರುವ ಅವರು, ನನಗೆ ಈ ಚುನಾವಣೆ ರಾಜ್ಯತ್ವ ಅಥವಾ ಸೀಟು ಹಂಚಿಕೆಗಾಗಿ ಅಲ್ಲ. ನಮಗೆ ದೊಡ್ಡ ಗುರಿ ಇದೆ. ನಾವು ಘನತೆಗಾಗಿ ಹೋರಾಡುತ್ತಿದ್ದೇವೆ ಎಂದಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಸಮಸ್ಯೆಯನ್ನು ಪರಿಹರಿಸುವ ಕಾರ್ಯಸೂಚಿಯನ್ನು ನ್ಯಾಷನಲ್ ಕಾನ್ಫರೆನ್ಸ್ ಮತ್ತು ಕಾಂಗ್ರೆಸ್ ಒಪ್ಪಿಕೊಂಡರೆ ತಾವು ಮೈತ್ರಿಗೆ ಬೆಂಬಲ ನೀಡುವುದಾಗಿ ಮತ್ತು ತಾವು ಯಾವುದೇ ಸ್ಥಾನಕ್ಕೆ ಸ್ಪರ್ಧಿಸುವುದಿಲ್ಲ ಎಂದು ಮಾಜಿ ಸಿಎಂ ಮುಫ್ತಿ ಹೇಳಿದರು.

# ಬಿಜೆಪಿ ಸೇರಿದ ಚಂಪೈ ಸೊರೇನ್

**ನವದೆಹಲಿ:** ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಮತ್ತು ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) ನಾಯಕ ಚಂಪೈ ಸೊರೆನ್ ಆಗಸ್ಟ್ 30 ರಂದು ರಾಂಚಿಯಲ್ಲಿ ಭಾರತೀಯ ಜನತಾ ಪಕ್ಷವನ್ನು ಸೇರಲಿದ್ದಾರೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ. ಜಾರ್ಖಂಡ್ನ ಮಾಜಿ ಮುಖ್ಯಮಂತ್ರಿ ಮತ್ತು ನಮ್ಮ ದೇಶದ ಪ್ರತಿಷ್ಠಿತ ಆದಿವಾಸಿ ನಾಯಕ, ಚಂಪೈ ಸೊರೆನ್ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಸ್ವಲ್ಪ ಸಮಯದ ಹಿಂದೆ ಭೇಟಿಯಾದರು. ಅವರು ಆಗಸ್ಟ್ 30 ರಂದು ರಾಂಚಿಯಲ್ಲಿ ಅಧಿಕೃತವಾಗಿ ಬಿಜೆಪಿಗೆ ಸೇರಲಿದ್ದಾರೆ ಎಂದು ಅಸ್ಸಾಂ ಸಿಎಂ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಜೆಎಂಎಂ ನಾಯಕತ್ವದ ವಿರುದ್ಧ ಅಸಮಾಧಾನ ಹೊರಹಾಕಿದ್ದ ಚಂಪೈ, 'ಮುಂದಿನ ರಾಜಕೀಯ ನಡೆಯ ಬಗ್ಗೆ ಶೀಘ್ರದಲ್ಲೇ ನಿರ್ಧರಿಸುತ್ತೇನೆ' ಎಂದಿದ್ದರು. ಈ ವೇಳೆ ಚಂಪೈ ಬಿಜೆಪಿ ಸೇರಲಿದ್ದಾರೆ ಎಂಬ ಊಹಾಪೋಹಗಳು ಹರಿದಾಡಿದ್ದವು. ಇದಕ್ಕೆ ಪೂರಕವಂತೆ ನಿನ್ನೆ ಅಂದರೆ ಸೋಮವಾರ ಇವೆಲ್ಲದಕ್ಕೂ ಚಂಪೈ ತೆರೆ ಎಳೆದಿದ್ದು, ಆಗಸ್ಟ್ 30 ರಂದು ಅಧಿಕೃತವಾಗಿ ಬಿಜೆಪಿ ಪಕ್ಷವನ್ನು ಸೇರಲಿದ್ದಾರೆ ಎಂದು ವರದಿಯಾಗಿದೆ.



# ಅತ್ಯಾಧುನಿಕ 'ಸೂಸೈಡ್ ಡ್ರೋನ್' ಪರೀಕ್ಷೆಯಲ್ಲಿ ಭಾಗಿಯಾದ ಕಿಮ್ ಜಾಂಗ್ ಉನ್

**ಉತ್ತರ ಕೊರಿಯ:** ಇಸ್ರೇಲ್ ಮತ್ತು ಹಮಾಸ್, ಉಕ್ರೇನ್ ಮತ್ತು ರಷ್ಯಾ ನಡುವಿನ ಯುದ್ಧ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಿರುವ ಬೆನ್ನಲ್ಲೇ ಉತ್ತರ ಕೊರಿಯಾವು ತನ್ನ ಮತ್ತೊಂದು ಅಸ್ತ್ರದ ಪರೀಕ್ಷೆ ಮೂಲಕ ಜನರಲ್ಲಿ ಆತಂಕ ಮೂಡಿಸಿದೆ.

ಉತ್ತರ ಕೊರಿಯಾವು ಸೋಮವಾರ ಅತ್ಯಾಧುನಿಕ ಸೂಸೈಡ್ ಡ್ರೋನ್‌ಗಳ ಪರೀಕ್ಷೆ ನಡೆಸಿದೆ.

ಈ ವೇಳೆ ಉತ್ತರ ಕೊರಿಯ ಅಧ್ಯಕ್ಷ ಕಿಮ್ ಜಾಂಗ್ ಉನ್ ,ಖುದ್ದು ಹಾಜರಿದ್ದು ಅದರ ಮೇಲ್ವಿಚಾರಣೆ ಕೈಗೊಂಡರು ಎಂದು ಅಲ್ಲಿನ ಸರ್ಕಾರಿ ಮಾಧ್ಯಮ ವರದಿ ಮಾಡಿದೆ. ಈ ಡ್ರೋನ್ ತಂತ್ರಜ್ಞಾನವನ್ನು ರಷ್ಯಾದಿಂದ ಪಡೆದಿರಬಹುದಾದ ಸಾಧ್ಯತೆ ಇದೆ ಎಂದು ಪರಿಣಿತರು ತಿಳಿಸಿದ್ದಾರೆ.

ಆಕರ್ಷಕ ಟೋಪಿ ಹಾಕಿಕೊಂಡು, ಅತ್ಯಾಧುನಿಕ ಬೈನಾಕ್ಯುಲರ್ ಹಿಡಿದು ಡ್ರೋನ್ ಗುರಿ ಬೇಧಿಸುವುದನ್ನು ಕಿಮ್ ವೀಕ್ಷಿಸಿದರು ಎಂದು ವರದಿ ತಿಳಿಸಿದೆ. ಕಾರ್ಯತಂತ್ರದ ವಿಚಕ್ಷಣ ಮತ್ತು ಬಹುಪಯೋಗಿ ಡ್ರೋನ್ಗಳ ಜೊತೆಗೆ'ಮತ್ತಷ್ಟು ಸೂಸೈಡ್ ಡ್ರೋನ್ಗಳನ್ನು ಅಭಿವೃದ್ಧಿಪಡಿಸುವುದು ಅತ್ಯಂತ ಅವಶ್ಯಕ'ಎಂದು ಕಿಮ್ ಜಾಂಗ್ ಉನ್ ಹೇಳಿರುವುದಾಗಿ ಕೊರಿಯಾದ ಕೇಂದ್ರೀಯ ಸುದ್ದಿ ಸಂಸ್ಥೆ(ಕಿಸಿಎನ್‌ಎ) ಹೇಳಿದೆ.



ಶತ್ರುಗಳನ್ನು ಹೊಡೆದುರುಳಿಸುವ ಉದ್ದೇಶದಿಂದ ಮಾನವ ರಹಿತ ಸ್ಫೋಟಕ ಕೊಂಡೊಯ್ಯಬಲ್ಲ ಡ್ರೋನ್ ಗಳನ್ನು ಅಭಿವೃದ್ಧಿಪಡಿಸಲಾಗಿದೆ. ಅಣ್ವಸ್ತ್ರಗಳ ಬಲ ಹೊಂದಿರುವ ಉತ್ತರ ಕೊರಿಯಾ, ಭೂಪ್ರದೇಶ ಮತ್ತು ಸಮುದ್ರ ವಲಯದಲ್ಲಿ ಯಾವುದೇ ಶತ್ರುಗಳನ್ನು ಹೊಡೆದುರುಳಿಸಲು ಶಕ್ತಿಶಾಲಿ ಡ್ರೋನ್‌ಗಳ ಸಂಗ್ರಹದಲ್ಲಿ ತೊಡಗಿದೆ ಎಂದು ಕೆಸಿಎನ್‌ಎ ವರದಿ ಮಾಡಿದೆ.

# ಬಲೂಚಿಸ್ತಾನದಲ್ಲಿ ಬಂಡುಕೋರರ ಸರಣಿ ದಾಳಿ; 37 ಮಂದಿ ಬಲಿ

**ಇಸ್ಲಾಮಾಬಾದ್:** ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತದಲ್ಲಿ ಬಂದೂಕುಧಾರಿಗಳು ಪೊಲೀಸ್ ಠಾಣೆಗಳು, ರೈಲು ಹಳಿಗಳು ಮತ್ತು ವಾಹನಗಳ ಮೇಲೆ ದಾಳಿ ನಡೆಸಿದ್ದರಿಂದ ಕನಿಷ್ಠ 37 ಮಂದಿ ಸಾವನ್ನಪ್ಪಿದ್ದಾರೆ. ಬಳಿಕ ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ 12 ಬಂಡುಕೋರರನ್ನು ಹತ್ಯೆ ಮಾಡಲಾಗಿದೆ.

ಪ್ರಕ್ಷುಬ್ಧ ಬಲೂಚಿಸ್ತಾನ್ ಪ್ರಾಂತದಲ್ಲಿ ನಡೆದಿರುವ ಅತೀ ದೊಡ್ಡ ಸಶಸ್ತ್ರ ದಾಳಿ ಇದಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಬಲೂಚಿಸ್ತಾನ್ ಪ್ರತ್ಯೇಕತಾವಾದಿಗಳ ಗುಂಪು 'ಬಲೂಚಿಸ್ತಾನ್ ಲಿಬರೇಷನ್ ಆರ್ಮಿ(ಬಿಎಲ್ಎ) ದಾಳಿಯ ಹೊಣೆ ವಹಿಸಿಕೊಂಡಿದೆ ಎಂದು ಮೂಲಗಳನ್ನು ಉಲ್ಲೇಖಿಸಿ ಮಾಧ್ಯಮಗಳು ವರದಿ ಮಾಡಿವೆ. ರವಿವಾರ ರಾತ್ರಿ ಬಲೂಚಿಸ್ತಾನದ ಮುಸಖೈಲ್ ಜಿಲ್ಲೆಯಲ್ಲಿ ಪಂಜಾಬ್ ಮತ್ತು ಬಲೂಚಿಸ್ತಾನವನ್ನು ಸಂಪರ್ಕಿಸುವ ಹೆದ್ದಾರಿಯಲ್ಲಿ ಹಲವು ವಾಹನಗಳ ಮೇಲೆ ಗುರುತಿಸಲಾಗದ ಬಂದೂಕುಧಾರಿಗಳು ದಾಳಿ ನಡೆಸಿದ್ದರಿಂದ ಕನಿಷ್ಠ 23 ಮಂದಿ ಸಾವನ್ನಪ್ಪಿದ್ದು ಇತರ 5 ಮಂದಿ ಗಾಯಗೊಂಡಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಅಯೂಬ್ ಅಚಕ್ಝಾದಯ್ ಹೇಳಿದ್ದಾರೆ. ಕನಿಷ್ಠ 10 ವಾಹನಗಳಿಗೆ ಬೆಂಕಿ ಹಚ್ಚಿದ ಬಳಿಕ ದಾಳಿಕೋರರು ಪರಾರಿಯಾಗಿದ್ದಾರೆ.



ಬಂದೂಕುಧಾರಿಗಳು ಹಲವಾರು ಬಸ್ಸುಗಳು, ಟ್ರಕ್ಕುಗಳು ಹಾಗೂ ವ್ಯಾನ್‌ಗಳನ್ನು ನಿಲ್ಲಿಸಿದ್ದಾರೆ. ಬಳಿಕ ಅದರಲ್ಲಿದ್ದ ಪ್ರಯಾಣಿಕರ ಗುರುತು ಪತ್ರವನ್ನು ಪಡೆದುಕೊಂಡು ಅವರ ಜನಾಂಗೀಯತೆಯನ್ನು ಪರೀಕ್ಷಿಸಿದ ಬಳಿಕ ಜನರ ಮೇಲೆ ಗುಂಡು ಹಾರಿಸಿದ್ದಾರೆ. ಪಂಜಾಬ್ಗೆ ತೆರಳುವ ಮತ್ತು ಅಲ್ಲಿಂದ ಆಗಮಿಸುವ ವಾಹನಗಳ ಮೇಲೆ ಮಾತ್ರ ದಾಳಿ ನಡೆದಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮತ್ತೆ ಕನ್ನಡ ಸಿನಿಮಾ ಮಾಡೋದಾಗಿ ಸುಳಿವು ಕೊಟ್ಟ 'ಮಂಗಾರು ಮಳೆ 2' ನಟಿ ನೇಹಾ ಶೆಟ್ಟಿ

ಕರಾವಳಿ ಬೆಡಗಿ ನೇಹಾ ಶೆಟ್ಟಿ ಸದ್ಯ ಟಾಲಿವುಡ್‌ನಲ್ಲಿ ಸದ್ದು ಮಾಡುತ್ತಿದ್ದಾರೆ. ಇತ್ತೀಚೆಗೆ ಕಾರ್ಯಕ್ರಮವೊಂದಕ್ಕಾಗಿ ಬೆಂಗಳೂರಿಗೆ ಬಂದ ನೇಹಾ ಶೆಟ್ಟಿ, ಕನ್ನಡ ಸಿನಿಮಾದಲ್ಲಿ ನಟಿಸುವ ಬಗ್ಗೆ ಸುಳಿವು ನೀಡಿದ್ದಾರೆ. ಮತ್ತೆ ಕನ್ನಡ ಸಿನಿಮಾ ಮಾಡೋದಾಗಿ ಗುಡ್ ನ್ಯೂಸ್ ಕೊಟ್ಟಿದ್ದಾರೆ.

ನೇಹಾ ಶೆಟ್ಟಿ ಮಾತನಾಡಿ, ಕನ್ನಡದಲ್ಲಿ ಎಷ್ಟು ಒಳ್ಳೆಯ ಸಿನಿಮಾ ಬರುತ್ತಿದೆ. 'ಕಾಂತಾರ' ಚಿತ್ರಕ್ಕೆ ನ್ಯಾಷನಲ್ ಅವಾರ್ಡ್ ಬಂದಿದೆ ಇದರ ಬಗ್ಗೆ ಖುಷಿ ಇದೆ ಎಂದಿದ್ದಾರೆ. ಬಳಿಕ ನೇಹಾ ಶೆಟ್ಟಿ ಕನ್ನಡಕ್ಕೆ ಬರುವ ಬಗ್ಗೆ ಪ್ಲ್ಯಾನ್ ಮಾಡಿದ್ದಾರೆ. ಕನ್ನಡದ ಸ್ಕ್ರಿಪ್ಟ್‌ಗಳನ್ನು ಕೇಳ್ತಿರೋ ನೇಹಾ ಶೆಟ್ಟಿ, ಒಂದು ಒಳ್ಳೆಯ ಕಥೆಗಾಗಿ ಕಾಯುತ್ತಿದ್ದಾರೆ. ಅದು ಕಂಪ್ಲೀಟ್ ಹೊಸ ರೀತಿಯ ಪಾತ್ರವೇ ಆಗಿರಬೇಕು ಅನ್ನೋದು ಆಸೆ ಎಂದು ತಿಳಿಸಿದ್ದಾರೆ.

ನಾನು ಎಲ್ಲೂ ಹೋಗಿಲ್ಲ. ಇಲ್ಲಿಯೇ ಇದ್ದೇನೆ. ಅಪ್ಪ-ಅಮ್ಮ ಬೆಂಗಳೂರಲ್ಲಿಯೇ ಇದ್ದಾರೆ. ಆಗಾಗ ಇಲ್ಲಿಗೆ ಬರುತ್ತಲೇ ಇರುತ್ತೇನೆ. ಹಾಗೆ ಕನ್ನಡದಲ್ಲಿ ಆಫರ್ಸ್ ಸಿಗ್ತಿಲ್ಲ ಅಂತ ಬೇರೆ ಕಡೆಗೆ ಹೋಗಿಲ್ಲ. ತಮಿಳು, ಮಲೆಯಾಳಂ, ತೆಲುಗು ಭಾಷೆಯಿಂದಲೂ ಆಫರ್ಸ್ ಬಂದಿವೆ. ಆದರೆ, ನಾನು ತೆಲುಗು ಆಯ್ಕೆ ಮಾಡಿಕೊಂಡೆ ನೇಹಾ ಶೆಟ್ಟಿ ಮಾಧ್ಯಮಕ್ಕೆ ಮಾತನಾಡಿದ್ದಾರೆ.

ಎರಡ್ಮೂರು ತಿಂಗಳು ಕಾಯಿರಿ, ಕನ್ನಡ ಸಿನಿಮಾ ಬಗ್ಗೆ ನಿಮಗೆ ಸರ್ಪ್ರೈಸ್ ಸಿಗುತ್ತದೆ ಎಂದು ನಟಿ ಖುಷಿಯಿಂದ ಹೇಳಿಕೊಂಡಿದ್ದಾರೆ. ಕಥೆಯಲ್ಲಿ ಹೊಸತನ, ನಟನೆಗೆ ಸ್ಕೋಪ್ ಇರಬೇಕು ಖಂಡಿತಾ ಕನ್ನಡದಲ್ಲಿ ನಟಿಸುತ್ತೇನೆ ಎಂದು ನಟಿ ಖುಷಿಯಿಂದ ಮಾತನಾಡಿದ್ದಾರೆ. ನಟಿಯ ಕನ್ನಡದ ಮುಂದಿನ ಪ್ರಾಜೆಕ್ಟ್ ಯಾವುದಿರಬಹುದು ಎಂದು ಫ್ಯಾನ್ಸ್ ಕ್ಯೂರಿಯಸ್ ಆಗಿದ್ದಾರೆ. ಸಿನಿಮಾಗಾಗಿ ಎದುರು ನೋಡ್ತಿದ್ದಾರೆ.



ಅಂದಹಾಗೆ, ಮೂಲತಃ ಮಂಗಳೂರಿನವರಾದ ನೇಹಾ ಶೆಟ್ಟಿ ಅವರು 2016ರಲ್ಲಿ 'ಮುಂಗಾರು ಮಳೆ 2' ಚಿತ್ರದಲ್ಲಿ ಗೋಲ್ಡನ್ ಸ್ಟಾರ್ ಗಣೇಶ್‌ಗೆ ನಾಯಕಿಯಾಗಿ ನಟಿಸಿದರು. ಬಳಿಕ ತೆಲುಗಿನತ್ತ ಮುಖ ಮಾಡಿದರು. ಅಲ್ಲಿ ಗಲ್ಲಿ ರೌಡಿ, ಮೋಸ್ಟ್ ಎಲಿಜಿಬಲ್ ಬ್ಯಾಚುಲರ್, ಡಿಜೆ ಟಿಲ್ಲು, ರೂಲ್ಸ್ ರಂಜನ್, ಗ್ಯಾಂಗ್ಸ್ ಆಫ್ ಗೋದಾವರಿ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ. ಟಾಲಿವುಡ್‌ನಲ್ಲಿ ನಟಿಗೆ ಭಾರೀ ಬೇಡಿಕೆ ಇದೆ.



# ಪ್ರೀತಿ ಒಂದು ತ್ಯಾಗ

## ಮಾಜಿ ಪತಿಯ ನಿಶ್ಚಿತಾರ್ಥದ ಬಳಿಕ ನಟಿ ಸಮಂತಾ ಪೋಸ್ಟ್

ಮಾಜಿ ಪತಿ ನಾಗಚೈತನ್ಯ ಮತ್ತು ಶೋಭಿತಾ ನಿಶ್ಚಿತಾರ್ಥದ ಬಳಿಕ ಸಮಂತಾ ಮೌನ ಮುರಿದಿದ್ದಾರೆ. ಪ್ರೀತಿ ಒಂದು ತ್ಯಾಗ ಎಂದು ಮಾರ್ಮಿಕವಾಗಿ ಸಮಂತಾ ಅವರು ಇನ್ಸ್ಟಾಗ್ರಾಂ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ. ಮಾಜಿ ಪತಿಯ ನಿಶ್ಚಿತಾರ್ಥದ ನಂತರ ಸಮಂತಾ ಪೋಸ್ಟ್ ವೈರಲ್ ಆಗಿದೆ. ಪ್ರೀತಿ ಎಂದರೆ ತ್ಯಾಗ. ನಾನು ಕೂಡ ಮಾತನ್ನು ಒಪ್ಪಿಕೊಳ್ಳುತ್ತೇನೆ. ಇದನ್ನು ಇಷ್ಟು ವರ್ಷಗಳಲ್ಲಿ ಅರಿತುಕೊಂಡೆ. ಬೇರೆ ಅವರು ನಮಗೆ ಪ್ರೀತಿ ಕೊಡದೆ ಇದ್ದರೂ ನಾವು ಅವರಿಗೆ ಪ್ರೀತಿ ಕೊಡಬೇಕಾಗುತ್ತದೆ. ಕೊಡ್ತಾನೇ ಇರಬೇಕಾಗುತ್ತದೆ. ಒಂದು ಹಂತದಲ್ಲಿ ನೀವು ಸಮತೋಲನ ಕಳೆದುಕೊಂಡರೂ ಪ್ರೀತಿ ತ್ಯಾಗವಾಗುತ್ತದೆ. ನನ್ನಿಂದ ಪ್ರೀತಿ ಮರಳಿ



ನೀಡದೆ ಇದ್ದರೂ ನನ್ನನ್ನೂ ಇಷ್ಟಪಡುವ, ನನ್ನ ಮೇಲೆ ಪ್ರೀತಿಯ ಮಳೆಗೈಯುವ ಎಲ್ಲರಿಗೂ ನಾನು ಆಭಾರಿಯಾಗಿದ್ದೇನೆ ಎಂದು ಬರೆದುಕೊಂಡಿದ್ದಾರೆ. ಅಂದಹಾಗೆ, ನಾಗಚೈತನ್ಯರಿಂದ ಡಿವೋರ್ಸ್ ಪಡೆದ ಮೇಲೆ ಆರೋಗ್ಯ ಮತ್ತು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಹೊಸ ಪ್ರಾಜೆಕ್ಟ್‌ಗಳನ್ನು ಒಪ್ಪಿಕೊಳ್ತಿದ್ದಾರೆ.




# 'ಬ್ರಹ್ಮರಾಕ್ಷಸ'ನಿಗಾಗಿ ಐಟಂ ಸಾಂಗ್

# ಸಂಜೆ ಹೊತ್ನಾಗ ಮೈಪುಳಕ

ಕನ್ನಡ ಚಿತ್ರರಂಗದಲ್ಲೀಗ ಹೊಸ ಆಶಾಭಾವನೆ ಮೂಡಿದೆ. ಇತ್ತೀಚೆಗೆ ತೆರೆಕಂಡ ಚಿತ್ರಗಳ ಗೆಲುವು ಹೊಸಬರಿಗೆ ನವಚೇತನ ನೀಡಿದೆ. ಅದೇ ನಿಟ್ಟಿನಲ್ಲಿ ಮತ್ತಷ್ಟು ಚಿತ್ರತಂಡಗಳು ಬಿಡುಗಡೆಯ ಸಿದ್ದತೆ ಮಾಡಕೊಳ್ಳುತ್ತಿವೆ. ಅಂತಹ ಸಿನಿಮಾಗಳಲ್ಲಿ ಬ್ರಹ್ಮರಾಕ್ಷಸ ಕೂಡ ಒಂದು. ಲೈಟ್‌ಮ್ಯಾನ್ ಆಗಿ ಚಿತ್ರರಂಗಕ್ಕೆ ಬಂದು ಹಲವಾರು ನಿರ್ದೇಶಕರ ಬಳಿ ಕೆಲಸ ಕಲಿತ ಶಂಕರ್.ವಿ. ಮೊದಲಬಾರಿಗೆ ಆ್ಯಕ್ಷನ್.



ಕಟ್ ಹೇಳಿರುವ ಚಿತ್ರ ಇದಾಗಿದ್ದು, ಜ್ಯೋತಿ ಆರ್ಟ್ಸ್ ಮೂಲಕ ಕೆಎಂಪಿ. ಶ್ರೀನಿವಾಸ್ ಅವರು ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಇತ್ತೀಚೆಗೆ ಈ ಚಿತ್ರದ ಐಟಂ ಸಾಂಗ್ ಬಿಡುಗಡೆ ಕಾರ್ಯಕ್ರಮ ನಡೆಯಿತು. 1980-90ರ ಕಾಲಘಟ್ಟದಲ್ಲಿ ನಡೆಯುವ ಕಥೆ ಈ ಚಿತ್ರದಲ್ಲಿದ್ದು, ಅಂಕುಶ್ ಏಕಲವ್ಯ ಹಾಗೂ ಪಲ್ಲವಿಗೌಡ ಚಿತ್ರದ ನಾಯಕ, ನಾಯಕಿಯಾಗಿ ನಟಿಸಿದ್ದಾರೆ, ವಿಶೇಷ ಪಾತ್ರದಲ್ಲಿ ವೈಜನಾಥ್ ಬಿರಾದಾರ್ ಕಾಣಿಸಿಕೊಂಡಿದ್ದಾರೆ. ಕನ್ನಡ, ತೆಲುಗು, ತಮಿಳು ಹಾಗೂ ಹಿಂದಿ ಸೇರಿದಂತೆ 5 ಭಾಷೆಯಲ್ಲಿ ಈ ಚಿತ್ರ ತಯಾರಾಗಿದ್ದು, ಈಗ ಕನ್ನಡ ವರ್ಷನ್ ಗೀತೆ ಮಾತ್ರ ಬಿಡುಗಡೆಯಾಗಿದೆ.

ಚಿತ್ರದ ಟೀಸರ್‌ಗೆ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ. ಚಿತ್ರದಲ್ಲಿ 5 ಹಾಡುಗಳಿದ್ದು ಎಂ.ಎಸ್.ತ್ಯಾಗರಾಜ್ ಸಂಗೀತ ಸಂಯೋಜನೆ ಮಾಡಿದ್ದಾರೆ. ಆ ಪೈಕಿ ಒಂದು ಹಾಡು ಇದೀಗ ರಿಲೀಸ್ ಆಗಿದೆ. ವೇದಿಕೆಯಲ್ಲಿ ಹಿರಿಯನಟ ಬಿರಾದಾರ್ ಮಾತನಾಡುತ್ತ ಸಿನಿಮಾ ಚನ್ನಾಗಿ ಬಂದಿದೆ. ಕಥೆಗೆ ತಕ್ಕಂತೆ ಪಾತ್ರಗಳನ್ನು ಆಯ್ಕೆ ಮಾಡಿಕೊಂಡಿದ್ದಾರೆ.. ನಿರ್ದೇಶಕರು ತುಂಬಾ ಶ್ರಮ ಹಾಕಿದ್ದಾರೆ. ಸಿನಿಮಾ ಜನರಿಗೆ ಖಂಡಿತ ಇಷ್ಟವಾಗುತ್ತದೆ ಎಂದು ಹೇಳಿದರು. ಮತ್ತೊಬ್ಬನಟ ಅರವಿಂದ್ ರಾವ್ ಮಾತನಾಡಿ ಅಂಕುಶ್ ಅದ್ಬುತವಾಗಿ ಡಾನ್ಸ್ ಮಾಡಿದ್ದಾರೆ. ಇಡೀ ಸಿನಿಮಾ ರೆಟ್ರೋ ಸ್ಟೈಲ್ ನಲ್ಲಿಯೇ ಇದ್ದು ಸಾಂಗ್ ಕೂಡ ಹಾಗೆ ಬಂದಿರುವುದು ವಿಶೇಷ ಎಂದರು.

ನಿರ್ಮಾಪಕ ಕೆಎಂಪಿ ಶ್ರೀನಿವಾಸ್ ಮಾತನಾಡುತ್ತ ನನ್ನ ಮೊದಲ ಚಿತ್ರ ಕಲಿವೀರ. ಬ್ರಹ್ಮರಾಕ್ಷಸ ಎರಡನೇ ಚಿತ್ರ. ಎಲ್ಲರ ಸಹಕಾರದಿಂದ ಸಿನಿಮಾ ಚನ್ನಾಗಿ ಬಂದಿದೆ. ಯಾವುದೇ ತಪ್ಪುಗಳಿಲ್ಲದಂತೆ ಡೈರೆಕ್ಟರ್ ಸಿನಿಮಾ ಮಾಡಿದ್ದಾರೆ. ಹೀರೋ ಸ್ಟಂಟ್‌ಗಳನ್ನು ರಿಯಲ್ಲಾಗಿ ಮಾಡಿದ್ದರಿಂದ ಸಾಕಷ್ಟು ಪೆಟ್ಟು ತಿಂದಿದ್ದಾರೆ. ನಿರ್ದೇಶಕ, ನಾಯಕರ ಕಾಂಟ್ರಿಬ್ಯೂಷನ್ ನಿಂದ ಸಿನಿಮಾ ಕ್ವಾಲಿಟಿ ಇನ್ನೂ ಉತ್ತಮವಾಗಿದೆ. ಈ ಸಿನಿಮಾ ನಮಗೆ ತೃಪ್ತಿ ಕೊಟ್ಟಿದೆ. ಬ್ರಹ್ಮ ಸೃಷ್ಟಿ ಮಾಡಿದ ಮನುಷ್ಯ ರಾಕ್ಷಸ ಹೇಗೆ ಆಗುತ್ತಾನೆ ಎಂಬುದನ್ನು ಚಿತ್ರದಲ್ಲಿ ತೋರಿಸಿದ್ದೇವೆ ಎಂದರು.

## ಎಲ್ಲಾ ಮಾದರಿಯ ಕ್ರಿಕೆಟ್‌ನಿಂದ ಶಕೀಬ್ ಬ್ಯಾನ್ ಮಾಡಿ

# ಬಾಂಗ್ಲಾ ಕ್ರಿಕೆಟ್ ಮಂಡಳಿಗೆ ನೋಟಿಸ್

ಕೊಲೆ ಪ್ರಕರಣದ ಆರೋಪಿಯಾಗಿರುವ ಬಾಂಗ್ಲಾದೇಶ ಪುರುಷರ ಕ್ರಿಕೆಟ್ ತಂಡದ ಆಲ್‌ರೌಂಡರ್ ಶಕೀಬ್ ಅಲ್ ಹಸನ್ ಅವರನ್ನ ಕೂಡಲೇ ಎಲ್ಲಾ ಮಾದರಿಯ ಕ್ರಿಕೆಟ್‌ನಿಂದ ಬ್ಯಾನ್ ಮಾಡುವಂತೆ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಗೆ ನೋಟಿಸ್ ನೀಡಲಾಗಿದೆ.

ಸದ್ಯ ರಾವಲ್ಪಿಂಡಿಯಲ್ಲಿರುವ ಶಕೀಬ್ ಪಾಕಿಸ್ತಾನ ವಿರುದ್ಧ 2 ಪಂದ್ಯಗಳ ಟೆಸ್ಟ್ ಸರಣಿಯ ಭಾಗವಾಗಿದ್ದಾರೆ. ಈ ನಡುವೆ ಬಾಂಗ್ಲಾ ರ‍್ಯಾಲಿಯಲ್ಲಿ ಕೊಲೆಯಾದ ರುಬೆಲ್ ಎಂಬಾತನ ತಂದೆ ರಫೀಕುಲ್ ಇಸ್ಲಾಂ ಪರ ವಕೀಲರು ಶಕೀಬ್ ಅವರನ್ನು ಬ್ಯಾನ್ ಮಾಡುವಂತೆ ಒತ್ತಾಯಿಸಿದ್ದಾರೆ. ಅಲ್ಲದೇ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಗೆ ಲೀಗಲ್ ನೋಟಿಸ್ ಕಳುಹಿಸಲಾಗಿದೆ ಎಂದು ವರದಿಯಾಗಿದೆ.

ಶಕೀಬ್ ಅವರನ್ನ ಕೂಡಲೇ ಕ್ರಿಕೆಟ್‌ನಿಂದ ನಿಷೇಧಿಸುವಂತೆ ಮಂಡಳಿಯನ್ನು ಕೋರಿದ್ದಾರೆ. ಆದ್ರೆ ಪಾಕ್ ವಿರುದ್ಧ ಟೆಸ್ಟ್ ಪಂದ್ಯ ಮುಗಿದ ಬಳಿಕ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಬಿಸಿಬಿ ಅಧ್ಯಕ್ಷ ಫಾರುಕ್ ಅಹ್ಮದ್ ತಿಳಿಸಿದ್ದಾರೆ.



**ಶಕೀಬ್ ವಿರುದ್ಧ ಕೊಲೆ ಕೇಸ್ ದಾಖಲಾಗಿರುವುದು ಏಕೆ?:** ಸರ್ಕಾರಿ ನೇಮಕಾತಿಯಲ್ಲಿ ಮೀಸಲಾತಿ ವಿರೋಧಿಸಿ ಪ್ರತಿಭಟನೆ ನಡೆಯುತ್ತಿರುವ ಹೊತ್ತಿನಲ್ಲಿ ಇದೇ ಆಗಸ್ಟ್ 7ರಂದು ಮುಸ್ಲಿಂ ಮುಖಂಡ ರಫೀಕುಲ್‌ನ ಪುತ್ರ ರುಬೆಲ್ ಎಂಬಾತನ ಹತ್ಯೆಯಾಗಿತ್ತು. ಢಾಕಾದ ಅಡಬೋರ್‌ನ ರಿಂಗ್‌ರಸ್ತೆಯಲ್ಲಿ ನಡೆಯುತ್ತಿದ್ದ ರ‍್ಯಾಲಿ ವೇಳೆ ರುಬೆಲ್‌ನ ಎದೆ ಮತ್ತು ಹೊಟ್ಟೆ ಭಾಗಕ್ಕೆ ಗುಂಡು ಹಾರಿಸಲಾಗಿತ್ತು. ಘಟನೆ ನಂತರ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಶಕೀಬ್ ಹಾಗೂ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಸೇರಿದಂತೆ ನೂರಾರು ಮಂದಿ ವಿರುದ್ಧ ಕೊಲೆ ಕೇಸ್ ದಾಖಲಾಗಿದೆ.

ಈ ಕೊಲೆ ಪ್ರಕರಣ ಸಂಬಂಧ ಢಾಕಾದ ಅಡಾಬೋರ್ ಪೊಲೀಸ್ ಠಾಣೆಯಲ್ಲಿ ಹಲವರ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಶಕೀಬ್ 28ನೇ ಆರೋಪಿ ಎಂದು ಹೆಸರಿಸಲಾಗಿದೆ. ಬಾಂಗ್ಲಾದೇಶದ ಜನಪ್ರಿಯ ನಟ ಫೆರ್ದೌಸ್ ಅಹ್ಮದ್ 55ನೇ ಆರೋಪಿಯಾಗಿದ್ದಾನೆ. ಪ್ರಕರಣ ದಾಖಲಾಗಿರುವ ಒಟ್ಟು 154 ಪ್ರಮುಖ ವ್ಯಕ್ತಿಗಳ ಪೈಕಿ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಹೆಸರೂ ಪ್ರಕರಣದಲ್ಲಿ ದಾಖಲಾಗಿದೆ. ಅಲ್ಲದೇ ಸುಮಾರು 400-500 ಅಪರಿಚಿತ ವ್ಯಕ್ತಿಗಳೂ ಆರೋಪಿಗಳಾಗಿದ್ದಾರೆ ಎಂದು ವರದಿಯಾಗಿದೆ.

## ಹಣ ನೀಡಲು ಮುಂದೆ ಬಂದ ಬಿಜೆಪಿ ನಾಯಕರು ಯಾರೆಂದು ತಿಳಿಸಿ

# ಇಲ್ಲವಾದ್ರೆ ಇದು ಹಿಟ್‌ರನ್ ಆಗುತ್ತೆ

**ಬೆಂಗಳೂರು:** ಕಾಂಗ್ರೆಸ್ ಶಾಸಕರಿಗೆ ಹಣ ನೀಡುತ್ತೇವೆಂದು ಮುಂದೆ ಬಂದ ಬಿಜೆಪಿ ನಾಯಕರು ಯಾರೆಂದು ಸರಿಯಾಗಿ ತಿಳಿಸಲಿ. ಇಲ್ಲವಾದರೆ ಇದು ಹಿಟ್ ಆಂಡ್ ರನ್ ಆಗುತ್ತದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಮುಡಾ ಮತ್ತು ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಮುಳುಗಿರುವುದರಿಂದ ಸರ್ಕಾರ ಉಳಿಸಿಕೊಳ್ಳಲು ಶಾಸಕರಿಗೆ ಬೇರೆ ದಾರಿ ಇಲ್ಲ. ಇದಕ್ಕಾಗಿ ಬಿಜೆಪಿ ವಿರುದ್ಧ ಆಪಾದನೆ ಮಾಡಲಾಗಿದೆ. ಜನರ ಮನಸ್ಸನ್ನು ಬೇರೆಡೆ ಸೆಳೆಯುವ ಕುತಂತ್ರ ಇದು. ಸರ್ಕಾರ ಬೀಳಿಸಲು ಬಿಜೆಪಿ ಯಾವುದೇ ಪ್ರಯತ್ನ ಮಾಡುತ್ತಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಲಾಗಿದೆ. ಅವರ ಪಕ್ಷದವರೇ ಸರ್ಕಾರ ಬೀಳಿಸಲು ಮುಂದಾಗಿದ್ದಾರೆ ಎಂದು ಆರೋಪಿಸಿದ್ದಾರೆ.



ಕಾಂಗ್ರೆಸ್ ಶಾಸಕರ ಬಳಿ ಬಂದು ಮಾತಾಡಿದ ಬಿಜೆಪಿ ನಾಯಕರು ಯಾರು ಎಂದು ಕಾಂಗ್ರೆಸ್ ನಾಯಕರು ಸ್ಪಷ್ಟವಾಗಿ ತಿಳಿಸಲಿ. ಗ್ಯಾರಂಟಿಗಳನ್ನು ತೆಗೆದುಹಾಕಬೇಕೆಂದು ಶಾಸಕರೇ ಒತ್ತಾಯಿಸುತ್ತಿದ್ದಾರೆ. ಸರ್ಕಾರದಲ್ಲಿ ಹಣವಿಲ್ಲದೆ, ಮದ್ಯದ ತೆರಿಗೆಯನ್ನು ಮೂರನೇ ಬಾರಿಗೆ ಏರಿಕೆ ಮಾಡಲು ಪ್ರಯತ್ನ ಶುರುವಾಗಿದೆ. ನೀರಿನ ದರ ಹಾಗೂ ಬಸ್ ಟಿಕೆಟ್ ದರ ಹೆಚ್ಚಿಸಲು ಸರ್ಕಾರ ಮುಂದಾಗಿದೆ. ಪೆಟ್ರೋಲ್, ಮಾರ್ಗಸೂಚಿ ದರ ಹೆಚ್ಚಾಗಿದೆ. ಉಸಿರಾಡುವ ಗಾಳಿಗೂ ತೆರಿಗೆ ಹಾಕಿದರೆ ಇನ್ನು ಯಾವುದೂ ಬಾಕಿ ಉಳಿಯುವುದಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಗ್ಯಾರಂಟಿಗೆ ಹಣ ಮೀಸಲಿಡದೆ ಸರ್ಕಾರ ದಿವಾಳಿಯಾಗಿದೆ. ಇಂತಹ ಸ್ಥಿತಿಯಲ್ಲೂ ಕಾಂಗ್ರೆಸ್ ನಾಯಕರು ಏಣಿ ಹತ್ತಿಸಿದ ಮತದಾರರ ಬಗ್ಗೆ ಬಹಳ ಕೀಳಾಗಿ ಮಾತಾಡುತ್ತಿದ್ದಾರೆ. ಮುಂದೆ ಅಧಿಕಾರಕ್ಕೆ ಬರಲ್ಲ ಎಂಬುದು ಖಚಿತವಾಗಿರುವುದರಿಂದ ಆದಷ್ಟು ಲೂಟಿ ಮಾಡಲು ನೋಡುತ್ತಿದ್ದಾರೆ. ಈ ಅವಧಿಯಲ್ಲೇ ಡಾ.ಜಿ.ಪರಮೇಶ್ವರ್, ಡಿ.ಕೆ. ಶಿವಕುಮಾರ್, ಮಲ್ಲಿಕಾರ್ಜುನ ಖರ್ಗೆ ಸಿಎಂ ಆಗಲು ತಂತ್ರ ಮಾಡುತ್ತಿದ್ದಾರೆ. ಶಾಸಕರಿಗೆ ಹಣ ಕೊಡಲು ಬಂದವರು ಯಾರೆಂದು ಸರಿಯಾಗಿ ತಿಳಿಸಲಿ. ಇಲ್ಲವಾದರೆ ಇದು ಹಿಟ್ ಆಂಡ್ ರನ್ ಆಗುತ್ತದೆ ಎಂದು ಕಾಂಗ್ರೆಸ್ ನಾಯಕರಿಗೆ ತಿರುಗೇಟು ಕೊಟ್ಟಿದ್ದಾರೆ.

ಅತ್ಯಾಚಾರ ಪ್ರಕರಣ ಹೆಚ್ಚಳ

ರಾಜ್ಯದಲ್ಲಿ ಲವ್ ಜಿಹಾದ್ ಲಿಂಕ್ ಇರುವ ಅತ್ಯಾಚಾರ ಪ್ರಕರಣ ಉಡುಪಿಯಲ್ಲಿ ನಡೆದಿದೆ. ಈ ಹಿಂದೆ ಹುಬ್ಬಳ್ಳಿ, ಹಾವೇರಿಯಲ್ಲಿ ನಡೆದ ಪ್ರಕರಣಗಳನ್ನು ಮುಚ್ಚಿ ಹಾಕಲಾಗಿದೆ. ಇದು ಪೂರ್ವ ನಿಯೋಜಿತವಾಗಿ ನಡೆಯುತ್ತಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಇದು ಹೆಚ್ಚಿದ್ದು, ಸರ್ಕಾರದ ಕುಮ್ಮಕ್ಕಿನಿಂದಲೇ ನಡೆಯುತ್ತಿದೆ. ಕಾಂಗ್ರೆಸ್ ತಮ್ಮನ್ನು ಏನೂ ಮಾಡುವುದಿಲ್ಲ ಎಂಬ ನಂಬಿಕೆ ಇಂತಹವರಿಗೆ ಬಂದಿದೆ. ಕೇರಳದಲ್ಲಿ ಲವ್ ಜಿಹಾದ್ ಕೇಂದ್ರವೂ ಇದ್ದು, ಅಲ್ಲಿ ಯುವಕರಿಗೆ ತರಬೇತಿ ನೀಡಲಾಗುತ್ತಿದೆ. 2047 ರೊಳಗೆ ಭಾರತವನ್ನು ಮುಸ್ಲಿಂ ರಾಷ್ಟ್ರ ಮಾಡುತ್ತೇವೆ ಎಂಬ ಕರಪತ್ರಗಳು ಕೂಡ ಹರಿದಾಡಿವೆ ಎಂದರು.

## ಅಂಪೈರ್ ವಿರುದ್ಧ ಸಿಟ್ಟು

# ಹೆಲ್ಮೆಟ್‌ನಲ್ಲಿ ಸಿಕ್ಸ್ ಹೊಡೆದ ಬ್ರಾಥ್‌ವೈಟ್!



ಅಂಪೈರ್ ನಿರ್ಧಾರಕ್ಕೆ ಅಕ್ರೋಶಗೊಂಡ ವಿಂಡೀಸ್ ಆಲ್‌ರೌಂಡರ್ ಕಾರ್ಲೋಸ್ ಬ್ರಾಥ್‌ವೈಟ್ ಹೆಲ್ಮೆಟ್ ಅನ್ನು ಬ್ಯಾಟಿನಿಂದ ಸಿಕ್ಸ್‌ಗೆ ಅಟ್ಟಿದ ವೀಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಜಾರ್ಜ್ ಟೌನ್‌ನಲ್ಲಿ ನಡೆಯುತ್ತಿರುವ 2024ರ ಮ್ಯಾಕ್ಸ್60 ಕ್ಯಾರೇಬಿಯನ್ ಕ್ವಾಲಿಫೈಯರ್ 1ನೇ ಪಂದ್ಯದ ವೇಳೆ ಈ ಘಟನೆ ನಡೆದಿದೆ.

ನ್ಯೂಯಾರ್ಕ್ ಸ್ಟ್ರೈಕರ್ಸ್ ಮತ್ತು ಗ್ರ್ಯಾಂಡ್ ಕೇಮನ್ ಜಾಗ್ವರ್ಸ್ ನಡುವೆ ಪಂದ್ಯ ನಡೆದಿತ್ತು. ನ್ಯೂಯಾರ್ಕ್ ಸ್ಟ್ರೈಕರ್ಸ್ ಪರ ಆಡುತ್ತಿದ್ದ ಬ್ರಾಥ್‌ವೈಟ್ 7 ರನ್ ಗಳಿಸಿದ್ದಾಗ ವಿಕೆಟ್ ಕೀಪರ್ ಹಿಡಿದ ಕ್ಯಾಚ್‌ಗೆ ಬಲಿಯಾದರು. ನಿಜವಾಗಿ ಚೆಂಡು ಬ್ಯಾಟ್‌ಗೆ ಬಡಿಯದೇ ಭುಜಕ್ಕೆ ತಾಗಿ ಕೀಪರ್ ಕೈ ಸೇರಿತ್ತು.

ಅಂಪೈರ್ ಔಟ್ ತೀರ್ಪು ನೀಡುತ್ತಿದ್ದಂತೆ ಸಿಟ್ಟಾದ ಬ್ರಾಥ್‌ವೈಟ್ ಪೆವಿಲಿಯನ್‌ನತ್ತ ಮರಳುವ ಸಮಯದಲ್ಲಿ ಬ್ಯಾಟಿನಿಂದ ತಮ್ಮ ಹೆಲ್ಮೆಟ್‌ಗೆ ಸಿಕ್ಸ್ ಸಿಡಿಸುವಂತೆ ಹೊಡೆದಿದ್ದಾರೆ. ಹೆಲ್ಮೆಟ್ ಬೌಂಡರಿ ಗೆರೆಯಿಂದ ಹೊರಗಡೆ ಹೋಗಿದೆ. ಈ ವೀಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.



ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ನ್ಯೂಯಾರ್ಕ್ ಸ್ಟ್ರೈಕರ್ಸ್ ತಂಡ 10 ಓವರ್‌ಗಳಲ್ಲಿ ಒಟ್ಟು 104 ರನ್ ಗಳಿಸಿತ್ತು. ಚೇಸಿಂಗ್ ಆರಂಭಿಸಿದ ಗ್ರ್ಯಾಂಡ್ ಕೇಮನ್ ಜಾಗ್ವಾರ್ ತಂಡ 96 ರನ್ ಗಳಿಸಿ ಸೋಲನುಭವಿಸಿತು.

# ಮಲ್ಲೇಶ್ವರಂ ಹೊಯ್ಸಳ ಪೊಲೀಸರಿಂದ ಹಫ್ತಾ ವಸೂಲಿ

**ಬೆಂಗಳೂರು:** ಮಲ್ಲೇಶ್ವರಂ ಹೊಯ್ಸಳ ಪೊಲೀಸರಿಂದ ರಾಜಾರೋಷವಾಗಿ ಹಫ್ತಾ ವಸೂಲಿ ಮಾಡಿದ್ದು ಇದೀಗ ಸಾಕ್ಷಿ ಸಮೇತ ದಕ್ಷ ಪೊಲೀಸರ ಬಣ್ಣ ಬಯಲಾಗಿದೆ.




ಪಾನಿಪುರಿ, ಹೋಟೆಲ್, ಬಾರ್, ಬಟ್ಟೆ ಅಂಗಡಿ, ಚಪ್ಪಲಿ ಅಂಗಡಿ ಸೇರಿದಂತೆ ರಸ್ತೆಪಕ್ಕದ ಅಂಗಡಿಗಳಲ್ಲಿ ಪ್ರತಿ ದಿನ ಇಂಚ ವಸೂಲಿ ನಡೆಯುತ್ತಿರು ಫೋಟೋ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಎಕ್ಸ್ಕ್ಲುಸಿವ್ ಮಗಾ ಎನ್ನುವ ಎಕ್ಸ್ ಖಾತೆಯಲ್ಲಿ ವಿಡಿಯೋ ಸಮೇತವಾಗಿ ನಗರ ಕಮಿಷನರ್‌ಗೆ ಟ್ವೀಟ್ ಮಾಡಲಾಗಿದೆ. ರಸ್ತೆಪಕ್ಕದ ಅಂಗಡಿಗಳಲ್ಲಿ ಪ್ರತಿ ದಿನ ಹಣ ವಸೂಲಿ. ಹಲವು ಕಡೆ ನಿಂತಿರುವ ಬೆಂಗಳೂರಿನ ದಕ್ಷ ಪೊಲೀಸರು ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಲಾಗಿದೆ.

ಹೊಯ್ಸಳ ವಾಹನ ಪೋಟೋ ವಿಡಿಯೋ ಸಮೇತ ಟ್ವೀಟ್ ಮಾಡಿದ್ದು ಪೊಲೀಸರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ನೆಟ್ಟಿಗರು ಆಗ್ರಹಿಸಿದ್ದಾರೆ.



ಶ್ರೀ ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಬಾಲಕೃಷ್ಣನ ವೇಷ ಧರಿಸಿ ಗಮನ ಸೆಳೆದ ಮೂರುವರೆ ವರ್ಷದ ಪುಟಾಣಿ ದುತಿ ವಿ ಪರಮೇಶ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com